ಸಂಪುಟ: 04 ಸಂಚಿಕೆ: 187 ಪುಟಗಳು: 08 ಗುರುವಾರ 19 ಸೆಪ್ಟೆಂಬರ್ 2024
www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಸಾಧನೆ ಇಲ್ಲದೇ ಸತ್ತರೆ ಸಾವಿಗೆ ಅವಮಾನ. ಆದರ್ಶ ಇಲ್ಲದೆ ಬದುಕಿದರೆ ಬದುಕಿಗೆ ಅವಮಾನ.

## ಕೆಎನ್ ರಾಜಣ್ಣ ವಿರುದ್ಧ ಗವರ್ನರ್‌ಗೆ ಪತ್ರ ಬರೆದ ದಿನೇಶ್ ಕಲ್ಲಹಳ್ಳಿ

• ಉದಯವಾಹಿನಿ, ಬೆಂಗಳೂರು

ಸಚಿವ ಕೆ.ಎನ್ ರಾಜಣ್ಣ ವಿರುದ್ಧ ಅಪೆಕ್ಸ್ ಬ್ಯಾಂಕ್ ನಲ್ಲಿ 2000 ಕೋಟಿಗೂ ಅಧಿಕ ಭ್ರಷ್ಟಾಚಾರ ಪ್ರಕರಣಕ್ಕೆ ಸಂಬಂಧಿಸಿದಂತೆ 3 ತಿಂಗಳ ಒಳಗಾಗಿ ಈ ಒಂದು ಪ್ರಕರಣ ಇತ್ಯರ್ಥಪಡಿಸುವಂತೆ ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ಹೈಕೋರ್ಟ್ ಸೂಚನೆ ನೀಡಿತ್ತು. ಆದರೆ ಸರ್ಕಾರ ಯಾವುದೇ ರೀತಿಯಾದಂತಹ ಕ್ರಮ ಕೈಗೊಂಡಿಲ್ಲ. ಹಾಗಾಗಿ ಇದೀಗ ಸಾಮಾಜಿಕ ಕಾರ್ಯಕರ್ತ ದಿನೇಶ್ ಕಲಹಳ್ಳಿ ಪ್ರಕರಣದ ಕುರಿತು ರಾಜ್ಯಪಾಲರಿಗೆ ಪತ್ರ ಬರೆದಿದ್ದಾರೆ. ಹೌದು ಅಪೆಕ್ಸ್ ಬ್ಯಾಂಕ್‌ನಲ್ಲಿ ನಡೆದಿದೆ ಎನ್ನಲಾಗಿರುವ 2 ಸಾವಿರ ಕೋಟಿ ರೂ ಅಧಿಕ ಮೊತ್ತದ ಭ್ರಷ್ಟಾಚಾರ ಪ್ರಕರಣಕ್ಕೆ ಸಂಬಂಧಿಸಿದಂತೆ ಹಾಲಿ ಸಚಿವ ಕೆ ಎನ್ ರಾಜಣ್ಣ ವಿರುದ್ಧ ಪ್ರಾಸಿಕ್ಯೂಷನ್ ಅನುಮತಿ ಕೋರಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಲಾಗಿತ್ತು. ಕೋರ್ಟ್ ಮೂರು ತಿಂಗಳಲ್ಲಿ ಪ್ರಕರಣ ಇತ್ಯರ್ಥ ಮಾಡುವಂತೆ ಸರ್ಕಾದ ಮುಖ್ಯಕಾರ್ಯದರ್ಶಿಗಳಿಗೆ ಸೂಚಿಸಿತ್ತು. ಅದರೆ, ಸರ್ಕಾರ ಇದುವರೆಗೂ ಯಾವುದೇ ಕ್ರಮಕೈಗೊಂಡಿಲ್ಲ. ಹೀಗಾಗಿ ರಾಜ್ಯಪಾಲರಿಗೆ ದಿನೇಶ್ ಕಲ್ಲಹಳ್ಳಿ ಪತ್ರಬರೆದಿದ್ದಾರೆ.

## ಪ್ಯಾಲೆಸ್ತೀನ್ ಧ್ವಜ ಹಾರಿಸಿದ ಎಲ್ಲಾರನ್ನು ಬಂಧಿಸಲಾಗಿದೆ : ಸಚಿವ

• ಉದಯವಾಹಿನಿ, ಬೆಂಗಳೂರು

ಇತ್ತೀಚಿಗೆ ಈದ್ ಮಿಲಾದ್ ಹಬ್ಬದ ಅಂಗವಾಗಿ ಮೂರು ಜಿಲ್ಲೆಗಳಲ್ಲಿ ಕೆಲವು ಕಿಡಿಗೇಡಿಗಳು ಪ್ಯಾಲೆಸ್ಟಿನ್ ಪರ ಧ್ವಜ ಹಾರಾಟ ನಡೆಸಿದ್ದ ಘಟನೆ ನಡೆದಿತ್ತು. ಇದೀಗ ಈ ಒಂದು ಪ್ರಕರಣಕ್ಕೆ ಸಂಬಂಧಿಸಿದಂತೆ ಎಲ್ಲಾರನ್ನು ಬಂಧಿಸಲಾಗಿದೆ ಎಂದು ಗೃಹ ಸಚಿವ ಜಿ ಪರಮೇಶ್ವರ್ ಸ್ಪಷ್ಟಪಡಿಸಿದರು. ಬೆಂಗಳೂರಿನ ಸದಾಶಿವನಗರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಮೂರು ಜಿಲ್ಲೆಗಳಲ್ಲಿ ಪ್ಯಾಲೆಸ್ತೀನ್ ಧ್ವಜ ಹಾರಿಸಿರುವುದು ಕಂಡು ಬಂದಿದೆ. ಈ ಪ್ರಕರಣಗಳಲ್ಲಿ ಎಲ್ಲಾರನ್ನು ಬಂಧಿಸಲಾಗಿದೆ.ಕೇಂದ್ರ ಸರ್ಕಾರ ಪ್ಯಾಲೆಸ್ತೀನ್‌ಗೆ ಬೆಂಬಲಿಸುತ್ತೇವೆ ಎಂದು ಹೇಳಿಕೆ ಕೊಟ್ಟಿದೆ. ಹೀಗಾಗಿ ಇದರಲ್ಲಿ ನಮ್ಮ ತಪ್ಪೇನಿದೆ ಎಂದು ವಾದಿಸಿದ್ದಾರೆ. ಆದಾಗ್ಯೂ ಸಹ ಅವರನ್ನು ಬಂಧಿಸಿದ್ದೇವೆ ಎಂದು ಅವರು ತಿಳಿಸಿದರು.

## ನೂರಕ್ಕೆ ನೂರರಷ್ಟು ಮುನಿರತ್ನನೆ ಮಾತನಾಡಿದ್ದು : ಕಾಂಗ್ರೇಸ್

• ಉದಯವಾಹಿನಿ, ಬೆಂಗಳೂರು

ಗುತ್ತಿಗೆದಾರನಿಗೆ ಜೀವ ಬೆದರಿಕೆ, ಜಾತಿ ನಿಂದನೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮುನಿರತ್ನ ವಿರುದ್ಧ ಬೆಂಗಳೂರಿನಲ್ಲಿ ಇಂದು ಕಾಂಗ್ರೇಸ್ ಪ್ರತಿಭಟನೆ ನಡೆಸುತ್ತಿದ್ದು, ಕಾಂಗ್ರೇಸ್ ಪ್ರತಿಭಟನೆಯಲ್ಲಿ ಬಿಜೆಪಿ ಶಾಸಕ ಎಸ್ ಟಿ ಸೋಮಶೇಖರ್ ಭಾಗಿಯಾಗಿದ್ದಾರೆ. ಕೆಂಗೇರಿ ರೈಲ್ವೆ ನಿಲ್ದಾಣದ ಬಳಿ ನಡೆದ ಮೌನ ಪ್ರತಿಭಟನೆಯಲ್ಲಿ ಸೌಮ್ಯ ರೆಡ್ಡಿ ಜೊತೆ ಎಸ್‌ಟಿ ಸೋಮಶೇಖರ್ ಪ್ರತಿಭಟನೆಯಲ್ಲಿ ಭಾಗಿಯಾಗಿದ್ದಾರೆ. ಹೀಗಾಗಿ ಬಿಜೆಪಿ ಶಾಸಕ ಸೋಮಶೇಖರ್ ನಡೆ ಭಾರಿ ಕುತೂಹಲ ಮೂಡಿಸಿದೆ.

ಪ್ರತಿಭಟನೆಯ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಎಸ್ ಟಿ ಸೋಮಶೇಖರ್, ಈಗಾಗಲೇ ಪ್ರಕರಣಕ್ಕೆ ಸಂಬಂಧಪಟ್ಟಂತೆ ಮುನಿರತ್ನ ಮಾತನಾಡಿರುವ ಧ್ವನಿಯನ್ನು ಎಫ್‌ಎಸ್‌ಎಲ್‌ಗೆ ಕಳುಹಿಸಿದ್ದಾರೆ. ನನಗಂತೂ ನೂರಕ್ಕೆ ನೂರು ಇದೆ ಮುನಿರತ್ನ ಅವರೇ ಮಾತನಾಡಿದ್ದಾರೆ. ನನ್ನ ಕ್ಷೇತ್ರದ ಎಲ್ಲಾ ಸಮುದಾಯದವರು ಇದೊಂದು ಹೀನಾಯ ಕೃತ್ಯ ನೀವು ಇದರಲ್ಲಿ ಭಾಗವಹಿಸಬೇಕು ಎಂದರೆ ನಾನು ಹಿಂದಕ್ಕೆ ಸರಿದುಕೊಳ್ಳಬೇಕಾ? ಎಂದು ಅವರು ಮಾಧ್ಯಮದವರಿಗೆ ಪ್ರಶ್ನಿಸಿದರು.

## ಕನಸು ಕಾಣುತ್ತಾರೆ ನನಸು ಮಾಡಲು ಸಂಪುಟ ಸಭೆ ಕರೆಯುತ್ತಾರೆ

• ಉದಯವಾಹಿನಿ, ಬೆಂಗಳೂರು

ಒಂದು ದೇಶ ಒಂದು ಚುನಾವಣೆಗೆ ಕೇಂದ್ರ ಸಂಪುಟ ಸಭೆಯಲ್ಲಿ ಒಪ್ಪಿಗೆ ನೀಡಿರುವ ವಿಚಾರವಾಗಿ ಇದೀಗ ಪರ ಮತ್ತು ವಿರೋಧ ಚರ್ಚೆಗಳು ಪ್ರಾರಂಭವಾಗಿದ್ದು, ಬೆಂಗಳೂರಿನಲ್ಲಿ ಐಟಿ ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಪ್ರತಿಕ್ರಿಯೆ ನೀಡಿದ್ದು, ಪ್ರಧಾನಿ ನರೇಂದ್ರ ಮೋದಿಯವರು ರಾತ್ರಿ ಒಂದು ಕನಸು ಕಾಣುತ್ತಾರೆ ಅದನ್ನು ನನಸು ಮಾಡಲು ಮರುದಿನ ಸಂಪುಟ ಸಭೆ ಕರೆಯುತ್ತಾರೆ ಎಂದು ವ್ಯಂಗ್ಯವಾಡಿದರು. ಬೆಂಗಳೂರಿನಲ್ಲಿ ಐಟಿ ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿಕೆ ನೀಡಿದ್ದು, ಒಂದು ದೇಶ ಒಂದು ಚುನಾವಣೆಯ ಬಗ್ಗೆ ಸಾಕಷ್ಟು ಚರ್ಚೆಯಾಗಿದೆ. ರಾಜ್ಯ ಸರ್ಕಾರಗಳ ಜೊತೆ ಕೇಂದ್ರ ಸರ್ಕಾರ ಚರ್ಚೆ ಮಾಡಬೇಕಿತ್ತು. ದೇಶದಲ್ಲಿ ಹಲವು ರೀತಿಯಲ್ಲಿ ಚುನಾವಣೆ ನಡೆಯುತ್ತದೆ ಇದನ್ನು ಹೇಗೆ ಮಾಡಬೇಕೆಂದು ರಾಜ್ಯಗಳ ಜೊತೆ ಕೇಂದ್ರ ಸರ್ಕಾರ ಚರ್ಚಿಸಬೇಕಿತ್ತು ಎಂದರು. ಪಂಚಾಯಿತಿಯಿಂದ ಪಾರ್ಲಿಮೆಂಟ್ ಅವರಿಗೆ ಚುನಾವಣೆ ನಡೆಸುತ್ತೀರಾ? ಪಾರ್ಲಿಮೆಂಟ್ ನಿಂದ ಅಸೆಂಬ್ಲಿ ಚುನಾವಣೆ ಮಾತ್ರ ನಡೆಸುತ್ತೀರಾ? ಎಲ್ಲಾವೂ ಕೂಡ ಚರ್ಚೆ ಆಗಬೇಕು. ಒಂದು ಕಡೆ ಒಂದು ದೇಶ ಒಂದು ಚುನಾವಣೆ ಅಂತ ಹೇಳುತ್ತಾರೆ. ಮತ್ತೊಂದು ಕಡೆ ಬಹುಮತ ಬರದಿದ್ದರೆ ಆಪರೇಷನ್ ಕಮಲ ಮಾಡುತ್ತಾರೆ ಎಂದು ಬಿಜೆಪಿ ವಿರುದ್ಧ ಸಚಿವ ಪ್ರಿಯಾಂಕರಿಗೆ ತೀವ್ರ ವಾಗ್ದಾಳಿ ನಡೆಸಿದರು.

### ಮಾಜಿ ರಾಷ್ಟ್ರಪತಿ ರಾಮ್ ನಾಥ್ ಕೋವಿಂದ್ ನೇತೃತ್ವದ ಉನ್ನತ ಮಟ್ಟದ ಸಮಿತಿಯು ಸಮಗ್ರ ವರದಿ

# ಕೇಂದ್ರ ಸಂಪುಟ ಅಸ್ತು ಮಹತ್ವದ ಹೆಜ್ಜೆ ಮಸ್ತು




**ಒಂದು ದೇಶ ಒಂದು ಚುನಾವಣೆ**

**ಒಂದು ದೇಶ ಒಂದು ಚುನಾವಣೆಗೆ ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದೆ. ಮುಂದಿನ ಸಂಸತ್ ಅಧಿವೇಶನದಲ್ಲಿ ಮಸೂದೆ ಮಂಡನೆಯಾಗುವ ನಿರೀಕ್ಷೆಯಿದೆ. ಲೋಕಸಭೆ ಮತ್ತು ರಾಜ್ಯ ವಿಧಾನಸಭೆಗಳಿಗೆ ಏಕಕಾಲಕ್ಕೆ ಚುನಾವಣೆ ನಡೆಸುವ ಕುರಿತು ಮಾಜಿ ರಾಷ್ಟ್ರಪತಿ ರಾಮನಾಥ್ ಕೋವಿಂದ್ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಿತ್ತು. ಈ ಸಮಿತಿ ಇತ್ತೀಚೆಗೆ ರಾಷ್ಟ್ರಪತಿ ದ್ರೌಪದಿ ಅವರಿಗೆ ವರದಿ ನೀಡಿತ್ತು. 191 ದಿನಗಳ ಸಮಯ ತೆಗೆದುಕೊಂಡು ಅಧ್ಯಯನ ನಡೆಸಿದ್ದ ಸಮಿತಿ 18,000 ಕ್ಕೂ ಅಧಿಕ ಪುಟಗಳ ವರದಿಯನ್ನು ತಯಾರಿಸಿತ್ತು. ವಿವಿಧ ರಾಜಕೀಯ ಪಕ್ಷಗಳು ಮತ್ತು ಪ್ರಮುಖ ಸಂಪನ್ಮೂಲ ವ್ಯಕ್ತಿಗಳಿಂದ ಸಲಹೆಯನ್ನು ಸಂಗ್ರಹಿಸಿತ್ತು.**

• ಉದಯವಾಹಿನಿ, ನವದೆಹಲಿ

78ನೇ ಸ್ವಾತಂತ್ರ್ಯ ದಿನಾಚರಣೆಯ ಸಂದರ್ಭದಲ್ಲಿ ಕೆಂಪುಕೋಟೆ ಮೇಲೆ ಭಾಷಣ ಮಾಡಿದ್ದ ಪ್ರಧಾನಿ ಮೋದಿ, ಅವರು ಒಂದು ದೇಶ, ಒಂದು ಚುನಾವಣೆ ಕುರಿತು ಮಾತನಾಡಿದ್ದರು. ಪದೇ ಪದೇ ಚುನಾವಣೆಗಳು ನಡೆಯುವುದರಿಂದ ದೇಶದ ಪ್ರಗತಿಗೆ ಅಡ್ಡಿಯಾಗುತ್ತದೆ ಎಂದು ಪ್ರಧಾನಿ ಮೋದಿ ಹೇಳಿದ್ದರು. ಭಾರತದಲ್ಲಿ ಸಂಸತ್ತಿನ ಸದಸ್ಯರನ್ನು ಆಯ್ಕೆ ಮಾಡಲು ಸಾರ್ವತ್ರಿಕ ಚುನಾವಣೆಗಳು ಮತ್ತು ರಾಜ್ಯ ವಿಧಾನಸಭೆ ಚುನಾವಣೆಗಳು ಹಾಲಿ ಸರ್ಕಾರದ ಅವಧಿಯು ಅಂತ್ಯಗೊಂಡಾಗ ಅಥವಾ ಕೆಲವು ಕಾರಣಗಳಿಂದ ವಿಸರ್ಜನೆಯಾದಾಗ ಪ್ರತ್ಯೇಕವಾಗಿ ನಡೆಯುತ್ತಿದೆ.

ಒಂದೇ ಸಮಯದಲ್ಲಿ ಎಲ್ಲಾ ಚುನಾವಣೆಗಳನ್ನು ನಡೆಸುವುದು ಚುನಾವಣಾ ಪ್ರಕ್ರಿಯೆ ಹಾಗೂ ಆಡಳಿತವನ್ನು ರೂಪಾಂತರಿಸಲಿದೆ ಮತ್ತು ವಿರಳವಾಗಿರುವ ಸಂಪನ್ಮೂಲಗಳ ಪರಿಣಾಮಕಾರಿ ಬಳಕೆಗೆ ಅನುವು ಮಾಡಲಿದೆ ಎಂದಿರುವ ಸಮಿತಿ, 32 ಪಕ್ಷಗಳು ಹಾಗೂ ಸುಪ್ರೀಂ ಕೋರ್ಟ್ ಮತ್ತು ಹೈಕೋರ್ಟ್ ನಿವೃತ್ತ ಮುಖ್ಯ ನ್ಯಾಯಮೂರ್ತಿಗಳು ಸೇರಿದಂತೆ ನ್ಯಾಯಾಂಗದ ಪ್ರಮುಖ ವ್ಯಕ್ತಿಗಳು ಇದಕ್ಕೆ ಬೆಂಬಲ ನೀಡಿದೆ ಎಂದು ತಿಳಿಸಿದೆ. 'ಒಂದು ರಾಷ್ಟ್ರ ಒಂದು ಚುನಾವಣೆ' ಕ್ರಮವು ಮತದಾರರಿಗೆ ಚುನಾವಣಾ ಪ್ರಕ್ರಿಯೆಯನ್ನು ಸುಲಭಗೊಳಿಸಲಿದೆ. ಹಾಗೆಯೇ ಇದು ಉನ್ನತ ಹಾಗೂ ತ್ವರಿತ ಆರ್ಥಿಕ ಪ್ರಗತಿಗೆ ನೆರವಾಗಲಿದೆ. ಇದರಿಂದ ಹೆಚ್ಚು ಸ್ಥಿರ ಆರ್ಥಿಕತೆ ಸಾಧ್ಯ ಎಂದು ಅದರ ಅನುಕೂಲತೆಗಳನ್ನು ಸಮಿತಿ ಪಟ್ಟಿ ಮಾಡಿದೆ. ಒಂದೇ ಬಾರಿಗೆ ಎಲ್ಲಾ ಚುನಾವಣೆಗಳು ನಡೆದರೆ, ಪ್ರತಿಕೂಲ ನೀತಿ ಬದಲಾವಣೆಗಳ ಭಯವಿಲ್ಲದೆ ಉದ್ಯಮಗಳು ಮತ್ತು ಕಾರ್ಪೊರೇಟ್ ಸಂಸ್ಥೆಗಳು ನಿರ್ಧಾರಗಳನ್ನು ಕೈಗೊಳ್ಳಲು ಅವಕಾಶ ಸಿಗಲಿದೆ ಎಂದು ಹೇಳಿದೆ.ಮೋದಿ 3.0 ಅವಧಿಯಲ್ಲೇ 'ಒಂದು ದೇಶ–ಒಂದು ಚುನಾವಣೆ', ಶೀಘ್ರದಲ್ಲೇ ಜನಗಣತಿ ಆರಂಭ ಲೋಕಸಭೆ, ವಿಧಾನಸಭೆ ಹಾಗೂ ಪಂಚಾಯತಿಗಳಿಗೆ– ಎಲ್ಲಾ ಮೂರು ಮಟ್ಟಗಳಲ್ಲಿ ಒಟ್ಟಿಗೆ ಚುನಾವಣೆಗಳನ್ನು ನಡೆಸುವುದು ಮತ ಚಲಾಯಿಸಲು ವಲಸೆ ಕಾರ್ಮಿಕರು ರಜೆ ಕೇಳುವುದರಿಂದ ಪೂರೈಕೆ ಸರಪಣಿ ಮತ್ತು ಉತ್ಪಾದನಾ ಪ್ರಕ್ರಿಯೆಗೆ ಅಡ್ಡಿಯಾಗುವುದನ್ನು ತಪ್ಪಿಸುತ್ತದೆ.

**1** ಒಂದು ದೇಶ ಒಂದು ಚುನಾವಣೆ ವರದಿಗೆ ಅನುಮೋದನೆ ನೀಡಿದ ಕೇಂದ್ರ ಸಚಿವ ಸಂಪುಟ

**2** ಮಾಜಿ ರಾಷ್ಟ್ರಪತಿ ರಾಮನಾಥ್ ಕೋವಿಂದ್ ನೇತೃತ್ವದ ಸಮಿತಿ ಸಿದ್ಧಪಡಿಸಿರುವ ವರದಿ

**3** ಏಕಕಾಲದಲ್ಲಿ ಚುನಾವಣೆ ನಡೆದರೆ ದೇಶದ ಆರ್ಥಿಕತೆಗೆ ಸಾಕಷ್ಟು ಅನುಕೂಲವಾಗಲಿದೆ

**ಮೈತ್ರಿಕೂಟದಲ್ಲಿನ ಒಗ್ಗಟ್ಟು ಉಳಿದ ಅವಧಿಯಲ್ಲೂ ಉಳಿಯುತ್ತದೆ**

**ಮೋದಿ ನೇತೃತ್ವದ ಎನ್‌ಡಿಎ ಸರ್ಕಾರದ ಮೂರನೇ ಅವಧಿಯ 100 ದಿನ**

**ಏನಿದು ಒಂದು ರಾಷ್ಟ್ರ ಒಂದು ಚುನಾವಣೆ..**


ಮಾಜಿ ರಾಷ್ಟ್ರಪತಿಗಳಾದ ರಾಮನಾಥ ಕೋವಿಂದ್ ಅವರ ಸಾರಥ್ಯದಲ್ಲಿ ಸಮಿತಿ ರಚಿಸಿದ್ದ ಕೇಂದ್ರ ಸರ್ಕಾರ, ಒಂದು ರಾಷ್ಟ್ರ ಒಂದು ಚುನಾವಣೆ ಪ್ರಸ್ತಾಪದ ಸಾಧಕ ಬಾಧಕಗಳ ಕುರಿತಾಗಿ ಸಮಗ್ರ ಅಧ್ಯಯನ ನಡೆಸಲು ಸೂಚನೆ ನೀಡಿತ್ತು. ಇದೀಗ ಈ ಪ್ರಸ್ತಾಪವನ್ನು ಕೇಂದ್ರ ಸಚಿವ ಸಂಪುಟ ಒಪ್ಪಿಕೊಂಡಿದೆ ಎಂದು ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಅವರು ಮಾಹಿತಿ ನೀಡಿದ್ದಾರೆ. ಈ ಪ್ರಸ್ತಾಪದ ಪ್ರಕಾರ ದೇಶಾದ್ಯಂತ ಲೋಕಸಭಾ ಚುನಾವಣೆ ಹಾಗೂ ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ವಿಧಾನಸಭಾ ಚುನಾವಣೆ ನಡೆಸೋದು ಒಂದು ರಾಷ್ಟ್ರ ಒಂದು ಚುನಾವಣೆ ನೀತಿಯ ಸಾರಾಂಶ. ಅಷ್ಟೇ ಅಲ್ಲ, ಸ್ಥಳೀಯ ಸಂಸ್ಥೆಗಳು, ಪಟ್ಟಣ ಪಂಚಾಯ್ತಿ, ಪುರಸಭೆ, ನಗರ ಪಾಲಿಕೆ ಹಾಗೂ ಗ್ರಾಮ ಪಂಚಾಯ್ತಿ ಚುನಾವಣೆಗಳನ್ನೂ ಕೂಡಾ ಲೋಕಸಭಾ ಚುನಾವಣೆಗಳು ವಿಧಾನಸಭೆಗಳ ಚುನಾವಣೆ ನಡೆದ 100 ದಿನಗಳ ಒಳಗೆ ನಡೆಸಬೇಕು ಎಂಬ ಪ್ರಸ್ತಾಪವಿದೆ. ಈ ಪ್ರಸ್ತಾಪಕ್ಕೆ ಎನ್‌ಡಿಎ ಮಿತ್ರ ಪಕ್ಷಗಳು ಸಹಮತ ಸೂಚಿಸಿವೆ. ಸುಪ್ರೀಂ ಕೋರ್ಟ್‌ನ ಹಲವು ನ್ಯಾಯಮೂರ್ತಿಗಳೂ ಕೂಡಾ ಈ ಪ್ರಸ್ತಾಪದ ಪರ ಇದ್ದಾರೆ.

**ಜಾರಿ ಸುಲಭವಲ್ಲ**

ಒಂದು ದೇಶ ಒಂದು ಚುನಾವಣೆ ನೀತಿ ಜಾರಿ ಮಾಡಬೇಕು ಎಂದರೆ ಸಂವಿಧಾನಕ್ಕೇ ಬದಲಾವಣೆ ಬರಬೇಕು. ಸಂವಿಧಾನಕ್ಕೆ ಒಟ್ಟು 6 ತಿದ್ದುಪಡಿಗಳನ್ನ ಮಾಡಬೇಕು. ಹೀಗಾಗಿ, ಈ ಎಲ್ಲಾ ತಿದ್ದುಪಡಿಗಳಿಗೆ ಸಂಸತ್‌ನ ಎರಡೂ ಸದನಗಳಾದ ಲೋಕಸಭೆ ಹಾಗೂ ರಾಜ್ಯಸಭೆಗಳಲ್ಲಿ ಮೂರನೇ ಎರಡರಷ್ಟು ಬಹುಮತದ ಸಮ್ಮತಿ ಸಿಗಬೇಕು. ಜೊತೆಯಲ್ಲೇ ದೇಶದ ಎಲ್ಲಾ ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳ ವಿಧಾನಸಭೆಗಳಲ್ಲೂ ಅನುಮೋದನೆ ಸಿಗಬೇಕು. ಆಗ ಮಾತ್ರ ಈ ಪ್ರಸ್ತಾಪ ಕಾನೂನು ಆಗಿ ರೂಪುಗೊಳ್ಳಲು ಸಾಧ್ಯವಿದೆ.

**ವಿಪಕ್ಷಗಳ ವಿರೋಧ**

ಒಂದು ರಾಷ್ಟ್ರ ಒಂದು ಚುನಾವಣೆ ಅನ್ನೋದು ಪ್ರಾಯೋಗಿಕವಾಗಿ ಕಾರ್ಯ ಸಾಧುವಲ್ಲದ ನೀತಿ ಎಂದು ವಿರೋಧ ಪಕ್ಷಗಳು ಅಭಿಪ್ರಾಯಪಟ್ಟಿವೆ. ಕಾಂಗ್ರೇಸ್ ಪಕ್ಷದ ಅಧ್ಯಕ್ಷ ಮಲ್ಲಿಕಾರ್ಜನ ಖರ್ಗೆ ಅವರಂತೂ ಒಂದು ರಾಷ್ಟ್ರ ಒಂದು ಚುನಾವಣೆ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದು, ಈ ರೀತಿಯ ಪ್ರಸ್ತಾವನೆಗಳನ್ನು ಮುಂದಿಡುವ ಮೂಲಕ ಸರ್ಕಾರ ಜನರ ಗಮನವನ್ನು ಬೇರೆಡೆಗೆ ಸೆಳೆಯುವ ಯತ್ನ ಮಾಡುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಹರ್ಯಾಣ ವಿಧಾನಸಭಾ ಚುನಾವಣೆ ಹಿನ್ನಲೆಯಲ್ಲಿ ಕಾಂಗ್ರೇಸ್ ಪ್ರಣಾಳಿಕೆ ಬಿಡುಗಡೆ ಮಾಡಿ ಮಾತನಾಡಿದ ಅವರು, ಚುನಾವಣೆಗೆ ಕೆಲವೇ ದಿನಗಳು ಬಾಕಿ ಉಳಿದಿವೆ. ಮುಂದಿನ ತಿಂಗಳು ಚುನಾವಣೆ ನಡೆಯಲಿದೆ. ಈ ಹೊತ್ತಿನಲ್ಲಿ ಜನರ ಗಮನ ಸೆಳೆಯಲು ಸರ್ಕಾರ ಈ ರೀತಿಯ ನಿರ್ಧಾರಗಳನ್ನು ಕೈಗೊಳ್ಳುತ್ತಿದೆ. ಇದು ಯಾವುದೇ ಕಾರಣಕ್ಕೂ ಫಲ ಕೊಡೋದಿಲ್ಲ ಎಂದಿರುವ ಮಲ್ಲಿಕಾರ್ಜುನ ಖರ್ಗೆ, ಜನರು ಒಪ್ಪೋದಿಲ್ಲ ಎಂದು ಹೇಳಿದರು.



## ರಾಜ್ಯದಲ್ಲಿ ಡ್ರಗ್ಸ್ ಹಾವಳಿ ತಡೆಗಟ್ಟಲು ಹೊಸ ಕಾನೂನು ಜಾರಿಗೆ ನಿರ್ಧಾರ : ಸಿಎಂ


• ಉದಯವಾಹಿನಿ, ಬೆಂಗಳೂರು

ಬೆಂಗಳೂರು ಸೇರಿದಂತೆ ರಾಜ್ಯದಲ್ಲಿ ಡ್ರಗ್ಸ್ ಹಾವಳಿ ತಡೆಗಟ್ಟಲು ಹೊಸ ಕಾನೂನು ಜಾರಿಗೆ ತರಲು ನಿರ್ಧರಿಸಲಾಗಿದ್ದು, ಅಲ್ಲದೆ ಇದಕ್ಕೆ ಟಾಸ್ಕ್ ಫೋರ್ಸ್ ರಚನೆ ಕೂಡ ಮಾಡಲಾಗಿದೆ ಎಂದು ಬೆಂಗಳೂರಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

, ಡ್ರಗ್ಸ್ ಹಾವಳಿ ತಡೆಗಟ್ಟಲು ಟಾಸ್ಕ್ ಫೋರ್ಸ್ ರಚಿಸಲು ತೀರ್ಮಾನಿಸಿದ್ದೇವೆ. ಗೃಹ ಸಚಿವರು, ಆರೋಗ್ಯ, ವೈದ್ಯಕೀಯ, ನಗರಾಭಿವೃದ್ಧಿ, ಐಟಿಬಿಟಿ ಇಲಾಖೆ ಸಚಿವರುಗಳು ಈ ಟಾಸ್ಕ್ ಫೋರ್ಸ್‌ನ ಸದಸ್ಯರಾಗಿರುತ್ತಾರೆ ಎಂದು ಹೇಳಿದರು. ಇನ್ನೂ ಡ್ರಗ್ಸ್ ತಡೆಗಟ್ಟಲು ಕಾನೂನಿನಲ್ಲಿ ತಿದ್ದುಪಡಿ ಅಥವಾ ಹೊಸ ಕಾನೂನು ಮಾಡುತ್ತೇವೆ. ಡ್ರಗ್ಸ್ ಕೇಸ್‌ನಲ್ಲಿ ಬಂಧನಕ್ಕೊಳಗಾದರೆ ಜಾಮೀನು ಸಿಗದಂತೆ ಮಾಡುತ್ತೇವೆ. ಡ್ರಗ್ಸ್ ಸೇವನೆ ಮತ್ತು ಮಾರಾಟ ಮಾಡುವವರಿಗೆ ಕನಿಷ್ಠ 10 ವರ್ಷ ಜೈಲು ಶಿಕ್ಷೆ ಆಗಲಿದೆ.ಡ್ರಗ್ಸ್ ಸೇವನೆಯಿಂದ ಯುವ ಸಮೂಹ ಹಾಳಾಗುತ್ತಿದ್ದು, ಇದು ಸಮಾಜಕ್ಕೆ ಕಂಟಕ. ಡ್ರಗ್ಸ್ ತಡೆಗಟ್ಟಲು ಎನ್‌ಜಿಓಗಳನ್ನು ಬಳಕೆ ಮಾಡಿಕೊಳ್ಳುತ್ತೇವೆ. ಡ್ರಗ್ಸ್ ತಡೆಗಟ್ಟಲು ಸರ್ಕಾರ ಪ್ರಾಮಾಣಿಕ ಪ್ರಯತ್ನ ಮಾಡುತ್ತಿದೆ. ಡ್ರಗ್ಸ್ ಹಾವಳಿಯಿಂದ ಅಪರಾಧ ಪ್ರಕರಣ ಕೂಡ ಹೆಚ್ಚಾಗುತ್ತಿದೆ. ನಶೆಯಲ್ಲಿ ಚಾಕು ಇರಿತದಿಂದ ಕೊಲೆ ಪ್ರಕರಣಗಳು ಹೆಚ್ಚಾಗುತ್ತಿವೆ. ಹೀಗಾಗಿ ಡ್ರಗ್ಸ್ ಹಾವಳಿ ನಿಯಂತ್ರಿಸಲು ಟಾಸ್ಕ್ ಫೋರ್ಸ್ ರಚನೆ ಮಾಡಲು ನಿರ್ಧರಿಸಿದ್ದೇವೆ. ಎನ್‌ಸಿಸಿ, ಸ್ಕೌಡ್ಸ್ ಆಂಡ್ ಗೈಡ್ಸ್ ವಿದ್ಯಾರ್ಥಿಗಳಿಗೆ ಇದರ ಬಗ್ಗೆ ಜಾಗೃತಿ ಮೂಡಿಸಿ, ಡ್ರಗ್ಸ್ ತಡೆಗಟ್ಟುವಲ್ಲಿ ಅವರು ಭಾಗಿಯಾಗುವಂತೆ ಮಾಡುತ್ತೇವೆ ಎಂದರು.

**ಮೆಡಿಕಲ್ ಶಾಪ್‌ಗಳ ಲೈಸೆನ್ಸ್ ರದ್ದು**

ಮೆಡಿಕಲ್ ಶಾಪ್‌ಗಳಲ್ಲೂ ಡ್ರಗ್ಸ್ ಸಿಗುತ್ತಿದೆ ಎಂಬ ಆರೋಪ ಕೇಳಿಬಂದಿದೆ. ಈಗಾಗಲೇ ಕೆಲ ಮೆಡಿಕಲ್ ಶಾಪ್‌ಗಳ ಲೈಸೆನ್ಸ್ ರದ್ದು ಮಾಡಿದ್ದೇವೆ. ಡ್ರಗ್ಸ್ ಇಲ್ಲ ಅಂತ ಹೇಳಲ್ಲ, ಕಡಿಮೆ ಮಾಡಬೇಕು ನಂತರ ತಡೆಗಟ್ಟಬೇಕು. 2023ರಲ್ಲಿ 123 ಅಂತರಾಷ್ಟ್ರೀಯ ಡ್ರಗ್ಸ್ ಸರಬರಾಜುದಾರರನ್ನು ಬಂಧಿಸಲಾಗಿದೆ. 2024ರಲ್ಲಿ 8,018 ಡ್ರಗ್ಸ್ ಸೇವನೆ ಮಾಡುವವರನ್ನು ಬಂಧಿಸಲಾಗಿದೆ ಎಂದರು.



### ಚನ್ನಪಟ್ಟಣ ಉಪ ಚುನಾವಣೆಯಲ್ಲಿ ಅಚ್ಚರಿ ಅಭ್ಯರ್ಥಿ

## ಮಾಜಿ ಸಂಸದ ಪ್ರತಾಪ್ ಸಿಂಹ ಸ್ಪರ್ಧೆ!

• ಉದಯವಾಹಿನಿ, ಬೆಂಗಳೂರು

ರಾಜ್ಯದ ಗಮನ ಸೆಳೆದಿರುವ ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಯಲ್ಲಿ ಮಾಜಿ ಸಂಸದ ಪ್ರತಾಪ್ ಸಿಂಹ ಸ್ಪರ್ಧಿಸುವ ಸಾಧ್ಯತೆ ಇದೆ.

ಈ ಕ್ಷೇತ್ರವನ್ನು ಪ್ರತಿಷ್ಠೆಯಾಗಿ ತೆಗೆದುಕೊಂಡಿರುವ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅನೇಕ ಬಾರಿ ಚನ್ನಪಟ್ಟಣಕ್ಕೆ ಭೇಟಿ ನೀಡಿ ಕಾಂಗ್ರೇಸ್ ಗೆಲುವಿಗೆ ಪೂರ್ವ ತಯಾರಿ ಮಾಡಿಕೊಂಡಿದ್ದಾರೆ.

ಮಾಜಿ ಸಚಿವ ಸಿ.ಪಿ. ಯೋಗೇಶ್ವರ್ ಕೂಡ ಸ್ಪರ್ಧೆಗೆ ಸಿದ್ಧತೆ ಮಾಡಿಕೊಂಡಿದ್ದು, ಪ್ರಬಲ ಆಕಾಂಕ್ಷಿಯಾಗಿದ್ದಾರೆ. ಒಂದು ವೇಳೆ ಬಿಜೆಪಿ ಟಿಕೆಟ್ ಸಿಗದಿದ್ದರೆ ಜೆಡಿಎಸ್ ಅಭ್ಯರ್ಥಿಯಾಗಿ ಕಣಕ್ಕಿಳಿಯುವ ಬಗ್ಗೆ ಅವರು ಚಿಂತನೆ ನಡೆಸಿದ್ದಾರೆ.

ಆದರೆ, ದಳಪತಿಗಳ ಲೆಕ್ಕಾಚಾರವೇ ಬೇರೆ ಇದೆ. ತಾವು ಗೆದ್ದಿದ್ದ ಈ ಕ್ಷೇತ್ರವನ್ನು ಉಳಿಸಿಕೊಳ್ಳಬೇಕೆಂಬ ಉದ್ದೇಶದಿಂದ ಹೆಚ್.ಡಿ. ಕುಮಾರಸ್ವಾಮಿ ಅಳೆದು ತೂಗಿ ಅಚ್ಚರಿಯ ಅಭ್ಯರ್ಥಿಯನ್ನು ಕಣಕ್ಕಿಳಿಸಲು ಮುಂದಾಗಿದ್ದಾರೆ. ಚನ್ನಪಟ್ಟಣ ಉಪ ಚುನಾವಣೆ ಟಿಕೆಟ್ ಗೆ ಭಾರಿ ಪೈಪೋಟಿ ಇದೆ. ನಿಖಿಲ್ ಕುಮಾರಸ್ವಾಮಿ ಅವರನ್ನು ಕಣಕ್ಕಿಳಿಸುವ ಬಗ್ಗೆಯೂ ಚರ್ಚೆ ನಡೆದಿದೆ. ಆದರೆ, ಮೈತ್ರಿ ಅಭ್ಯರ್ಥಿಯಾಗಿ ಪ್ರತಾಪ್ ಸಿಂಹ ಅವರನ್ನು ಕಣಕ್ಕಿಳಿಸಲು ಜೆಡಿಎಸ್ ನಾಯಕರು ಕುಮಾರಸ್ವಾಮಿಯವರ ಮನವೊಲಿಸಿದ್ದಾರೆ. ಮಾಜಿ ಸಚಿವರಾದ ಸಾ.ರಾ. ಮಹೇಶ್ ಮತ್ತು ಬಂಡೆಪ್ಪ ಕಾಶೆಂಪೂರ ಸೇರಿದಂತೆ ಹಲವು ನಾಯಕರು ಪ್ರತಾಪ್ ಸಿಂಹ ಅವರನ್ನು ಜೆಡಿಎಸ್ ನಿಂದ ಕಣಕ್ಕಿಳಿಸಲು ಸಲಹೆ ನೀಡಿದ್ದು, ಇದಕ್ಕೆ ಕುಮಾರಸ್ವಾಮಿ ಸಹಮತ ವ್ಯಕ್ತಪಡಿಸಿದ್ದಾರೆ ಎನ್ನಲಾಗಿದೆ. ಬಿಜೆಪಿ ನಾಯಕರೊಂದಿಗೆ ಚರ್ಚಿಸಿದ ಬಳಿಕ ಪ್ರತಾಪ್ ಸಿಂಹ ಒಪ್ಪಿಗೆ ಸೂಚಿಸಲಿದ್ದಾರೆ ಎಂದು ಹೇಳಲಾಗಿದೆ.



## ಸಂಗೊಳ್ಳಿ ರಾಯಣ್ಣನ ಹೆಸರು ಹೇಳಲೂ ಸಿದ್ದರಾಮಯ್ಯರಿಗೆ ನೈತಿಕತೆ ಇಲ್ಲ

### ರಾಣಿ ಚನ್ನಮ್ಮನ ದಂಡನಾಯಕನಾಗಿ ಕೆಲಸ ಮಾಡಿದ್ದ ರಾಯಣ್ಣ 14 ನಿವೇಶನ ಪಡೆದಿರಲಿಲ್ಲ. 3 ಎಕರೆ 16 ಗುಂಟೆ ಜಮೀನು ತೆಗೆದುಕೊಂಡಿಲ್ಲ.

• ಉದಯವಾಹಿನಿ, ಬೆಂಗಳೂರು

ಸಂಗೊಳ್ಳಿ ರಾಯಣ್ಣನಿಗೆ ಮತ್ತು ಸಿದ್ದರಾಮಯ್ಯನವರಿಗೆ ಎತ್ತಣದೆತ್ತಣ ಸಂಬಂಧ ಸಂಗೊಳ್ಳಿ ರಾಯಣ್ಣನ ಹೆಸರು ಹೇಳಲೂ ಸಿದ್ದರಾಮಯ್ಯನವರಿಗೆ ನೈತಿಕತೆ ಇಲ್ಲ ಎಂದು ವಿಧಾನ ಪರಿಷತ್ ಸದಸ್ಯ ಎನ್. ರವಿಕುಮಾರ್ ಅವರು ತಿಳಿಸಿದರು.

ಸಂಗೊಳ್ಳಿ ರಾಯಣ್ಣ ಒಬ್ಬ ಮಹಾನ್ ಸೈನಿಕ. ನಮ್ಮ ರಾಜ್ಯದ ಉಳಿವಿಗಾಗಿ, ಕಿತ್ತೂರು ಕರ್ನಾಟಕದ ಉಳಿವಿಗೆ, ಕಿತ್ತೂರು ರಾಣಿ ಚನ್ನಮ್ಮನ ದಂಡನಾಯಕನಾಗಿ ಕೆಲಸ ಮಾಡಿದ್ದವರು. ಸಂಗೊಳ್ಳಿ ರಾಯಣ್ಣ 14 ನಿವೇಶನ ಪಡೆದಿರಲಿಲ್ಲ. 3 ಎಕರೆ 16 ಗುಂಟೆ ಜಮೀನು ತೆಗೆದುಕೊಂಡಿಲ್ಲ. ಏನೇನೂ ಆಸೆ ಇಲ್ಲದೆ, ಸ್ವಾರ್ಥ ಇಲ್ಲದೆ ರಾಜ್ಯಕ್ಕೋಸ್ಕರ ನಿಸ್ವಾರ್ಥ ಹೋರಾಟ ಮಾಡಿ ಬಲಿದಾನ ಮಾಡಿ, ನಾಡಿಗೆ ಕೀರ್ತಿ ತಂದ ವ್ಯಕ್ತಿ ಸಂಗೊಳ್ಳಿ ರಾಯಣ್ಣ ಎಂದು ವಿಶ್ಲೇಷಿಸಿದರು.

**ನಾಡಿಗೆ ಕೀರ್ತಿ ತಂದ ವ್ಯಕ್ತಿ ಸಂಗೊಳ್ಳಿ ರಾಯಣ್ಣ**

ಸಿದ್ದರಾಮಯ್ಯನವರು ತಮ್ಮ ಹೇಳಿಕೆ ಸಂಬಂಧ ನಾಡಿನ ಕ್ಷಮೆ ಕೇಳಬೇಕು. ಸಿದ್ದರಾಮಯ್ಯರಂತೆ ಸಂಗೊಳ್ಳಿ ರಾಯಣ್ಣ ಹತ್ತಾರು ಸೈಟ್ ಪಡೆದಿರಲಿಲ್ಲ. ಒಂದೆಕರೆ ಜಮೀನನ್ನೂ ತೆಗೆದುಕೊಂಡಿಲ್ಲ. ಸಂಗೊಳ್ಳಿ ರಾಯಣ್ಣನ ವಂಶಸ್ಥರು ಇದ್ದರೆ ಅವರು ಬಲಿದಾನಕ್ಕಾಗಿ ನೀವೇನಾದರೂ ಕೊಡಿ ಎಂದು ಸರಕಾರಕ್ಕೆ ಮನವಿಯನ್ನೇನೂ ಕೊಟ್ಟವರಲ್ಲ. ಆದ್ದರಿಂದ ಸಂಗೊಳ್ಳಿ ರಾಯಣ್ಣನ ಹೆಸರು ಹೇಳಲೂ ಸಿದ್ದರಾಮಯ್ಯನವರಿಗೆ ನೈತಿಕತೆ ಇಲ್ಲ ಎಂದು ತಿಳಿಸಿದರು. ಸಿದ್ದರಾಮಯ್ಯನವರು ಸಂಗೊಳ್ಳಿ ರಾಯಣ್ಣನ ಕುರಿತು ಮಾತನಾಡಿದ್ದಾರೆ. ಸಂಗೊಳ್ಳಿ ರಾಯಣ್ಣನಿಗೆ ದ್ರೋಹ ಆದ ಮಾದರಿಯಲ್ಲೇ ತಮಗೂ ದ್ರೋಹ ಮಾಡುತ್ತಿದ್ದಾರೆ ಎಂದು ಹೇಳಿದ್ದಾರೆ.

ಸಿದ್ದರಾಮಯ್ಯನವರನ್ನು ಬಲಿ ಕೊಡುವವರು ಯಾರು ಅವರ ಹೆಸರು ಏನು ಬಹಿರಂಗಪಡಿಸಲಿ ಎಂದು ಸವಾಲು ಹಾಕಿದರು. ಹಿಂದೆ ಬ್ರಿಟಿಷರ ಬಳಿ ಏನೋ ತೆಗೆದುಕೊಂಡು ಸಂಗೊಳ್ಳಿ ರಾಯಣ್ಣನನ್ನು ಹಿಡಿದು ಕೊಟ್ಟಿರಬಹುದು. ನಿಮ್ಮನ್ನು ಯಾರು ಬಲಿ ಕೊಡುತ್ತಿದ್ದಾರೆ ನಿಮ್ಮನ್ನು ಯಾರು ಹಿಡಿದು ಕೊಡುತ್ತಿದ್ದಾರೆ ಅವರ ಹೆಸರು ತಿಳಿಸಿ ಎಂದು ಆಗ್ರಹಿಸಿದರು. ಸಿಎಂ ಆಕಾಂಕ್ಷಿಗಳು ನಿಮ್ಮನ್ನು ಬಲಿ ಕೊಡುತ್ತಿದ್ದಾರಾ ಯಾರು ನಿಮಗೆ ದ್ರೋಹ ಮಾಡುತ್ತಿದ್ದಾರೆ ಎಂದು ಕೇಳಿದರು.



ಕೆಎನ್‌ಎನ್

**ನಿಮ್ಮ ಆಡಳಿತದಲ್ಲಿ ಪಾಕಿಸ್ತಾನ ಜಿಂದಾಬಾದ್ ಎಂದವರಿದ್ದಾರೆ**

ಈ ಗಲಾಟೆಗೆ, ದೊಂಬಿಗೆ ಮುಸ್ಲಿಮರು ಕಾರಣರಲ್ಲ ಎಂದು ವರದಿ ಕೊಡಬಹುದು ಎಂದು ನುಡಿದರು. ಸಿದ್ದರಾಮಯ್ಯನವರೇ, ನಿಮ್ಮ ಆಡಳಿತದಲ್ಲಿ ಪಾಕಿಸ್ತಾನ ಜಿಂದಾಬಾದ್ ಎಂದವರಿದ್ದಾರೆ. ಪ್ಯಾಲೆಸ್ಟೀನ್ ಧ್ವಜವನ್ನು ಹಾರಿಸಿದವರು ನಿಮ್ಮ ಆಡಳಿತದಲ್ಲಿದ್ದಾರೆ. ನಿಮ್ಮ ಆಡಳಿತದಲ್ಲಿ ಗಣಪತಿಯನ್ನು ಬಂಧಿಸಿ ಪೊಲೀಸ್ ಠಾಣೆಯಲ್ಲಿ ಇಡುವವರಿದ್ದಾರೆ. ನಿಮ್ಮ ಆಡಳಿತದಲ್ಲಿ ರಾಮೇಶ್ವರಂ ಕೆಫೆ ಸ್ಫೋಟ ಆಗಿದೆ. ಕುಕ್ಕರ್ ಬ್ಲಾಸ್ಟ್ ಮಾಡಿದವರು ಬ್ರದರ್ಸ್ ಎಂಬುದು ನಿಮ್ಮ ಪಾಲಿಸಿ ಎಂದು ಟೀಕಿಸಿದರು. ಇದೆಲ್ಲ ಕಾರಣಗಳಿಂದ ಕರ್ನಾಟಕದಲ್ಲಿ ಸುರಕ್ಷತೆ ಎಂಬುದು ದೊಡ್ಡ ಪ್ರಶ್ನಾರ್ಥಕ ಚಿಹ್ನೆಯಾಗಿದೆ ಎಂದು ಆರೋಪಿಸಿದರು.

ಗಣಪತಿಯನ್ನು ಬಂಧಿಸಿ, ಪೊಲೀಸ್ ಠಾಣೆಯಲ್ಲಿಟ್ಟ ಹಿಂದೂದ್ರೋಹಿ ಮುಖ್ಯಮಂತ್ರಿ ನಾಗಮಂಗಲದಲ್ಲಿ ಹಿಂದೂ– ಮುಸ್ಲಿಂ ಗಲಾಟೆ ಆಗಿದೆ. ಗಣಪತಿಯನ್ನು ಬಂಧಿಸಿ, ಪೊಲೀಸ್ ಠಾಣೆಯಲ್ಲಿ ಇಟ್ಟಿರುವ ಹಿಂದೂದ್ರೋಹಿ ಮುಖ್ಯಮಂತ್ರಿ, ಯಾರಾದರೂ ಇದ್ದರೆ ಅದು ಸಿದ್ದರಾಮಯ್ಯನವರು ಎಂದು ಟೀಕಿಸಿದರು.

ಬಿಜೆಪಿ ವತಿಯಿಂದ ಡಾ.ಅಶ್ವತ್ಥನಾರಾಯಣ್ ಅವರ ನೇತೃತ್ವದಲ್ಲಿ ಸತ್ಯಶೋಧನಾ ಸಮಿತಿ ನಾಗಮಂಗಲಕ್ಕೆ ಭೇಟಿ ಕೊಟ್ಟಿದೆ. ಭಯೋತ್ಪಾದಕರಿಗೆ ಬೆಂಬಲ ನೀಡುವ– ಗಣಪತಿ ಮೆರವಣಿಗೆ ವಿರೋಧಿಸುವ ಎಸ್‌ಡಿಪಿಐ ಅಧ್ಯಕ್ಷ ಅಬ್ದುಲ್ ಮಜೀದ್ ಅವರ ನೇತೃತ್ವದಲ್ಲಿ ಸತ್ಯಶೋಧನಾ ಸಮಿತಿ ಹೋಗಿದೆ. ಹಿಂದೂಗಳು ಅನ್ಯಾಯ ಮಾಡಿದ್ದಾಗಿ, ಹಿಂದೂಗಳೇ ಕಲ್ಲೆಸೆದುದಾಗಿ, ಚಪ್ಪಲಿ ಎಸೆದುದಾಗಿ ವರದಿ ಕೊಡಬಹುದು ಎಂದು ವಿಶ್ಲೇಷಿಸಿದರು.

**ಈ ದಿನದ ದರ** ಪೆಟ್ರೋಲ್: 103.44 ₹/L | ಡೀಸೆಲ್ : 89.97 ₹/L | ಬಂಗಾರ: ₹7,473/Gram24ct ₹6,850/Gram22ct | ಬೆಳ್ಳಿ: ₹91.00/Gram



## ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

### ಮೂರ್ತಿಪೂಜೆ

ದೇವರಿಗೆ ಸಾಕಾರಕಲ್ಪಿಸಿ ಕಲ್ಲು ಮಣ್ಣು ಕಟ್ಟಿಗೆ ಲೋಹ ಬಳಸಿ ಮೂರ್ತಿ ಮಾಡಿ ಆರಾಧಿಸುವುದು ಮೂರ್ತಿಪೂಜೆ. ಹಿಂದುಧರ್ಮದಲ್ಲಿ ಅನೇಕ ದೇವತಾ ಉಪಾಸನೆ ಇದೆ. ಹಾಗೆಂದು ನಿರಾಕಾರ ಉಪಾಸನೆ ಇಲ್ಲ ಎಂದಲ್ಲ. ವೇದಗಳ ಉಪನಿಷತ್ತುಗಳು ಹೇಳುವುದೇ ನಿರಾಕಾರ ದೇವನನ್ನು. ಶ್ವೇತಾಶ್ವತರ ಉಪನಿಷತ್ತಿನ ಏಕೋ ದೇವೋ ಸರ್ವಭೂತೇಷು ಗೂಢಃ, ಸರ್ವವ್ಯಾಪೀ ಸರ್ವಭೂತಾಂತರಾತ್ಮಾ. ಕರ್ಮಾಧ್ಯಕ್ಷಃ ಸರ್ವಭೂತಾಧಿವಾಸಃ, ಸಾಕ್ಷೀ ಚೇತೋ ಕೇವಲೋ ನಿರ್ಗುಣಶ್ಚ = ಒಬ್ಬ ಪರಮಾತ್ಮನೇ ಎಲ್ಲರಲ್ಲಿ ಹುದುಗಿದ್ದಾನೆ, ಎಲ್ಲೆಡೆ ವ್ಯಾಪಿಸಿದ್ದಾನೆ, ಎಲ್ಲಕ್ಕೂ ಅವನೇ ಕರ್ತಾ, ಅವನೇ ಆಶ್ರಯ, ಆತನೇ ಎಲ್ಲಕ್ಕೂ ಸಾಕ್ಷಿ, ಆತನೇ ಚೇತನರೂಪಿ, ಆತ ಕೇವಲ ನಿರ್ಗುಣ = ನಿರಾಕಾರ ಎಂಬ ಮಂತ್ರವನ್ನು ಗಮನಿಸಿ. ಹೀಗೆ ಸಾಕಾರ ನಿರಾಕಾರ ಎರಡನ್ನೂ ಹೇಳಿದ್ದು ಹಿಂದು ಧರ್ಮದ ವಿಶಾಲತೆಯ ಪ್ರತೀಕ. ನಿರಾಕಾರವೇ ಮುಖ್ಯ ಅಂತಿಮ. ಆದಾಗ್ಯೂ ನಿರಾಕಾರದ ಅರಿವಿಗೆ ಬೇಕು ವಿಶೇಷ ಸಾಧನೆ. ಈ ಸಾಧನೆಯ ಆರಂಭ ಸಾಕಾರ. ಸಾಕಾರದಿಂದ ನಿರಾಕಾರದೆಡೆಗೆ ಪಯಣ ಸುಲಭ. ಆದ್ದರಿಂದಲೇ ನಿರಾಕಾರವಾದಿ ಇಸ್ಲಾಂ ಕ್ರೈಸ್ತ ಮೊದಲಾದವರೂ ಸಾಕಾರ ಮಸೀದಿ ಚರ್ಚ್ ಮುಂತಾದ್ದನ್ನು ಕಟ್ಟಿ ಆರಾಧಿಸುವುದು, ಗಣೇಶ ಉತ್ಸವದಂತೆ ಸಾರ್ವಜನಿಕ ಈದ್ ಮಿಲಾದ್ ಮೆರವಣಿಗೆ!

# ಬೆಂಗಳೂರಿನಲ್ಲಿ ವ್ಯಾಪಾರ ಸ್ಥಳ, ಪಾರ್ಕಿಂಗ್ ಸೌಲಭ್ಯ

## ಫುಟ್‌ಪಾತ್‌ಗಳನ್ನು ಕಾರುಗಳು, ಆಟೋಗಳು ದ್ವಿಚಕ್ರ ವಾಹನಗಳಿಗೆ ಶಾಶ್ವತ ಪಾರ್ಕಿಂಗ್ ಸ್ಥಳಗಳಾಗಿ ಬಳಕೆ

• ಉದಯವಾಹಿನಿ ಬೆಂಗಳೂರು

ರಾಜಧಾನಿ ಬೆಂಗಳೂರಿನಲ್ಲಿ ಫುಟ್ ಪಾತ್‌ಗಳ ಮೇಲೆ ಜನರಿಗೆ ನಡೆದುಕೊಂಡು ಹೋಗಲು ಸ್ಥಳವಿರುವುದಿಲ್ಲ, ಬೀದಿಬದಿ ವ್ಯಾಪಾರಿಗಳು ಆಕ್ರಮಣ ಮಾಡಿಕೊಂಡುಬಿಟ್ಟಿದ್ದಾರೆ ಎಂಬ ಕೂಗು ಸಾಕಷ್ಟು ಕೇಳಿಬರುತ್ತಿದೆ. ವಸತಿ ಪ್ರದೇಶಗಳಲ್ಲಿ ಫುಟ್‌ಪಾತ್‌ಗಳನ್ನು ಕಾರುಗಳು, ಆಟೋಗಳು ಅಥವಾ ದ್ವಿಚಕ್ರ ವಾಹನಗಳಿಗೆ ಶಾಶ್ವತ ಪಾರ್ಕಿಂಗ್ ಸ್ಥಳಗಳಾಗಿ ಬಳಸಲಾಗುತ್ತದೆ. ಮರದ ಕುಂಡಗಳನ್ನು ಇಡಲು ಕಾಲುದಾರಿಗಳನ್ನು ಬಳಸುತ್ತಾರೆ. ಇಟ್ಟಿಗೆಗಳು, ಮರಳು, ತ್ಯಾಜ್ಯ ವಸ್ತುಗಳಂತಹ ನಿರ್ಮಾಣ ಸಾಮಗ್ರಿಗಳನ್ನು ಎಸೆಯಲು ಅವರು ಫುಟ್‌ಪಾತ್‌ಗಳನ್ನು ಬಳಸಿಕೊಂಡರೆ ಸಾರ್ವಜನಿಕರು ಓಡಾಡುವುದು ಹೇಗೆ ಎಂಬ ಅಳಲು ಜನರದ್ದಾಗಿದೆ.

ವಸತಿ ಪ್ರದೇಶಗಳಲ್ಲಿ ವ್ಯಾಪಕವಾದ ವಾಣಿಜ್ಯೀಕರಣ ಚಟುವಟಿಕೆಯಿಂದಾಗಿ ನೂರಾರು ಕಚೇರಿಗಳು, ಅಂಗಡಿಗಳು, ಗೋಡೌನ್‌ಗಳು ತಲೆಯೆತ್ತುತ್ತಿವೆ.

ಗ್ರಾಹಕರು ತಮ್ಮ ವಾಹನಗಳನ್ನು ಫುಟ್‌ಪಾತ್‌ಗಳಲ್ಲಿ ನಿಲ್ಲಿಸುತ್ತಾರೆ, ಪಾದಚಾರಿಗಳಿಗೆ ನಿರ್ಬಂಧಿಸುತ್ತಾರೆ. ಇದರ ಹೊರತಾಗಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಆದೇಶದಂತೆ ವಾಣಿಜ್ಯ ಕಟ್ಟಡಗಳು ಸಾಕಷ್ಟು ನೆಲಮಾಳಿಗೆಯ ಪಾರ್ಕಿಂಗ್ ಸೌಲಭ್ಯಗಳನ್ನು ಒದಗಿಸಲು ವಿಫಲವಾದ ಕಾರಣ, ವಾಹನಗಳು ಫುಟ್‌ಪಾತ್‌ಗಳಲ್ಲಿ ನಿಲ್ಲಿಸಬೇಕಾದ ಪರಿಸ್ಥಿತಿ ಬಂದಿದೆ.



ಉದಯವಾಹಿನಿ ಚಿತ್ರ

**ಬಿಬಿಎಂಪಿಯು ಫುಟ್‌ಪಾತ್‌ಗಳ ಅಭಿವೃದ್ಧಿ**

ವಸತಿ ಪ್ರದೇಶಗಳಲ್ಲಿ, ಫುಟ್‌ಪಾತ್‌ಗಳು ಜನರ ಓಡಾಡಕ್ಕೆ ಮಾತ್ರ ಬಳಕೆಯಾಗಬೇಕೆಂಬುದು ಕೇವಲ ಸರ್ಕಾರದ ನಿಯಮದಲ್ಲಿ ಮಾತ್ರವಿದೆ.

ಬಹುಪಾಲು ಫುಟ್‌ಪಾತ್‌ಗಳು ಕಾರುಗಳು, ದ್ವಿಚಕ್ರ ವಾಹನಗಳು ಮತ್ತು ಆಟೋಗಳಿಗೆ ಶಾಶ್ವತ ಪಾರ್ಕಿಂಗ್ ಸ್ಥಳಗಳಾಗಿ ಮಾರ್ಪಟ್ಟಿವೆ. ರಸ್ತೆಗಳಿಂದ ಕಾಲ್ನಡಿಗೆಯನ್ನು ಪ್ರತ್ಯೇಕಿಸಲು ಫುಟ್‌ಪಾತ್‌ಗಳ ಅಂಚಿನಲ್ಲಿ ಹಾಕಲಾದ ಕರ್ಬ್ ಕಲ್ಲುಗಳನ್ನು ವಾಹನಗಳು ಫುಟ್‌ಪಾತ್‌ಗಳಿಗೆ ಸುಲಭವಾಗಿ ಪ್ರವೇಶಿಸಲು ತೆಗೆದುಹಾಕಲಾಗುತ್ತದೆ. ಅನೇಕ ಪ್ರದೇಶಗಳಲ್ಲಿ ಮನೆ ಮಾಲೀಕರು ತಮ್ಮ ವಾಹನಗಳನ್ನು ಮಳೆ ಮತ್ತು ಬಿಸಿಲಿನಿಂದ ರಕ್ಷಿಸಲು ಫುಟ್‌ಪಾತ್‌ಗಳ ಮೇಲೆ ಶಾಶ್ವತ ಕಟ್ಟಡಗಳನ್ನು ನಿರ್ಮಿಸುವುದು ಸಾಮಾನ್ಯವಾಗಿದೆ, ಮಾರ್ಗಗಳು ಎಲ್ಲರಿಗೂ ಮೀಸಲಾದವು, ಅದು ಯಾರ ವೈಯಕ್ತಿಕ ಸ್ವತ್ತಲ್ಲ ಎಂಬುದು ಕೇವಲ ಬಾಯಿ ಮಾತಾಗಿದೆ ಎನ್ನುತ್ತಾರೆ ಚಾಮರಾಜಪೇಟೆ ನಿವಾಸಿ ಪುರುಷೋತ್ತಮ ಶಿವ. ಬೆಂಗಳೂರು ಅಪಾರ್ಟ್‌ಮೆಂಟ್ ಫೆಡರೇಶನ್‌ನ ಅಧ್ಯಕ್ಷ ವಿಕ್ರಮ್ ರೈ, ಉತ್ತಮವಾದ ಫುಟ್‌ಪಾತ್‌ಗಳಿದ್ದರೆ

ನಿವಾಸಿಗಳು ನೆರೆಹೊರೆಯ ಅಂಗಡಿ ಅಥವಾ ಹತ್ತಿರದ ದರ್ಶಿನಿಗಳಿಗೆ ನಡೆದುಕೊಂಡು ಹೋಗಲು ಅಥವಾ ಸುಮ್ಮನೆ ಸುತ್ತಾಡಲು ಅನುಕೂಲವಾಗುತ್ತದೆ.

ಜನರ ಜೀವನಶೈಲಿ ಮತ್ತು ಆರೋಗ್ಯಕ್ಕೆ ಸಹ ಅನುಕೂಲವಾಗುತ್ತದೆ ಎನ್ನುತ್ತಾರೆ. ಒಂದೆರಡು ವರ್ಷಗಳ ಹಿಂದೆ ಬಿಬಿಎಂಪಿಯು ಫುಟ್‌ಪಾತ್‌ಗಳ ಅಭಿವೃದ್ಧಿಗೆ ಪ್ರತಿ ವಾರ್ಡ್ ಸಮಿತಿಗೆ ನೀಡಲಾದ 60 ಲಕ್ಷ ರೂಪಾಯಿ ಬಜೆಟ್‌ನಲ್ಲಿ ಒಂದು ಭಾಗವನ್ನು ವಿನಿಯೋಗಿಸುವ ಮೂಲಕ ಪ್ರಗತಿಪರ ಹೆಜ್ಜೆಯನ್ನು ತೆಗೆದುಕೊಳ್ಳಲಾಗಿದೆ. ಈ ನೀತಿಯು ವಿನ್ಯಾಸ ಮತ್ತು ಅನುಷ್ಠಾನಕ್ಕೆ ಹೆಚ್ಚಿನ ಹೂಡಿಕೆಯ ದೃಷ್ಟಿಯಿಂದ ಮತ್ತಷ್ಟು ವಿಕಸನಗೊಳ್ಳಬೇಕು. ಬೆಂಗಳೂರಿನಾದ್ಯಂತ ಉತ್ತಮ ಗುಣಮಟ್ಟದ ಕಾಲುದಾರಿಗಳು ರೂಪುಗೊಳ್ಳಬೇಕು. ಫುಟ್ ಪಾತ್ ಬಳಸಿಕೊಳ್ಳುವ, ನಿರ್ವಹಿಸುವ ನಂತರದ ಹಂತವೂ ಅಷ್ಟೇ ಮುಖ್ಯವಾಗಿದೆ ಎನ್ನುತ್ತಾರೆ.

> **ನಗರದಲ್ಲಿನ ಫುಟ್‌ಪಾತ್‌ಗಳು ವೃದ್ಧರು ಸೇರಿದಂತೆ ಅನಾರೋಗ್ಯ ಸಮಸ್ಯೆ ಇರುವವರಿಗೆ ನಡೆದುಕೊಂಡು ಸುಲಭವಾಗಿ ಹೋಗಲು ಯೋಗ್ಯವಾಗಿರಬೇಕು. ಇದಕ್ಕಾಗಿ, ಫುಟ್ ಪಾತ್‌ಗಳು ಸಮತಟ್ಟಾಗಿರಬೇಕು, ಕಟ್ಟಡ ಸಾಮಗ್ರಿಗಳನ್ನು ಅವುಗಳ ಮೇಲೆ ರಾಶಿ ಮಾಡಬಾರದು ಮತ್ತು ವಾಹನಗಳನ್ನು ನಿಲ್ಲಿಸಬಾರದು ಎಂದು ಮಲ್ಲೇಶ್ವರಂ ಸ್ವಾಭಿಮಾನ ಇನಿಶಿಯೇಟಿವ್ (ಎಂಎಸ್ಐ) ರೇಖಾ ಚಾರಿ ಹೇಳುತ್ತಾರೆ.**

> **ಕನಕಪುರ ರಸ್ತೆಯ ಚೇಂಜ್ ಮೇಕರ್ಸ್‌ನ ಕಾರ್ಯದರ್ಶಿ ವಿ.ಕೆ.ಶ್ರೀವತ್ಸ, ಕನಕಪುರ ರಸ್ತೆ ಹಾಗೂ ಅಕ್ಕಪಕ್ಕದ ರಸ್ತೆಗಳಲ್ಲಿ ಫುಟ್ ಪಾತ್‌ಗಳ ಅತಿಕ್ರಮಣ ವಿಪರೀತವಾಗಿದೆ. ಹಲವಾರು ವಾಣಿಜ್ಯ ಚಟುವಟಿಕೆಗಳು ಮತ್ತು ಅವುಗಳಲ್ಲಿ ಯಾವುದೂ ಮುಖ್ಯ ರಸ್ತೆ ಮತ್ತು ವಸತಿ ಪ್ರದೇಶಗಳಲ್ಲಿ ತಮ್ಮ ಆವರಣದೊಳಗೆ ಪಾರ್ಕಿಂಗ್ ಸೌಲಭ್ಯಗಳನ್ನು ಮಾಡಿಲ್ಲ, ಸಾರ್ವಜನಿಕ ಕಾಲುದಾರಿಗಳನ್ನು ಅವರ ಖಾಸಗಿ ಪಾರ್ಕಿಂಗ್ ಸ್ಥಳವಾಗಿ ಪರಿವರ್ತಿಸಲಾಗಿದೆ. ಸಾರಕ್ಕಿಯಿಂದ ನೈಸ್ ರಸ್ತೆವರೆಗಿನ ಕನಕಪುರ ಮುಖ್ಯರಸ್ತೆ ಮತ್ತು ವಸಂತಪುರ ಮುಖ್ಯರಸ್ತೆಯ ಅಕ್ಕಪಕ್ಕದ ರಸ್ತೆಗಳು, ರಾಗುವನಹಳ್ಳಿ 80 ಅಡಿ ರಸ್ತೆ, ವಾಜರಹಳ್ಳಿ 100 ಅಡಿ ರಸ್ತೆ, ಕೋಣನಕುಂಟೆ ಮುಖ್ಯರಸ್ತೆ ಹೀಗೆ ಅನೇಕ ಕಡೆ ನಿಯಮಗಳನ್ನು ಗಾಳಿಗೆ ತೂರಲಾಗಿದೆ ಎಂದರು.**

## ಕಲ್ಯಾಣ ಕರ್ನಾಟಕದಲ್ಲಿ ಯುವನಿಧಿಗೆ 49,691 ಅಭ್ಯರ್ಥಿಗಳ ನೊಂದಣಿ

• ಉದಯವಾಹಿನಿ ಬೆಂಗಳೂರು

ಕಲ್ಯಾಣ ಕರ್ನಾಟಕದಲ್ಲಿ ಯುವನಿಧಿ ಯೋಜನೆಯಡಿ 49,691 ಅಭ್ಯರ್ಥಿಗಳ ನೊಂದಣಿಯಾಗಿದ್ದು, 28.39 ಕೋಟಿ ರೂ. ಹಣ ಜಮಾ ಮಾಡಲಾಗಿದೆ ಎಂದು ಸರ್ಕಾರ ಮಾಹಿತಿ ನೀಡಿದೆ. 2022-23ನೇ ಶೈಕ್ಷಣಿಕ ಸಾಲಿನಲ್ಲಿ ಡಿಪ್ಲೋಮಾ ಮತ್ತು ಪದವಿ ಉತ್ತೀರ್ಣರಾದ ನಿರುದ್ಯೋಗಿಗಳಿಗೆ ಕ್ರಮವಾಗಿ ಮಾಸಿಕ 1,500 ಮತ್ತು 3,000 ಭತ್ಯೆ ನೀಡುವ ಯುವನಿಧಿ ಯೋಜನೆಯಡಿ ಇದುವರೆಗೆ ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ 49,691 ಅಭ್ಯರ್ಥಿಗಳು ನೊಂದಣಿ ಮಾಡಿಕೊಂಡಿದ್ದು, ಇದರಲ್ಲಿ ಅರ್ಹ 22,272 ನಿರುದ್ಯೋಗಿಗಳಿಗೆ 28.39 ಕೋಟಿ ರೂ.ಗಳನ್ನು ಡಿ.ಬಿ.ಟಿ.ಮೂಲಕ ಹಣ ಪಾವತಿಸಲಾಗಿದೆ ಎಂದು ಸರ್ಕಾರ ಮಾಹಿತಿ ನೀಡಿದೆ.

## ನೆಲಮಂಗಲದ ವಿಜಿಎಸ್ ಮಠಕ್ಕೆ ಭೇಟಿ

• ಉದಯವಾಹಿನಿ ನೆಲಮಂಗಲ

ಲಿಯುಗದ ಶ್ರವಣಕುಮಾರ ಖ್ಯಾತಿಯ ಕೃಷ್ಣಕುಮಾರ್ ರವರು ತಮ್ಮ ಮಾತೃಶ್ರೀಯವರೊಂದಿಗೆ ನೆಲಮಂಗಲದ ವಿ ಜಿ ಎಸ್ ಮಠಕ್ಕೆ ಭೇಟಿ ನೀಡಿ ಹುಣ್ಣಿಮೆ ಸತ್ಯನಾರಾಯಣ ಪೂಜೆಯಲ್ಲಿ ಪಾಲ್ಗೊಂಡರು.ಇದೇ ಸಂದರ್ಭದಲ್ಲಿ ಅಲ್ಲಿನ ಸ್ವಾಮೀಜಿಗಳು ಕಲಿಯುಗ ಶ್ರವಣಕುಮಾರ ಹಾಗೂ ಮಾತೃಶ್ರೀ ಚೂಡಾರತ್ನಮ್ಮನವರನ್ನು ಹೂವಿನ ಹಾರ ಮತ್ತು ಫಲಗಳಿಂದ ಅಭಿನಂದಿಸಿ ಕಲಿಯುಗದಲ್ಲಿ ತಮ್ಮಂಥವರ ದರ್ಶನ ಬಹಳ ಅಪರೂಪ, ತಮ್ಮ ಈ ಮಾತೃಸೇವಾ ಕಾರ್ಯ ಹೀಗೆ ಮುಂದುವರೆಯಲಿ, ಭಗವದ್ಗೀತೆ, ಉಪನಿಷತ್ ಸಾರಗಳನ್ನು ತಿಳಿದು ಜೀವನದಲ್ಲಿ ಆಚರಿಸುತ್ತಿರುವ ತಾವು ಇಂದಿನ ಯುವ ಪೀಳಿಗೆಗೆ ಮಾದರಿಯಾಗಿರುವುದಾಗಿ ತಿಳಿಸಿದರು.



ಉದಯವಾಹಿನಿ ಚಿತ್ರ

## ಬಿಜೆಪಿ ಶಾಸಕ ಮುನಿರತ್ನ ಜಾಮೀನು ಅರ್ಜಿ ವಿಚಾರಣೆ

• ಉದಯವಾಹಿನಿ ಬೆಂಗಳೂರು



ಬಿಜೆಪಿ ಶಾಸಕ ಮುನಿರತ್ನ ಜಾಮೀನು ಅರ್ಜಿ ವಿಚಾರಣೆ ನಡೆಸಿದಂತ ಕೋರ್ಟ್ ಆದೇಶ ಕಾಯ್ದಿರಿಸಿದೆ. ಜೀವ ಬೆದರಿಕೆ, ಜಾತಿ ನಿಂದನೆ ಕೇಸ್‌ನಲ್ಲಿ ಬಂಧನಕ್ಕೊಳಗಾಗಿರುವ ಬಿಜೆಪಿ ಶಾಸಕ ಮುನಿರತ್ನ ಜಾಮೀನು ಕೋರಿ ಕೋರ್ಟ್ ಗೆ ಅರ್ಜಿ ಸಲ್ಲಿಸಿದ್ದರು. ವಿಚಾರಣೆ ನಡೆಸಿದಂತಹ ಕೋರ್ಟ್ ನಾಳೆಗೆ ಆದೇಶ ಕಾಯ್ದಿರಿಸಿದೆ. ಮುನಿರತ್ನ ವಿರುದ್ಧ 8 ಕೇಸ್ ಗಳು ಬಾಕಿ ಇದೆ. ಆರೋಪಿಯ ಇತಿಹಾಸವನ್ನು ಕೋರ್ಟ್ ಪರಿಗಣಿಸಬೇಕು. ಮಹಿಳೆಯ ಗೌರವಕ್ಕೆ ಧಕ್ಕೆಯಾಗುವಂತೆ ನಿಂದಿಸಲಾಗಿದೆ. ತನಿಖೆ ಆರಂಭದ ಹಂತದಲ್ಲಿರುವುದರಿಂದ ಆರೋಪಿಗೆ ಜಾಮೀನು ನೀಡಿದರೆ ಸಾಕ್ಷಿ ಮೇಲೆ ಪರಿಣಾಮ ಬೀರಬಹುದು ಎಂದು ಎಸ್ ಪಿಪಿ ಪ್ರದೀಪ್ ವಾದ ಮಂಡಿಸಿದರು. ಜೀವ ಬೆದರಿಕೆ, ಜಾತಿ ನಿಂದನೆ ಕೇಸ್ ನಲ್ಲಿ ಎರಡು ದಿನ ಪೊಲೀಸ್ ಕಷ್ಟಡಿಗೆ ಪಡೆದಿದ್ದ ಪೊಲೀಸರು ಕಸ್ಟಡಿ ಅವಧಿ ಮುಗಿದ ಹಿನ್ನೆಲೆಯಲ್ಲಿ 82ನೇ ಸಿಸಿಹೆಚ್ ಕೋರ್ಟ್ ಗೆ ಹಾಜರು ಪಡಿಸಿದ್ದರು. ಈ ವೇಳೆ ಮುನಿರತ್ನ ಪರ ವಕೀಲರು ಜಾಮೀನಿಗೆ ಅರ್ಜಿ ಸಲ್ಲಿಸಿದ್ದರು. ಆದರೆ ಕೋರ್ಟ್ ಒಂದು ದಿನದವರೆಗೆ ಮುನಿರತ್ನ ಅವರನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿ ಆದೇಶ ನೀಡಿತ್ತು. ನ್ಯಾಯಾಂಗ ಬಂಧನ ಹಿನ್ನೆಲೆಯಲ್ಲಿ ಪೊಲೀಸರು ಮುನಿರತ್ನ ಅವರನ್ನು ಪರಪ್ಪನ ಅಗ್ರಹಾರ ಜೈಲಿಗೆ ಶಿಫ್ಟ್ ಮಾಡಿದ್ದರು.

## ಸಾರ್ವಜನಿಕರ ಕುಂದು ಕೊರತೆ ಅಹವಾಲು ಸ್ವೀಕಾರ ಸಭೆ

• ಉದಯವಾಹಿನಿ ಶಿವಮೊಗ್ಗ

ಕರ್ನಾಟಕ ಲೋಕಾಯುಕ್ತ ಪೊಲೀಸ್ ವಿಭಾಗದ ಜಿಲ್ಲಾ ಅಧಿಕಾರಿಗಳು ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಸೆಪ್ಟಂಬರ್-2024ರ ಮಾಹೆಯ ಕೆಳಕಂಡ ದಿನಗಳಂದು ಸಾರ್ವಜನಿಕರ ಕುಂದು ಕೊರತೆ ಅರ್ಜಿ ಸ್ವೀಕಾರ ಸಭೆ ನಡೆಸಲಿದ್ದಾರೆ ಎಂದು ಲೋಕಾಯುಕ್ತ ಪೊಲೀಸ್ ಉಪಾಧೀಕ್ಷಕರು ತಿಳಿಸಿದ್ದಾರೆ.

ಸೆ. 21 ರಂದು ಬೆಳಿಗ್ಗೆ 11.00 ಗಂಟೆಯಿಂದ ಮಧ್ಯಾಹ್ನ 12.30ರವರೆಗೆ ಸೊರಬ ತಾಲ್ಲೂಕು ಕಚೇರಿ ಸಭಾಂಗಣ, ಸೆ.24 ಬೆಳಿಗ್ಗೆ 11.00 ಗಂಟೆಯಿಂದ ಮಧ್ಯಾಹ್ನ 12.30ರವರೆಗೆ ತೀರ್ಥಹಳ್ಳಿ ತಾಲ್ಲೂಕು ಕಚೇರಿ ಸಭಾಂಗಣ ಮತ್ತು ಬೆಳಿಗ್ಗೆ 11.00 ಗಂಟೆಯಿಂದ ಮಧ್ಯಾಹ್ನ 12.30ರವರೆಗೆ ಶಿಕಾರಿಪುರ ತಾಲ್ಲೂಕು ಕಚೇರಿ ಸಭಾಂಗಣ, ಸೆ.25 ರಂದು ಬೆಳಿಗ್ಗೆ 11.00 ಗಂಟೆಯಿಂದ ಮಧ್ಯಾಹ್ನ 12.30ರವರೆಗೆ ಸಾಗರ ತಾಲ್ಲೂಕು ಪಂಚಾಯಿತಿ ಸಭಾಂಗಣ ಮತ್ತು ಬೆಳಿಗ್ಗೆ 11.00 ಗಂಟೆಯಿಂದ ಮಧ್ಯಾಹ್ನ 12.30ರವರೆಗೆ ಹೊಸನಗರ ತಾಲ್ಲೂಕು ಕಚೇರಿ ಸಭಾಂಗಣ, ಸೆ.26 ರಂದು ಬೆಳಿಗ್ಗೆ 11.00 ಗಂಟೆಯಿಂದ ಮಧ್ಯಾಹ್ನ 12.30 ರವರೆಗೆ ಭದ್ರಾವತಿ ತಾಲ್ಲೂಕು ಪಂಚಾಯಿತಿ ಸಭಾಂಗಣ, ಸೆ-27 ರಂದು ಬೆಳಿಗ್ಗೆ 11.00 ಗಂಟೆಯಿಂದ ಮಧ್ಯಾಹ್ನ 12.30ರವರೆಗೆ ಶಿವಮೊಗ್ಗ ತಾಲ್ಲೂಕು ಪಂಚಾಯಿತಿ ಸಭಾಂಗಣಗಳಲ್ಲಿ ಕುಂದುಕೊರತೆ ಅರ್ಜಿ ಸ್ವೀಕಾರ ಸಭೆ ನಡೆಯಲಿದೆ.




ಉದಯವಾಹಿನಿ ಚಿತ್ರ

> **ಸರ್ಕಾರಿ ಕರ್ತವ್ಯ ನಿರ್ವಹಿಸಲು ಬೇಜವಾಬ್ದಾರಿತನ, ನಿರ್ಲಕ್ಷ್ಯ, ಅನಗತ್ಯ ವಿಳಂಬ ಮತ್ತು ಅಧಿಕೃತ ಕೆಲಸಕ್ಕಾಗಿ ಲಂಚಕ್ಕೆ ಬೇಡಿಕೆ ಇಟ್ಟಂತಹ ಅಧಿಕಾರಿ ಹಾಗೂ ಸಿಬ್ಬಂದಿಗಳ ವಿರುದ್ಧ ಸಾರ್ವಜನಿಕರು ಲಿಖಿತ ಅಹವಾಲು ಸಲ್ಲಿಸುವಂತೆ ಶಿವಮೊಗ್ಗದ ಕರ್ನಾಟಕ ಲೋಕಾಯುಕ್ತ ಪೊಲೀಸ್ ಉಪಾಧೀಕ್ಷಕರು ತಿಳಿಸಿದ್ದಾರೆ.**

## ಬಿಜೆಪಿ ಸಂಸದನಿಗೆ ತಿರುಗುಬಾಣವಾದ ರಸ್ತೆಗುಂಡಿ ಟ್ವೀಟ್, ಜನರಿಂದ ಟ್ರೋಲ್

• ಉದಯವಾಹಿನಿ ಬೆಂಗಳೂರು

ರಸ್ತೆಗುಂಡಿಯ ಬಗ್ಗೆ ಬಿಜೆಪಿ ಸಂಸದ ಮಾಡಿರುವ ಟ್ವೀಟ್ ಅವರಿಗೇ ತಿರುಗು ಬಾಣವಾಗಿದೆ. ಬಿಜೆಪಿ ಸಂಸದ ಪಿ.ಸಿ ಮೋಹನ್ ಅವರು ಬೆಂಗಳೂರಿನ ರಸ್ತೆಗುಂಡಿಯ ಬಗ್ಗೆ ವ್ಯಂಗ್ಯವಾಡಿದ್ದಾರೆ. ಆದರೆ, ಈ ಟ್ವೀಟ್ ಇದೀಗ ಅವರಿಗೇ ರಿವರ್ಸ್ ಗೇರ್ ರೀತಿ ಆಗಿದೆ. ರೀಸ್ವಾಮಿ ನೀವು 15 ವರ್ಷದಿಂದ ಇಲ್ಲಿ ಎಂ.ಪಿ ಅಲ್ವಾ ಇಲ್ಲೇನು ಮಾಡಿದ್ದೀರಿ ಎಂದು ಕೆಲವು ಕಾಮೆಂಟ್ ಮಾಡಿದ್ದಾರೆ.

ಸಂಸದರ ಟ್ವೀಟ್ ಏನು, ಜನ ಇದಕ್ಕೆ ಹೇಗೆಲ್ಲ ರಿಯಾಕ್ಟ್ ಮಾಡ್ತಿದ್ದಾರೆ ಎನ್ನುವ ವಿವರ ಇಲ್ಲಿದೆ. ಬೆಂಗಳೂರಿನಲ್ಲಿ ರಸ್ತೆಗುಂಡಿಗಳನ್ನು ಮುಚ್ಚುವುದಕ್ಕೆ ಬಿಬಿಎಂಪಿ ಹಾಗೂ ಸರ್ಕಾರ ನೀಡಿದ್ದ ಗಡುವುಗಳು ಇನ್ನೇನು ಮುಗಿಯಲು ಬಂತು. ಆದರೆ, ನಗರದಲ್ಲಿ ಇನ್ನೂ ರಸ್ತೆಗುಂಡಿಗಳು ಬಾಕಿ ಉಳಿದಿವೆ. ನಗರದಲ್ಲಿ ರಸ್ತೆಗುಂಡಿಗಳನ್ನು ಮುಚ್ಚುವುದರಲ್ಲಿ ಬಿಬಿಎಂಪಿಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಯುದ್ಧೋಪಾದಿಯಲ್ಲಿ ಕೆಲಸ ಮಾಡುತ್ತಿರುವುದಾಗಿ ಹೇಳಿಕೊಂಡಿದ್ದರು.

ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಅವರು ಹಗಲು ರಾತ್ರಿ ಎನ್ನದೆ ಬೆಂಗಳೂರಲ್ಲಿರುವ ರಸ್ತೆಗುಂಡಿಗಳನ್ನು ಪರಿಶೀಲನೆ ಮಾಡಿ, ರಸ್ತೆಗುಂಡಿಗಳನ್ನು ಮುಚ್ಚುವಂತೆ ಬಿಬಿಎಂಪಿಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದರು. ಆದರೆ,



ಉದಯವಾಹಿನಿ ಚಿತ್ರ

ಇನ್ನೂ ಬೆಂಗಳೂರಲ್ಲಿ ರಸ್ತೆಗುಂಡಿಗಳು ಕಣ್ಣಿಗೆ ಬೀಳುತ್ತಿವೆ.

> **ಜೇಬು ತುಂಬಿಸಿಕೊಂಡ್ರಾ, ಎಂದ ಬಿಜೆಪಿ ಸಂಸದ: ಬೆಂಗಳೂರಲ್ಲಿ ಮುಂದಿನ 15 ದಿನಗಳಲ್ಲಿ ರಸ್ತೆಗುಂಡಿಗಳನ್ನು ಮುಚ್ಚಿಬಿಡುತ್ತೇವೆ. ಎಲ್ಲಾ ರಸ್ತೆಗಳನ್ನು ಜನಸ್ನೇಹಿ ಆಗಿಸುತ್ತೇವೆ ಎಂದು ಕಾಂಗ್ರೆಸ್ ಸರ್ಕಾರ ಹೇಳಿತ್ತು. ಕಾಂಗ್ರೆಸ್ ಸರ್ಕಾರ ನೀಡಿದ್ದ ಗಡುವು ಈಗಾಗಲೇ ಮುಕ್ತಾಯವಾಗಿದೆ ಆದರೆ, ಬೆಂಗಳೂರಿನಲ್ಲಿ ರಸ್ತೆಗುಂಡಿಗಳು ಇನ್ನೂ ಇವೆ ಎಂದು ಬಿಜೆಪಿ ಸಂಸದ ಪಿ.ಸಿ ಮೋಹನ್ ಹೇಳಿದ್ದಾರೆ.**

## ಬೆಂಗಳೂರಿನಲ್ಲೊಬ್ಬ ವಿಚಿತ್ರ ಕಳ್ಳ : ಬಟ್ಟೆ ಅಂಗಡಿ ಗೊಂಬೆಯ ಪ್ಯಾಂಟ್ ಕಳ್ಳತನ!

• ಉದಯವಾಹಿನಿ ಬೆಂಗಳೂರು

ಸಿಲಿಕಾನ್ ಸಿಟಿ ಬೆಂಗಳೂರಿನಲ್ಲೊಬ್ಬ ವಿಚಿತ್ರ ಕಳ್ಳನ ಪ್ರಕರಣ ಬೆಳಕಿಗೆ ಬಂದಿದ್ದು, ಬಟ್ಟೆ ಅಂಗಡಿ ಮುಂದೆ ಇರುವ ಗೊಂಬೆಯ ಪ್ಯಾಂಟ್ ಕಳ್ಳತನ ಮಾಡಿರುವ ಘಟನೆ ನಡೆದಿದೆ. ಬೆಂಗಳೂರಿನ ಯಲಹಂಕ ಬಳಿಯ ತಿರುಮೇನಹಳ್ಳಿಯಲ್ಲಿ ಈ ಘಟನೆ ನಡೆದಿದ್ದು, ವಿಚಿತ್ರ ಕಳ್ಳನೊಬ್ಬ ಬಟ್ಟೆ ಅಂಗಡಿ ಮುಂದೆ ಇಟ್ಟಿರುವ ಗೊಂಬೆಯ ಪ್ಯಾಂಟ್ ಕದ್ದು ಪರಾರಿಯಾಗಿದ್ದಾನೆ. ಬಟ್ಟೆ ಅಂಗಡಿಯ ಸಿಸಿಟಿಯಲ್ಲಿ ಕಳ್ಳನ ಕೃತ್ಯ ಸೆರೆಯಾಗಿದ್ದು, ಅಂಗಡಿ ಮಾಲೀಕರು ಪೊಲೀಸರಿಗೆ ಟ್ಯಾಗ್ ಟ್ವೀಟ್ ಮಾಡಿದ್ದಾರೆ. ಹಾಡಹಗಲೇ ಕಳ್ಳನೊಬ್ಬ ಬಟ್ಟೆ ಅಂಗಡಿಗೆ ಬಂದು ಹೊರಗಡೆ ಇಟ್ಟಿದ್ದ ಗೊಂಬೆಯ ಮೇಲಿನ ಪ್ಯಾಂಟ್ ಮಾತ್ರ ಕದ್ದು ಪರಾರಿಯಾಗಿದ್ದಾನೆ. ಸದ್ಯ ಘಟನೆ ಸಂಬಂಧ ಪ್ರಕರಣ ದಾಖಲಾಗಿದೆ.

## ಮೆಡಿಕಲ್ ಸ್ಟೋರ್‌ಗಳಲ್ಲಿ ಸಿಂಥೆಟಿಕ್ ಡ್ರಗ್ಸ್ ಮಾರಾಟಕ್ಕೆ ಕಡಿವಾಣ ಹಾಕಲು ಕ್ರಮ: ಪರಂ

• ಉದಯವಾಹಿನಿ ಬೆಂಗಳೂರು

ಇತ್ತೀಚಿನ ದಿನಗಳಲ್ಲಿ ಡ್ರಗ್ಸ್ ಹಾವಳಿ ಹೆಚ್ಚಾಗಿದ್ದು, ಯುವಜನತೆಗೆ ಸುಲಭವಾಗಿ ಮಾರುಕಟ್ಟೆಗಳಲ್ಲಿ ಮಾದಕ ವಸ್ತು, ಡಗ್ಸ್ ದೊರಕುತ್ತಿದೆ ಎಂಬ ಆರೋಪ ಸಾಕಷ್ಟು ಕೇಳಿಬರುತ್ತಿದೆ.

ಈ ಬಗ್ಗೆ ಪ್ರತಿಕ್ರಿಯಿಸಿರುವ ಗೃಹ ಸಚಿವ ಡಾ ಜಿ ಪರಮೇಶ್ವರ್, ಕರ್ನಾಟಕದಲ್ಲಿ ಡ್ರಗ್ಸ್ ದಂಧೆ ಹತ್ತಿಕ್ಕಲು ಕ್ರಮ ಕೈಗೊಳ್ಳುತ್ತೇವೆ. ಡ್ರಗ್ಸ್ ದಂಧೆ ಕಳೆದ ವರ್ಷಕ್ಕೆ ಹೋಲಿಸಿದರೆ ಈ ವರ್ಷ ಕಡಿಮೆಯಾಗಿದೆ. ಆದಾಗ್ಯೂ, ಮೆಡಿಕಲ್ ಸ್ಟೋರ್‌ಗಳಲ್ಲಿ ಕೂಡ ಸಿಂಥೆಟಿಕ್ ಡ್ರಗ್ಸ್ ಸಿಗುತ್ತಿದೆ ಎಂಬ ಮಾಹಿತಿ ಬಂದಿದ್ದು, ಇದು ನಮಗೆ ಆತಂಕ ಮೂಡಿಸಿದೆ ಎಂದರು.

ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಅವರು, ಮೆಡಿಕಲ್ ಸ್ಟೋರ್‌ಗಳಲ್ಲಿ ಡ್ರಗ್ಸ್ ದಂಧೆಗೆ ಯಾವ ರೀತಿ ಕಡಿವಾಣ ಹಾಕಬೇಕು ಎಂಬ ಬಗ್ಗೆ ಇಂದು ಸಭೆ ನಡೆಸಿ ಚರ್ಚೆ ಮಾಡುತ್ತೇವೆ. ಮೆಡಿಕಲ್ ಸ್ಟೋರ್‌ಗಳಲ್ಲಿ ಸಿಂಥೆಟಿಕ್ ಡ್ರಗ್ಸ್, ನೋವು ನಿವಾರಕ ಮಾತ್ರೆಗಳನ್ನು ಹಲವು ಫಾರ್ಮಕ್ಯುಟಿಕಲ್ ಕಂಪೆನಿಯವರು ಪೂರೈಕೆ ಮಾಡಿ ಮಾರಾಟ ಮಾಡುತ್ತಿರುವ ವಿಚಾರ ಆತಂಕ ತಂದಿದೆ ಎಂದರು.



ಉದಯವಾಹಿನಿ ಚಿತ್ರ

> **ಮಾದಕ ವಸ್ತುಗಳ ಮಾರಾಟ ದಂಧೆಯನ್ನು ನಿಯಂತ್ರಿಸಿ ಕಡಿವಾಣ ಹಾಕಬೇಕು ಎಂದು ಇಂದಿನ ಸಭೆಯಲ್ಲಿ ಚರ್ಚಿಸಲಾಗುವುದು. ಡ್ರಗ್ಸ್ ಮಾರಾಟಕ್ಕೆ ಕಾನೂನೇ ಬೇರೆ ಆಗುತ್ತದೆ. ಔಷಧ ಎಂದು ಹೇಳುತ್ತಾರೆ. ಅದಕ್ಕೆ ಆ ವಿಚಾರವಾಗಿ ಯಾವ ರೀತಿ ಕಾನೂನು ತರಬೇಕು ಎಂದು ಸಿಎಂ ಸಿದ್ದರಾಮಯ್ಯ ಜೊತೆ ಚರ್ಚೆ ಮಾಡುತ್ತೇವೆ ಎಂದು ಹೇಳಿದರು.**

## ವ್ಯಾಪಾರದಲ್ಲಿ ನಷ್ಟ, ಸಾಲ ತೀರಿಸಲು 50 ಲ್ಯಾಪ್‌ಟಾಪ್ ಕಳ್ಳತನ, ವ್ಯಕ್ತಿಯ ಬಂಧನ

• ಉದಯವಾಹಿನಿ ಬೆಂಗಳೂರು

ವ್ಯಾಪಾರದಲ್ಲಿ ನಷ್ಟ ಉಂಟಾಗಿ, ಸಾಲ ತೀರಿಸಲು ಸುಮಾರು 22 ಲಕ್ಷ ರೂ. ಮೌಲ್ಯದ 50 ಕಂಪನಿ ಲ್ಯಾಪ್‌ಟಾಪ್‌ಗಳನ್ನು ಕದ್ದ ಆರೋಪದ ಮೇಲೆ ಮಲ್ಟಿಮೀಡಿಯಾ ಸಂಸ್ಥೆಯಲ್ಲಿ ಸಿಸ್ಟಮ್ ಅಡ್ಮಿನಿಸ್ಟ್ರೇಟರ್ ಆಗಿ ಕೆಲಸ ಮಾಡುತ್ತಿದ್ದ 29 ವರ್ಷದ ವ್ಯಕ್ತಿಯನ್ನು ನಗರ ಪೊಲೀಸರು ಬಂಧಿಸಿ ದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಟೊಮ್ಯಾಟೋ ಕೃಷಿ, ಸೈಬರ್ ಸೆಂಟರ್ ವ್ಯವಹಾರದಿಂದ 25 ಲಕ್ಷ ರೂ. ನಷ್ಟ ಅನುಭವಿಸಿರುವುದಾಗಿ ಬಂಧಿತ ಆರೋಪಿ ಹೇಳಿರುವುದಾಗಿ ಪೊಲೀಸರು ಹೇಳಿದ್ದಾರೆ.

ವ್ಯಾಪಾರದಲ್ಲಿನ ನಷ್ಟದಿಂದ ಸಾಲದ ಸುಳಿಗೆ ಸಿಲುಕಿ ಅದರಿಂದ ಹೊರಬರಲು ವೈಟ್‌ಫೀಲ್ಡ್‌ನಲ್ಲಿ ತಾನು ಉದ್ಯೋಗದಲ್ಲಿದ್ದ ಕಂಪನಿಯಿಂದ ಲ್ಯಾಪ್‌ಟಾಪ್ ಕದಿರುವುದಾಗಿ ಆತ ತಪ್ಪೊಪ್ಪಿಕೊಂಡಿದ್ದಾನೆ. ಆರೋಪಿಯನ್ನು ತಮಿಳುನಾಡಿನ ಹೊಸೂರಿನ ಬಿಸಿಎ ಪದವೀಧರ ಎಂ. ಮುರುಗೇಶ್ ಎಂದು ಗುರುತಿಸಲಾಗಿದೆ.

ಆಗಾಗ್ಗೆ ಲ್ಯಾಪ್ ಟಾಪ್ ಕದ್ದು, ಹೊಸೂರಿನ ಗ್ಯಾಜೆಟ್‌ಗಳ ರಿಪೇರಿ ಅಂಗಡಿಗೆ ಮಾರಾಟ ಮಾಡಿರುವುದನ್ನು ಆತ ಒಪ್ಪಿಕೊಂಡಿದ್ದಾನೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

ಆರೋಪಿ ಆಗಸ್ಟ್ 22 ರಿಂದ ಇದ್ದಕ್ಕಿದ್ದಂತೆ ಕೆಲ ಸಕ್ಕೆ ಬರುವುದನ್ನು ನಿಲ್ಲಿಸಿದ್ದು, ಲ್ಯಾಪ್‌ಟಾಪ್ ನಾಪತ್ತೆ ಕುರಿತು ಕಂಪನಿ ಅಧಿಕಾರಿಗಳು ಸಿಸಿ ಟಿವಿ ದೃಶ್ಯಗಳನ್ನು ಪರಿಶೀಲಿಸಿದಾಗ ಆರೋಪಿ ಕಳ್ಳತನದಲ್ಲಿ ಭಾಗಿಯಾಗಿರುವ ಬಗ್ಗೆ ತಿಳಿದು ಬಂದಿದೆ. ಕಂಪನಿಯಿಂದ ದೂರು ಸ್ವೀಕರಿಸಿದ ಪ್ರಕರಣ ದಾಖಲಿಸಿಕೊಂಡು ತನಿಖೆ ಆರಂಭಿಸಿದ ಪೊಲೀಸರು ಹೊಸೂರಿನ ಚಿತ್ರಮಂದಿರದಿಂದ ಆತನನ್ನು ಬಂಧಿಸಿ ಬೆಂಗಳೂರಿಗೆ ಕರೆತಂದಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ಅಂಕಲ್-ಆಂಟಿ ಲವ್ ಸ್ಟೋರಿ ; ಪಾರ್ಕ್‌ಗೆ ಕರೆಸಿ ಚಾಕು ಇರಿಸಿದ ಮಹಿಳೆ..!

• ಉದಯವಾಹಿನಿ ಬೆಂಗಳೂರು

ಮಹಿಳೆಗೆ ಪ್ರಪೋಸ್ ಮಾಡಿದ ಅಂಕಲ್ ಚಾಕು ಇರಿತದಿಂದ ಗಾಯಗೊಂಡು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಸುದ್ದಗುಂಟೆ ಪಾಳ್ಯ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ.ಹಿತೇಂದ್ರ ಕುಮಾರ್ ಎಂಬುವವರು ಜಯನಗರದಲ್ಲಿ ಬಟ್ಟೆ ಅಂಗಡಿ ಒಂದನ್ನು ನಡೆಸುತ್ತಿದ್ದರು. ಜೂನ್ ನಲ್ಲಿ ಮಹಿಳೆಯೊಬ್ಬರು ಅವರ ಅಂಗಡಿಗೆ ಕೆಲಸಕ್ಕೆ ಸೇರಿದ್ದರು. 2-3 ತಿಂಗಳು ಕೆಲಸ ಮಾಡಿದ ಮಹಿಳೆ ನಂತರ ಕೆಲಸಕ್ಕೆ ಬಂದಿರಲಿಲ್ಲ.ಆಗ ಒಂದು ದಿನ ಹಿತೇಂದ್ರ ಮಹಿಳೆಗೆ ಕರೆ ಮಾಡಿ ಪಾರ್ಕ್‌ಗೆ ಬರಲು ಹೇಳಿದ್ದನು. ಮಹಿಳೆ ಪಾರ್ಕ್‌ಗೆ ಬರುತ್ತಿದ್ದಂತೆ ಹಿತೇಂದ್ರ ಪ್ರಪೋಸ್ ಮಾಡಿದ್ದಾನೆ. ಇಬ್ಬರು ಕೂಡ ಪಾರ್ಕ್ ನಲ್ಲಿ ಸುತ್ತಾಡಿ ಹೋಗಿದ್ದಾರೆ. ಮರು ದಿನ ಮತ್ತೆ ಹಿತೇಂದ್ರ ಮಹಿಳೆಯನ್ನು ಪಾರ್ಕ್ ಗೆ ಕರೆದಿದ್ದಾನೆ. ಆದರೆ ಆ ದಿನ ಒಬ್ಬಳೇ ಬಾರದ ಮಹಿಳೆ ಜೊತೆ ಸ್ನೇಹಿತ ಸಿದ್ದು ಎಂಬಾತನನ್ನು ಕರೆದುಕೊಂಡು ಬಂದು ಹಿತೇಂದ್ರನಿಗೆ ಚಾಕುವಿನಿಂದ ಇರಿಯಲು ಹೇಳಿದ್ದಾಳೆ ಎನ್ನಲಾಗಿದೆ. ಅಂತೆಯೇ ಸಿದ್ದು ಹಿತೇಂದ್ರ ಕುಮಾರ್‌ಗೆ ಚಾಕು ಹಾಕಿದ್ದಾನೆ.

## ಹೆಚ್‌ಎಸ್ ಆರ್ ಪಿ ನಂಬರ್ ಪ್ಲೇಟ್ ಅಳವಡಿಕೆ ಗಡುವು ನ.20 ರವರೆಗೆ ವಿಸ್ತರಣೆ.!

• ಉದಯವಾಹಿನಿ ಬೆಂಗಳೂರು

ವಾಹನ ಸವಾರರಿಗೆ ಗುಡ್ ನ್ಯೂಸ್ ಎಂಬಂತೆ ಹೈಕೋರ್ಟ್ ಹೆಚ್‌ಎಸ್ ಆರ್ ಪಿ ನಂಬರ್ ಪ್ಲೇಟ್ ಅಳವಡಿಕೆ ಗಡುವು ನ.20 ರವರೆಗೆ ವಿಸ್ತರಣೆ ಮಾಡಿದೆ. ಈ ಮೂಲಕ ವಾಹನ ಸವಾರರಿಗೆ ಗುಡ್ ನ್ಯೂಸ್ ಸಿಕ್ಕಂತಾಗಿದೆ. ನಂಬರ್ ಪ್ಲೇಟ್ ಅಳವಡಿಕೆಗೆ ಕಾಲಾವಕಾಶ ಕೋರಿ ಹಿರಿಯ ವಕೀಲ ದೇವದತ್ ಕಾಮತ್ ಅವರು ಹೈಕೋರ್ಟ್ ಮನವಿ ಸಲ್ಲಿಸಿದ್ದರು. ಮನವಿ ಪರಿಗಣಿಸಿದ ನ್ಯಾಯಾಲಯ ವಿಚಾರಣೆ ಮುಂದೂಡಿಕೆ ಮಾಡಿದೆ. ಇದರ ಅರ್ಜಿ ವಿಚಾರಣೆ ನವೆಂಬರ್ 20 ಕ್ಕೆ ಮುಂದೂಡಲಾಗಿದ್ದು, ವಾಹನ ಸವಾರರಿಗೆ ರಿಲೀಫ್ ಸಿಕ್ಕಂತಾಗಿದೆ. ರಾಜ್ಯದಲ್ಲಿ ಹೆಚ್‌ಎಸ್ ಆರ್ ಪಿ ನಂಬರ್ ಪ್ಲೇಟ್ ಅಳವಡಿಕೆ ಸಂಬಂಧ ಹೈಕೋರ್ಟ್‌ನಲ್ಲಿ ದಾಖಲಾಗಿರುವ ಪ್ರಕರಣ ವಿಚಾರಣೆ ಸೆ.18ರಂದು ನಡೆಯಲಿರುವ ಕಾರಣ ಕೋರ್ಟ್ ನಿರ್ದೇಶನ ನೀಡುವವರೆಗೆ ಹೈ ಸೆಕ್ಯೂರಿಟಿ ನೋಂದಣಿ ಫಲಕ ಹಾಕದವರ ವಿರುದ್ಧ ಕ್ರಮ ಕೈಗೊಳ್ಳದಿರಲು ಸಾರಿಗೆ ಇಲಾಖೆ ನಿರ್ಧರಿಸಿತ್ತು, ಈ ನಿಟ್ಟಿನಲ್ಲಿ ಹೈಕೋರ್ಟ್ ನಿರ್ದೇಶನಕ್ಕಾಗಿ ಸರ್ಕಾರ ಕಾಯುತ್ತಿತ್ತು. ಇದೀಗ ವಾಹನ ಸವಾರರಿಗೆ ಗುಡ್ ನ್ಯೂಸ್ ಎಂಬಂತೆ ಹೈಕೋರ್ಟ್ ಹೆಚ್‌ಎಸ್ ಆರ್ ಪಿ ನಂಬರ್ ಪ್ಲೇಟ್ ಅಳವಡಿಕೆ ಗಡುವು ನ.20 ರವರೆಗೆ ವಿಸ್ತರಣೆ ಮಾಡಿದೆ.

## ಕರ್ನಾಟಕ ಶಾಸ್ತ್ರೀಯ ಸಂಗೀತ

• ಉದಯವಾಹಿನಿ ಬೆಂಗಳೂರು



ನಾದಜ್ಯೋತಿ ಸಂಗೀತ ಸಭಾ ಟ್ರಸ್ಟ್ ವತಿಯಿಂದ ಸಂಸ್ಥೆಯ ವಜ್ರಮಹೋತ್ಸವದ ಸಂಭ್ರಮದ ಅಂಗವಾಗಿ ಮಲ್ಲೇಶ್ವರಂ ಈಸ್ಟ್ ಪಾರ್ಕ್ ರಸ್ತೆಯಲ್ಲಿರುವ (ಅಂಚೆ ಕಚೇರಿ ಹತ್ತಿರ) ಶ್ರೀ ರಾಮ ಮಂದಿರದಲ್ಲಿ ಸೆಪ್ಟೆಂಬರ್ 21, ಶನಿವಾರ ಸಂಜೆ 6-00 ಗಂಟೆಗೆ 'ನಾದಜ್ಯೋತಿ ಪುರಸ್ಕೃತ' ವಿದ್ವಾನ್ ಎಸ್. ಆರ್. ಮಾರುತಿ ಪ್ರಸಾದ್ ಇವರಿಂದ ಕರ್ನಾಟಕ ಶಾಸ್ತ್ರೀಯ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಿದ್ದು, ಇವರ ಗಾಯನಕ್ಕೆ ಪಕ್ಕವಾದ್ಯದಲ್ಲಿ ವಿದ್ವಾನ್ ವೆಂಕಟೇಶ್ ಜೋಯಿಸ್ (ಪಿಟೀಲು), ವಿದ್ವಾನ್ ಹೆಚ್.ಎಸ್. ಕೃಷ್ಣಮೂರ್ತಿ (ಮೃದಂಗ) ಮತ್ತು ವಿದ್ವಾನ್ ಲಿಖಿತ್ ಕೆ.ಎಂ. (ಮೋರ್ಸಿಂಗ್) ಸಾಥ್ ನೀಡಲಿದ್ದು, ಈ ಕಾರ್ಯಕ್ರಮದಲ್ಲಿ ಸಂಗೀತಾಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಲಾವಿದರನ್ನು ಪ್ರೋತ್ಸಾಹಿಸಬೇಕೆಂದು ಸಂಸ್ಥೆಯ ಕಟ್ಟೆ ಸತ್ಯನಾರಾಯಣ ಅವರು ವಿನಂತಿಸಿದ್ದಾರೆ.

# ಪಿಂಚಣಿ ತಾರತಮ್ಯ ಪರಿಹಾರಕ್ಕೆ ಆಗ್ರಹಿಸಿ ಬೃಹತ್ ಪ್ರತಿಭಟನೆ

## ಸರ್ಕಾರ ಭೇದ ಭಾವ ಮಾಡದೇ ಬೇಡಿಕೆ ಈಡೇರಿಸಬೇಕು: ಲೋಕಾಯುಕ್ತ ನಿವೃತ್ತ ನ್ಯಾಯಮೂರ್ತಿ ಎನ್.ಸಂತೋಷ್ ಹೆಗಡೆ ಆಗ್ರಹ

• ಉದಯವಾಹಿನಿ ಬೆಂಗಳೂರು

ಕರ್ನಾಟಕ ರಾಜ್ಯ ಸರ್ಕಾರಿ ನಿವೃತ್ತ ನೌಕರರಿಗೆ ಪಿಂಚಣಿ ವಿಚಾರದಲ್ಲಿ ತಾರತಮ್ಯವಾಗಿದೆ.

ಇವರಿಗೂ ಸಮಾನ ಸೌಲಭ್ಯ ಕಲ್ಪಿಸುವಂತೆ ಆಗ್ರಹಿಸಿ ನಡೆಸುತ್ತಿರುವ ಪ್ರತಿಭಟನಾ ಸಮಾವೇಶಕ್ಕೆ ನನ್ನ ಬೆಂಬಲ ಇದೆ. ರಾಜ್ಯ ಸರ್ಕಾರ ಭೇದ ಭಾವ ಮಾಡದೇ ಅವರ ಬೇಡಿಕೆ ಈಡೇರಿಸಬೇಕು ಎಂದು ಲೋಕಾಯುಕ್ತ ನಿವೃತ್ತ ನ್ಯಾಯಮೂರ್ತಿ ಎನ್. ಸಂತೋಷ್ ಹೆಗಡೆ ಅವರು ಆಗ್ರಹಿಸಿದ್ದಾರೆ. ಬೆಂಗಳೂರಿನ ನಗರದ ಫ್ರೀಡಂ ಪಾರ್ಕ್ ನಲ್ಲಿ ಕರ್ನಾಟಕ ರಾಜ್ಯ ನಿವೃತ್ತ ನೌಕರರ ವೇದಿಕೆಯ ಬೃಹತ್ ಸಮಾವೇಶಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ತಾರತಮ್ಯ ಮಾಡದೇ ಕೆಲಸ ಮಾಡುವುದು ಸರ್ಕಾರದ ಆದ್ಯ ಕರ್ತವ್ಯವಾಗಬೇಕು.

ರಾಜ್ಯ ಸರ್ಕಾರದ 7ನೇ ವೇತನ ಆಯೋಗದ ವರದಿಯಂತೆ ನಿವೃತ್ತ ಸರ್ಕಾರಿ ನೌಕರರಿಗೆ ಪಿಂಚಣಿಯಲ್ಲಿ ತಾರತಮ್ಯ ಸರಿಪಡಿಸುವುದು ಸೇರಿದಂತೆ ನಿವೃತ್ತ ನೌಕರರ ಬೇಡಿಕೆಗಳನ್ನು ಆದ್ಯತೆ ಮೇರೆಗೆ ರಾಜ್ಯ ಸರ್ಕಾರ ಬಗೆಹರಿಸಬೇಕು ಎಂದು ಅವರು ಹೇಳಿದರು.

2022ರ ಜುಲೈ 1ರಿಂದ 2024 ಜುಲೈ 31ರವರೆಗೆ ನಿವೃತ್ತರಾದ ನೌಕರರಿಗೆ ಆರ್ಥಿಕ ಸೌಲಭ್ಯ ಒದಗಿಸದೇ ಇರುವುದು ತಪ್ಪು ಎಂದು ಸರ್ಕಾರದ ನಿರ್ಣಯವನ್ನು ಅವರು ಖಂಡಿಸಿದರು. ಈ ನೌಕರರು ತಮ್ಮ ಸೇವಾವಧಿಯಲ್ಲಿ ಸರ್ಕಾರದ ಕೆಲಸವನ್ನು ಉತ್ತಮವಾಗಿ ನಿರ್ವಹಣೆ ಮಾಡಿ ನಿವೃತ್ತರಾಗಿದ್ದಾರೆ. ಅವರ ಬೇಡಿಕೆಗಳನ್ನು ಈಡೇರಿಸುವುದು ಆಡಳಿತ ಸರ್ಕಾರಗಳ ಜವಾಬ್ದಾರಿಯಾಗಿದೆ ಎಂದು ತಿಳಿಸಿದರು.

ತಾರತಮ್ಯ ಮಾಡುವುದು ಸಂವಿಧಾನ ವಿರುದ್ಧವಾಗಿದೆ. ಕಾನೂನಿನ ವಿರುದ್ಧವಾಗಿ ಸರ್ಕಾರ ನಿರ್ಣಯಿಸಿದ್ದೇ ಆದಲ್ಲಿ ಅದರ ವಿರುದ್ಧ ನನ್ನ ಹೋರಾಟ, ಹೋರಾಟಗಾರರಿಗೆ ಸದಾ ಬೆಂಬಲ ಇರಲಿದೆ.

ನಿಮ್ಮ ಪಿಂಚಣಿ ತಾರತಮ್ಯ ಬೇಡಿಕೆ ಸರಿ ಇದೆ. ಇದಕ್ಕೆ ನನ್ನ ಬೆಂಬಲ ಇದೆ. ಸದ್ಯಕ್ಕೆ ಈ ಬೇಡಿಕೆಯನ್ನು ನ್ಯಾಯಾಲಯಕ್ಕೆ ತೆರಳುವುದು ಬೇಡ. ಸರ್ಕಾರದ ಮಟ್ಟದಲ್ಲಿಯೇ ಬಗೆಹರಿಸಿಕೊಳ್ಳಬೇಕು ಎಂದು ಅವರು ನೌಕರರ ಸಂಘಕ್ಕೆ ಸಲಹೆ ನೀಡಿದರು.

ಸರ್ಕಾರಿ ನೌಕರರು ನಿವೃತ್ತರಾದವರಲ್ಲಿ ಶೇಕಡಾ 40 ಶಿಕ್ಷಕರು, ಶೇಕಡಾ 12 ಆರೋಗ್ಯ ಇಲಾಖೆ ನೌಕರರು, ಶೇಕಡಾ 10 ಆರಕ್ಷಕ ಸಿಬ್ಬಂದಿ, ಉಳಿದ ಶೇಕಡಾ 38 ಭಾಗ ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಸೇವೆ ಸಲ್ಲಿಸಿ ನಿವೃತ್ತರಾಗಿದ್ದಾರೆ. ಪ್ರತಿ ಬಾರಿ ವೇತನ ಆಯೋಗಗಳ ಪರಿಷ್ಕರಣೆ ಸಂದರ್ಭದಲ್ಲಿ ನಿವೃತ್ತರಿಗೆ ಅನ್ಯಾಯವಾಗುತ್ತಿದೆ ಎಂದು ಅವರು ಕಳವಳ ವ್ಯಕ್ತಪಡಿಸಿದರು.



ಉದಯವಾಹಿನಿ ಚಿತ್ರ

**ಪಿಂಚಣಿಯಲ್ಲಿ ತಾರತಮ್ಯ ಸರಿಪಡಿಸಿ**

> **ಹಿಂದೊಮ್ಮೆ 6ನೇ ವೇತನ ಆಯೋಗದ ಸಂದರ್ಭದಲ್ಲಿಯೂ ಇದೇ ರೀತಿ ತಾರತಮ್ಯ ಆಗಿತ್ತು. ಇದೀಗ 7ನೇ ವೇತನ ಆಯೋಗದಲ್ಲಿ ಅಂತದ್ದೇ ಲೋಪ ಕಂಡು ಬರುತ್ತಿದೆ. ಆದ್ದರಿಂದ ಆದೇಶವನ್ನು ಪರಿಶೀಲಿಸಿ ಪರಿಷ್ಕೃತ ಆದೇಶ ಹೊರಡಿಸಿ ಈ ನೌಕರರಿಗೆ ಆರ್ಥಿಕ ಸೌಲಭ್ಯ ನೀಡಬೇಕು ಎಂದು ತಿಳಿಸಿದರು.**

### ಅಕ್ಟೋಬರ್ ಮೊದಲ ವಾರ ಆದೇಶ

**ಸದ್ಯ ಕರ್ನಾಟಕ ಸೇರಿದಂತೆ ದೇಶದಲ್ಲಿ ಏಳನೇ ವೇತನ ಆಯೋಗ ಜಾರಿಯಲ್ಲಿದೆ. ಎಂಟನೇ ವೇತನ ಆಯೋಗವು 2026ರಂದು ಜಾರಿಗೆ ಬರುವ ನಿರೀಕ್ಷೆ ಇದೆ. ಸರ್ಕಾರಗಳು ತಮ್ಮ ಸರ್ಕಾರಿ ನೌಕರರಿಗೆ 2024ರ ಜುಲೈ ತಿಂಗಳ ತುಟ್ಟಿಭತ್ಯೆ ಮತ್ತು ಪಿಂಚಣಿದಾರರಿಗೆ ತುಟ್ಟಿಪರಿಹಾರವನ್ನು ಘೋಷಿಸುವುದು ಬಾಕಿ ಇದೆ. ಈ ಡಿಎ ಮತ್ತು ಡಿಆರ್ ಶೇ.3 ರಿಂದ 4ರಷ್ಟು ಏರಿಕೆ ಮಾಡಿ ಇದೇ ಸೆಪ್ಟಂಬರ್ ಅಂತ್ಯ ಇಲ್ಲವೇ ಅಕ್ಟೋಬರ್ ಮೊದಲ ವಾರ ಆದೇಶ ಹೊರಡಿಸುವ ಸಾಧ್ಯತೆ ಇದೆ.**

ಅಂತರಾಳದಿಂದ.. EDITORIAL

# ರಾಜ್ಯ ಬಿಜೆಪಿ ಎಂಬ ಮುರಿದ ಮನೆ

ಎತ್ತು ಏರಿಗೆ ಎಳೆದರೆ ಕೋಣ ನೀರಿಗೆ ಎಳೆಯಿತು ಎನ್ನುವಂತಹ ಸ್ಥಿತಿ ರಾಜ್ಯ ಬಿಜೆಪಿಯದ್ದಾಗಿದೆ. ಯಡಿಯೂರಪ್ಪ ಬಣ ಬಿಜೆಪಿಯನ್ನು ಏರಿಗೆ ಎಳೆದರೆ, ಅವರ ವಿರೋಧಿ ಬಣ ನೀರಿಗೆ ಎಳೆಯುತ್ತಿದೆ. ವಿಧಾನಸಭಾ ಚುನಾವಣೆಯ ಸೋಲಿನಿಂದ ತತ್ತರಿಸಿ ಕೂತಿರುವ ರಾಜ್ಯ ಬಿಜೆಪಿಯನ್ನು ಮತ್ತೆ ಸಂಘಟಿತಗೊಳಿಸಿ ಮುನ್ನಡೆಸಲು ಬೇಕಾದ ನಾಯಕತ್ವದ ಕೊರತೆಯ ಬಗ್ಗೆ ಬಿಜೆಪಿಯೊಳಗಿರುವ ನಾಯಕರೇ ಪದೇ ಪದೇ ಉಲ್ಲೇಖಿಸುತ್ತಿದ್ದಾರೆ. ಒಂದೆಡೆ ರಾಜ್ಯಾಧ್ಯಕ್ಷ ವಿಜಯೇಂದ್ರ ನೇತೃತ್ವದಲ್ಲಿ ಕಾಂಗ್ರೆಸ್ ಸರಕಾರದ ವಿರುದ್ಧ ಅಂದೋಲನಗಳು ನಡೆದರೆ, ಮತ್ತೊಂದೆಡೆ ಬಿಜೆಪಿ ನಾಯಕರಿಂದಲೇ ರಾಜ್ಯಾಧ್ಯಕ್ಷ ವಿಜಯೇಂದ್ರ ವಿರುದ್ಧ ಗುಪ್ತ ಸಭೆ ನಡೆಯುತ್ತದೆ.

> **‘ಬಿಜೆಪಿ ರಾಜ್ಯಾಧ್ಯಕ್ಷರಾಗಿ ಬಿ. ವೈ. ವಿಜಯೇಂದ್ರ ಅವರನ್ನು ನಾನು ಎಂದೂ ಒಪ್ಪುವುದಿಲ್ಲ ಮುಂದಿನ ಅಧ್ಯಕ್ಷ ಯಾರು ಎಂದು ಪಕ್ಷದ ವರಿಷ್ಠರು ಕೂಡಲೇ ನಿರ್ಧರಿಸಬೇಕು ಎಂದು ರಮೇಶ್ ಜಾರಕಿಹೊಳಿ ಮಾಧ್ಯಮಗಳ ಮುಂದೆ ಹೇಳಿದ್ದಾರೆ. ’ವಿಜಯೇಂದ್ರ ಪಕ್ಷದಲ್ಲಿ ಇನ್ನೂ ಕಿರಿಯ ಅವನಿಗೆ ಏನೂ ಸಿದ್ಧಾಂತವಿಲ್ಲ ಭ್ರಷ್ಟ ಎಂಬ ಲೇಬಲ್ ಬೇರೆ ಆತನ ಮೇಲಿದೆ. ಆತನನ್ನು ರಾಜ್ಯಾಧ್ಯಕ್ಷನನ್ನಾಗಿ ಮಾಡಿದ್ದಕ್ಕೆ ನನ್ನ ವಿರೋಧವಿದೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ.**

ಸಿದ್ದರಾಮಯ್ಯ ವಿರುದ್ಧ ಬಿಜೆಪಿ ನಡೆಸಿದ ಪಾದಯಾತ್ರೆ, ಧರಣಿಗಳನ್ನೆಲ್ಲ ವಿಫಲಗೊಳಿಸಲು ಬಿಜೆಪಿಯೊಳಗಿಂದಲೇ ಪ್ರಯತ್ನಗಳು ನಡೆದವು. ಸರಕಾರದ ವಿರುದ್ಧದ ಈ ಪ್ರತಿಭಟನೆಗಳು ಗೆದ್ದರೆ ಅದು ಪರೋಕ್ಷವಾಗಿ ಯಡಿಯೂರಪ್ಪ ಬಣದ ಗೆಲುವಾಗಿ ಬಿಡುವ ಬಗ್ಗೆ ಕೆಲವರಿಗೆ ಆತಂಕವಿದೆ. ರಾಜ್ಯ ಬಿಜೆಪಿಯ ಚುಕ್ಕಾಣಿ ಮತ್ತೆ ಯಡಿಯೂರಪ್ಪ ಕೈ ಸೇರಿ, ಅವರ ಮುಖಾಂತರ ಮಗನ ಕೈಗೆ ಹಸ್ತಾಂತರವಾಗುವುದು ಆರೆಸ್ಸೆಸ್ ನಾಯಕರೂ ಸೇರಿದಂತೆ ಕೆಲವರಿಗೆ ಇಷ್ಟವಿಲ್ಲದ ವಿಷಯವಾಗಿದೆ. ಆದುದರಿಂದಲೇ ಬಿಜೆಪಿಯೊಳಗೆ ವಿಜಯೇಂದ್ರ ನಾಯಕತ್ವದ ಬಗ್ಗೆ ಮತ್ತೆ ಅಪಸ್ವರ ಎದ್ದಿದೆ. ಇತ್ತೀಚೆಗೆ ಯತ್ನಾಳ್ ಸೇರಿದಂತೆ ಹಲವು ನಾಯಕರು ಪ್ರತ್ಯೇಕ ಸಭೆಗಳನ್ನು ನಡೆಸಿ ಯಡಿಯೂರಪ್ಪ ವಿರುದ್ಧ ತಮ್ಮ ಅಸಮಾಧಾನಗಳನ್ನು ತೋಡಿಕೊಂಡಿದ್ದರು. ಇದೀಗ ಗೋಕಾಕ್ ಕ್ಷೇತ್ರದ ಬಿಜೆಪಿಯ ಹಿರಿಯ ಶಾಸಕ ಹಾಗೂ ಮಾಜಿ ಸಚಿವ ರಮೇಶ್ ಜಾರಕಿಹೊಳಿ ಬಹಿರಂಗವಾಗಿಯೇ ರಾಜ್ಯಾಧ್ಯಕ್ಷರ ವಿರುದ್ಧ ಟೀಕೆ ಮಾಡಿದ್ದಾರೆ.‘ ಪ್ರಮುಖ ನಾಯಕನೊಬ್ಬ ರಾಜ್ಯಾಧ್ಯಕ್ಷರ ಬಗ್ಗೆ ಇಷ್ಟೊಂದು ಸ್ಪಷ್ಟವಾಗಿ ಭಿನ್ನಮತ ವ್ಯಕ್ತಪಡಿಸಿದ ಬಳಿಕವೂ ಇದರ ವಿರುದ್ಧ ಇತರ ನಾಯಕರು ತುಟಿ ಬಿಚ್ಚಿಲ್ಲ. ವಿಜಯೇಂದ್ರ ಅವರಿಗೆ ಬೆಂಬಲವಾಗಿ ಯಾರೂ ಹೇಳಿಕೆ ನೀಡಿಲ್ಲ ಮಾತ್ರವಲ್ಲ ಜಾರಕಿ ಹೊಳಿ ಅವರ ಹೇಳಿಕೆ ತಪ್ಪು ಎಂದೂ ಯಾರು ಆಕ್ಷೇಪಿಸಿಲ್ಲ. ರಮೇಶ್ ಜಾರಕಿಹೊಳಿ ಅವರ ಹೇಳಿಕೆಯ ಬಗ್ಗೆ ಬಿಜೆಪಿ ನಾಯಕರ ಮೌನ, ಪರೋಕ್ಷವಾಗಿ ಹೇಳಿಕೆಗೆ ಸಮ್ಮತಿ ವ್ಯಕ್ತಪಡಿಸಿದಂತೆಯೇ ಆಗಿದೆ. ಎಲ್ಲಕ್ಕಿಂತ ಮುಖ್ಯವಾಗಿ, ದಿಲ್ಲಿಯ ವರಿಷ್ಠರು ಈವರೆಗೂ ರಮೇಶ್ ವಿರುದ್ಧ ಯಾವ ಕ್ರಮವನ್ನೂ ತೆಗೆದುಕೊಳ್ಳುವ ಮಾತನಾಡಿಲ್ಲ ಅಂದರೆ ವರಿಷ್ಠರಿಗೂ ಈ ಹೇಳಿಕೆ ಪಕ್ಷ ವಿರೋಧಿಯಾಗಿ ಕಂಡಿಲ್ಲ ಆದುದರಿಂದ, ವರಿಷ್ಠರೇ ಕೆಲವು ನಾಯಕರ ಬಾಯಲ್ಲಿ ಯಡಿಯೂರಪ್ಪ ಗುಂಪಿನ ವಿರುದ್ಧ ಹೇಳಿಕೆಗಳನ್ನು ನೀಡಿಸುತ್ತಿದ್ದಾರೆಯೇ ಎಂದು ಒಟ್ಟು ಬೆಳವಣಿಗೆಗಳನ್ನು ಅನುಮಾನಿಸಬೇಕಾಗಿದೆ. ವಿಧಾನಸಭಾ ಚುನಾವಣೆ ಮುಗಿದು ಸೋಲಿನ ಹೊಣೆ ಹೊತ್ತು ಬಿಜೆಪಿ ರಾಜ್ಯಾಧ್ಯಕ್ಷರಾದ ನಳಿನ್ ಕುಮಾರ್ ಕಟೀಲು ಅವರು ರಾಜೀನಾಮೆ ನೀಡಿದರು. ಅವರು ರಾಜೀನಾಮೆ ನೀಡಿದ ಬೆನ್ನಿಗೇ ರಾಜ್ಯಾಧ್ಯಕ್ಷರ ಆಯ್ಕೆಯನ್ನು ಮಾಡಲು ವರಿಷ್ಠರು ವಿಫರಾದ ಕಾರಣ, ತಾತ್ಕಾಲಿಕವಾಗಿ ಅವರೇ ಮುಂದುವರಿಯಬೇಕಾಯಿತು. ಸುಮಾರು ಒಂದು ವರ್ಷಗಳ ಕಾಲ ರಾಜ್ಯಾಧ್ಯಕ್ಷರಿಲ್ಲದೆಯೇ ಬಿಜೆಪಿ ಮುಂದುವರಿಯಿತು. ಜೊತೆಗೆ ವಿರೋಧ ಪಕ್ಷ ನಾಯಕನ ಆಯ್ಕೆಯೂ ವರಿಷ್ಠರ ಪಾಲಿಗೆ ಜಟಿಲವಾಯಿತು. ವಿಧಾನಸಭೆಯಲ್ಲಿ ನಾಯಕನಿಲ್ಲದ ಕಾರಣ, ಸದನದಲ್ಲಿ ಎಲ್ಲರೂ ವಿರೋಧ ಪಕ್ಷದ ನಾಯಕರಂತೆಯೇ ವರ್ತಿಸತೊಡಗಿದರು. ಲೋಕಸಭಾ ಚುನಾವಣೆ ಹತ್ತಿರ ಬರುತ್ತಿರುವುದರಿಂದ ನಾಯಕನನ್ನು ಆಯ್ಕೆ ಮಾಡಲೇಬೇಕಾದ ಅನಿವಾರ್ಯ ಪರಿಸ್ಥಿತಿಯಲ್ಲಿ ವರಿಷ್ಠರು ಸಿಲುಕಿಕೊಂಡರು. ಯಡಿಯೂರಪ್ಪ ಅದಾಗಲೇ ರಾಜಕೀಯದಿಂದ ನಿವೃತ್ತಿಯಾಗುತ್ತೇನೆ ಎಂದು ಹೇಳಿಕೆ ನೀಡಿದ್ದರು. ಆದರೆ ಯಡಿಯೂರಪ್ಪ ಅವರಿಲ್ಲದೆ ರಾಜ್ಯದಲ್ಲಿ ಪಕ್ಷವನ್ನು ಮುನ್ನಡೆಸುವುದು ಸಾಧ್ಯವಿಲ್ಲ ಎನ್ನುವುದು ವಿಧಾನಸಭಾ ಚುನಾವಣೆಯ ಸಂದರ್ಭದಲ್ಲಿ ಅಮಿತ್ ಶಾ ಅವರಿಗೆ ಅರ್ಥವಾಗಿತ್ತು ತನ್ನನ್ನು ವರಿಷ್ಠರು ವೃದ್ಧಾಶ್ರಮಕ್ಕೆ ಸೇರಿಸಲು ಸಿದ್ಧತೆ ನಡೆಸುತ್ತಿರುವುದನ್ನು ಅರಿತುಕೊಂಡ ಯಡಿಯೂರಪ್ಪ ತನ್ನ ಮಗನ ಮೂಲಕ ಪಕ್ಷದ ನಿಯಂತ್ರಣವನ್ನು ಕೈಗೆ ತೆಗೆದುಕೊಳ್ಳಲು ಯೋಜನೆ ಹಾಕಿದ್ದರು.ಯಡಿಯೂರಪ್ಪ ಮತ್ತು ಅವರ ಬೆನ್ನಿಗಿರುವ ಲಿಂಗಾಯತ ಸಮುದಾಯದ ಬೆಂಬಲವನ್ನು ಬಿಜೆಪಿ ಉಳಿಸಿಕೊಳ್ಳಬೇಕಾದರೆ ವಿಜಯೇಂದ್ರ ಅವರನ್ನು ರಾಜ್ಯಾಧ್ಯಕ್ಷ ಮಾಡುವುದು ವರಿಷ್ಠರಿಗೆ ಅನಿವಾರ್ಯವಾಯಿತು. ಯಡಿಯೂರಪ್ಪ ಪುತ್ರ ಎನ್ನುವ ಹೆಗ್ಗಳಿಕೆಯೊಂದನ್ನು ಬಿಟ್ಟರೆ ವಿಜಯೇಂದ್ರ ಅವರಿಗೆ ಪಕ್ಷ ಕಟ್ಟಿದ ಯಾವ ಅನುಭವವೂ ಇಲ್ಲ. ಯಡಿಯೂರಪ್ಪ ಮುಖ್ಯಮಂತ್ರಿಯಾಗಿದ್ದಾಗ, ವಿಜಯೇಂದ್ರ ಅವರು ನಡೆಸಿದ ಭ್ರಷ್ಟಾಚಾರ ರಾಜಕೀಯ ವಲಯದಲ್ಲಿ ಬಹಳಷ್ಟು ಸುದ್ದಿ ಮಾಡಿತ್ತು. ವಿಜಯೇಂದ್ರ ಅವರು ನಡೆಸಿದ ಬ್ರಹ್ಮಾಂಡ ಭ್ರಷ್ಟಾಚಾರವನ್ನು ತೋರಿಸಿಯೇ ಯಡಿಯೂರಪ್ಪ ಅವರನ್ನು ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿಸಲಾಗಿತ್ತು. ವಿಪರ್ಯಾಸವೆಂದರೆ, ಬಳಿಕ ಅದೇ ವಿಜಯೇಂದ್ರ ಅವರ ಕೈಗೆ ಬಿಜೆಪಿಯ ಚುಕ್ಕಾಣಿಯನ್ನು ವರಿಷ್ಠರ ನೀಡಿದರು. ಯಡಿಯೂರಪ್ಪ ಅವರ ವಿರೋಧಿ ಬಣಕ್ಕೆ ಇದಕ್ಕಿಂತ ದೊಡ್ಡ ಮುಖಭಂಗ ಯಡಿಯೂರಪ್ಪರನ್ನೇ ಅಧಿಕಾರದಿಂದ ಇಳಿಸಿ, ಯಡಿಯೂರಪ್ಪ ಮತ್ತು ಬಿಜೆಪಿ ಮಹಾಮಂಡಲದ ಹೊರಟವರು ಇದೀಗ ಯಡಿಯೂರಪ್ಪ ಅವರ ಪುತ್ರನ ಮಾರ್ಗದರ್ಶನವನ್ನು ಗಂಭೀರವಾಗಿ ತೆಗೆದುಕೊಳ್ಳುವುದು ಸಾಧ್ಯವಾಗುವ ವಿಷಯವಲ್ಲ. ಯಡಿಯೂರಪ್ಪ ಅವರ ಕೈಯಿಂದ ಅಧಿಕಾರ ಪುತ್ರನಿಗೆ ಹಸ್ತಾಂತರವಾದರೆ ಬಿಜೆಪಿಯ ಒಂದು ಕುಟುಂಬದ ಕೈಗೊಂಬೆಯಾಗಬೇಕಾಗುತ್ತದೆ ಎನ್ನುವುದು ಕೆಲವರ ಆತಂಕ.

## ತ್ರಿಪಿಂಡಿ ಶ್ರಾದ್ಧ ಮಾಡುವ ಉದ್ದೇಶ, ವಿಧಿ, ಪದ್ಧತಿ

• ಉದಯವಾಹಿನಿ ಬೆಂಗಳೂರು

ತೀರ್ಥಕ್ಷೇತ್ರಗಳಲ್ಲಿ ಪಿತೃಗಳನ್ನು ಉದ್ದೇಶಿಸಿ ಮಾಡುವ ಶ್ರಾದ್ಧಕ್ಕೆ ತ್ರಿಪಿಂಡಿ ಶ್ರಾದ್ಧ ಎಂದು ಹೇಳುತ್ತಾರೆ. ನಮಗೆ ತಿಳಿಯದೇ ಇರುವ, ನಮ್ಮ ವಂಶದಲ್ಲಿನ ಸದ್ಗತಿ ಸಿಗದಿರುವವರ ಅಥವಾ ದುರ್ಗತಿಗೆ ಹೋಗಿರುವವರ ಮತ್ತು ನಮ್ಮ ಕುಲದವರನ್ನು ಪೀಡಿಸುವ ಪಿತೃಗಳಿಗೆ, ಅವರ ಪ್ರೇತತ್ವವು ದೂರವಾಗಿ ಸದ್ಗತಿಯು ಸಿಗಲು ಅಂದರೆ ಭೂಮಿ, ಅಂತರಿಕ್ಷ ಮತ್ತು ಆಕಾಶ ಈ ಮೂರು ಕಡೆಗಳಲ್ಲಿರುವ ಆತ್ಮಗಳಿಗೆ ಮುಕ್ತಿ ಸಿಗಲು ತ್ರಿಪಿಂಡಿ ಶ್ರಾದ್ಧವನ್ನು ಮಾಡುವ ಪದ್ಧತಿಯಿದೆ. ಎಂದಿನಂತೆ ಮಾಡುವ ಶ್ರಾದ್ಧಗಳು ಒಬ್ಬರನ್ನು ಉದ್ದೇಶಿಸಿ ಅಥವಾ ವಸು-ರುದ್ರ- ಆದಿತ್ಯ ಈ ಶ್ರಾದ್ಧ ದೇವತೆಗಳ ಪಿತೃಗಣದಲ್ಲಿನ ತಂದೆ, ತಾತ, ಮುತ್ತಾತ ಈ ತ್ರಯಿಗಳನ್ನು ಉದ್ದೇಶಿಸಿ ಮಾಡಿದ ಶ್ರಾದ್ಧಗಳು 3 ಪೀಳಿಗೆಗಳಿಗೆ ಸೀಮಿತವಾಗಿರುತ್ತವೆ. ಆದರೆ ತ್ರಿಪಿಂಡಿ ಶ್ರಾದ್ಧದಿಂದ ಅದಕ್ಕೂ ಮೊದಲಿನ ಪೀಳಿಗೆಗಳಲ್ಲಿನ ಪಿತೃಗಳಿಗೂ ತೃಪ್ತಿ ಸಿಗುತ್ತದೆ. ಪ್ರತಿಯೊಂದು ಕುಟುಂಬದಲ್ಲಿ ಈ ವಿಧಿಯನ್ನು ಪ್ರತಿ 12 ವರ್ಷಗಳಿಗೊಮ್ಮೆ ಮಾಡಬೇಕು ಅಥವಾ ಪಿತೃಗಳಿಂದ ತೊಂದರೆಯಾಗುತ್ತಿರುವ ಕುಟುಂಬಗಳು ಈ ವಿಧಿಯನ್ನು ದೋಷ ನಿವಾರಣೆಗಾಗಿ ಮಾಡಬೇಕು.

**ವಿಧಿಯನ್ನು ಮಾಡಲು ಯೋಗ್ಯ ಕಾಲ :** ತ್ರಿಪಿಂಡಿ ಶ್ರಾದ್ಧಕ್ಕಾಗಿ ಅಷ್ಟಮಿ, ಏಕಾದಶಿ, ಚತುರ್ದಶಿ, ಅಮಾವಾಸ್ಯೆ, ಹುಣ್ಣಿಮೆ ಈ ತಿಥಿಗಳು ಮತ್ತು ಸಂಪೂರ್ಣ ಪಿತೃಪಕ್ಷವು ಯೋಗ್ಯವಾಗಿರುತ್ತದೆ. ಗುರು ಶುಕ್ರಾಸ್ತ, ಗಣೇಶೋತ್ಸವ ಮತ್ತು ಶಾರದಾ ನವರಾತ್ರಿಯಲ್ಲಿ (ಶರನ್ನವರಾತ್ರಿ) ಈ ವಿಧಿಯನ್ನು ಮಾಡಬಾರದು. ಹಾಗೆಯೇ ಕುಟುಂಬದಲ್ಲಿ ಮಂಗಲಕಾರ್ಯವಾದ ಮೇಲೆ ಮತ್ತು ಅಶುಭ ಘಟನೆಗಳಾದ ಮೇಲೆ ಒಂದು ವರ್ಷದವರೆಗೆ ತ್ರಿಪಿಂಡಿಶ್ರಾದ್ಧವನ್ನು ಮಾಡಬಾರದು. ಅನಿವಾರ್ಯವಾಗಿದ್ದರೆ ಉದಾ.ಒಂದು ಮಂಗಲಕಾರ್ಯ ಆದ ಕೆಲವು ತಿಂಗಳುಗಳ ನಂತರ ಇನ್ನೊಂದು ಮಂಗಲಕಾರ್ಯವಿದ್ದರೆ ಇವೆರಡರ ಮಧ್ಯಕಾಲದಲ್ಲಿ ತ್ರಿಪಿಂಡಿ ಶ್ರಾದ್ಧವನ್ನು ಮಾಡಬೇಕು.




ಉದಯವಾಹಿನಿ ಚಿತ್ರ

**ವಿಧಿಯನ್ನು ಮಾಡಲು ಯೋಗ್ಯ ಸ್ಥಳ :** ತ್ರ್ಯಂಬಕೇಶ್ವರ, ಗೋಕರ್ಣ ಮಹಾಬಲೇಶ್ವರ, ಗರುಡೇಶ್ವರ, ಹರಿಹರೇಶ್ವರ (ದಕ್ಷಿಣ ಕಾಶಿ), ಕಾಶಿ ಈ ಸ್ಥಳಗಳು ತ್ರಿಪಿಂಡಿಶ್ರಾದ್ಧವನ್ನು ಮಾಡಲು ಯೋಗ್ಯ ಸ್ಥಳಗಳಾಗಿವೆ.

**ಪದ್ಧತಿ :** ‘ಮೊದಲು ತೀರ್ಥಕ್ಷೇತ್ರದಲ್ಲಿ ಸ್ನಾನ ಮಾಡಿ ಶ್ರಾದ್ಧದ ಸಂಕಲ್ಪವನ್ನು ಮಾಡಬೇಕು. ನಂತರ ಮಹಾವಿಷ್ಣುವಿನ ಮತ್ತು ಶ್ರಾದ್ಧಕ್ಕಾಗಿ ಕರೆದಿರುವ ಬ್ರಾಹ್ಮಣರಿಗೆ ಶ್ರಾದ್ಧವಿಧಿಯ ಪ್ರಕಾರ ಪೂಜೆ ಮಾಡಬೇಕು. ನಂತರ ಜವೆಗೋಧಿ, ಅಕ್ಕಿ ಮತ್ತು ಎಳ್ಳು ಇವುಗಳ ಹಿಟ್ಟಿನ ಪ್ರತಿಯೊಂದರ ಒಂದೊಂದು ಪಿಂಡವನ್ನು ತಯಾರು ಮಾಡಬೇಕು. ದರ್ಭೆಯನ್ನು ಹಾಸಿ ಅದರ ಮೇಲೆ ತಿಲೋದಕವನ್ನು ಸಿಂಪಡಿಸಿ ಪಿಂಡದಾನ ಮಾಡಬೇಕು. **ಜವೆಗೋಧಿಯ ಪಿಂಡ (ಧರ್ಮಪಿಂಡ) :** ತಾಯಿಯ ವಂಶದಲ್ಲಿನ ಮತ್ತು ತಂದೆಯ ವಂಶದಲ್ಲಿನ ಉತ್ತರಕ್ರಿಯೆ ಆಗದಿರುವವರು, ಸಂತಾನ ಇಲ್ಲವೆಂದು ಯಾರ ಪಿಂಡದಾನವಾಗಿಲ್ಲವೋ ಅವರು ಅಥವಾ ಜನ್ಮತಃ ಅಂಗವಿಕಲರು (ಅಂಗವಿಕಲರಾಗಿರುವುದರಿಂದ ಮದುವೆ ಆಗಿರದೇ ಸಂತಾನರಹಿತವಾಗಿದ್ದವರು), ಇಂತಹ ಪಿತೃಗಳ ಪ್ರೇತತ್ವವು ನಾಶವಾಗಿ ಸದ್ಗತಿ ಸಿಗಲೆಂದು ಜವೆಗೋಧಿಯ ಪಿಂಡವನ್ನು ಕೊಡುತ್ತಾರೆ. ಇದಕ್ಕೆ ಧರ್ಮಪಿಂಡ ಎಂಬ ಹೆಸರು ಇದೆ. **ಎಳ್ಳು ಪಿಂಡ:** ಭೂಮಿಯ ಮೇಲೆ ಕ್ಷುದ್ರ ಯೋನಿಯಲ್ಲಿದ್ದು ಇತರರಿಗೆ ತೊಂದರೆ ಕೊಡುವ ಪಿತೃಗಳಿಗೆ ಎಳ್ಳು ಪಿಂಡದಿಂದ ಸದ್ಗತಿಯು ಪ್ರಾಪ್ತವಾಗುತ್ತದೆ. ಈ ಮೂರು ಪಿಂಡಗಳಿಗೆ ತಿಲೋದಕ ಕೊಡಬೇಕು. ನಂತರ ಪಿಂಡಗಳ ಪೂಜೆಯನ್ನು ಮಾಡಿ ಅರ್ಘ್ಯವನ್ನು ಅರ್ಪಿಸಬೇಕು. ಶ್ರೀವಿಷ್ಣುವಿಗೆ ತರ್ಪಣ ಕೊಡಬೇಕು. ಬ್ರಾಹ್ಮಣರಿಗೆ ಭೋಜನವನ್ನು ನೀಡಿ ದಕ್ಷಿಣೆಯೆಂದು ವಸ್ತ್ರ, ಪಾತ್ರೆ, ಬೀಸಣಿಗೆ, ಪಾದರಕ್ಷೆಗಳನ್ನು ಕೊಡಬೇಕು’. ಪಿತೃದೋಷವಿದ್ದರೆ ತಾಯಿ-ತಂದೆ ಜೀವಂತವಿ ರುವಾಗಲೇ ಮಗನು ವಿಧಿಯನ್ನು ಮಾಡುವುದು ಯೋಗ್ಯವಾಗಿದೆ: ಶ್ರಾದ್ಧಕರ್ತನ ಜಾತಕದಲ್ಲಿ ಪಿತೃದೋಷವಿದ್ದರೆ ಅದರ ನಿವಾರಣೆಗಾಗಿ ತಾಯಿ-ತಂದೆ ಜೀವಂತ ಇರುವಾಗಲೇ ಈ ವಿಧಿಯನ್ನು ಮಾಡಬೇಕು. ಶ್ರಾದ್ಧ ಕರ್ತನ ತಂದೆಯು ಜೀವಂತವಿಲ್ಲದಿದ್ದರೆ ಅವನು ವಿಧಿಯನ್ನು ಮಾಡುವಾಗ ಕೂದಲುಗಳನ್ನು ತೆಗೆಯಬೇಕು. ತಂದೆಯು ಜೀವಂತವಿರುವ ಶ್ರಾದ್ಧ ಕರ್ತನಿಗೆ ಕೂದಲುಗಳನ್ನು ತೆಗೆಯುವ ಆವಶ್ಯಕತೆ ಇರುವುದಿಲ್ಲ. ತ್ರಿಪಿಂಡಿ ಶ್ರಾದ್ಧದಲ್ಲಿ ಶ್ರಾದ್ಧಕರ್ತನಿಗೆ ಮಾತ್ರ ಅಶೌಚವಿರುತ್ತದೆ. ಮನೆಯಲ್ಲಿನ ಇತರರಿಗೆ ಇರುವುದಿಲ್ಲ. ಆದುದರಿಂದ ಮನೆಯಲ್ಲಿನ ಒಬ್ಬರು ವಿಧಿಯನ್ನು ಮಾಡುವಾಗ ಇತರರು ಪೂಜೆ ವಗೈರೆಗಳನ್ನು ನಿಲ್ಲಿಸುವ ಅವಶ್ಯಕತೆಯಿಲ್ಲ.

# ಅಕ್ಷರ ಕ್ರಾಂತಿ ಕವನ ಸಂಕಲನದ ಕೃತಿ ಪರಿಚಯ



ಸಾಮಾಜಿಕ ಕಳಕಳಿ

**ಹೆಚ್.ಎಸ್. ಪ್ರತಿಮಾ**
**ಲೇಖಕರು**
**ಸಾಮಾಜಿಕ ಚಿಂತಕಿ ಹಾಗೂ ಶಿಕ್ಷಕಿ, ಹಾಸನ**

• ಉದಯವಾಹಿನಿ, ವಿಶೇಷ




ಕವಿಯಾಗಿ ಬರೆಯುತಲಿ ನಡೆಯುತಿರೆ ಜೀವನದಿ
ಸವಿಯುತಲಿ ಬದುಕಿನದೆ ಅನುಭವವನು
ಗವಿಯೊಳಗೆ ಇರುವಂತ ಶಿಲೆಯಾಗಿ ಬರಹದಲಿ
ನವಿಲಿನದೆ ಸುಂದರತೆ ಲಕ್ಷ್ಮಿ ದೇವಿ......

ಈ ಮೇಲಿನ ಮುಕ್ತ ಕದಂತೆ ಶ್ರೀ ಅಶ್ವಕ್ ಶಾಹ್ ಕನ್ನಡಿಗ ಎಂಬ ಕವಿಯನ್ನು ಕಂಡಾಗ ಅವರ ಕನ್ನಡದ ಪ್ರೇಮವನ್ನು ಗಮನಿಸಿದರೆ ಸಂತೋಷವಾಗುತ್ತದೆ. ಕವಿಗೋಷ್ಠಿಯಲ್ಲಿ ಪರಿಚಯವಾದ ಈ ಕವಿಯು ಸಾಹಿತ್ಯ ಕ್ಷೇತ್ರದಲ್ಲಿ ತನ್ನದೇ ಆದಂತಹ ಸೇವೆಯನ್ನು ಮಾಡುವ ಮಹಾದಾತೆಯನ್ನು ಒಳಗೊಂಡವರು. ಪ್ರವೃತ್ತಿಯಲ್ಲಿ ಕವಿಯಾಗಿ ಬರೆಯುತಲಿ ಜೀವನದಲ್ಲಿ ನಡೆಯುತ್ತಿದ್ದಾರೆ. ಬದುಕಿನ ಅನುಭವಗಳನ್ನು ಸವಿಯುತ್ತಿದ್ದಾರೆ. ಗವಿಯೊಳಗೆ ಇರುವ ಶಿಲೆಯಂತೆ ಬರಹದಲ್ಲಿ ತನ್ನದೇ ಆದಂತಹ ಅಸ್ತಿತ್ವದಿಂದ ಕವಿಯಾಗಿ ತಮ್ಮ ಬರಹಗಳನ್ನು ಎಲ್ಲಾ ಸಾಹಿತ್ಯ ಆಸಕ್ತರಿಗೂ, ಕನ್ನಡಾಂಬೆಗೂ ಕವನಗಳ ಮುಖಾಂತರ ಕೊಡುಗೆಯನ್ನು ಅರ್ಪಿಸುತ್ತಿದ್ದಾರೆ.

> **ಕವನದ ರೂಪದಲ್ಲಿ ಬರಹಕ್ಕೆ ಇಳಿಸಿರುವ ರೀತಿಯು ಬಹಳಷ್ಟು ಸೊಗಸಾಗಿದೆ**

ಅದು ನವಿಲಿನ ಸೌಂದರ್ಯದಂತೆ ಹೊರಹೊಮ್ಮುತ್ತಿದೆ. ಇವರು ಯುವಕವಿಯಾಗಿ, ಸಾಮಾಜಿಕ ಕಾರ್ಯಕರ್ತರಾಗಿ, ಸಂಘಟಕರಾಗಿ ಹಲವಾರು ವಿಚಾರಗಳಲ್ಲಿ ತೊಡಗಿಕೊಂಡಿದ್ದಾರೆ. ಹಲವಾರು ಬಾರಿ ರಕ್ತದಾನ ಮಾಡಿದಂತಹ ದಾನಿಯಾಗಿದ್ದಾರೆ. ಹಲವಾರು ಸಂಘ-ಸಂಸ್ಥೆಗಳಲ್ಲಿ ಪದಾಧಿಕಾರವನ್ನು ಪಡೆದು ತಮ್ಮ ಕಾರ್ಯವನ್ನು ನಿರ್ವಹಿಸುತ್ತಿದ್ದಾರೆ. ಹಲವಾರು ಕವಿಗೋಷ್ಠಿಗಳಲ್ಲಿ ಭಾಗವಹಿಸಿ ಮೆಚ್ಚುಗೆಗೆ ಪಾತ್ರರಾಗಿದ್ದಾರೆ . ಬರಹದಲ್ಲಿ ತನ್ನನ್ನು ತಾನು ತೊಡಗಿಸಿಕೊಂಡು ಕಾರ್ಯನಿರ್ವಹಿಸುತ್ತಿದ್ದಾರೆ. ಅವರು ಬರೆದಿರುವಂತಹ ಕವನಗಳು ಈ ಅಕ್ಷರ ಕ್ರಾಂತಿ ಕವನ ಸಂಕಲನದಲ್ಲಿ ಒಟ್ಟು 60 ಪುಟಗಳನ್ನು ಒಳಗೊಂಡಿದ್ದು. ಬೆಲೆಯೂ 120 ಆಗಿದ್ದು. ಪುಸ್ತಕ ತೆರೆದ ನಂತರದಲ್ಲಿ 2024ರ ಸಾಲಿನದು ಅರ್ಪಣೆಯು ತಮ್ಮ ಪ್ರೀತಿಯ ಪತ್ನಿಯಾದ ಶ್ರೀಮತಿ ನಸೀಮ ರವರಿಗೆ ಅರ್ಪಿಸಿದ್ದಾರೆ. ಮುನ್ನುಡಿಯನ್ನು ಶ್ರೀಮತಿ ಹೆಚ್. ಎಸ್. ಪ್ರತಿಮಾ ಹಾಸನ್. ಸಂಘಟಕಿ, ಸಾಹಿತಿ, ಶಿಕ್ಷಕಿ, ಹಾಸನ. ರವರು ಬರೆದಿದ್ದಾರೆ. ನನ್ನುಡಿಯಲ್ಲಿ ಸಾಹಿತ್ಯ ಕ್ಷೇತ್ರದಲ್ಲಿ ಸಹಕಾರ ನೀಡಿದ ಎಲ್ಲರಿಗೂ ಅಭಿನಂದನೆಯನ್ನು ತಿಳಿಸಿದ್ದಾರೆ.

ಬೆನ್ನುಡಿಯನ್ನು ಶ್ರೀ ಬಾಬು ಉಸೇನ್, ಜನ್ಮ ಭೂಮಿ ಕನ್ನಡಿಗರ ವೇದಿಕೆ. ರಾಜ್ಯಾಧ್ಯಕ್ಷರು. ಬೆಂಗಳೂರು. ಇವರು ಬರೆದಿದ್ದಾರೆ. ಇವರ ಕೃತಿಯಲ್ಲಿ ಹಲವಾರು ವಿಚಾರಗಳ ಬಗ್ಗೆ ಅಂದರೆ ರೈತನ ಬದುಕಿನ ಕಾಳಜಿ ಆಗಿರಬಹುದು, ಪರಿಸರದ ಬಗ್ಗೆ ಆಗಿರಬಹುದು, ಪ್ರಸ್ತುತ ದಿನ ಮಾನದ ಹಲವಾರು ರೀತಿಯ ಅಂಶಗಳನ್ನು ಕುರಿತಾದ ಕವನಗಳನ್ನು ಕಾಣಬಹುದಾಗಿದೆ. ಇವರ ಕವನದಲ್ಲಿ ಬೇಂದ್ರೆ ಎಂಬ ಕವನದ ಶೀರ್ಷಿಕೆಯು ಬೇಂದ್ರೆಯವರ ಬಗೆಗಿನ ಅವರ ಭಾವನಾತ್ಮಕ ಸಂಬಂಧದ ಕುರಿತಾದ ಕವನವಾಗಿದೆ .

ಮಗುವಿನ ಸಾವಿನಲ್ಲಿಯೂ ಸಾಹಿತ್ಯದವನಲು
ನೀ ಹಿಂಗ ನೋಡಬ್ಯಾಡ ನನ್ನಾ, ಸಂತೈಸುವ

ಅಮಲು ದುಃಖ ದುಮ್ಮಾನಗಳ ಹಳೆ ಬೇರು ಜೀವನವೇ ಸಾಹಿತ್ಯಕ್ಕೆ ಮುಡುಪಾಗಿಸಿದ್ದ ತೇರು ಕವಿಯ ಮೊದಲನೇ ಕವನ ವಾದ ಬೇಂದ್ರೆ ಎಂಬ ಕವನವು ಬೇಂದ್ರೆಯವರ ಭಾವನಾತ್ಮಕವಾದ ಕೆಲವು ಅಂಶಗಳನ್ನು ಮನ ಮುಟ್ಟುವ ರೀತಿಯಲ್ಲಿ ಕವನದ ರೂಪದಲ್ಲಿ ತೋರ್ಪಡಿಸಿರುವುದು ಬಹಳಷ್ಟು ಸೊಗಸಾಗಿದೆ. ಇಲ್ಲಿ ಕವಿಯು ಸಹ ಭಾವನಾತ್ಮಕವಾಗಿ ಯೋಚನೆ ಮಾಡಿರುವುದನ್ನು ಕವನದ ರೂಪದಲ್ಲಿ ಬರಹಕ್ಕೆ ಇಳಿಸಿರುವ ರೀತಿಯು ಬಹಳಷ್ಟು ಸೊಗಸಾಗಿದೆ. ನಂತರದಲ್ಲಿ ಸಾಲುಮರದ ವೃಕ್ಷ ಮಾತೆ

ಎಂಬ ಕವನವನ್ನು ಗಮನಿಸುವುದಾದರೆ
ಆಗಸದೆತ್ತರಕ್ಕೆ ಕೊಡುಗೆಯಾಗಿ ಹರಡಿದ
ಸಾವಿರಾರು ಮರಗಳ ಕೊಡುಗೆ ಬೇಸಿಗೆಯ ಬಿರು ಬಿಸಿಲ ತಡೆದು ನೆರಳಾಗಿ ತಂಪು ನವಿರಾಗಿ, ಹಚ್ಚ ಹಸಿರಿನ ಕಾನನದ ಸೊಬಗಿರಲು ವೃಕ್ಷ ಮಾತೆಯಾ ಸೇವೆ ನಿಸ್ವಾರ್ಥ,
ಶರಣು ಶರಣು ಅವರ ಸೇವೆ ನಿಷ್ಕಲ್ಮಷ

ನೋಡಿ ಕವಿಯ ಮನದೊಳಗೆ ಪರಿಸರದ ಪ್ರೇಮವನ್ನು ಕಾಣಬಹುದು. ಆಗಸದೆತ್ತರಕ್ಕೆ ಕೊಡುಗೆಯಾಗಿ ಹರಡಿ ಸಾವಿರಾರು ಮರಗಳನ್ನು ನೆಟ್ಟಂತಹ, ಮತ್ತು ಬೇಸಿಗೆ ಬಿರು ಬಿಸಿಲಲ್ಲಿ ನೆರಳನ್ನು ನೀಡುವಂತಹ ಮರಗಳನ್ನು ಕೊಡುಗೆಯಾಗಿ ನೀಡಿದಂತಹ ಸಾಲುಮರದ ತಿಮ್ಮಕ್ಕನನ್ನು ನೆನೆಯುತ್ತಾ ಈ ಕವನವನ್ನು ಅತ್ಯಂತ ಅಚ್ಚುಕಟ್ಟಾಗಿ ಮನ ಮುಟ್ಟುವ ರೀತಿಯಲ್ಲಿ ಬರೆದಿದ್ದಾರೆ. ಇವರ ಕವನಗಳಲ್ಲಿ ಅಂದರೆ ಏನಿದು ಮೀಟೂ?, ಹಳ್ಳಿಯ ಸೊಬಗು, ಭೂ ತಾಯಿಯ ಸೊಬಗು, ತಾಯಿಯಾಗಿ, ಅಪ್ಪ ದೇವದೂತ, ಸತ್ಪ್ರಜೆಯಾಗಿ, ಬಡತನದ ಹೊನಲು, ಹಣದ ಮಾಯೆ, ಜಾತ್ರೆ ಜಾನಪದ, ಮುಸ್ಸಂಜೆ ನೆನಪು, ಹೀಗೆ ಪ್ರತಿಯೊಂದು ಅಂಶಗಳನ್ನು ಗಣನೆಗೆ ತೆಗೆದುಕೊಂಡು ಕವನಗಳನ್ನು ರಚಿಸಿದ್ದಾರೆ. ಈ ಎಲ್ಲದರಲ್ಲಿ ಪ್ರಕೃತಿ ಗೀತೆ ಎಂಬ ಕವನವು ಬಹಳ ಸೊಗಸಾಗಿದೆ.

ಹಸಿರ ಸೀರೆಯ ಹುಟ್ಟು
ನಿತ್ಯ ಅಭಿಷೇಕ ಪಡೆದ ಸುಂದರಿ...!
ಜಗದ ಕಣ್ಣು ಜಗವೆ ಅವಳು ..
ಮಹಾಮಾತೆ ನಿಸರ್ಗ ನಮೋ ನಮಃ

ಇದು ಕವನದ ರೂಪದಲ್ಲಿದ್ದರೂ ಸಹ ರಾಗ ಹಾಕಿ ಗಾಯನದ ರೀತಿಯಲ್ಲಿ ವ್ಯಕ್ತಪಡಿಸುವಂತಹ ಅದ್ಭುತವಾದ ಸಾಲುಗಳಿವೆ. ಪ್ರಕೃತಿ ಮಾತೆಯು ಹಸಿರು ಸೀರೆಯನ್ನು ಹುಟ್ಟಿದ್ದಾಳೆ ನಿತ್ಯ ಅಭಿಷೇಕವನ್ನು ಒಳಗೊಂಡಂತಹ ಸುಂದರಿಯಾಗಿದ್ದಾಳೆ. ಜಗದಲ್ಲಿ ಇವಳು ಕಣ್ಣಾಗಿದ್ದಾಳೆ. ಜಗವೇ ಪರಿಸರವಾಗಿದೆ. ಇಂತಹ ಮಾತಿಗೆ ನಮೋ ನಮಃ ಎಂಬ ಸಾಲುಗಳು ಪ್ರತಿಯೊಬ್ಬರಿಗೂ ಮನ ಮುಟ್ಟುವಂತೆ ಇದೆ. ಒಟ್ಟಾರೆ ಹೇಳಬೇಕೆಂದರೆ ಅಕ್ಷರ ಕ್ರಾಂತಿ ಎಂಬ ಶೀರ್ಷಿಕೆ ಈ ಕವನ ಸಂಕಲನಕ್ಕೆ ಬಹಳಷ್ಟು ಸೂಕ್ತವಾಗಿದೆ. ಕವಿಯ ಮನೋಭಾವವನ್ನು ಹೇಳುತ್ತಾ ಹೋದರೆ ಬಹಳಷ್ಟು ಹೇಳಬಹುದು ಇವರ ಕವನ ಗಳಲ್ಲಿ ಜಾತ್ಯಾತೀತವಾಗಿರುವ ಅಂಶಗಳನ್ನು ಕಾಣಬಹುದು. ಪಕ್ಷಾತೀತವಾದ ಅಂಶಗಳು ಒಳಗೊಂಡಿರುವಂತಹ ಕವನಗಳಿವೆ.

ಇಂದಿನ ಪ್ರಸ್ತುತ ದಿನಮಾನಗಳಲ್ಲಿ ಹಾಗೂ ಅವುಗಳ ವಿಚಾರಗಳ ಬಗ್ಗೆ ತಿಳಿಸಿದ್ದಾರೆ. ಕವಿಯು ಪ್ರತಿಯೊಬ್ಬರಿಗೂ ಅರ್ಥವಾಗುವಂತಹ ಪದಗಳನ್ನು ಬಳಸಿಕೊಂಡಿರುವುದರಿಂದ ಪ್ರತಿಯೊಬ್ಬರಿಗೂ ಈ ಕವನಗಳೆಲ್ಲ ಅರ್ಥವಾಗಿ ಮನ ಮುಟ್ಟುವಂತಿದೆ. ಒಟ್ಟಾರೆ ಹೇಳಬೇಕೆಂದರೆ ಕವಿಯು ಅತ್ಯಂತ ಭಾವನಾತ್ಮಕ ಜೀವಿಯಾಗಿದ್ದು ಸಮಾಜದಲ್ಲಿನ ಆಗುಹೋಗುಗಳ ಅರಿವನ್ನು ಒಳಗೊಂಡಿದ್ದು ಸಾಮಾಜಿಕ ಸಮಸ್ಯೆಗಳ ಅಂಶಗಳ ವಿರುದ್ಧ ಅಕ್ಷರ ಕ್ರಾಂತಿಯ ರೂಪದಲ್ಲಿ ತಮ್ಮ ಮನದಾಳದ ಮಾತುಗಳನ್ನು ಅತ್ಯಂತ ಸರಳವಾಗಿ ಓದುಗರಿಗೆ ಅರ್ಥವಾಗುವಂತೆ ಕವನವನ್ನು ರಚಿಸಿರುವುದನ್ನು ಗಮನಿಸಬಹುದು.ಕವಿಯ ಎಲ್ಲಾ ಕವನಗಳು ಉತ್ತಮವಾಗಿದ್ದು. ಈ ಕವನ ಸಂಕಲನವು ಬಹಳಷ್ಟು ಅರ್ಥಗರ್ಭಿತವಾಗಿದೆ. ಇದೇ ರೀತಿ ಸಾಹಿತ್ಯ ಲೋಕಕ್ಕೆ ತಮ್ಮ ಬರಹವನ್ನು ಹಲವಾರು ಪ್ರಕಾರಗಳಲ್ಲಿ ಬರೆದು ಪುಸ್ತಕದ ರೂಪದಲ್ಲಿ ಕೊಡುಗೆಯಾಗಿ ನೀಡಲೆಂದು ಆಶಿಸುತ್ತಾ ಶ್ರೀ ಅಶ್ವಕ್ ಶಾಹ್ ಕನ್ನಡಿಗ ರವರ ಭವಿಷ್ಯದಲ್ಲಿ ಬಹಳಷ್ಟು ಎತ್ತರಕ್ಕೆ ಬೆಳೆಯಲೆಂದು ಆಶಿಸುತ್ತೇನೆ. ಜೈ ಹಿಂದ್ ಜೈ ಭಾರತ ಮಾತೆ.

# ಸರ್ವೇ ಜನಾಃ ಸುಖಿನೋ ಭವಂತು..!



> **ಹೂ ಮಾರುವಾಕೆ ಶಾಲೆಗೆ ಹೋಗಿ ಕಲಿತವಳಲ್ಲ, ಸಾಧುಸಂತರ ಪ್ರವಚನ ಕೇಳಿದವಳಲ್ಲ, ಆದರೂ ಆಕೆ ಗಳಿಸಿಕೊಂಡ ಜೀವನಾನುಭವ, ತಿಳಿದ ಸತ್ಯವನ್ನು ಮುಚ್ಚುಮರೆಯಿಲ್ಲದೆ ವ್ಯಕ್ತಪಡಿಸಿದಳು.**



**ವಿಶ್ವಾಸ್.ಡಿ.ಗೌಡ**

• ಉದಯವಾಹಿನಿ, ವಿಶೇಷ

'ಸರ್ವೇ ಜನಾಃ ಸುಖಿನೋ ಭವಂತು, ಸಮಸ್ತ ಸನ್ಮಂಗಳಾನಿ ಭವಂತು' ಎಲ್ಲರೂ ಸುಖವಾಗಿರಬೇಕೆಂಬ ಆಶಯ ಈ ಶಾಂತಿ ಮಂತ್ರದ್ದು. ಇಂತಹ ಉದಾತ್ತತೆಯನ್ನು ಒಳಗೊಂಡಿದೆ ನಮ್ಮ ಭಾರತೀಯ ಸಂಸ್ಕೃತಿ. ಇಂತಹ ಆಶಯ ಸಾಧ್ಯವೇ! ಎಂಬ ಸಂಶಯ ಬೇಡ. ಏಕೆಂದರೆ ನಮ್ಮದು ಸುಸಂಸ್ಕೃತ ರಾಷ್ಟ್ರ. ಇಲ್ಲಿನ ಪ್ರಜೆಗಳು ಧಾರ್ಮಿಕ ಕ್ರಿಯೆಗಳಲ್ಲಿ ಬಲು ಆಸಕ್ತರು, ಸತ್ಸಂಪ್ರದಾಯ, ಸನಾತನ ಧರ್ಮ, ಆಚಾರ-ವಿಚಾರಗಳಲ್ಲಿ ಶ್ರದ್ಧೆಯುಳ್ಳವರು. ನಾಗರೀಕರು, ಮಾನವೀಯತೆಗೆ ಹೆಸರಾದವರು. ಆದರೆ ಇತ್ತೀಚಿನ ವರ್ಷಗಳಲ್ಲಿ ಮಾನವೀಯತೆ, ಮನುಷ್ಯತ್ವಕ್ಕೆ ಬರ ಬಂದಿರುವುದು ದೊಡ್ಡ ದುರಂತವಾಗಿದೆ.

ಶ್ರಾವಣ ಮಾಸದ ಶನಿವಾರದಂದು ದೇವಾಲಯಕ್ಕೆ ಎಂದು ಹೊರಟ ಆತ. ದಾರಿಯಲ್ಲಿ ಕಾಣಿಸಿದ ಹೂವು ಮಾರುವವಳ ಬಳಿ ನಾಲ್ಕು ಮೊಳ ಹೂ ಕೊಂಡು ಹಣ ಕೊಟ್ಟಾಗ, ಆಕೆ ನೋಟನ್ನು ಮೊದಲು ಭಕ್ತಿಯಿಂದ ಕಣ್ಣಿಗೊತ್ತಿಕೊಂಡು ನಂತರ ಅದನ್ನು ಭೂಮಿಗೆ, ತನ್ನ ಹೂವಿನ ಬುಟ್ಟಿಗೆ, ನಂತರ ಮಾಂಗಲ್ಯ, ಹೊಟ್ಟೆಯ ಕಡೆಗೆ, ಆಮೇಲೆ ತನ್ನ ಶಿರದ ಹಿಂಭಾಗದತ್ತ ತೋರಿಸಿ, ನೋಟನ್ನು ತನ್ನ ಪರ್ಸಿನಲ್ಲಿ ಇಟ್ಟುಕೊಂಡಳು. ಆಕೆಯ ಈ ವಿಚಿತ್ರ ವರ್ತನೆ ಆತನಿಗೆ ಒಮ್ಮೆಗೆ ನಗೆ, ಆಶ್ಚರ್ಯಗಳನ್ನು ಮೂಡಿಸಿದವು. ಕುತೂಹಲ ತಣಿಸಲು, ಯಾಕಮ್ಮಾ ಹಾಗೆ ಮಾಡಿದೆ? ಎಂದು ಆಕೆಯನ್ನು ಪ್ರಶ್ನಿಸಿದಾಗ, ಇದು ನನ್ನ ಪೂಜೆ ಸ್ವಾಮಿ. ಇಂದು ನನ್ನ ಹೂವಿಗೆ ನೀವೇ ಮೊದಲ ಗಿರಾಕಿಯಾದ ಕಾರಣ, ನಿಮ್ಮ ಕೈ ಬೋಣಿ ಚೆನ್ನಾಗಿರ್ಲಿ. ನನ್ನ ವ್ಯಾಪಾರ ಹೆಚ್ಚಾಗಲಿ ಎಂದು ನೀವಿತ್ತ ಹಣಕ್ಕೆ ಮೊದಲ ನಮಸ್ಕಾರ. ಎರಡು, ಮೂರನೆಯ ನಮಸ್ಕಾರ ಈ ಹೂವು ಬೆಳೆಸಿದ ಭೂತಾಯಿಗೆ ಮತ್ತು ರೈತನಿಗೆ, ನಾಲ್ಕನೆಯ ನಮಸ್ಕಾರ ನನ್ನ ಕೈಹಿಡಿದು ರಕ್ಷಿಸುತ್ತಿರುವ ಪತಿ, ಮಕ್ಕಳು ಚೆನ್ನಾಗಿರಲಿ ಎಂದು. ಲೋಕದಲ್ಲಿ ಎಲ್ಲರೂ ಚೆನ್ನಾಗಿರಲಿ ಎಂದು ನನ್ನ ಐದನೆಯ ನಮಸ್ಕಾರ ಎಂದ ಆಕೆ, ಎಲ್ಲರೂ ಚೆನ್ನಾಗಿದ್ದರಲ್ವಾ ಸ್ವಾಮಿ ನಾ ಚೆನ್ನಾಗಿರುವುದು ಎಂದುತ್ತರಿಸಿದಳು.'ಆಹಾ! ಅವಿದ್ಯಾವಂತಳಾದರೂ ಎಂತಹ ಸದಾಶಯ ಈಕೆಯದು, ಮೆಚ್ಚಬೇಕಾದ್ದೇ ಈಕೆಯ ಸದ್ಭಾವನೆಯನ್ನು, ಆ ದೇವನ ಈ ಸೃಷ್ಟಿಯನ್ನು' ಎಂದು ತಲೆದೂಗಿ ಆಲಯದಲ್ಲಿ ಪೂಜೆ ಮುಗಿಸಿ ಆತ ಮನೆ ಸೇರಿದ. ಶರೀರ ಮನೆಯಲ್ಲಿದ್ದರೂ ಆತನ ಮನ ಮಾತ್ರ ಆಕೆಯಾಡಿದ ಮಾತುಗಳನ್ನು ಮೆಲುಕು ಹಾಕುತ್ತಿತ್ತು. 'ವಿದ್ಯಾವಂತರಾದ ನಾವು ಬಹುತೇಕ ದೇವರ ಮುಂದೆ ನಿಂತು, ಸ್ವಾಮಿ ನನಗೆ ನನ್ನ ಕುಟುಂಬದವರಿಗೆ ಇದು, ಅದು ಎಲ್ಲವನ್ನೂ ಕೊಡು. ನಮ್ಮನ್ನೆಲ್ಲಾ ಚೆನ್ನಾಗಿಟ್ಟಿರು. ನನ್ನ ಮಕ್ಕಳಿಗೆ ಹೆಚ್ಚಿನ ವಿದ್ಯೆ, ಒಳ್ಳೆಯ ಬುದ್ಧಿ, ಐಶ್ವರ್ಯ ಕೊಡು' ಎಂದು ದೀನರಾಗಿ ಬೇಡುತ್ತೇವೆಯೇ ಹೊರತು, ನಮ್ಮಂತೆಯೇ ಬೇರೆಯವರೂ ಚೆನ್ನಾಗಿರಲಿ ಎಂದು ಹಾರೈಸುತ್ತೇವೆಯೇ 'ಊರು ಕಾದು ದೊಡ್ಡ ಬೋರೇಗೌಡ ಎನಿಸಿಕೊಂಡ' ಎಂಬ ಗಾದೆಯಂತೆ ಪರರ ಚಿಂತೆ ನಮಗೇಕೆ ನಮ್ಮದು ನಾವು ನೋಡಿಕೊಳ್ಳೋಣ ಎನ್ನುವವರು ಬಹಳಷ್ಟು ಮಂದಿ. ಅತಿ ವಿದ್ಯಾವಂತ ನಾಗರೀಕರು ಎಂದು ಬೀಗುವ ನಾವು 'ಸರ್ವೇ ಜನಾಃ ಸುಖಿನೋ ಭವಂತು ಎಂಬ ತತ್ವವನ್ನು ನಮ್ಮ ನಡೆನುಡಿಯಲ್ಲಿ ಅಳವಡಿಸಿಕೊಂಡು ದುರ್ಲಭವಾದ ಮನುಷ್ಯ ಜನ್ಮವನ್ನು ಸಾರ್ಥಕಪಡಿಸಿ ಕೊಳ್ಳಬೇಕಲ್ಲವೇ ಇದನ್ನು ಅರಿತು ಪಾಲಿಸಲು ಹೆಚ್ಚಿನ ವಿದ್ಯೆಯ ಅಗತ್ಯವಿಲ್ಲ, ಯಾವ ಶಾಲಾ-ಕಾಲೇಜು-ವಿಶ್ವವಿದ್ಯಾಲಯದ ಪದವಿ ಪ್ರಮಾಣ ಪತ್ರ ಬೇಕಿಲ್ಲ. ಬದಲಿಗೆ ಸಾಮಾನ್ಯ ಜ್ಞಾನ ಸಾಕು.

ಬದುಕಿನ ಬಗ್ಗೆ ನಮ್ಮ ದೃಷ್ಟಿಕೋನ ಬದಲಾಗಬೇಕು. ಈ ಸದ್ವಿಚಾರದ ಬಗ್ಗೆ ಚಿಂತಿಸಲು ಇದುವೇ ಸಕಾಲ. ಸರ್ವೇ ಭವಂತು ಸುಖಿನಃ ಸರ್ವೇ ಸಂತು ನಿರಾಮಯಾಃ। ಸರ್ವೇ ಭದ್ರಾಣಿಪಶ್ಯಂತು ಮಾ ಕಶ್ಚಿತ್ ದುಃಖ ಭಾಗ್ಭವೇತ್ ॥ ಎಲ್ಲರೂ ಸುಖವಾಗಿರಲಿ, ಎಲ್ಲರೂ ನಿರಾತಂಕವಾಗಿರಲಿ, ಶುಭವಾದುದನ್ನೇ ಕಾಣಲಿ, ದುಃಖಿಗಳಾಗದಿರಲಿ. ಶ್ರೀಕೃಷ್ಣನ ಕೃಪಾಶೀರ್ವಾದ ಎಲ್ಲರ ಮೇಲೂ ಇರಲಿ.

# ಮನೆಗಳಲ್ಲಿ ಪೂರ್ವಜರ ಚಿತ್ರಗಳನ್ನು ಹಾಕಬೇಡಿ..!

• ಉದಯವಾಹಿನಿ ಬೆಂಗಳೂರು

ಪ್ರತಿ ಮನೆಯಲ್ಲೂ ಪೂರ್ವಜರ ಚಿತ್ರಗಳನ್ನು ಹಾಕುವುದು ಪುರಾತನ ಸಂಪ್ರದಾಯ. ಸಂಪ್ರದಾಯದ ಪ್ರಕಾರ, ಪೂರ್ವಜರ ಚಿತ್ರಗಳನ್ನು ಇರಿಸುವ ಮೂಲಕ, ಅವರ ಆಶೀರ್ವಾದವನ್ನು ಪಡೆಯಲಾಗುತ್ತದೆ ಮತ್ತು ಅವರ ಬಗ್ಗೆ ಗೌರವವನ್ನು ವ್ಯಕ್ತಪಡಿಸಲಾಗುತ್ತದೆ. ಇದಲ್ಲದೆ, ಕುಟುಂಬದ ಸಂತೋಷ ಮತ್ತು ಸಮೃದ್ಧಿಯನ್ನು ಹೆಚ್ಚಿಸುತ್ತದೆ. ಆದಾಗ್ಯೂ, ಪೂರ್ವಜರ ಚಿತ್ರವನ್ನು ಇರಿಸುವಾಗ ಕೆಲವು ಪ್ರಮುಖ ವಿಷಯಗಳನ್ನು ಮನಸ್ಸಿನಲ್ಲಿಟ್ಟುಕೊಳ್ಳುವುದು ಮುಖ್ಯ. ಇಲ್ಲದಿದ್ದರೆ, ತಪ್ಪಾಗಿ ಇರಿಸಲಾದ ಛಾಯಾಚಿತ್ರವು ನಕಾರಾತ್ಮಕ ಪರಿಣಾಮಗಳನ್ನು ಉಂಟುಮಾಡಬಹುದು. ಬನ್ನಿ, ಪಿತೃ ಪಕ್ಷದ ಸಂದರ್ಭದಲ್ಲಿ ಪೂರ್ವಜರ ಚಿತ್ರಗಳನ್ನು ಹಾಕುವಾಗ ಯಾವ ವಿಷಯಗಳನ್ನು ನೆನಪಿನಲ್ಲಿಡಬೇಕು

**ಜೀವಂತ ಜನರ ಫೋಟೋಗಳಿಂದ ದೂರವಿರಿ:** ಪೂರ್ವಜರ ಛಾಯಾಚಿತ್ರಗಳನ್ನು ಯಾವಾಗಲೂ ಜೀವಂತ ಜನರ ಛಾಯಾಚಿತ್ರಗಳಿಂದ ಪ್ರತ್ಯೇಕವಾಗಿ ಇಡಬೇಕು. ಪೌರಾಣಿಕ ನಂಬಿಕೆಗಳ ಪ್ರಕಾರ, ಜೀವಂತ ಜನರ ಚಿತ್ರಗಳೊಂದಿಗೆ ಪೂರ್ವಜರ ಚಿತ್ರಗಳನ್ನು ಇಡುವುದು ಅಶುಭವೆಂದು ಪರಿಗಣಿಸಲಾಗುತ್ತದೆ. ಹಾಗೆ ಮಾಡುವುದರಿಂದ ಜೀವಂತ ಜನರ ಜೀವಿತಾವಧಿಯ ಮೇಲೆ ನಕಾರಾತ್ಮಕ ಪರಿಣಾಮ ಬೀರಬಹುದು ಮತ್ತು ಅವರ ಆರೋಗ್ಯದ ಮೇಲೆ ಪರಿಣಾಮ ಬೀರಬಹುದು. ಆದ್ದರಿಂದ, ಪೂರ್ವಜರ ಚಿತ್ರಗಳನ್ನು ಇತರ ಚಿತ್ರಗಳಿಂದ ಪ್ರತ್ಯೇಕ ಮತ್ತು ಗೌರವಾನ್ವಿತ ಸ್ಥಳದಲ್ಲಿ ಇರಿಸಲು ಸೂಕ್ತವಾಗಿದೆ.

**ಚಿತ್ರವನ್ನು ಸ್ಥಗಿತಗೊಳಿಸಬಾರದು:** ಪೂರ್ವಜರ ಚಿತ್ರಗಳನ್ನು ನೇತು ಹಾಕುವುದು ಸರಿಯಲ್ಲ. ಪೂರ್ವಜರ ಚಿತ್ರಗಳನ್ನು ಗೋಡೆಯ ಮೇಲೆ ನೇತು ಹಾಕಬಾರದು. ಬದಲಾಗಿ, ಚಿತ್ರವನ್ನು ಮರದ ಸ್ಟ್ಯಾಂಡ್ ಅಥವಾ ಯಾವುದೇ ಸ್ಥಿರವಾದ ಸ್ಟ್ಯಾಂಡ್‌ನಲ್ಲಿ ಇರಿಸಬೇಕು. ಚಿತ್ರವು ಸ್ಥಿರವಾಗಿರುತ್ತದೆ ಸರಿಯಾಗಿ ಸಾಣೆ ಹಿಡಿಯಬಹುದು ಎಂದು ಇದು ಖಚಿತಪಡಿಸುತ್ತದೆ.

**ಹಾದುಹೋಗುವಾಗ ಜನರ ದೃಷ್ಟಿಯಿಂದ ದೂರವಿರಿ:** ಪೂರ್ವಜರ ಚಿತ್ರಗಳನ್ನು ಹಾದುಹೋಗುವ ಜನರಿಗೆ ಕಾಣದಂತಹ ಸ್ಥಳದಲ್ಲಿ ಇಡಬೇಕು. ಚಿತ್ರವು ನಿಯಮಿತವಾಗಿ ಜನರ ಕಣ್ಣುಗಳು ಅದರ ಮೇಲೆ ಬೀಳುವ ಸ್ಥಳದಲ್ಲಿ ಇದ್ದರೆ, ಅದು ಮಾನಸಿಕ ಅಸಮಾಧಾನ ಮತ್ತು ನಿರಾಶೆಯನ್ನು ಉಂಟುಮಾಡಬಹುದು. ಛಾಯಾಚಿತ್ರವನ್ನು ಶಾಂತಿ ಮತ್ತು ಗೌರವದಲ್ಲಿ ಉಳಿಯುವ ಸ್ಥಳದಲ್ಲಿ ಇರಿಸಬೇಕು. **ಈ ಸ್ಥಳಗಳಲ್ಲಿ ಚಿತ್ರಗಳನ್ನು ತೆಗೆದುಕೊಳ್ಳುವುದನ್ನು ತಪ್ಪಿಸಿ:** ದಕ್ಷಿಣ ದಿಕ್ಕಿನಲ್ಲಿ ನೆಡುವುದು ಶುಭ: ಮನೆಯ ದಕ್ಷಿಣ ಗೋಡೆಯ ಮೇಲೆ ಪೂರ್ವಜರ ಚಿತ್ರಗಳನ್ನು ಹಾಕುವುದು ಮಂಗಳಕರವೆಂದು ಪರಿಗಣಿಸಲಾಗಿದೆ. ದಕ್ಷಿಣ ದಿಕ್ಕು ಯಮ ಮತ್ತು ಪೂರ್ವಜರ ದಿಕ್ಕು, ಆದ್ದರಿಂದ ಇಲ್ಲಿ ಪೂರ್ವಜರ ಚಿತ್ರಗಳನ್ನು ಇಡುವುದರಿಂದ ಮನೆಯಲ್ಲಿ ಸುಖ ಶಾಂತಿ ನೆಲೆಸುತ್ತದೆ. ಚಿತ್ರವನ್ನು ದಕ್ಷಿಣ ದಿಕ್ಕಿನಲ್ಲಿ ಇರಿಸಿದರೆ ಪೂರ್ವಜರ ಉಪಸ್ಥಿತಿ, ಆಶೀರ್ವಾದ ಹೆಚ್ಚು ಪರಿಣಾಮಕಾರಿಯಾಗಿರುತ್ತದೆ.

# ದೇಶದ ಅಭಿವೃದ್ಧಿಗೆ ಇಂಜನಿಯರ್‌ಗಳ ಕೊಡುಗೆ ಅಪಾರ

## ರಾಜ್ಯ ಶ್ರೀಮಂತವಾಗಲು ಇಂಜನಿಯರ್‌ಗಳ ಕೊಡುಗೆ ಅಪಾರ- ಮುಖ್ಯ ಆಯುಕ್ತ ತುಷಾರ್ ಗಿರಿನಾಥ್

• ಉದಯವಾಹಿನಿ ಬೆಂಗಳೂರು

ಬಿಬಿಎಂಪಿ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ನೌಕರರ ಭವನ: ಬಸವ ಸಭಾಂಗಣದಲ್ಲಿ ಸರ್.ಎಂ.ವಿಶ್ವೇಶ್ವರಯ್ಯ ಜಯಂತಿ ಪ್ರಯುಕ್ತ ಕೆ.ಆರ್. ಸರ್ಕಲ್‌ನಲ್ಲಿರುವ ಸರ್.ಎಂ. ವಿಶ್ವೇಶ್ವರಯ್ಯರವರ ಪುತ್ಥಳಿಗೆ ಮಾಲಾರ್ಪಣೆ, ನಂತರ ಬಸವ ಸಭಾಂಗಣದಲ್ಲಿ ಸಭಾ ಕಾರ್ಯಕ್ರಮ ಇಂಜಿನಿಯರ್ ದಿನಾಚರಣೆಹಾ ಗೂ ಸರ್.ಎಂ.ವಿಶ್ವೇಶ್ವರಯ್ಯ ಪ್ರಶಸ್ತಿ ಪ್ರಧಾನ ಕಾರ್ಯಕ್ರಮ.

ಉದ್ಘಾಟನೆಯನ್ನು ಮುಖ್ಯ ಆಯುಕ್ತರಾದ ತುಷಾರ್ ಗಿರಿನಾಥ್ ರವರು, ಮುಖ್ಯ ಅತಿಥಿಗಳಾಗಿ ವಿಶೇಷ ಆಯುಕ್ತರುಗಳಾದ ಡಾ|| ಅವಿನಾಶ್ ಮೆನನ್‌ರಾಜೇಂದ್ರನ್ (ಆಡಳಿತ) ಡಾ। ಹರೀಶ್‌ಕುಮಾರ್ ಕೆ.ಮತ್ತು ಉಪ ಆಯುಕ್ತರಾದ ಡಾ|| ಮಂಜುನಾಥಸ್ವಾಮಿ ಬಿ.ಎಸ್. ಪ್ರಧಾನ ಅಭಿಯಂತರಾದ ಬಿ.ಎಸ್. ಪ್ರಹ್ಲಾದ್, ಉಪಮುಖ್ಯ ಮಂತ್ರಿಗಳ ತಾಂತ್ರಿಕ ಸಲಹೆಗಾರರಾದ ಕೆ.ಟಿ.ನಾಗರಾಜ್ ರವರು, ಕರ್ನಾಟಕ ರಾಜ್ಯ ಇಂಜಿನಿಯರುಗಳ ಸಂಘದ ಮಾಜಿ ಅಧ್ಯಕ್ಷರಾದ ನಾಗರಾಜುರವರು, ಬಿಬಿಎಂಪಿ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ಎ.ಅಮೃತ್ ರಾಜ್ ರವರು ಸರ್.ಎಂ.ವಿ.ಬಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ, ಕಾರ್ಯಕ್ರಮಕ್ಕೆ ಚಾಲನೆ ನೀಡಿ ಪ್ರಶಸ್ತಿ ಪ್ರಧಾನ ಮಾಡಿದರು.

ತುಷಾರ್ ಗಿರಿನಾಥ್ ರವರು ಮಾತನಾಡಿ ಸರ್. ಎಂ.ವಿಶ್ವೇಶ್ವರಯ್ಯರವರ ಸ್ಮರಣೆಯಲ್ಲಿ ಸಾಧಕ ಇಂಜನಿಯರ್‌ಗಳಿಗೆ ಸನ್ಮಾನ ಮಾಡಲಾಗುತ್ತಿದೆ. ಬಿಬಿಎಂಪಿಯಲ್ಲಿ ಕಾರ್ಯನಿರ್ವಹಿಸುವುದು ಬಹಳ ಕಷ್ಟ, ಕಠಿಣ ಪರಿಸ್ಥಿತಿ ನಿಭಾಯಿಸಿಕೊಂಡು ಕೆಲಸ ಮಾಡುತ್ತಿದ್ದಾರೆ ನಮ್ಮ ಇಂಜನಿಯರ್‌ಗಳು. ಸಮಾಜ ಕಟ್ಟುವ ಕೆಲಸ ಇಂಜನಿಯರ್‌ಗಳು ಮಾಡುತ್ತಿದ್ದಾರೆ.

ಸರ್.ಎಂ.ವಿಶ್ವೇಶ್ವರಯ್ಯರವರು ವಿವಿಧ ರಾಜ್ಯಗಳಲ್ಲಿ ಕಾರ್ಯನಿರ್ವಹಣೆ ಮಾಡಿದ್ದಾರೆ. ರಾಜ್ಯ ಶ್ರೀಮಂತಗೊಳಿಸಲು ಮೈಸೂರು ಮಹಾರಾಜರು, ವಿಶ್ವೇಶ್ವರಯ್ಯರವರ ಕೊಡುಗೆ ಅಪಾರ. ಇಂಜನಿಯರ್ ಮತ್ತು ವೈದ್ಯರು, ಪೌರ ಕಾರ್ಮಿಕರ,ವೃತಿಪರ ಕೆಲಸ ಮಾಡುವವರಿಗೆ ಗೌರವ ಕೊಡಬೇಕು. ಖಾಸಗಿ ವಲಯ ಆರ್ಥಿಕವಾಗಿ ಸಂಪಾದನೆ ಮಾಡುತ್ತಾರೆ ಮತ್ತು ಬಿಬಿಎಂಪಿ ಅಧಿಕಾರಿ ಮತ್ತು ನೌಕರರು ಜನ ಸೇವೆ ಮಾಡುತ್ತಿದ್ದಾರೆ



ಉದಯವಾಹಿನಿ ಚಿತ್ರ



> **ಸರ್.ಎಂ. ವಿಶ್ವೇಶ್ವರಯ್ಯರವರ ಪುತ್ಥಳಿಗೆ ಮಾಲಾರ್ಪಣೆ**

ಇಂಜನಿಯರ್‌ಗಳು ಕಣ್ಣಿಗೆ ಕಾಣುವ ಕೆಲಸ ಮಾಡುತ್ತಾರೆ. ಎಲ್ಲಾ ತಂತ್ರಜ್ಞಾನವನ್ನು ಬಳಸಿ ಅಭಿವೃದ್ಧಿ ಯತ್ತ ಸಾಗುತ್ತಿದ್ದೇವೆ. ಇಂಜನಿಯರ್‌ಗಳ ಅಭಿವೃದ್ಧಿ ಸಂಕೇತವಾಗಿ ನೋಡುತ್ತಿದ್ದೇವೆ. ಶಿಕ್ಷಣದಲ್ಲಿ ಹೆಚ್ಚಿನ ವಿದ್ಯಾಭ್ಯಾಸ ಉನ್ನತ ತಂತ್ರಜ್ಞಾನ ಆಳವಡಿಸಿಕೊಂಡರೆ ಉತ್ತಮ ತಂತ್ರಜ್ಞನಾಗಬಹುದು ಎಂದು ಹೇಳಿದರು. ಕೆ.ಟಿ.ನಾಗರಾಜುರವರು ಮಾತನಾಡಿ ಸರ್.ಎಂ.ವಿ.ಹುಟ್ಟುಹಬ್ಬದ ದಿನದಂದು ದೇಶದಲ್ಲಿ ಇಂಜನಿಯರ್ ದಿನಾಚರಣೆ ಅಚರಿಸಲಾಗುತ್ತಿದೆ.

ಸರ್.ಎಂ.ವಿ.ಅವರಷ್ಟು ಕೀರ್ತಿಗಳಿಸಿದ ಇನ್ನೊಬ್ಬ ಇಂಜನಿಯರ್ ಇಲ್ಲ. ರಾಜಕೀಯ, ವೈಜ್ಞಾನಿಕ ಮತ್ತು ಸಾಂಸ್ಕೃತಿಕ ಕ್ಷೇತ್ರದಲ್ಲಿ ಹಲವಾರು ಮಹನೀಯರುಗಳು ಭಾರತರತ್ನ ಪಡೆದಿದ್ದಾರೆ, ತಾಂತ್ರಿಕ ಕ್ಷೇತ್ರದಲ್ಲಿ ಭಾರತರತ್ನ ಪಡೆದವರು ಸರ್.ಎಂ.ವಿರವರು. ಮೈಸೂರು ಸಂಸ್ಥಾನದಲ್ಲಿ ದಿವಾನರಾಗಿ ಆಡಳಿತ ನಡೆಸಿದರು, ಮಹಾರಾಜರ ಪ್ರೀತಿಗೆ ಪಾತ್ರರಾಗಿದ್ದರು.ಡಾ||ರಾಜ್ ಕುಮಾರ್ ಮತ್ತು ಸರ್. ಎಂ.ವಿಶ್ವೇಶ್ವರಯ್ಯ ಕನ್ನಡ ನಾಡಿನ ಜನರ ಹೃದಯ ಗೆದ್ದಿದ್ದಾರೆ. ಹಿಂದಿನ ಕಾಲದಲ್ಲಿ ಯಾವುದೇ ವ್ಯವಸ್ಥೆ, ತಾಂತ್ರಿಕ ಸಲಕರಣೆ ಇಲ್ಲದೇ ಇದ್ದರು ಸರ್.ಎಂ.ವಿ.ರವರ ತಂತ್ರಜ್ಞಾನಕ್ಕೆ ಕೊರತೆ ಇರಲ್ಲಿಲ.

ಸುಣ್ಣ, ಇಟ್ಟಿಗೆ, ಮಣ್ಣನ್ನು ಬಳಸಿ ಕೆ.ಆರ್.ಎಸ್.ಡ್ಯಾಂ ಕಟ್ಟಿದ್ದಾರೆ 90ವರ್ಷವಾದರು ಇಂದು ಕೊಡ ಉತ್ತಮ ಸ್ಥಿತಿಯಲ್ಲಿದೆ. ಸರ್.ಎಂ.ವಿ.ತಮ್ಮ ಸಂಬಳದ ಮೂರು ಲಕ್ಷ ರೂಪಾಯಿಯನ್ನು ಎಸ್. ಜೆ.ಪಿ.ಪಾಲಿಟೆಕ್ನಿಕ್ ಕಾಲೇಜು ನಿರ್ಮಾಣ ಮಾಡಿದರು ಮೈಸೂರು ವಿಶ್ವವಿದ್ಯಾಲಯ ಸ್ಥಾಪನೆ ಮಾಡಿದರು. ಭದ್ರಾವತಿ ಕಾರ್ಖಾನೆ ಮತ್ತು ಮೈಸೂರು ಡ್ಯಾಂ ನಿರ್ಮಾಣದ ರೂವಾರಿ ಸರ್.ಎಂ.ವಿ.ರವರ ಕುರಿತು ಮಹಾತ್ಮ ಗಾಂಧಿಜೀರವರು ಉತ್ತಮ ಅಭಿಪ್ರಾಯ ವ್ಯಕ್ತಪಡಿಸಿದರು ಎಂದು ಹೇಳಿದರು. ಇಂಜನಿಯರ್ ಸಂಘದ ಮಾಜಿ ಅಧ್ಯಕ್ಷ ನಾಗಾ ರಾಜು ರವರು ಮಾತನಾಡಿ ಸರ್.ಎಂ.ವಿ.ರವರ ಆದರ್ಶ ಮತ್ತು ತತ್ವಗಳನ್ನು ಎಲ್ಲಾ ಇಂಜನಿಯರ್‌ಗಳು ಆಳವಡಿಸಿಕೊಳ್ಳಬೇಕು, ದಶಕಗಳ ಕಾಲವಾದರು ಸಹ ದೇಶದ ಜನರು ಸರ್.ಎಂ.ವಿ.ಯವರನ್ನು ಇಂದು ಸಹ ನೆನಪು ಮಾಡಿಕೊಳ್ಳುತ್ತಾರೆ. ಸರ್ಕಾರ ಒಂದು ರೂಪಾಯಿ ಅನವ್ಯಶಕವಾಗಿ ಖರ್ಚು ಮಾಡುತ್ತಿರಲಿಲ್ಲ, ಪ್ರವಾಸದಲ್ಲಿ ಊಟ, ಉಳಿದುಕೊಳ್ಳುವ ವೆಚ್ಚವನ್ನು ಸ್ವಂತ ಭರಿಸಿ, ಸರ್ಕಾರದ ಹಣವನ್ನು ಉಳಿಸಿದರು. ವಾರದ ಮನೆಯ ಊಟ, ಬೀದಿ ದೀಪದ ಕೆಳಗಿ ಓದಿ, ದೇಶ ಸೇವೆ, ಈಶ ಸೇವೆ ಎಂದು ತಂತ್ರಜ್ಞಾನ ಕ್ಷೇತ್ರದಲ್ಲಿ ಸಾಧನೆಯನ್ನು ಸರ್.ಎಂ.ವಿ. ಮಾಡಿದ್ದಾರೆ. ನಿಸ್ವಾರ್ಥವಾಗಿ, ಯಾವುದೇ ಕಾರಣಕ್ಕೂ ರಾಜಿಯಾಗದೇ ತಮ್ಮ ನಿಲುವುಗೆ ಬದ್ದರಾಗಿ ಕೆಲಸ ಮಾಡಿ ದೇಶ ಕಂಡ ಸರ್ವ ಶೇಷ್ಠ ಇಂಜನಿಯರ್ ಎಂ ಕೀರ್ತಿಗೆ ಸರ್.ಎಂ.ವಿ.ಪಾತ್ರರಾದರು ಎಂದು ಹೇಳಿದರು. ಸರ್. ಎಂ.ವಿಶ್ವೇಶ್ವರಯ್ಯ ಪ್ರಶಸ್ತಿಯನ್ನು ನಾಗರಾಜು, ಬಸವರಾಜ್ ಆರ್. ಕಬಾಡೆ ಶ್ರೀಮತಿ ಸುಗುಣ,ರಾಕೇಶ್ ಕುಮಾರ್ ಹೆಚ್.ಎಸ್.ಮಹದೇಶ್, ರೂಪೇಶ್, ಮುನಿರೆಡ್ಡಿ,ಎಲ್ ವೆಂಕಟೇಶ್, ರಾಮಚಂದ್ರಪ್ಪ ಹೆಚ್.ಎಸ್., ರಾಜಣ್ಣ ಬಿ. ಶರತ್ ಬಿ.ಎನ್.ಪ್ರದೀಪ್ ,ಶ್ರೀಮತಿ ಅಶಾ,ಚಂದ್ರಶೇಖರ್ ನಾಯಕ್ ರವರಿಗೆ ಸರ್.ಎಂ.ವಿಶ್ವೇಶ್ವರಯ್ಯ ಪ್ರಶಸ್ತಿ ಪ್ರಧಾನ ಮಾಡಲಾಯಿತು ಸಂಘದ ಪದಾಧಿಕಾರಿಗಳಾದ ಸಾಯಿಶಂಕರ್, ಎ.ಜಿ.ಬಾಬಣ್ಣ, ಎಸ್.ಜಿ.ಸುರೇಶ್, ಕೆ.ಜಿ.ರವಿ, ಡಿ.ರಾಮಚಂದ್ರ, ಡಾ||ಶೋಭ, ರೇಣುಕಾಂಬ, ಮಂಜೇಗೌಡ, ಬಿ.ರುದ್ರೇಶ್, ಮಂಜುನಾಥ್ ಎನ್,ಸಂತೋಷ್ ಕುಮಾರ್ ನಾಯ್, ಹೆಚ್.ಬಿ.ಹರೀಶ್, ವಿ.ಉಮೇಶ್, ಸಂತೋಷ್, ನರಸಿಂಹರವರು ಬಿಬಿಎಂಪಿ ಅಧಿಕಾರಿ ಮತ್ತು ನೌಕರರು ಪಾಲ್ಗೊಂಡಿದ್ದರು.

> **ಪಾಲಿಕೆಯಲ್ಲಿ ಕಂದಾಯ, ಇಂಜನಿಯರ್ ಮತ್ತು ಆರೋಗ್ಯ ಇಲಾಖೆಯ ಅಧಿಕಾರಿ. ನೌಕರರು ಎಲ್ಲರು ಒಟ್ಟಾಗಿ ಕೆಲಸ ಮಾಡಿದಾಗ ಬೆಂಗಳೂರು ಅಭಿವೃದ್ಧಿ ವೇಗ ಹೆಚ್ಚುತ್ತದೆ. ಪದವಿ ನಿನಗೋಸ್ಕರ ಅಲ್ಲ ಜನಸೇವೆಗೆ ಎಂದು ಸರ್.ಎಂ.ವಿ.ರವರು ಹೇಳಿದ್ದರು. ಸರ್. ಎಂ.ವಿ.ಆದರ್ಶ ಸಿದ್ದಾಂತದಲ್ಲಿ ಬಿಬಿಎಂಪಿ ಇಂಜನಿಯರ್‌ಗಳು ಕೆಲಸ ಮಾಡಬೇಕು ಎಂದು ಹೇಳಿದರು.**
> ಪ್ರಧಾನ ಅಭಿಯಂತರಾದ ಪ್ರಹ್ಲಾದ್

# ಬಿಡಾಡಿ ದನಗಳ ಕಾಟಕ್ಕೆ ಬೇಸತ್ತ ಚಿತ್ತಾಪುರ ಜನತೆ

## ಕಂಡು ಕಾಣದಂತಿರುವ ಪುರಸಭೆ, ಪ್ರಮುಖ ರಸ್ತೆಯೇ ಬಿಡಾಡಿ ದನಗಳ ವಾಸಸ್ಥಾನ, ಸಂಚಾರ ಸಂಚಕಾರದಿಂದ ಬೇಸತ್ತ ಜನ

• ಸಂತೋಷಕುಮಾರ ಕಟ್ಟಿಮನಿ
• ಉದಯವಾಹಿನಿ, ಚಿತ್ತಾಪುರ


ಉದಯವಾಹಿನಿ ಚಿತ್ರ

ಪಟ್ಟಣದಲ್ಲಿ ಸುಮಾರು 40 ರಿಂದ 50ಕ್ಕೂ ಅಧಿಕ ಬಿಡಾಡಿ ದನಗಳು ಪಟ್ಟಣದ ಪ್ರಮುಖ ರಸ್ತೆಗಳಾದ ಲಾಡ್ಜಿಂಗ್ ಕ್ರಾಸ್, ಬಸವೇಶ್ವರ ವೃತ್ತ, ಬಜಾಜ್ ಕಾಂಪ್ಲೆಕ್ಸ್, ಬಸ್ ನಿಲ್ದಾಣ, ಅಂಬೇಡ್ಕರ್ ವೃತ್ತದ ವರೆಗೆ ಬಿಡಾಡಿ ದನಗಳು ರಸ್ತೆಗಳೇ ವಾಸಸ್ಥಾನ ಮಾಡಿಕೊಂಡಿದ್ದು, ಸಂಚಾರ ಸಂಚಕಾರದಿಂದ ಜನತೆ ರೋಸಿ ಹೋಗಿದ್ದಾರೆ.

ವಾರಸುದಾರರು ಇರುವ ಮತ್ತು ಇಲ್ಲದೆ ಇರುವ ಜಾನುವಾರುಗಳು ರಸ್ತೆಗಳೇ ತಮ್ಮ ವಾಸಸ್ಥಾನ ಮಾಡಿಕೊಂಡಿವೆ. ವಾಹನ ಸವಾರರಿಗೆ ವಾಹನಗಳನ್ನು ಅಡ್ಡಗಟ್ಟಿ ಜಾನುವಾರುಗಳು ನಿಲ್ಲುತ್ತವೆ. ವಾಹನ ಸವಾರರು ಪರದಾಡುವ ಪರಿಸ್ಥಿತಿ ಬಂದಿದೆ ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದರು. ವಾಹನ ಚಲಿಸುವ ಸಮಯದಲ್ಲಿ ಜಾನುವಾರುಗಳು ಅಡ್ಡ ದಿಡ್ಡಿ ಮಧ್ಯ ಬಂದರೆ ಅಪಘಾತ ಆಗುವ ಸಾಧ್ಯತೆಗಳಿವೆ ಎಂದು ವಾಹನ ಸವಾರರು ಜೀವಭಯದಿಂದ ವಾಹನ ಸಂಚಾರ ಮಾಡಬೇಕಾಗಿರುವ ಪರಿಸ್ಥಿತಿ ಬಂದಿದೆ. ಪ್ರಮುಖ ರಸ್ತೆಗಳಲ್ಲಿ ಅಡ್ಡಾದಿಡ್ಡಿ ನಿಲ್ಲುವ, ರಸ್ತೆ ನಡುವೆ ಮಲಗುವ ದನಗಳಿಂದ ವಾಹನ ಸವಾರರಿಗೆ ಹಾಗೂ ಪಾದಚಾರಿಗಳಿಗೆ ತೀವ್ರ ತೊಂದರೆ ಆಗುತ್ತಿದೆ. ಹಗಲು ರಾತ್ರಿ ಎನ್ನದೆ ಲಾಡ್ಜಿಂಗ್ ಕ್ರಾಸ್ ನಿಂದ ಅಂಬೇಡ್ಕರ್ ಚೌಕ ವರೆಗೆ ಹಾಗೂ ಪಟ್ಟಣದ ಇನ್ನೂ ಅನೇಕ ಮುಖ್ಯ ರಸ್ತೆಗಳ ಮೇಲೆ ಹತ್ತಾರು ದನ ಕರುಗಳು ಒಂದೆಡೆ ಮಲಗುವುದು ಮತ್ತು ಮಧ್ಯದಲ್ಲಿ ನಿಲ್ಲುವುದು ಮಾಮೂಲಾಗಿದೆ.

**ವಾಹನ ಸವಾರರು ಪರದಾಡುವ ಪರಿಸ್ಥಿತಿ**

> **ಈಗಾಗಲೇ ಬಿಡಾಡಿ ದನಗಳ ಬಗ್ಗೆ ಪಟ್ಟಣದಲ್ಲಿ ವ್ಯಾಪಕ ಪ್ರಚಾರ ಮಾಡಲಾಗಿದೆ. ಬಿಡಾಡಿ ದನಗಳ ವಾರಸುದಾರರಿಗೆ ಒಂದು ವಾರ ಟೈಮ್ ನೀಡಲಾಗಿದೆ. ಒಂದು ವಾರದ ಒಳಗಾಗಿ ವಾರಸುದಾರರು ಬರದಿದ್ದರೆ. ಬಿಡಾಡಿ ದನಗಳ ಬಗ್ಗೆ ಪಶುಸಂಗೋಪನೆ ಇಲಾಖೆಯ ಅಧಿಕಾರಿಗಳೊಂದಿಗೆ ಚರ್ಚಿಸಿ ಗೋಶಾಲೆಗೆ ಕಳಿಸಲಾಗುವುದು. ನಂತರ ವಾರಸುದಾರರು ಬಂದರೆ ದಂಡ ವಿಧಿಸಿ ಜಾನುವಾರುಗಳನ್ನು ವಾರಸುದಾರರಿಗೆ ನೀಡಲಾಗುವುದು.**
> -ಮನೋಜಕುಮಾರ ಗುರಿಕಾರ್
> ಪುರಸಭೆ ಮುಖ್ಯಾಧಿಕಾರಿ ಚಿತ್ತಾಪುರ

> **ಬಿಡಾಡಿ ಜಾನುವಾರಗಳಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ. ಅನೇಕ ಬಾರಿ ಅಪಘಾತಗಳು ಸಂಭವಿಸಿವೆ. ಬಿಡಾಡಿ ಜಾನುವಾರಗಳ ಬಗ್ಗೆ ಪುರಸಭೆಯವರು ಗಮನಹರಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು.**
> -ನಾಗರಾಜ್ ಭಂಕಲಗಿ
> ಪುರಸಭೆ ವಿರೋಧ ಪಕ್ಷದ ನಾಯಕರು ಚಿತ್ತಾಪುರ

**ವಾರಸುದಾರರು ಯಾರು?:** ವಾರಸುದಾರರು ಇಲ್ಲದಿದ್ದರೆ ಜಾನುವಾರುಗಳನ್ನು ಎಲ್ಲಿ ಬಿಡಬೇಕು ಯಾರಿಗೆ ಒಪ್ಪಿಸಬೇಕು ಎಂಬ ಇತ್ಯಾದಿ ಪ್ರಶ್ನೆಗಳು ಪಟ್ಟಣದ ನಿವಾಸಿಗಳನ್ನು ಕಾಡುತ್ತಿವೆ. ಪುರಸಭೆ ಈ ವಿಷಯದಲ್ಲಿ ಸಂಪೂರ್ಣ ನಿರ್ಲಕ್ಷ್ಯ ವಹಿಸಿದೆ ಎಂಬುದಕ್ಕೆ ಪ್ರಮುಖ ರಸ್ತೆ ಮಾರ್ಗಗಳನ್ನು ಆಕ್ರಮಿಸಿಕೊಂಡಿರುವ ಈ ದನಗಳೇ ಸಾಕ್ಷಿ.

ರಾತ್ರಿ ವೇಳೆ ನಡು ರಸ್ತೆಗಳಲ್ಲಿ ನಿಂತಿರುವ ಜಾನುವಾರುಗಳು ಕಾಣದೆ ಡಿಕ್ಕಿ ಹೊಡೆದು ಅನೇಕ ಸಲ ಅಪಘಾತ ಸಂಭವಿಸಿವೆ.

ಕೂಡಲೇ ಸಂಬಂಧಪಟ್ಟ ಇಲಾಖೆಯವರು ಇವುಗಳ ನಿಯಂತ್ರಣಕ್ಕೆ ಮುಂದಾಗಬೇಕೆಂದು ಪಟ್ಟಣದ ಸಾರ್ವಜನಿಕರ ಒತ್ತಾಯವಾಗಿದೆ.

## ಹೃದಯರೋಗ, ಅಧಿಕ ರಕ್ತದೊತ್ತಡ ಉಚಿತ ಆರೋಗ್ಯ ತಪಾಸಣೆ

• ಉದಯವಾಹಿನಿ, ಚಿಂಚೋಳಿ


ಉದಯವಾಹಿನಿ ಚಿತ್ರ

ಪ್ರಧಾನಿ ನರೇಂದ್ರ ಮೋದಿಯವರ ಹುಟ್ಟುಹಬ್ಬದ ಅಂಗವಾಗಿ ಕಳೆದ ನಾಲ್ಕು ವರ್ಷಗಳಿಂದ ಮಧುಮೇಹ, ರಕ್ತದೊತ್ತಡ, ಹೃದಯರೋಗ ಇನ್ನಿತರ ಆರೋಗ್ಯ ತಪಾಸಣೆಗಳು ಉಚಿತವಾಗಿ ಮಾಡಲಾಗುತ್ತಿದೆ ಎಂದು ಪಿ.ಎಲ್.ಡಿ ಬ್ಯಾಂಕ್ ನಿರ್ದೇಶಕ ಶ್ರೀಹರಿ ಕಾಟಾಪೂರ ಹೇಳಿದರು.


ಪಟ್ಟಣದ ಖಾಸಗಿ ಆತ್ರೇಯ ಆಸ್ವತ್ರೆಯಲ್ಲಿ ಹಮ್ಮಿಕೊಂಡ ಪ್ರಧಾನಿ ನರೇಂದ್ರ ಮೋದಿಯವರ ಹುಟ್ಟುಹಬ್ಬದ ಅಂಗವಾಗಿ ಉಚಿತ ಆರೋಗ್ಯ ತಪಾಸಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಆತ್ರೇಯ ಆಸ್ವತ್ರೆಯಲ್ಲಿ ನಾಲ್ಕು ವರ್ಷದಿಂದ ಸತತವಾಗಿ ಪ್ರಧಾನಿ ನರೇಂದ್ರ ಮೋದಿಯವರ ಹುಟ್ಟುಹಬ್ಬದ ಅಂಗವಾಗಿ ಉಚಿತವಾಗಿ ತಪಾಸಣೆ ಮಾಡುತ್ತಿದ್ದೇವೆ. ಆತ್ರೇಯ ಆಸ್ವತ್ರೆಯಲ್ಲಿ ನುರಿತ ಹಿರಿಯ ವೈದ್ಯರು ಮತ್ತು ಎಂಬಿಬಿಎಸ್, ಎಂಡಿ ವೈದ್ಯರಿದ್ದು ಉತ್ತಮ ಗುಣಮಟ್ಟದ ಚಿಕಿತ್ಸೆ ನೀಡಿ ರೋಗಿಗಳಿಗೆ ರೋಗಗಳು ಕಡಿಮೆ ವೆಚ್ಚದಲ್ಲಿ ನಿವಾರಣೆ ಮಾಡುತ್ತಿದ್ದಾರೆ ಎಂದರು. ಸಂತೋಷ ಗಡಂತಿ ಮಾತನಾಡಿ ಇಡಿ ಕಾಟಾಪೂರ ಕುಟುಂಬವೇ ಡಾ.ಕಿಶನರಾವ ಕಾಟಾಪೂರ, ಡಾ.ಅಜಯ ಕಾಟಾಪೂರ, ಡಾ.ಶಾಲಿನಿ ಕಾಟಾಪೂರ ವೈದ್ಯ ವೃತ್ತಿಯೊಂದಿಗೆ ಸಮಾಜ ಸೇವೆಯಲ್ಲಿ ತೊಡಗಿದ್ದಾರೆ. ಬರುವ ದಿನಗಳಲ್ಲಿ ತಿಂಗಳಲ್ಲಿ ಒಂದು ದಿನ ಒಂದು ಗ್ರಾಮದಲ್ಲಿ ಉಚಿತ ತಪಾಸಣೆ ನಡೆಸಲು ತೀರ್ಮಾನ ಮಾಡಲಾಗಿದೆ ಎಂದರು.

> **ಆತ್ರೇಯ ಆಸ್ವತ್ರೆಯಲ್ಲಿ ಕಡಿಮೆ ದರದಲ್ಲಿ ಚಿಕಿತ್ಸೆ ಮಾಡಿ ಜಾತ್ಯಾತೀತ ಭಾವನೆಯಿಂದ ಎಲ್ಲಾ ರೋಗಿಗಳಿಗೆ ಸಮಾನವಾಗಿ ಚಿಕಿತ್ಸೆ ನೀಡಿ ರೋಗ ನಿವಾರಣೆ ಮಾಡುವ ಗುಣ ಕಾಟಾಪೂರ ಕುಟುಂಬಸ್ಥರಲ್ಲಿದೆ**
> - ಕೆಎಂ ಬಾರಿ, ಹಿರಿಯ ಮುಖಂಡ

ಡಾ.ಕಿಶನರಾವ ಕಾಟಾ ಪೂರ, ಡಾ.ಅಜಯ ಕಾಟಾಪೂರ, ಡಾ.ಶಾಲಿನಿ ಕಾಟಾ ಪೂರ, ಶ್ರೀಮಂತ ಕಟ್ಟಿಮನಿ, ಭೀಮಶೇಟ್ಟಿ ಮು ರುಡಾ, ಜಗನ್ನಾಥ ಅಗ್ನಿಹೋತ್ರಿ, ವಿಜಯಕುಮಾರ ಚೆಂಗಟಾ, ಶಿವಯೋಗಿ ರುಸ್ತಾಂಪುರ, ಭೀಮಶೇಟ್ಟಿ ವಕೀಲರು, ಸತೀಶರೆಡ್ಡಿ ತಾದಲಾಪೂರ, ಶ್ರೀನಿವಾಸ ಗುತ್ತೇದಾರ, ಸೇರಿದಂತೆ ಅನೇಕರಿದ್ದರು. ನಂತರ ಉಚಿತ ತಪಾಸಣೆ ಮಾಡಿಕೊಂಡವರಿಗೆ ತಪಾಸಣೆಪತ್ರ ನೀಡಿದರು.

## ಶಾಂತಿ ಕದಡುವವರ ವಿರುದ್ಧ ಕ್ರಮಕ್ಕೆ ಸಿಎಂಗೆ ಪತ್ರ: ಹೊರಟ್ಟಿ

• ಉದಯವಾಹಿನಿ, ಧಾರವಾಡ



ಸಮಾಜದ ಶಾಂತಿ ಕದಡುವವರಿಗೆ ಶಿಕ್ಷೆಯ ಗ್ಯಾರಂಟಿಯಾದರೆ ಖಂಡಿತವಾಗಿಯೂ ಶಾಂತಿ ಕಾಪಾಡಲು ಸಾಧ್ಯವಿದ್ದು, ಈ ಕುರಿತಂತೆ ಸಿಎಂಗೆ ಪತ್ರ ಬರೆಯುವುದಾಗಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಮಾಜದಲ್ಲಿ ಕೆಲವರು ಬೆಂಕಿ ಹಚ್ಚುವವರು ಇರುತ್ತಾರೆ. ಗಲಾಟೆ ಮಾ ಡುವ ಉದ್ದೇಶವನ್ನು ಇಟ್ಟುಕೊಂಡಿದ್ದಾರೆ. ಹೀಗಾಗಿ ಎಲ್ಲಿಯವರೆಗೆ ಸಮಾಜ ಘಾತುಕ ಶಕ್ತಿಗಳು ಇರುತ್ತವೆಯೋ ಅಲ್ಲಿಯವರೆಗೆ ಎಲ್ಲರೂ ಒಂದಾಗಲು ಸಾಧ್ಯವಿಲ್ಲ ಎಂದರು. ಉತ್ತರ ಪ್ರದೇಶದಲ್ಲಿ ಮಾಡಿದಂತೆ ಬಂದೋಬಸ್ತ್ ಮಾಡಬೇಕು. ಶಿಕ್ಷೆ ಆಗುವಂತಹ ಕೆಲಸ ಆಗಬೇಕು. ಆದರೆ ನಮ್ಮಲ್ಲಿ ಶಿಕ್ಷೆ ಆಗುತ್ತದೆ ಎಂಬ ಗ್ಯಾರಂಟಿಯೇ ಇಲ್ಲ. ನಾಲ್ಕೈದು ದಿನ ಜೈಲಿನಟ್ಟಿದ್ದು, ಆ ಬಳಿಕ ಬಿಡುತ್ತಾರೆ ಎಂಬ ಅಸಡ್ಡೆ. ಇದು ತಪ್ಪಬೇಕು. ಹೀಗಾಗಿ ಈ ನಿಟ್ಟಿನಲ್ಲಿ ಸರಕಾರ ಕಠಿಣ ಕ್ರಮ ಕೈಗೊಳ್ಳಬೇಕಿದೆ. ಈ ಸಂಬಂಧ ನಾನೊಂದು ಪತ್ರ ಬರೆಯುತ್ತಿರುವೆ. ಈಗಾಗಲೇ ಅರ್ಧ ಪತ್ರ ಬರೆದಿದ್ದು, ಆ ಬಳಿಕ ಸರಕಾರಕ್ಕೆ ಕಳುಹಿಸುವೆ. ಸಭಾಪತಿಯಾಗಿ ನನಗೂ ಜವಾಬ್ದಾರಿ ಇದೆ. ಹೀಗಾಗಿ ಸಿಎಂಗೆ ಪತ್ರ ಬರೆದು ಗಮನ ಸೆಳೆಯುತ್ತೇನೆ ಎಂದರು.

> **ಇಂದಿನ ರಾಜಕಾರಣದಲ್ಲಿ ಮೌಲ್ಯ ಕಡಿಮೆಯಾಗಿದೆ. ದುಡ್ಡು ಕೊಟ್ಟು ಮತ ಹಾಕಿಸಿಕೊಳ್ಳುತ್ತಾರೆ. ದುಡ್ಡು ತಗೊಂಡು ಮತ ಹಾಕುತ್ತಾರೆ. ಇದು ಇರುವವರೆಗೂ ಏನಾದರೂ ಆಗಬಹುದು. ಹೀಗಾಗಿ ನಾನು ಬಹಳ ವಿಚಾರ ಮಾಡುತ್ತಿದ್ದೇವೆ. ಶಾಸಕರಿಗೆ ತರಬೇತಿ ಕೊಡುವ ವಿಚಾರವೂ ಮಾಡುತ್ತಿದ್ದೇವೆ ಎಂದರು.**

ಈದ್ಗಾ ಮೈದಾನದಲ್ಲಿ ಗಣೇಶ ಪ್ರತಿಷ್ಠಾಪನೆ ಒಪ್ಪಿದೊಡ್ಡವರಾದರಿಗೆ ಅಷ್ಟೇ ಗೌರವ ಕೂಡ ಸಿಕ್ಕಿದೆ. ಹೀಗಾಗಿ ಸೌಹರ್ದತೆಯಿಂದ ಹೋಗುವ ಕೆಲಸ ಮಾಡಬೇಕು. ಎಲ್ಲರೂ ಕೂಡಿ ಇರಬೇಕಾಗುತ್ತದೆ. ಎಲ್ಲರೂ ಹೊಂದಿಕೊಂಡು ಹೋಗುವ ಕೆಲಸ ಆಗಬೇಕು ಎಂದರು.

## ಶರಣ್ ಸಹಿತ ಮೂವರ ವಿರುದ್ಧ ಪ್ರಕರಣ ದಾಖಲು

• ಉದಯವಾಹಿನಿ, ಬಂಟ್ವಾಳ


ಉದಯವಾಹಿನಿ ಚಿತ್ರ

ಮಿಲಾದ್ ರ್ಯಾಲಿಯ ವಿಷಯಕ್ಕೆ ಸಂಬಂಧಿಸಿ ಬಿ.ಸಿ.ರೋಡಿನಲ್ಲಿ ಉಂಟಾಗಿದ್ದ ಬಿಗುವಿನ ವಾತಾವರಣ ತಿಳಿಯಾಗಿದ್ದು, ಮಂಗಳವಾರ ಸಹಜ ಸ್ಥಿತಿ ಕಂಡು ಬಂತು. ಇದೇ ವಿಚಾರದಲ್ಲಿ ಬಂ ಟ್ವಾಳ ನಗರ ಪೊಲೀಸ್ ಠಾಣೆಯಲ್ಲಿ ಎರಡು ಪ್ರತ್ಯೇಕ ದೂರುಗಳ ಆಧಾರದಲ್ಲಿ ಮೂವರ ವಿರುದ್ಧ ಪ್ರಕರಣ ದಾಖಲಾಗಿದೆ.

ಮುಸ್ಲಿಂ ಧರ್ಮವನ್ನು ನಿಂದಿಸಿ ಕೋಮು ಪ್ರ ಚೋದನಕಾರಿ ಹೇಳಿಕೆ ನೀಡಿದ್ದಾರೆ ಎಂದು ಬಂ ಟ್ವಾಳ ನಿವಾಸಿ ಮಹಮ್ಮದ್ ರಫೀಕ್ ಕೆಳಗಿನಪೇಟೆ ನೀಡಿದ ದೂರಿನ ಆಧಾರದಲ್ಲಿ ಶರಣ್ ಪಂಪುವೆಲ್ ಹಾಗೂ ಭರತ್ ಕುಮ್ಡೇಲ್ ವಿರುದ್ಧ ಪ್ರಕರಣ ದಾಖಲಾಗಿದೆ.

ಮುಸ್ಲಿಂ ಧರ್ಮವನ್ನು ನಿಂದಿಸಿ, ಪುರಸಭಾ ಸದಸ್ಯ ಮಹಮ್ಮದ್ ಶರೀಫ್ ಅವರಿಗೆ ಕೊಲೆ ಬೆದರಿಕೆ ಹಾಕಿದ್ದಾರೆ ಎಂದು ಆರೋಪಿಸಿ ಬಂಟ್ವಾಳದ ಮಹಮ್ಮದ್ ಸಪ್ನಾಜ್ ನವಾಜ್ ನೀಡಿದ ದೂರಿನಂತೆ ಯಶೋಧರ ಕರ್ಬೆಟ್ಟು ವಿರುದ್ಧ ಪ್ರಕರಣ ದಾಖಲಾಗಿದೆ.

> **ಬಿ.ಸಿ.ರೋಡಿನಲ್ಲಿ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮುಂದುವರಿದಿದ್ದು, ದ.ಕ.ಜಿಲ್ಲಾ ಪೊಲೀಸರ ಜತೆಗೆ ಆಯಕಟ್ಟಿನ ಸ್ಥಳಗಳಲ್ಲಿ ಕೆಎಸ್ಆರ್‌ಪಿ ಪೊಲೀಸರನ್ನೂ ನಿಯೋಜಿಸಲಾಗಿತ್ತು. ಸಹಜ ಸ್ಥಿತಿಯ ವಾತಾವರಣವಿದ್ದು, ಯಾವುದೇ ಅಹಿತಕರ ಘಟನೆಗಳು ನಡೆದ ಕುರಿತು ವರದಿಯಾಗಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ.**

## ಕನ್ನಡ ಚಿತ್ರರಂಗಕ್ಕೆ ಮಾದರಿಯ ಚಿತ್ರ ನೀಡಿದ್ದು ಡಾ.ವಿಷ್ಣುವರ್ಧನ

• ಉದಯವಾಹಿನಿ, ಮುದ್ದೇಬಿಹಾಳ


ಉದಯವಾಹಿನಿ ಚಿತ್ರ

**ರಕ್ತದಾನ ಆರೋಗ್ಯ ತಪಾಸಣೆ**

ಮುದ್ದೇಬಿಹಾಳ ಪಟ್ಟಣದಲ್ಲಿ ಬುಧುವಾರ ಡಾ. ವಿಷ್ಣು ಸೇನಾ ಸಮಿತಿ ಮುದ್ದೇಬಿಹಾಳ ಹಾಗೂ ವಿಜಯಪುರ ಸಿದ್ದೇಶ್ವರ ರಕ್ತನಿಧಿ, ಜನನಿ ಮಲ್ಟಿಸ್ಪೇಶಾಲಿಟಿ ಆಸ್ವತ್ರೆ ಸಹಯೋಗದಲ್ಲಿ ಡಾ.ವಿಷ್ಣುವರ್ಧನ ಅವರ 74ನೇ ಹುಟ್ಟು ಹಬ್ಬದ ಪ್ರಯುಕ್ತ ಉಚಿತ ಆರೋಗ್ಯ ತಪಾಸಣೆ ಮಾಡಿ ರಕ್ತದಾನ ಶಿಬಿರ, ಅನ್ನಸಂತರ್ಪಣೆ ಹಮ್ಮಿಕೊಳ್ಳಲಾಗಿತ್ತು ಬಸವೇಶ್ವರ ವೃತ್ತದ ಬಳಿ ನಡೆದ ಶಿಬಿರದಲ್ಲಿ ಡಾ.ವಿಷ್ಣುವರ್ಧನ ಅಭಿಮಾನಿಗಳು ರಕ್ತದಾನ ಮಾಡಿದರು ಹಿರಿಯ ನಾಗರಿಕರು ಮಹಿಳೆಯರು ಉಚಿತ ಆರೋಗ್ಯ ತಪಾಸಣೆ ಮಾಡಿಕೊಂಡರು

ವಿಷ್ಣುವರ್ಧನ ಅವರ ಭಾವಚಿತ್ರಕ್ಕೆ ವಿಶೇಷ ಪೂಜೆ ಪುಷ್ಪಾರ್ಚನೆ ಮಾಡಿ ಮಾತನಾಡಿದ ಕಸಾಪ ತಾಲ್ಲೂಕ ಅಧ್ಯಕ್ಷ ಕಾಮರಾಜ ಬಿರಾದಾರ ವಿಭಿನ್ನ ಪಾತ್ರಗಳಲ್ಲಿನ ತಮ್ಮ ಮನೋಜ್ಞ ಅಭಿನಯ, ಹೃದಯವಂತಿಕೆ ಮತ್ತು ಅಪ್ರತಿಮ ಕಲಾ ಸೇವೆಯಿಂದ ಡಾ. ವಿಷ್ಣುವರ್ಧನ್ ರವರು ಕರು ನಾಡಿನ ಜನಮಾನಸದಲ್ಲಿ 'ಯಜಮಾನ'ನಾಗಿ ಚಿರಸ್ಥಾಯಿಯಾಗಿದ್ದರೆ. ಸ್ನೇಹಕ್ಕೆ ಸ್ನೇಹ, ಪ್ರೀತಿಗೆ ಪ್ರೀತಿಯಾಗಿದ್ದರು ಎಂದರು. ಪಿಎಸೈ ಸಂಜಯ ತಿಪ್ಪರೆಡ್ಡಿ, ಕಾಂಗ್ರೆಸ್ ಹಿರಿಯ ಮುಖಂಡ ವೈ ಹೆಚ್ ವಿಜಯಕರ, ಪ್ರಾಧ್ಯಾಪಕ ಪ್ರಕಾಶ ನರಗುಂದ ಮಾತನಾಡಿ ಡಾ.ವಿಷ್ಣುವರ್ಧನ ಕನ್ನಡ ಚಿತ್ರರಂಗದ ದಂತಕಥೆ ನಟ ಅಂತಹ ನಟನ ಹುಟ್ಟು ಹಬ್ಬದ ಪ್ರಯುಕ್ತ ರಕ್ತದಾನ ಉಚಿತ ಆರೋಗ್ಯ ತಪಾಸಣೆ ಆಯೋಜಿಸಿದ್ದು ಮಾದರಿಯಾಗಿದೆ ಎಂದರು. ಹಾಸ್ಯ ಕಲಾವಿದ ಶ್ರೀಶೈಲ್ ಹೂಗಾರ ಮುದ್ದೇಬಿಹಾಳ ಪಟ್ಟಣದಲ್ಲಿ ಬ್ಲಡ್ ಬ್ಯಾಂಕ್ ಅವಶ್ಯಕತೆ ಇದೆ ತಾಲ್ಲೂಕ ಸರಕಾರಿ ಆಸ್ವತ್ರೆ ಮೇಲ್ದರ್ಜೆಗೆ ಏರಿಸಬೇಕಿದೆ ಎಂದರು. ಕಾರ್ಯಕ್ರಮದಲ್ಲಿ ಪುರಸಭೆ ಉಪಾಧ್ಯಕ್ಷೆ ಪ್ರೀತಿ ದೇಗಿನಾಳ, ಅಮರೇಶ ಗೂಳಿ ಓಂರಾಮ ಪಟೇಲ್, ವಿರೇಶ ಢವಳಗಿ ವಿಷ್ಣು ಸೇನಾ ಸಮಿತಿಯ ತಾಲ್ಲೂಕು ಅಧ್ಯಕ್ಷ ಶಿವರಾಜ ಕಣಕಾಲ, ಸಂಜು ಕಡೂರ, ಮೌನೇಶ ಬಡಿಗೇರ, ರಾಜು ಮಡಿವಾಳರ, ಮುತ್ತು ಗೋಲಗೇರಿ, ಮಂಜುನಾಥ ಹುಣ ಚಗಿ, ಶಿವು ತಾರನಾಳ, ಸಂತೋಷ ತಾರನಾಳ, ಸಂಗಮೇಶ ಪಾಟೀಲ್, ಅಶ್ವಿನಿ ಬಿರಾದಾರ ಶರಣು ದೇಗಿನಾಳ ಸೇರಿದಂತೆ ಡಾ.ವಿಷ್ಣುವರ್ಧನ ಅಭಿಮಾ ನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

## ಬೇಡಿಕೆಗಳನ್ನು ಸರ್ಕಾರಕ್ಕೆ ತಿಳಿಸುತ್ತೇನೆ

• ಉದಯವಾಹಿನಿ, ಕುಂದಾಪುರ

ನಿಗಮಕ್ಕೆ ಹೆಚ್ಚಿನ ಅನುದಾನ ನೀಡುವುದು ಸೇರಿದಂತೆ ವಿಶ್ವಕರ್ಮ ಸಮುದಾಯದ ಅಭಿವೃದ್ಧಿಗಾಗಿ ಬೇಡಿಕೆಗಳು ಬಂದಿದ್ದು, ಸರ್ಕಾರದ ಗಮನಕ್ಕೆ ತರಲಾಗುವುದು ಎಂದು ಶಾಸಕ ಎ. ಕಿರಣ್ ಕು ಮಾರ ಕೊಡ್ಗಿ ತಿಳಿಸಿದರು. ಇಲ್ಲಿನ ತಾಲ್ಲೂಕು ಆಡಳಿತ ಸೌಧದಲ್ಲಿ ಸಮಾಜ ಕಲ್ಯಾಣ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಆಶ್ರಯದಲ್ಲಿ ಮಂಗಳವಾರ ನಡೆದ ವಿಶ್ವಕರ್ಮ ಜಯಂತಿ ಉದ್ಘಾಟಿಸಿ ಅವರು ಮಾತನಾಡಿದರು.

> **ಪ್ರಕೃತಿಯ ಸೃಷ್ಟಿಯಲ್ಲಿ ಪುರಾಣ ಕಾಲದಿಂದಲೂ ವಿಶಿಷ್ಟ ತಾಂತ್ರಿಕತೆ ಮೂಲಕ ವಾಸ್ತುಶಿಲ್ಪ ನಿರ್ಮಿಸಿದ ವಿಶ್ವಕರ್ಮರು ಸರ್ವ ಕಾಲಕ್ಕೂ ಪೂಜನೀಯರು**
> – ಎಚ್.ಎಸ್. ಶೋಭಾಲಕ್ಷ್ಮಿ, ತಹಶೀಲ್ದಾರ್

ತಾಲ್ಲೂಕು ವಿಶ್ವಬ್ರಾಹ್ಮಣ ಸಮಾಜ ಸೇವಾ ಸಂಘದ ಅಧ್ಯಕ್ಷ ವಿ. ಶ್ರೀಧರ ಆಚಾರ್ಯ ವಡೇರಹೋಬಳಿ ಮಾತನಾಡಿ, ವಯಸ್ಸಾದ ವಿಶ್ವಕರ್ಮರಿಗೆ ಪಿಂಚಣಿ ನೀಡಬೇಕು. ವಿಶ್ವಕರ್ಮ ನಿಗಮಕ್ಕೆ 3 ಕೋಟಿ ಅನುದಾನ ನೀಡಬೇಕು. ರಾಜ್ಯದಲ್ಲಿ 45 ಲಕ್ಷ ವಿಶ್ವಕರ್ಮ ಜನರಿದ್ದು, ಪಂಚ ಕುಲ ಕಸುಬುಗಳಿಗೆ ವಿಶ್ವಕರ್ಮ ವಿವಿ ಸ್ಥಾಪನೆಯಾಗಬೇಕು. 15 ಕರಕುಶಲ ತರಬೇತಿಗೆ ಪಿ.ಎಂ ವಿಶ್ವಕರ್ಮ ಯೋಜನೆ ಎಂದು ಹೆಸರಿಡುವ ಮೂಲಕ 15 ವಿಶ್ವಕರ್ಮರಿಗೆ ಗೌರವ ಸಲ್ಲಿಸಲಾಗಿದ್ದು, ಯೋಜನೆಯನ್ನು ಎಲ್ಲರೂ ಉಪಯೋಗಪಡಿಸಿಕೊಳ್ಳಬೇಕು ಎಂದರು. ಸೇವಾ ಸಂಘದ ಮಾಜಿ ಅಧ್ಯಕ್ಷ ಕೋಣಿ ನಾರಾಯಣ ಆಚಾರ್ ಮಾತನಾಡಿ, ವಿಶ್ವಕರ್ಮರಿಗೆ ತರಬೇತಿ, ಪ್ರಮಾಣ ಪತ್ರದ ವ್ಯವಸ್ಥೆ ಕರ್ನಾಟಕದಲ್ಲಿ ಇಲ್ಲದೆ ಇರುವುದರಿಂದ, ತಮಿಳುನಾಡನ್ನು ಆಶ್ರಯಿಸಬೇಕಾದ ಅನಿವಾರ್ಯತೆ ಇದೆ ಎಂದರು.

## ಬೀದರ್, ರಾಯಚೂರು ನಗರಸಭೆ ಮೇಲ್ದರ್ಜೆಗೇರಿಸಲು ಸಂಪುಟ ಒಪ್ಪಿಗೆ

• ಉದಯವಾಹಿನಿ, ಬೀದರ್


ಉದಯವಾಹಿನಿ ಚಿತ್ರ

ದಶಕಗಳಿಂದ ನೆನೆಗುದಿಗೆ ಬಿದ್ದಿದ್ದ ಜಿಲ್ಲಾಡಳಿತ ಭವನ ಮತ್ತು ಬೀದರ ನಗರಸಭೆಯನ್ನು ಮಹಾನಗರ ಪಾಲಿಕೆಯನ್ನಾಗಿ ಮೇಲ್ದರ್ಜೆಗೇರಿಸಲು ರಾಜ್ಯ ಸಚಿವ ಸಂಪುಟ ಅನುಮೋದನೆ ನೀಡಿದೆ. ಇದರಿಂದ ಬಹು ದಿನಗಳ ಬೇಡಿಕೆಗೆ ಸ್ಪಂದನೆ ಸಿಕ್ಕಂತಾಗಿದೆ. ಕಲಬುರ್ಗಿಯಲ್ಲಿ ಮಂಗಳವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಜರುಗಿದ ಸಚಿವ ಸಂಪುಟದಲ್ಲಿ ಜಿಲ್ಲೆಯ ಎರಡು ಪ್ರಮುಖ ಬೇಡಿಕೆಗಳಿಗೆ ಒಪ್ಪಿಗೆ ಸಿಗುವ ನಿರೀಕ್ಷೆ ಇತ್ತು.

ಉಸ್ತುವಾರಿ ಸಚಿವರಾದ ಈಶ್ವರ ಖಂಡ್ರೆ ಮತ್ತು ಪೌರಾಡಳಿತ ಸಚಿವ ರಹೀಮ್ ಖಾನ್ ವಿಶೇಷ ಪ್ರಯತ್ನದ ಫಲವಾಗಿ ಎರಡು ಒತ್ತಾಸೆಗಳಿಗೆ ಕೊನೆಗೂ ಸರ್ಕಾರ ಸಮ್ಮತಿ ನೀಡಿದೆ. ನಿವೇಶನದ ಗೊಂದಲದಿಂದಾಗಿ ಕಳೆದ ಒಂದು ದಶಕದಿಂದ ನೆನೆಗುದಿಗೆ ಬಿದ್ದಿರುವ ಜಿಲ್ಲಾಡಳಿತ ಭವನಕ್ಕೆ ಅನುದಾನದ ಕೊರತೆ ಎದುರಾಗಿತ್ತು. ಸದ್ಯದ ಜಿಲ್ಲಾಧಿಕಾರಿ ಕಚೇರಿ ಶಿಥಲಗೊಂಡಿದ್ದು, ಅದೇ ಸ್ಥಳದಲ್ಲೇ ಭವನ ನಿರ್ಮಾಣಕ್ಕೆ ತೀರ್ಮಾನಿಸಿ ನೀಲನಕ್ಷೆ ಸಿದ್ಧಪಡಿಸಲಾಗಿತ್ತು. ಆದರೂ ಕಟ್ಟಡ ಮಾತ್ರ ತಲೆ ಎತ್ತಿರಲಿಲ್ಲ. ಈಗ 59.80 ಕೋಟಿ ರೂ.ಗಳ ಪರಿಷ್ಕೃತ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆಗೆ ಸರ್ಕಾರ ಅಸ್ತು ನೀಡಿದೆ. ಶೀಘ್ರದಲ್ಲಿ ಟೆಂಡರ್ ಪ್ರಕ್ರಿಯೆ ಪೂರ್ಣಗೊಳಿಸಿ, ಕಾಮಗಾರಿಯನ್ನು ಆರಂಭಿಸಬೇಕಿದೆ.

ಬಿಜೆಪಿ ಸರ್ಕಾರ ತನ್ನ ಬಜೆಟ್‌ನಲ್ಲಿ ನಗರಸಭೆಯನ್ನು ಮಹಾನಗರ ಪಾಲಿಕೆಯಾಗಿ ಘೋಷಿಸಲಾಗಿತ್ತು. ಆದರೆ, ತಾಂತ್ರಿಕ ಕಾರಣ, ಷರತ್ತುಗಳ ಕಾರಣದಿಂದ ಅನುಷ್ಠಾನಕ್ಕೆ ವಿಳಂಬವಾಗಿತ್ತು.

ಪೌರಾಡಳಿತ ಸಚಿವರ ತವರು ಕ್ಷೇತ್ರದಲ್ಲೇ ಹಿನ್ನಡೆಗೆ ಭಾರಿ ಆಕ್ರೋಶ ವ್ಯಕ್ತವಾಗಿತ್ತು. ಪಾಲಿಕೆಗೆ ಬೇಕಾದ ಎಲ್ಲಾ ಷರತ್ತುಗಳನ್ನು ಪೂರೈಸಿದ್ದ ಬೀದರ ನಗರಸಭೆ, ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿತ್ತು. ಈಗ ಸ್ಥಳೀಯ ಸಂಸ್ಥೆಯನ್ನು ಮೇಲ್ದರ್ಜೆಗೇರಿಸಲು ನಿರ್ಣಯ ಕೈಗೊಳ್ಳಲಾಗಿದೆ.

## ಸ್ವಚ್ಛತಾ ಹೀ ಸೇವಾ ಪಾಕ್ಷಿಕ ಕಾರ್ಯಕ್ರಮ ಉದ್ಘಾಟನೆ

• ಉದಯವಾಹಿನಿ, ಉಡುಪಿ

ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳುವುದು ನಮ್ಮೆಲ್ಲರ ಆದ್ಯ ಕರ್ತವ್ಯ ಹಾಗೂ ಜವಾಬ್ದಾರಿಯಾಗಿದೆ. ಇದರಿಂದ ಉತ್ತಮ ಆರೋಗ್ಯವನ್ನು ಕಾಯ್ದುಕೊಳ್ಳಲು ಸಾಧ್ಯವಾಗುತ್ತದೆ ಎಂದು ಜಿಲ್ಲಾಧಿಕಾರಿ ಕೆ. ವಿದ್ಯಾಕುಮಾರಿ ಹೇಳಿದರು. ಸ್ವಭಾವ ಸ್ವಚ್ಛತೆ–ಸಂಸ್ಕಾರ ಸ್ವಚ್ಛತೆ ಎಂಬ ಧ್ಯೇಯ ವಾಕ್ಯದಡಿ ಉಡುಪಿ ನಗರಸಭೆ ವತಿಯಿಂದ ಮಲ್ಪೆ ವಿಠೋಬಾ ಭಜನಾ ಮಂದಿರದ ಬಳಿ ಮಂಗಳವಾರ ಹಮ್ಮಿಕೊಂಡಿದ್ದ ಸ್ವಚ್ಛತಾ ಹೀ ಸೇವಾ ಪಾಕ್ಷಿಕ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಪ್ರತಿಯೊಬ್ಬರು ಸುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಂಡಾಗ ಇಡೀ ನಗರ ಸ್ವಚ್ಛವಾಗುತ್ತದೆ. ಈ ಮೂಲಕ ಇಡೀ ಜಿಲ್ಲೆಯನ್ನು ಸ್ವಚ್ಛವಾಗಿಟ್ಟುಕೊಳ್ಳಲು ಸಾಧ್ಯವಾಗಲಿದೆ ಎಂದರು.

ವಿದ್ಯಾರ್ಥಿಗಳು ತಾವು ಬಳಸುವ ವಸ್ತುಗಳನ್ನು ಎಲ್ಲೆಂದರಲ್ಲಿ ಎಸೆಯಬಾರದು. ತಮ್ಮ ಮನೆ, ಶಾಲೆಯ ಸುತ್ತಲಿನ ಪರಿಸರ ಸ್ವಚ್ಛವಾಗಿಟ್ಟುಕೊಳ್ಳಬೇಕು. ಇದು ಒಂದು ದಿನದ ಕಾರ್ಯಕ್ರಮಕ್ಕೆ ಸೀಮಿತವಾಗಿರದೇ ಇದನ್ನು ದಿನನಿತ್ಯ, ನಿರಂತರವಾಗಿ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಉಡುಪಿ ನಗರಸಭೆಯ ಅಧ್ಯಕ್ಷ ಪ್ರಭಾಕರ ಪೂಜಾರಿ ಅವರು ಅಧ್ಯಕ್ಷತೆ ವಹಿಸಿದ್ದರು. ನಗರಸಭೆಯ ಪರಿಸರ ಎಂಜಿನಿಯರ್ ಸ್ನೇಹಾ ಕೆ.ಎಸ್. ಅವರು ವಿದ್ಯಾರ್ಥಿಗಳಿಗೆ ಸ್ವಚ್ಛತೆಯ ಮಹತ್ವ ಸಾರುವ ಪ್ರಮಾಣ ವಚನವನ್ನು ಬೋಧಿಸಿದರು.

# ಸಾಮಾಜಿಕ ಜಾಲತಾಣದಿಂದಾಗಿ ಲೈಂಗಿಕ ದೌರ್ಜನ್ಯ ಹೆಚ್ಚಳ

## ಹದಿಹರೆಯದವರ ಮೇಲೆ ಲೈಂಗಿಕ ದೌರ್ಜನ್ಯ, ಪೋಕ್ಸೊ ಪ್ರಕರಣಗಳು ಹೆಚ್ಚಾಗುತ್ತಿವೆ: ಡಾ. ತಿಪ್ಪೇಸ್ವಾಮಿ ಕೆ.ಟಿ.

• ಉದಯವಾಹಿನಿ, ಕುಂದಾಪುರ


ಉದಯವಾಹಿನಿ ಚಿತ್ರ

ಸಾಮಾಜಿಕ ಜಾಲತಾಣ ಬಳಕೆಯಿಂದಾಗಿ ಹದಿಹರೆಯದವರ ಮೇಲೆ ಲೈಂಗಿಕ ದೌರ್ಜನ್ಯ, ಪೋಕ್ಸೊ ಪ್ರಕರಣಗಳು ಹೆಚ್ಚಾಗುತ್ತಿವೆ ಎಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣ ಆಯೋಗ ಸದಸ್ಯ ಡಾ. ತಿಪ್ಪೇಸ್ವಾಮಿ ಕೆ.ಟಿ. ಹೇಳಿದರು. ಅವರು ಇಲ್ಲಿನ ತಾ.ಪಂ. ನಲ್ಲಿ ವಿವಿಧ ಇಲಾಖಾಧಿಕಾರಿಗಳ ಸಭೆ ನಡೆಸಿ ಶಾಲಾ, ಕಾಲೇಜು, ಹಾಸ್ಟೆಲ್‌ಗಳಲ್ಲಿ ಈ ಬಗ್ಗೆ ತಿಳಿವಳಿಕೆ ಮೂಡಿಸಿ ಮಕ್ಕಳ ಸಹಾಯವಾಣಿ ದೂರವಾಣಿ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸಬೇಕು.

ಸಹಾಯವಾಣಿ ದೂರವಾಣಿ ಸಂಖ್ಯೆಯನ್ನು ಪ್ರದರ್ಶಿಸುವುದರ ಜತೆಗೆ ಯಾಕೆ, ಹೇಗೆ, ಯಾರು, ಯಾವಾಗ ಸಂಪರ್ಕಿಸಬಹುದು ಎಂಬುದನ್ನು ಸ್ಪಷ್ಟವಾಗಿ ನಮೂದಿಸಿ ಮಕ್ಕಳು ಕರೆ ಮಾಡುವಂತೆ ಜಾಗೃತಿ ಮೂಡಿಸಬೇಕು. ದೂರು ಪೆಟ್ಟಿಗೆಗಳನ್ನು ಇಟ್ಟು ಸಲಹೆ, ದೂರುಗಳಿದ್ದರೆ ಧೈರ್ಯವಾಗಿ ಪೆಟ್ಟಿಗೆಗೆ ಹಾಕುವಂತೆ ಮಾಡಬೇಕು. ಶಾಲೆ, ಮೈದಾನ, ಹಾಸ್ಟೆಲ್ ಪಕ್ಕದಲ್ಲಿ ವಿದ್ಯುತ್ ತಂತಿಗಳು ಹಾದು ಹೋಗದಂತೆ ಮಾಡಬೇಕು. ಇದ್ದರೆ ತೆರವು ಮಾಡಬೇಕು ಎಂದರು.

ಎಲ್ಲಾ ಶಾಲೆ, ಕಾಲೇಜುಗಳಲ್ಲಿ ಮಕ್ಕಳ ಕಲ್ಯಾಣ ಸಮಿತಿ ರಚನೆಯಾಗಬೇಕು. ಪಂಚಾಯತ್‌ಗಳಲ್ಲಿ ಮಕ್ಕಳ ಗ್ರಾಮಸಭೆಯ ಪ್ರತ್ಯೇಕ ಕಡತ ಇರಬೇಕು. ಮಕ್ಕಳ ರಕ್ಷಣೆ ಬೇರೆ, ಮಕ್ಕಳ ಹಕ್ಕುಗಳ ರಕ್ಷಣೆ ಬೇರೆ. ಪ್ರತಿ ತಿಂಗಳೂ ತಹಶೀಲ್ದಾರ್ ಇದರ ಬಗ್ಗೆ ಸಭೆ ನಡೆಸಬೇಕು, 3 ತಿಂಗಳಿಗೊಮ್ಮೆ ಡಿಸಿ ಸಭೆ ನಡೆಸಬೇಕು. ತಳಹಂತದಲ್ಲಿ ಯಾವ ಮಟ್ಟದಲ್ಲಿ ಕಾರ್ಯ ನಿರ್ವಹಣೆಯಾಗುತ್ತಿದೆ ಎಂದು ಪರಿಶೀಲಿಸಲು ರಾಜ್ಯದ ಆಯ್ದ ತಾಲ್ಲೂಕುಗಳಲ್ಲಿ ಸಭೆ ನಡೆಸಲಾಗುತ್ತಿದೆ. ವಂಡ್ಸೆ, ಕುಂದಾಪುರ ಜೂನಿ ಯರ್ ಕಾಲೇಜಿಗೆ ಭೇಟಿ ನೀಡಿದಾಗ ಅನೇಕ ಲೋಪದೋಷಗಳು ಕಂಡುಬಂದಿವೆ ಎಂದರು. ನಗರದಲ್ಲಿರುವ ಕಾಲೇಜಿನಲ್ಲೇ ಸಮಿತಿ ಇಲ್ಲ, ಸಹಾಯ ದೂರವಾಣಿ ಸಂಖ್ಯೆ ಇಲ್ಲ ಎಂದಾದರೆ ಗ್ರಾಮಾಂತರದ ಸ್ಥಿತಿ ಹೇಗಿರಬಹುದು ಎಂದ ಅವರು, ಇಲಾಖೆಗಳು ಸಮನ್ವಯದಿಂದ ಕಾರ್ಯ ನಿರ್ವಹಿಸಬೇಕು ಎಂದರು. ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ರಾಘವೇಂದ್ರ ವರ್ಣೇಕರ್, ಹಾಸ್ಟೆಲ್‌ಗಳಲ್ಲಿ ಸಹಾಯವಾಣಿ ನಂಬರ್ ಹಾಕಲಾಗಿದೆ. ಟ್ಯೂಷನ್ ವ್ಯವಸ್ಥೆ ಮಾಡಲಾಗಿದೆ. ಸಲಹೆ ಪೆಟ್ಟಿಗೆ ಇಡಲಾಗಿದೆ ಎಂದರು.

> **ರಾಜ್ಯದಲ್ಲಿ ಕಳೆದ ವರ್ಷ ಸಣ್ಣ ವಯಸ್ಸಿನ 1.3 ಲಕ್ಷ ಮಂದಿ ಗರ್ಭಿಣಿಯರಾಗಿದ್ದು ಉಡುಪಿ ಜಿಲ್ಲೆ 11 ಪ್ರಕರಣ ದಾಖಲಿಸಿದೆ. ಅದಕ್ಕೂ ಹಿಂದಿನ ವರ್ಷ ಉಡುಪಿಯಲ್ಲಿ 86 ಪ್ರಕರಣಗಳಾಗಿದ್ದವು**
> –ಡಾ. ತಿಪ್ಪೇಸ್ವಾಮಿ ಕೆ.ಟಿ., ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣ ಆಯೋಗ ಸದಸ್ಯ

### 7 ಮಂದಿ ಮರಳಿ ಶಾಲೆಗೆ

**ಶಿಕ್ಷಣಾಧಿಕಾರಿ ಶೋಭಾ ಶೆಟ್ಟಿ, ಶಾಲೆಯಿಂದ ಹೊರಗುಳಿದ 23 ಮಕ್ಕಳಿದ್ದು 7 ಮಂದಿ ಮರಳಿ ಶಾಲೆಗೆ ಬರುತ್ತಿದ್ದಾರೆ. 4 ಮಕ್ಕಳನ್ನು ಮಕ್ಕಳ ಕಲ್ಯಾಣ ಸಮಿತಿಗೆ ಹಸ್ತಾಂತರಿ ಸಲಾಗಿದೆ. 1 ವಲಸೆ ಮಗುವಾಗಿದ್ದು ಅಲ್ಲಿನ ಶಿಕ್ಷಣಾಧಿಕಾರಿಗೆ ಮಾಹಿತಿ ನೀಡಲಾಗಿದೆ. 3 ಜನರಿಗೆ ಅನಾರೋಗ್ಯವಿದೆ. ಪ್ರತೀ ಶಾಲೆಗಳಲ್ಲೂ ಮಕ್ಕಳ ಹಕ್ಕುಗಳ ರಕ್ಷಣ ಸಮಿತಿ ರಚಿಸಿ ಸಭೆ ನಡೆಸಲು ಸೂಚಿಸಲಾಗಿದೆ ಎಂದರು.**

ತಹಶೀಲ್ದಾರ್ ಹಾಗೂ ಹಿರಿಯ ಅಧಿಕಾರಿಗಳು ಹಾಸ್ಟೆಲ್‌ಗಳಿಗೆ ತಿಂಗಳಿಗೊಮ್ಮೆ ದಿಢೀರ್ ಭೇಟಿ ನೀಡಬೇಕೆಂದು ಇದೆ ಎಂದು ತಿಪ್ಪೇಸ್ವಾಮಿ ಹೇಳಿದರು. 1 ತಾಯಿ ಮರಣ ಪ್ರಕರಣ ದಾಖಲಾಗಿದೆ. ಗಂಡಾಂತರಕಾರಿ ಹೆರಿಗೆ ಎಂದು ಗುರುತಿಸಲ್ಪಟ್ಟದ್ದನ್ನು 108 ಆಯಂಬುಲೆನ್ಸ್‌ಗೆ ಮಾಹಿತಿ ನೀಡಲಾಗಿರುತ್ತದೆ. ಆಶಾ ಕಾರ್ಯಕರ್ತೆಯರು ನಿಗಾ ಇಟ್ಟಿರುತ್ತಾರೆ. ಶೇ. 30 ಪ್ರಕರಣಗಳು ಇಂತಹ ವ್ಯಾಪ್ತಿಯಲ್ಲಿದೆ. ಶೇ. 60 ಸಿಸೇರಿಯನ್ ಪ್ರಕರಣಗಳು ಇರುತ್ತವೆ. 35ರ ಅನಂತರ ಗರ್ಭಿಣಿಯಾಗುವುದು, ತಡವಾಗಿ ಮದುವೆಯಾಗಿರುವುದು, ಚಿಕಿತ್ಸೆ ಮೂಲಕ ಗರ್ಭಿಣಿಯಾಗಿರುವ ಕಾರಣದಿಂದ ಗಂಡಾಂತರಕಾರಿ ಹೆರಿಗೆ ಕೇಸ್ ಕಂಡುಬರುತ್ತಿದ್ದು ಇಂತಹ ಪ್ರಕರಣಗಳ ಕುರಿತಾಗಿಯೂ ನಿಗಾ ಇಡಲಾಗುತ್ತದೆ ಎಂದರು. ಸ್ನೇಹ ಕ್ಲಿನಿಕ್ ಮೂಲಕ ಕೌನ್ಸಲಿಂಗ್ ಕೂಡ ಲಭ್ಯವಿದೆ. ಕುಂದಾಪುರ, ಬೈಂದೂರಿನಲ್ಲಿ ಕೌನ್ಸಿಲರ್‌ಗಳು ಲಭ್ಯರಿದ್ದಾರೆ ಎಂದರು.

## ಮಿನಿ ನ್ಯೂಸ್

### ಹುಚ್ಚು ನಾಯಿ ಕಡಿತ; ಜಾನುವಾರು, ಇಬ್ಬರಿಗೆ ಗಾಯ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಸಿರುಗುಪ್ಪ

ತಾಲ್ಲೂಕಿನ ಸಿರಿಗೇರಿ ಗ್ರಾಮದ 4 ನೇ ವಾರ್ಡ್‌ನ ಹುಚ್ಚೇಶ್ವರ ಬಡಾವಣೆಯಲ್ಲಿ ಬುಧವಾರದಂದು ಏಕಾಏಕಿ ಹುಚ್ಚು ನಾಯಿ ಕಡಿತದಿಂದ ಪಟ್ಟಣಶೆಟ್ಟಿ ಅಂಬರೇಶ್ ಸೇರಿದ 2 ಎತ್ತು, ಎಮ್ಮೆ ಕರ, ಆಕಳು ಗೆ ಕಚ್ಚಿ ರಕ್ತ ಸಿಕ್ಕ ಸಿಕ್ಕಲ್ಲಿ ಚಲ್ಲಿದ ದೃಶ್ಯ ಕಂಡುಬಂತು. ಇಬ್ಬರಿಗೆ ಗಾಯಗೊಂಡಿದ್ದಾರೆ. ಕಚ್ಚಿ ಮನೆಯೊಂದರಲ್ಲಿ ಅವಿತುಕೊಂಡಿದ್ದ ಹುಚ್ಚು ನಾಯಿಯನ್ನು ಸಾರ್ವಜನಿಕರು ಬಡಿದು ಹಾಕಿದ್ದಾರೆ. ನರಸಮ್ಮ ಎನ್ನುವ ವರು ಸ್ಥಳೀಯ ಸರ್ಕಾರಿ ಆಸ್ವತ್ರೆಯಲ್ಲಿ ಚಿಕಿತ್ಸೆ ಪಡೆದರೆ, ಲಿಂಗನ ಗೌಡ ಎನ್ನುವವರು ವಿಮ್ಸ್ ಆಸ್ವತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಎಂದು ತಿಳಿದು ಬಂದಿದೆ. ಸ್ಥಳಕ್ಕೆ ಪಶು ಚಿಕಿತ್ಸಕ ದೇವೇಂದ್ರಪ್ಪ ಜಾನುವಾರುಗಳಿಗೆ ಲಸಿಕೆ ನೀಡಿದ್ದಾರೆ.

ಸಂಬಂಧಪಟ್ಟ ಪಶು ಚಿಕಿತ್ಸಾಲಯ , ಗ್ರಾಮ ಆಡಳಿತವು ಈ ತರದ ಘಟನೆ ಆಗೋದನ್ನ ತಡೆಯಬೇಕು. ಮುಂಜಾಗ್ರತ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಸಾರ್ವಜನಿಕರು ಮನವಿ ಮಾಡಿಕೊಂಡರು.

### ಪಂಚಮಸಾಲಿ ವಕೀಲರ ಪರಿಷತ್ತಿನಿಂದ ಬೆಳಗಾವಿಯಲ್ಲಿ ಬೃಹತ್ ಪ್ರತಿಭಟನೆ

• ಉದಯವಾಹಿನಿ, ಹುಬ್ಬಳ್ಳಿ

ಪಂಚಮಸಾಲಿ ಸಮಾಜಕ್ಕೆ 2ಎ ಮೀಸಲಾತಿ ನೀಡುವಲ್ಲಿ ಸರಕಾರ ವಿಫಲವಾಗಿದ್ದು, ಇದನ್ನು ಖಂಡಿಸಿ ಸೆ.22 ರಂದು ಸಮಾಜದ ವಕೀಲರ ಪರಿಷತ್ತಿನಿಂದ ಬೆಳಗಾವಿಯಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಕೂಡಲಸಂಗಮ ಪಂಚಮಸಾಲಿ ಪೀಠದ ಶ್ರೀ ಜಯಮೃತ್ಯುಂಜಯ ಸ್ವಾಮೀಜಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಬೆಳಿಗ್ಗೆ 10 ಗಂಟೆಗೆ ಗಾಂಧಿ ಭವನದಲ್ಲಿ ಬೃಹತ್ ಸಮಾವೇಶ ನಡೆಸಿ ನಂತರ ಕಿತ್ತೂರು ಚನ್ನಮ್ಮ ವೃತ್ತದಲ್ಲಿ ಪ್ರತಿಭಟನೆ ನಡೆಸಲಾಗುವುದು. ಇದರೊಂದಿಗೆ ಲಿಂಗಾಯತ ಉಪಸಮಾಜಗಳಿಗೆ ಕೇಂದ್ರದಲ್ಲಿ ಒಬಿಸಿ ಮೀಸಲಾತಿ ಕಲ್ಪಿಸಲಾಗುವುದು ಎಂದು ತಿಳಿಸಿದರು. ಸರಕಾರದ ನಿರ್ಲಕ್ಷ್ಯ, ಸಮಾಜದ ಶಾಸಕರು ಧ್ವನಿ ಎತ್ತದಿರುವುದು ಏಳನೇ ಹಂತದ ಹೋರಾಟವಾಗಿ ಸಮಾಜದ ವಕೀಲರ ಮೂಲಕ ಹೋರಾಟಕ್ಕೆ ಮುಂದಾಗಿದ್ದೇವೆ. ಶೀಘ್ರದಲ್ಲಿಯೇ ಮೀಸಲಾತಿ ಹೋರಾಟಕ್ಕೆ ವಿದ್ಯಾರ್ಥಿಗಳು ಕೂಡ ಪಾಲ್ಗೊಳ್ಳಲಿದ್ದಾರೆ. ವಿದ್ಯಾರ್ಥಿಗಳ ಹೋರಾಟಕ್ಕೆ ನವಲಗುಂದದಲ್ಲಿ ಚಾಲನೆ ನೀಡಲಾಗುವುದು ಎಂದು ತಿಳಿಸಿದರು.

### ಪಾಕ್ ಧ್ವಜ ಹಾರಾಡುವ ವಾಟ್ಸಪ್ ಸ್ಟೇಟಸ್: ಯುವಕ ಪೊಲೀಸರ ವಶಕ್ಕೆ

• ಉದಯವಾಹಿನಿ, ಕಲಾದಗಿ

ಮುಸ್ಲಿಂ ಯುವಕ ತನ್ನ ವಾಟ್ಸಪ್ ಸ್ಟೇಟಸ್ ನಲ್ಲಿ ಪಾಕ್ ಧ್ವಜ ಹಾರಾಡುವ ರೀಲ್ಸನ್ನು ಸ್ಟೇಟಸ್ ಇಟ್ಟಕೊಂಡಿದ್ದ ಈತನನ್ನು ಕಲಾದಗಿ ಪೊಲೀಸರು ವಶಕ್ಕೆ ಪಡೆದು ವಿಚಾರಣೆ ಮಾಡಿ ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಗ್ರಾಮದ ಯುವಕ ತೌಶಿಪ್ ಮೊಹಮ್ಮದ್ ಮೆಹತರ್(21) ಎಂಬಾತನೇ ಈ ಕೃತ್ಯ ಮಾಡಿದ ಯುವಕ. ಈದ್ ಮಿಲಾದ ಹಬ್ಬದ ದಿನ ರಾತ್ರಿ 11.27ಕ್ಕೆ ತನ್ನ ವಾಟ್ಸಪ್ ಸ್ಟೇಟಸ್‌ನಲ್ಲಿ ಕಪ್ಪು ಕಾರುಗಳ ಮೇಲೆ ಪಾಕ್ ಧ್ವಜ ಹಾರಾಡುತ್ತಿರುವ ವಿಡಿಯೋ ರೀಲ್ಸ್ ಸ್ಟೇಟಸನ್ನು ಹಾಕಿಕೊಂಡಿದ್ದ, ಇದನ್ನು ಗಮನಿಸಿದ ಹಿಂದೂ ಯುವಕರು ಪೊಲೀಸರಿಗೆ ಮಾಹಿತಿ ನೀಡಿದ್ದು, ಈ ನಿಟ್ಟಿನಲ್ಲಿ ಮಾಹಿತಿ ಪಡೆದ ಠಾಣಾ ಪಿಎಸೈ ಚಂದ್ರಶೇಖರ ಹೇರಕಲ್ ನೇತೃತ್ವದ ಪೊಲೀಸ್ ತಂಡ ಮಂಗಳವಾರ ಮುಂಜಾನೆ ತೌಶಿಪ್ ಮೆಹತರ ನನ್ನು ಪೊಲೀಸರು ವಶಕ್ಕೆ ಪಡೆದು ಪ್ರಕರಣ ದಾಖಲಿಸಿಕೊಂಡಿದ್ದಾರೆ.

### ಸಂಗೊಳ್ಳಿ ರಾಯಣ್ಣ ಪ್ರತಿಮೆ ವಿರೂಪ: ಒಬ್ಬರು ವಶಕ್ಕೆ

• ಉದಯವಾಹಿನಿ, ನವಲಗುಂದ

ತಾಲ್ಲೂಕಿನ ಅಳಗವಾಡಿ ಗ್ರಾಮದಲ್ಲಿ ಸಂಗೊಳ್ಳಿ ರಾಯಣ್ಣ ಪ್ರತಿಮೆಯನ್ನು ಕಿಡಿಗೇಡಿಗಳು ವಿರೂಪಗೊಳಿಸಿದ್ದಾರೆ. ರಾಯಣ್ಣ ಪ್ರತಿಮೆಯ ಬಲಗೈ ವಿರೂಪಗೊಳಿಸಲಾಗಿದೆ. ಗ್ರಾಮಸ್ಥರು ಇದನ್ನು ಗಮನಿಸಿ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. 'ಕೃತ್ಯಕ್ಕೆ ಸಂಬಂಧಿಸಿದಂತೆ ಅಶೋಕ ಕಾಲವಾಡ (44) ಎಂಬಾತನನ್ನು ವಶಕ್ಕೆ ಪಡೆಯಲಾಗಿದೆ' ಎಂದು ಪೊಲೀಸರು ತಿಳಿಸಿದ್ದಾರೆ. ಬಟ್ಟೆ ಸುತ್ತಿ ಪ್ರತಿಮೆಯನ್ನು ಮುಚ್ಚಲಾಗಿದೆ. ಸ್ಥಳದಲ್ಲಿ ಪೊಲೀಸರನ್ನು ನಿಯೋಜಿಸಲಾಗಿದೆ.

### 43 ಕ್ರಿಟಿಕಲ್ ಕೇರ್ ಸೆಂಟರ್‌ಗಳು ಆರಂಭ: ದಿನೇಶ್ ಆರ್.ಗುಂಡೂರಾವ್

• ಉದಯವಾಹಿನಿ, ಕಲಬುರಗಿ


ಉದಯವಾಹಿನಿ ಚಿತ್ರ

ಗ್ರಾಮೀಣ ಪ್ರದೇಶಗಳಲ್ಲಿ ಆರೈಕೆಯ ಗುಣಮಟ್ಟ ಹೆಚ್ಚಿಸಿ ಅತ್ಯಾಧುನಿಕ ತಾಂತ್ರಿಕ ಕೌಶಲದೊಂದಿಗೆ ರಾಜ್ಯದಲ್ಲಿ 43 ಕ್ರಿಟಿಕಲ್ ಕೇರ್ ಸೆಂಟರ್‌ಗಳು ಆರಂಭಿಸಲಾಗಿದ್ದು, ಮುಂದಿನ ದಿನಗಳಲ್ಲಿ ರಾಜ್ಯಾದ್ಯಂತ ವಿಸ್ತರಣೆ ಮಾಡಲಾಗುವುದು' ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ದಿನೇಶ್ ಆರ್.ಗುಂಡೂರಾವ್ ಹೇಳಿದರು.

ಬೆಂಗಳೂರಿನ ವಿಕ್ಟೋರಿಯಾ ಆಸ್ವತ್ರೆಯಲ್ಲಿ ಸಮಗ್ರ ಕ್ರಿಟಿಕಲ್ ಕೇರ್ ತರಬೇತಿ ಶಿಬಿರಕ್ಕೆ ವಿಡಿಯೋ ಕಾನ್ಫರೆನ್ಸ್ ಮೂಲಕ ನಗರದಲ್ಲಿ ಚಾಲನೆ ನೀಡಿ ಮಾತನಾಡಿದ ಅವರು, 'ಇಂಡಿಯನ್ ಸೊಸೈಟಿ ಆಫ್ ಕ್ರಿಟಿಕಲ್ ಕೇರ್ ಮೆಡಿಸಿನ್ ಮತ್ತು ಇಂಡಿಯನ್ ರೆಸಸಿಟೇಶನ್ ಕೌನ್ಸಿಲ್ ಫೆಡರೇಷನ್ ಪಾಲುದಾರ ಸಂಸ್ಥೆಗಳ ಸಹಯೋಗದಲ್ಲಿ ಸಮಗ್ರ ತರಬೇತಿ ಶಿಬಿರ ಐದು ದಿನಗಳ ಕಾಲ ನಡೆಯುತ್ತಿದೆ' ಎಂದು ಹೇಳಿದರು. ವೈದ್ಯರು, ದಾದಿಯರು ತರಬೇತಿ ಪಡೆದು ವೆಂಟಿಲೇಟರ್ ನಿರ್ವಹಣೆ, ಸೆಪ್ಸಿಸ್ ಗುರುತಿಸುವಿಕೆ ಮತ್ತು ನಿರ್ವಹಣೆ, ಆಘಾತದಂತಹ ಸಂದರ್ಭದಲ್ಲಿ ಜೀವ ಉಳಿಸುವ ನಿಟ್ಟಿನಲ್ಲಿ ಕೈಗೊಳ್ಳಬೇಕಾದ ಕ್ರಮಗಳನ್ನು ತಿಳಿದುಕೊಂಡು ತಾಂತ್ರಿಕ ಕೌಶಲ ವೃದ್ಧಿಸಿಕೊಂಡು ರೋಗಿಗಳಿಗೆ ಉತ್ತಮ ಆರೋಗ್ಯ ಸೇವೆ ನೀಡಲು ಸನ್ನದ್ಧರಾಗಬೇಕು' ಎಂದು ಹೇಳಿದರು.

ಗ್ರಾಮೀಣ ಮತ್ತು ತಾಲ್ಲೂಕು ಆಸ್ವತ್ರೆಗಳಲ್ಲಿ ರೋಗಿಗಳ ಆರೋಗ್ಯ ಸುಧಾರಿಸುವುದು ಈ ತರಬೇತಿಯ ನಿರ್ಣಾಯಕ ಗುರಿಗಳಲ್ಲಿ ಒಂದಾಗಿದೆ. ಆರಂಭಿಕ ರೋಗ ನಿರ್ಣಯ ಮತ್ತು ಸೂಕ್ತ ವಾಗಿ ಮಧ್ಯಪ್ರವೇಶಿಸುವ ಕೌಶಲಗಳೊಂದಿಗೆ ವೈದ್ಯರನ್ನು ಸಜ್ಜುಗೊಳಿಸುವ ಮೂಲಕ ಮರಣ ಪ್ರಮಾಣ ಮತ್ತು ಅನಾರೋಗ್ಯವನ್ನು ಕಡಿಮೆ ಮಾಡಬಹುದು' ಎಂದರು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 01:30 ರಿಂದ 03:00 |
| ಗುಳಿಕ ಕಾಲ | ಬೆಳಿಗ್ಗೆ | 09:00 ರಿಂದ 10:30 |
| ಯಮಗಂಡ ಕಾಲ | ಬೆಳಿಗ್ಗೆ | 06:00 ರಿಂದ 07:30 |

**ಮೇಷ:** ಧ್ಯಾನ ಮತ್ತು ಯೋಗವನ್ನು ಆಧ್ಯಾತ್ಮಿಕ ಹಾಗೂ ಭೌತಿಕ ಲಾಭಗಳಿಗಾಗಿ ಆಚರಿಸಬೇಕು. ಇಂದು ಸಾಲಗಾರನು ನಿಮಗೆ ಹೇಳದೆ ನಿಮ್ಮ ಖಾತೆಗೆ ಹಣವನ್ನು ಸೇರಿಸಬಹುದು.

**ವೃಷಭ:** ಮನರಂಜನೆ ಇಡೀ ಕುಟುಂಬವನ್ನು ಒಳಗೊಂಡಿದ್ದಲ್ಲಿ ಅದು ಮೋಜಿನ ವಿಷಯವಾಗಿರುತ್ತದೆ. ನಿಮ್ಮ ಗೆಳತಿಯ ಜೊತೆ ಅಸಭ್ಯವಾಗಿ ನಡೆದುಕೊಳ್ಳಬೇಡಿ. ಕೆಲಸದ ನಿಧಾನಗತಿ ಸ್ವಲ್ಪ ಒತ್ತಡ ತೆರೆದಿಡುತ್ತದೆ.

**ಮಿಥುನ:** ಧಾರ್ಮಿಕ ಭಾವನೆಗಳನ್ನು ಉದ್ಭವಿಸಿ ಒಬ್ಬ ಪವಿತ್ರ ವ್ಯಕ್ತಿಯಿಂದ ದೈವಿಕ ಜ್ಞಾನವನ್ನು ಪಡೆಯಲು ನೀವು ಒಂದು ಧಾರ್ಮಿಕ ಸ್ಥಳಕ್ಕೆ ಭೇಟಿ ನೀಡುವಂತೆ ಮಾಡುತ್ತವೆ.

**ಕರ್ಕಾಟಕ:** ಸ್ನೇಹಿತರು ಇಂದು ರಾತ್ರಿ ರೋಮಾಂಚಕವಾದದ್ದನ್ನೇನಾದರೂ ಯೋಜಿಸಿ ನಿಮಗೆ ಆನಂದ ತರುತ್ತಾರೆ. ಇಂದು ನೀವು ನಿಮ್ಮ ಸ್ನೇಹಿತನ ಅನುಪಸ್ಥಿತಿಯಲ್ಲಿ ಅವರ ಸುಗಂಧವನ್ನು ಅನುಭವಿಸುತ್ತೀರಿ.

**ಸಿಂಹ:** ಮನೆಯ ಅಗತ್ಯಗಳನ್ನು ನೋಡುತ್ತಾ, ಇಂದು ನೀವು ನಿಮ್ಮ ಜೀವನ ಸಂಗಾತಿಯೊಂದಿಗೆ ಯಾವುದೇ ಅಮೂಲ್ಯ ವಸ್ತುವನ್ನು ಖರೀದಿಸಬಹುದು, ಇದರಿಂದ ಆರ್ಥಿಕ ಪರಿಸ್ಥಿತಿ ಸ್ವಲ್ಪ ತೊಂದರೆಗೊಳಗಾಗಬಹುದು.

**ಕನ್ಯಾ:** ನಿಮಗೇನು ಒಳ್ಳೆಯದೆಂದು ನಿಮಗೆ ಮಾತ್ರ ಗೊತ್ತು – ಆದ್ದರಿಂದ ಧೃಢವಾಗಿರಿ ಮತ್ತು ಧೈರ್ಯಶಾಲಿಗಳಾಗಿರಿ ಮತ್ತು ತಕ್ಷಣದ ನಿರ್ಧಾರಗಳನ್ನು ತೆಗೆದುಕೊಳ್ಳಿ ಹಾಗೂ ಫಲಿತಾಂಶಗಳಿಗೆ ಸಿದ್ಧವಾಗಿರಿ.

**ತುಲಾ:** ನೀವು ಕುಟುಂಬದ ಸದಸ್ಯರ ಜೊತೆ ಸ್ವಲ್ಪ ತೊಂದರೆ ಹೊಂದಿದ್ದರೂ ಇದು ನಿಮ್ಮ ಮನಶ್ಶಾಂತಿಯನ್ನು ಹಾಳು ಮಾಡಲು ಅವಕಾಶ ನೀಡಬೇಡಿ. ಯಾರಾದರೂ ನಿಮಗೆ ಪ್ರೇಮ ನಿವೇದನೆ ಮಾಡುವ ಸಾಧ್ಯತೆಗಳಿವೆ.

**ವೃಶ್ಚಿಕ:** ನೀವು ಪ್ರೀತಿಸುವ ಮತ್ತು ಕಾಳಜಿ ತೋರಿಸುವ ಜನರೊಂದಿಗೆ ಸಕಾರಣವಾಗಿರಲು ಪ್ರಯತ್ನಿಸಿ. ಪ್ರೀತಿಯ ಶಕ್ತಿ ನಿಮಗೆ ಪ್ರೀತಿಸಲು ಒಂದು ಕಾರಣ ನೀಡುತ್ತದೆ. ನಿಮ್ಮ ಕೆಲಸ ಮತ್ತು ನಿಮ್ಮ ಆದ್ಯತೆಗಳ ಮೇಲೆ ಗಮನವಿಡಿ.

**ಧನಸ್ಸು:** ಸ್ನೇಹಿತರು ನಿಮ್ಮ ವೈಯಕ್ತಿಕ ಜೀವನದಲ್ಲಿ ಅಗತ್ಯಕ್ಕಿಂತಲೂ ಹೆಚ್ಚು ಹಸ್ತಕ್ಷೇಪ ಮಾಡುತ್ತಾರೆ. ನಿಮ್ಮ ಮಾತುಗಳನ್ನು ಸರಿಯಾಗಿ ಸಾಬೀತುಪಡಿಸಲು ಇಂದು ನೀವು ನಿಮ್ಮ ಸಂಗಾತಿಯೊಂದಿಗೆ ಜಗಳವಾಡಬಹುದು.

**ಮಕರ:** ದೀರ್ಘಕಾಲದ ಲಾಭಗಳಿಗೆ ಸ್ಟಾಕ್‌ಗಳು ಮತ್ತು ಮ್ಯೂಚುವಲ್ ಫಂಡ್‌ಗಳಲ್ಲಿ ಹೂಡಿಕೆ ಮಾಡುವುದನ್ನು ಶಿಫಾರಸು ಮಾಡಲಾಗಿದೆ. ನಿಮ್ಮ ಜ್ಞಾನ ಮತ್ತು ಒಳ್ಳೆಯ ಹಾಸ್ಯ ನಿಮ್ಮ ಬಳಿಯಿರುವ ಜನರನ್ನು ಆಕರ್ಷಿಸಬಹುದು.

**ಕುಂಭ:** ಕೆಲಸದ ಒತ್ತಡ ಇಂದು ಸ್ವಲ್ಪ ಒತ್ತಡ ತರಬಹುದು. ಮೌಲ್ಯ ಹೆಚ್ಚಾಗುವ ವಸ್ತುಗಳನ್ನು ಖರೀದಿಸಲು ಪರಿಪೂರ್ಣ ದಿನ. ಭಾವನಾತ್ಮಕ ಭರವಸೆಗಳನ್ನು ಬಯಸುವವರು ಹಿರಿಯರು ಅವರ ನೆರವಿಗೆ ಬರುವುದನ್ನು ನೋಡಬಹುದು.

**ಮೀನ:** ಮನೆಯಲ್ಲಿ ಒತ್ತಡ ನಿಮಗೆ ಸಿಟ್ಟು ತರಿಸಬಹುದು. ಅವುಗಳನ್ನು ದಮನಗೊಳಿಸುವುದು ಕೇವಲ ದೈಹಿಕ ಸಮಸ್ಯೆಯನ್ನು ಹೆಚ್ಚಿಸುತ್ತದೆ. ದೈಹಿಕ ಚಟುವಟಿಕೆಯೊಂದಿಗೆ ಇದನ್ನು ತೊಡೆದುಹಾಕಿ.

# ಡಾಬಾದಲ್ಲಿ ನಡೀತಾ ಇದೆ ಮನೆಹಾಳು ಒಸಿ ಮಟ್ಕಾ ದಂಧೆ

## ಅದೃಷ್ಟ ಪರೀಕ್ಷೆಯ ಹಂಬಲದಿಂದಾಗಿ ಇಂಥ ಚಟುವಟಿಕೆಗಳಲ್ಲಿ ಹೆಚ್ಚಾಗಿ ಯುವಜನರು ಪಾಲ್ಗೊಳ್ಳುತ್ತಿದ್ದಾರೆ

• ಉದಯವಾಹಿನಿ, ಇಂಡಿ
• ಶಿವರಾಜಕುಮಾರ ವಾಲಿಕಾರ

ಝಳಕಿ ಗ್ರಾಮದಲ್ಲಿ ಸಂತೋಷ ರಾಠೋಡ್ ಎನ್ನುವ ವ್ಯಕ್ತಿ ಸುಮಾರು ವರ್ಷಗಳಿಂದ ಒಸಿ ಮಟ್ಕಾ ದಂಧೆಯಲ್ಲಿ ತೊಡಗಿಕೊಂಡಿದ್ದಾನೆ. ಢಾಬಾ ಒಂದರಲ್ಲಿ ಟೇಬಲ್ ಹಾಕಿ ಸಂತೋಷ ರಾಠೋಡ್ ಒಸಿ ಮಟ್ಕಾ ಬರೆಯಲು ಕುಳಿತರೆ ಸಾಲು ಸಾಲಾಗಿ ಚೀಟಿ ಬರೆಸಲು ಕ್ಯೂ ನಲ್ಲಿ ನಿಂತ ಜನ.

ಮನೆಹಾಳು ಆಟ ಎಂದೇ ಕುಖ್ಯಾತಿಯಾಗಿರುವ ಮಟ್ಕಾ ಅಥವಾ ಒಸಿ ಅರ್ಥಾತ್ ಓಪನ್ ಅಂಡ್ ಕ್ಲೋಸ್ ನಂಬರ್ ಗೇಮ್ ಹಿಂದೆ ಬಿದ್ದು ಎದ್ದವರು ಕಡಿಮೆ. ಇಂಡಿ ತಾಲ್ಲೂಕಿನದ್ಯಂತ ಹಳ್ಳಿ, ಗಲ್ಲಿಗಲ್ಲಿಗಳಲ್ಲಿ ಮಟ್ಕಾ ಅಡ್ಡಾಗಳಿವೆ. ತಾಲ್ಲೂಕಿನ ವಿವಿಧೆಡೆ ಒಸಿ ದಂಧೆ ಅವ್ಯಾಹತವಾಗಿ ಹರಡಿಕೊಂಡಿದೆ. ಇಂದಿನ ಪಬ್ಜಿ ವಿಡಿಯೋ ಗೇಮ್ಸ್ ಚಟದಂತೆ ಮಟ್ಕಾ ಚಟಕ್ಕೆ ದೀಪಕ್ಕೆ ಮುತ್ತಿಕೊಳ್ಳುವ ಮಳೆ ಹುಳದಂತೆ ಮನೆ ಮಂದಿಯೆಲ್ಲಾ ಈ ಚಟಕ್ಕೆ ದಾಸರಾಗಿರುವ ನಿದರ್ಶನಗಳಿವೆ. ಬಡವ ಬಲ್ಲಿದ ಎಂಬ ಯಾವುದೇ ಅಂತರವಿಲ್ಲದೆ ಆಕರ್ಷಿಸುವ ಈ ಆಟದ ನಿಯಂತ್ರಣ ಮಾತ್ರ ಪೊಲೀಸ್ ಇಲಾಖೆಯಿಂದ ಸಾಧ್ಯವಾಗದಿರುವುದು ನಾಗರಿಕರಲ್ಲಿ ಹಲವು ಅನುಮಾನಗಳಿಗೆ ಎಡೆಮಾಡಿಕೊಟ್ಟಿದೆ.


ತಾಲ್ಲೂಕಿನ ವಿವಿಧೆಡೆಯ ಪೋಲೀಸ್ ಠಾಣಾ ವ್ಯಾಪ್ತಿಗಳಲ್ಲಿ ಒಸಿ, ಮಟ್ಕಾ ಆಡಿದವರ ಮೇಲೆ ಕಾರ್ಯಾಚರಣೆ ನಡೆಸಿ, ನೂರಾರು ಮಂದಿಯನ್ನು ವಶಕ್ಕೆ ಪಡೆದು ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ. ಕಾರ್ಯಾಚರಣೆಯ ವೇಳೆ ಲಕ್ಷಗಟ್ಟಲೆ ಹಣವನ್ನು ಜಪ್ತಿಪಡಿಸಿಕೊಂಡು, ಮುಂದೆ ಇಂಥ ಚಟುವಟಿಕೆಗಳನ್ನು ನಡೆಸದಂತೆ ಎಚ್ಚರಿಕೆಯನ್ನೂ ನೀಡಲಾಗುತ್ತಿದೆಯಾದರೂ ಈ ಅಕ್ರಮ ದಂಧೆ ನಿಂತಿಲ್ಲ. ಇಂಡಿ ನಗರ, ಗ್ರಾಮೀಣ ಪ್ರದೇಶವೆನ್ನದೇ ತಾಲ್ಲೂಕಿನದ್ಯಂತ ಎಗ್ಗಿಲ್ಲದೇ ಒಸಿ, ಮಟ್ಕಾ ದಂಧೆ ಸಾಗಿದೆ. ಅದೃಷ್ಟ ಪರೀಕ್ಷೆಯ ಹಂಬಲದಿಂದಾಗಿ ಇಂಥ ಚಟುವಟಿಕೆಗಳಲ್ಲಿ ಹೆಚ್ಚಾಗಿ ಯುವಜನರು ಪಾಲ್ಗೊಳ್ಳುತ್ತಿದ್ದಾರೆ ಎನ್ನುವುದು ಆತಂಕಕಾರಿಯಾಗಿದೆ. ಹಿಂದೆಲ್ಲ ಸದ್ದಿಲ್ಲದೆ ಸಾಗುತ್ತಿದ್ದ ಮಟ್ಕಾ ದಂಧೆ ಪ್ರಸ್ತುತ ದಿನಗಳಲ್ಲಿ ಹೈಟೆಕ್ ಸ್ಪರ್ಶ ಕೂಡ ಪಡೆದುಕೊಂಡಿದೆ.

ಕೆಲ ಪ್ರಭಾವಿಗಳ ನೇತೃತ್ವದಲ್ಲಿಯೇ ದಂಧೆ ಸುಲಿತವಾಗಿ ನಡೆಯುತ್ತಿದೆ. ಗ್ರಾಮೀಣ ಪ್ರದೇಶದಲ್ಲಂತೂ ಹೇಳುವವರು ಇಲ್ಲ, ಕೇಳುವವರು ಇಲ್ಲದಂತಾಗಿದೆ. ಆಯಕಟ್ಟಿನ ಸ್ಥಳಗಳಲ್ಲಿ ಸದ್ದಿಲ್ಲದೆ ನಡೆಯುತ್ತಿರುವ ದಂಧೆಗೆ ಪೋಲೀಸ್ ಇಲಾಖೆಯ ಸಹಕಾರ ಇದೆಯೇ ಎಂಬ ಅನುಮಾನ ಕೂಡ ಸಾರ್ವಜನಿಕರಲ್ಲಿ ಮೂಡುತ್ತಿದೆ.

**ಮೊಬೈಲ್ ಬಳಕೆ:** ಮಟ್ಕಾ ಜೂಜು ಆಡಲು, ನಂಬರ್ ಬರೆಯಲು ಮೊಬೈಲ್ ಬಳಕೆಯಾಗುತ್ತಿದೆ. ಬೆಳಿಗ್ಗೆ 10ರಿಂದಲೇ ಆರಂಭವಾಗುವ ಜೂಜಾಟದ ಚಟುವಟಿಕೆ, ತಡರಾತ್ರಿಯವರೆಗೂ ಚಾಲ್ತಿಯಲ್ಲಿರುತ್ತದೆ. ಬೆಳಿಗ್ಗಿನ ಅವಧಿಯಲ್ಲಿ 'ಕಲ್ಯಾಣ್' ಹೆಸರಿನಲ್ಲಿ ನಡೆಯುವ ಆಟಕ್ಕೆ, ಸಂಜೆ 4 ಗಂಟೆಗೆ ಓಪನ್ ಹಾಗೂ 6.30ರ ಸುಮಾರಿಗೆ ಕ್ಲೋಸ್ ಬರುತ್ತದೆ. ರಾತ್ರಿಯ ವೇಳೆ 'ಬಾಂಬೆ' ಹೆಸರಿನಲ್ಲಿ 9.30ಕ್ಕೆ ಓಪನ್ ಬಂದರೆ, 12.30ರ ಸುಮಾರಿಗೆ ಕ್ಲೋಸ್ ಬರಲಿದೆ. ಇದೆಲ್ಲದರ ಬಗೆಗೆ ಪೋಲೀಸರಿಗೆ ಮಾಹಿತಿ ಇದ್ದರೂ ತಡೆಗಟ್ಟುವ ಗೋಜಿಗೆ ಮುಂದಾಗುತ್ತಿಲ್ಲ ಎನ್ನಲಾಗಿದೆ. ಸ್ಥಳೀಯ ಠಾಣೆಗಳ ಪೋಲೀಸರು ಮಾತ್ರ ತಮಗೂ ಅದಕ್ಕೂ ಸಂಬಂಧವೇ ಇಲ್ಲವೆಂಬಂತೆ ವರ್ತಿಸುತ್ತಾರೆ ಎಂದು ಸಾರ್ವಜನಿಕರು ದೂರಿದ್ದಾರೆ.

### ಆಫ್‌ಲೈನ್ ಹಣ ಕಟ್ಟು, ಆನ್‌ಲೈನ್, ರಿಸಲ್ಟ್ ನೋಡು

**ದಿನಕ್ಕೆ ಎರಡು ಹಂತದಲ್ಲಿ ಮಧ್ಯಾಹ್ನ, ರಾತ್ರಿ ನಡೆಯುವ ಈ ಆಟದಲ್ಲಿ ಸಂಖ್ಯೆಗಳೇ ಮುಖ್ಯ. ಪ್ರತಿ ಆಟದಲ್ಲಿ ಮೊದಲ ಮತ್ತು ಕೊನೆಯ ಸಂಖ್ಯೆಗಳನ್ನು ಕೆಲ ಸಮಯಗಳ ಅಂತರದಲ್ಲಿ ಬಿಡುಗಡೆ ಮಾಡಿ ರೋಚಕತೆ ಸೃಷ್ಟಿಸಲಾಗುತ್ತದೆ. ಅಲ್ಲದೆ, ಆಟದ ಫಲಿತಾಂಶವನ್ನು ತಕ್ಷಣ ಗ್ರಾಹಕರಿಗೆ ತಲುಪಿಸಲಾಗುತ್ತಿದೆ.**


ಉದಯವಾಹಿನಿ ಚಿತ್ರ

### ನೆಪ ಮಾತ್ರಕ್ಕೆ ಪ್ರಕರಣ ದಾಖಲು

**ತಾಲ್ಲೂಕಿನಾದ್ಯಂತ ಮಟ್ಕಾ ದಂಧೆ ಜೋರಾಗಿ ನಡೆಯುತ್ತಿರುವ ಕುರಿತು ಪೋಲೀಸ್ ಇಲಾಖೆಗೆ ಮಾಹಿತಿ ಇದೆ. ಮೇಲಧಿಕಾರಿಗಳಿಂದ ಶಹಬ್ಬಾಸ್‌ಗಿರಿ ಪಡೆಯಲು ಗ್ರಾಮೀಣ ಭಾಗದಲ್ಲಿ ಕೆಲವಡೆ ದಾಳಿ ನಡೆಸುವ ಸ್ಥಳೀಯ ಪೋಲೀಸರು, ಪ್ರಕರಣಗಳನ್ನು ನೆಪ ಮಾತ್ರಕ್ಕೆ ದಾಖಲಿಸುತ್ತಾರೆ. ಇವೆಲ್ಲದರ ನಡುವೆ ಮಾಸಿಕ ಮಾಮೂಲಿ ನೀಡುವವರ ಮೇಲೆ ಯಾವುದೇ ಪ್ರಕರಣ ದಾಖಲಾಗುವುದಿಲ್ಲ ಎನ್ನಲಾಗುತ್ತಿದೆ.**

### ವಶಕ್ಕೆ ಸಿಕ್ಕರೂ ಇನ್ಫ್ಲುಯೆನ್ಸ್

**ಇಂಥ ಆಟಕ್ಕೆ ಇಳಿಯುವವರ ಮೇಲೆ ಪೋಲೀಸ್ ಅಧಿಕಾರಿಗಳು ಕಾರ್ಯಾಚರಣೆ ನಡೆಸಲು ಇಳಿದರೆ, ಪೋಲೀಸ್ ಪೇದೆಗಳೇ ದಂಧೆಕೋರರಿಗೆ ವಿಷಯ ತಿಳಿಸಿ ಪಾರು ಮಾಡುತ್ತಾರೆ ಎಂಬ ಆರೋಪವೂ ಕೇಳಿ ಬರುತ್ತಿದೆ. ಒಂದು ವೇಳೆ ಪೊಲೀಸರ ದಾಳಿಯ ಸುಳಿವೇ ಸಿಗದೇ ಬಂಧನಕ್ಕೊಳಗಾದರೂ, ಬಿಡುಗಡೆಗೆ ರಾಜಕಾರಣಿಗಳಿಂದ ಪೊಲೀಸರ ಮೇಲೆ ಒತ್ತಾಯ ಹೇರಲಾಗುತ್ತದೆ. ರಾತ್ರಿ ವಶನಾದ ಆರೋಪಿ ಕೆಲವೇ ಗಂಟೆಗಳಲ್ಲಿ ಪೊಲೀಸ್ ಠಾಣೆಯಿಂದ ಹೊರಬರುತ್ತಾನೆ. ಮಾರನೇ ದಿನವೇ ಮತ್ತದೇ ದಂಧೆ ಪ್ರಾರಂಭಿಸುತ್ತಾನೆ ಎಂದು ಸಾರ್ವಜನಿಕರು ದೂರಿದ್ದಾರೆ.**


## ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮ

• ಉದಯವಾಹಿನಿ, ಜೇವರ್ಗಿ

ಆಲೂರ ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮವನ್ನು ಇತ್ತೀಚೆಗೆ ಸರ್ಕಾರಿ ಹಿರಿಯ ಪ್ರಾಥಮಿಕ ಕಾಖಂಡಕಿ ಶಾಲೆಯ ಸಹಭಾಗಿತ್ವದಲ್ಲಿ ಶ್ರೀ ಗುರು ಮಲ್ಲಾರಾಧ್ಯರ ಮಠದ ಆವರಣದಲ್ಲಿ ನೆರವೇರಿತು... ಈ ಕಾರ್ಯಕ್ರಮದ ಘನ ಉಪಸ್ಥಿತಿಯನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಜೇವರ್ಗಿಯ ಶಿಕ್ಷಣ ಸಂಯೋಜಕರಾದ ಶ್ರೀ ರಾಯಪ್ಪ ದೋರನಹಳ್ಳಿರವರು ವಹಿಸಿದ್ದರು ಮತ್ತು ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶ್ರೀ ಯಮುನಪ್ಪ ಗುತ್ತಪ್ಪ ಕಟ್ಟಿಮನಿ ಎಸ್‌ಡಿಎಂಸಿ ಅಧ್ಯಕ್ಷರು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಕಾಖಂಡಕಿ ರವರು ವಹಿಸಿದ್ದರು.

ನೇತೃತ್ವ ಶ್ರೀ ಶಾಂತಪ್ಪ ಹಚ್ಚಡ ಸಮೂಹ ಸಂಪನ್ಮೂಲ ವ್ಯಕ್ತಿ,ಸಮೂಹ ಸಂಪನ್ಮೂಲ ಕೇಂದ್ರ ಆಲೂರರವರು ವಹಿಸಿದ್ದರು ಹಾಗೂ ಕಾರ್ಯಕ್ರಮದ ಉದ್ಘಾಟಕರಾಗಿ ಶ್ರೀಮತಿ ಶ್ರೀದೇವಿ ಶಂಕರ ಕಟ್ಟಿಮನಿ ಅಧ್ಯಕ್ಷರು ಗ್ರಾಮ ಪಂಚಾಯತ್ ಆಲೂರು ಮತ್ತು ಶ್ರೀ ವೀರೇಶ್ ಕಾರ್ಯದರ್ಶಿಗಳು ಗ್ರಾಮ ಪಂಚಾಯತ್ ಆಲೂರ ಆಗಮಿಸಿದ್ದರು. ಭಾವಚಿತ್ರ ಪೂಜೆಯನ್ನು ಶ್ರೀ ಬಸವರಾಜ ಜಿ ಸಾಸನೂರ ಮುಖ್ಯ ಗುರುಗಳು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಕಾಖಂಡಕಿ ರವರು ನೆರವೇರಿಸಿದರು.

ಮುಖ್ಯ ಅತಿಥಿಗಳಾಗಿ ಶ್ರೀ ಶಾಂತಪ್ಪ ಬಿರಾದಾರ್ ಅಧ್ಯಕ್ಷರು ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಯಡ್ರಾಮಿ ಶ್ರೀ ವಿಜಯಕುಮಾರ್ ಬಡಿಗೇರ್ ಉಪಾಧ್ಯ ಕ್ಷರು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಯಡ್ರಾಮಿ ಶ್ರೀ ಶಿವರಾಯ ಎಂ ಬಸವಪಟ್ಟಣ ಅಧ್ಯಕ್ಷರು ಕರ್ನಾಟಕ ರಾಜ್ಯ (6–8) ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಯಡ್ರಾಮಿ ಅತಿಥಿಗಳಾಗಿ ಎಲ್ಲಾ ಶಾಲೆಯ ಮುಖ್ಯ ಗುರುಗಳು ಮತ್ತು ಶಿಕ್ಷಕರು ಆಗಮಿಸಿದ್ದರು. ಈ ಕಾರ್ಯಕ್ರಮವನ್ನು ಶ್ರೀ ಶಿವರಾಜ ಎಂ ನಗನೂರ ಶಿಕ್ಷಕರು ನಿರೂಪಿಸಿದರು. ಈ ಪ್ರತಿಭಾ ಕಾರಂಜಿ ಕಲೋತ್ಸವ ಕಾರ್ಯಕ್ರಮದಲ್ಲಿ ಎಲ್ಲಾ ಶಾಲೆಯ ಮಕ್ಕಳು ಸಂಭ್ರಮ ಸಡಗರದಿಂದ ಕಂಠಪಾಠ ಧಾರ್ಮಿಕ ಪಠಣ ಭಕ್ತಿಗೀತೆ ದೇಶಭಕ್ತಿ ಗೀತೆ ಪ್ರಬಂಧ ಸ್ಪರ್ಧೆ ರಸಪ್ರಶ್ನೆ ಭರತನಾಟ್ಯ ಜಾನಪದ ಗೀತೆ ಹೀಗೆ 30ಕ್ಕೂ ಹೆಚ್ಚು ಸ್ಪರ್ಧೆಗಳಲ್ಲಿ ಭಾಗವಹಿಸಿದ್ದರು. ಗ್ರಾಮದ ಎಲ್ಲಾ ಹಿರಿಯರ ಸಹಾಯದಿಂದ ಮತ್ತು ಹಳೆಯ ವಿದ್ಯಾರ್ಥಿಗಳ ಸಂಘದ ಸಹಾಯದಿಂದ ಮಧ್ಯಾಹ್ನದ ಊಟಕ್ಕೆ ಎಲ್ಲಾ ಮಕ್ಕಳಿಗೂ ಸಜ್ಜೆ ರೊಟ್ಟಿ ಬಾಜಿ ಪಲ್ಯ ಹುಗ್ಗಿ ಅನ್ನ ಸಾಂಬಾರ್ ಮಾಡಿದ್ದು ತುಂಬಾ ವಿಶೇಷವಾಗಿತ್ತು.


ಉದಯವಾಹಿನಿ ಚಿತ್ರ

**ಮಧ್ಯಾಹ್ನ ಊಟಕ್ಕೆ ಸಜ್ಜೆ ರೊಟ್ಟಿ ಬಾಜಿ ಪಲ್ಯ, ಹುಗ್ಗಿ, ಅನ್ನ ಸಾಂಬಾರ ಸವೆದ ಮಕ್ಕಳು**

## ತೆಕ್ಕಲಕೋಟೆ ಕ್ಲಸ್ಟರ್ ಮಟ್ಟದ ಮಕ್ಕಳ ಪ್ರತಿಭಾ ಕಾರಂಜಿ

• ಉದಯವಾಹಿನಿ, ಸಿರುಗುಪ್ಪ

ತಾಲ್ಲೂಕಿನ ತೆಕ್ಕಲಕೋಟೆ ಪಟ್ಟಣದ ಶ್ರೀ ವಿವೇಕಾನಂದ ಪ್ರಾಥಮಿಕ ಶಾಲೆಯಲ್ಲಿ ನಡೆದ ತೆಕ್ಕಲಕೋಟೆ ಕ್ಲಸ್ಟರ್ ಮಟ್ಟದ ಮಕ್ಕಳ ಪ್ರತಿಭಾ ಕಾರಂಜಿ ಕಾರ್ಯಕ್ರಮವನ್ನು ಸಿರುಗುಪ್ಪ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿ ಗುರಪ್ಪ ಅವರು ಉದ್ಘಾಟಿಸಿದರು.

ನಂತರ ಮಾತನಾಡಿ ಮಕ್ಕಳಿಗೆ ಇದೊಂದು ಸುವರ್ಣ ಅವಕಾಶವಾಗಿದ್ದು, ಕ್ಲಸ್ಟರ್ ಮಟ್ಟದಲ್ಲಿ ಗೆಲುವನ್ನು ಸಾಧಿಸಿ ತಾಲ್ಲೂಕು ,ಜಿಲ್ಲಾ ಮತ್ತು ರಾಜ್ಯಮಟ್ಟದಲ್ಲಿ ಕೂಡ ಗೆಲುವನ್ನು ಸಾಧಿಸಬೇಕು. ಪ್ರತಿಭಾ ಕರಂಜಿಯಲ್ಲಿ ಭಾಗವಹಿಸಿದಂತ ವಿದ್ಯಾರ್ಥಿಗಳಿಗೆ, ತೀರ್ಪುಗಾರರು ಉತ್ತಮವಾದ ನಿರ್ಣಯವನ್ನು ತೆಗೆದುಕೊಂಡು, ಯಾರ ಹತ್ತಿರ ಉತ್ತಮ ಪ್ರತಿಭೆ ಇರುತ್ತದೆಯೋ, ಅಂತ ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರಿಗೆ ಪ್ರಥಮ ಮತ್ತು ದ್ವಿತೀಯ ಸ್ಥಾನಗಳನ್ನು ನೀಡಬೇಕೆಂದು ಹೇಳಿದರು.

ಈ ಸಂದರ್ಭದಲ್ಲಿ ಶ್ರೀ ವಿವೇಕಾನಂದ ವಿದ್ಯಾ ಸಂಸ್ಥೆಯ ಅಧ್ಯಕ್ಷ ಎಂ.ಮೌಲಾಲಿ, ಇ.ಸಿ.ಒಗಳಾದ ಹನುಮನ ಗೌಡ, ಪಂಪಾಪತಿ, ಸಿ.ಆರ್.ಪಿ ತಿಮ್ಮನಗೌಡ, ಬಿ.ಆರ್.ಪಿಗಳಾದ ಗಜೇಂದ್ರ, ರುದ್ರವೇಣಿ, ಶ್ರೀ ಸಾಯಿರಾಮ್ ವಿದ್ಯಾ ಸಂಸ್ಥೆ ಅಧ್ಯಕ್ಷ ರಾಮ್ ಮೋಹನ್, ಪಟ್ಟಣ ಪಂಚಾಯಿತಿ ಆರ್.ಐ ಸುಬ್ರಮಣ್ಯ, ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘದ ರಾಜ್ಯ ಕಾರ್ಯದರ್ಶಿ ಎಂ. ಇಸಾಕ್, ತೆಕ್ಕಲಕೋಟೆ ಕ್ಲಸ್ಟರ್ ಮಟ್ಟದ ಸರ್ಕಾರಿ ಪ್ರಾಥಮಿಕ ಶಾಲೆ ಹಾಗೂ ಖಾಸಗಿ ಶಾಲೆಯ ಮುಖ್ಯ ಗುರುಗಳು, ಸಹಶಿಕ್ಷಕರುಗಳು ಮತ್ತು ಶ್ರೀ ವಿವೇಕಾನಂದ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಗುರುಗಳು ಸಿಬ್ಬಂದಿ ವರ್ಗಗಳು, ಎಲ್ಲಾ ಶಾಲೆಯ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

## ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನ ಜೆಡಿಎಸ್ ಪಕ್ಷದ ಮಡಿಲಿಗೆ

• ಉದಯವಾಹಿನಿ, ಯಡ್ರಾಮಿ

ತಾಲ್ಲೂಕಿನ ಬಿಳವಾರ ಗ್ರಾಪಂ ಅಧ್ಯಕ್ಷರಾಗಿ ಗೊಲ್ಲಾಳಪ್ಪ ಮ್ಯಾಗೇರಿ, ಉಪಾಧ್ಯಕ್ಷರಾಗಿ ಮಮತಾಬೇಗಂ ಲಾಡ್ಲಪಟೇಲ್ ಅವಿರೋಧ ಆಯ್ಕೆ ಹಿನ್ನೆಲೆಯಲ್ಲಿ ಜೇವರ್ಗಿ ಮಾಜಿ ಶಾಸಕರಾದ, ಜೆಡಿಎಸ್ ರಾಜ್ಯ ಕಾರ್ಯಧ್ಯಕ್ಷರಾದ ದೊಡ್ಡಪ್ಪಗೌಡ ಪಾಟೀಲ ನರಿಬೋಳ ಅವರ ನೇತೃತ್ವದಲ್ಲಿ ವಿಜಯೋತ್ಸವ ಆಚರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಜೆಡಿಎಸ್ ಮುಖಂಡರಾದ ಮಲ್ಲಣ್ಣಗೌಡ ಕೊಂಡಮನಳ್ಳಿ,ಹೊನ್ನಪ್ಪ ಸಾಹುಕಾರ ಕೊಂಡಮನಳ್ಳಿ,ರಾಮ ರೆಡ್ಡಿ, ಶರಣು ಕೂಂಡಾ, ಶರಣು ಪೂಜಾರಿ, ಪ್ರಕಾಶ್ ಪೂಜಾರಿ,ಮೋದಿನ್ ಪಟೇಲ್, ಎಂ ಎಲ್ ಎ.ದಾವಲಸಾಬ್ ಸಗೀರ ಪಟೇಲ್, ಗ್ರಾಪಂ ಸದಸ್ಯರಾದ ಅಯ್ಯಣ್ಣಗೌಡ ಜಮಖಂಡಿ, ಮಹಮ್ಮದ ಯೊನೆಸ್ ಪಟೇಲ್, ಶ್ರೀದೇವಿ ಹೆಚ್ ದಂಡಲ್ಲೂಕ್ಕರ್, ನಿಲ್ಲಮ್ಮ ಎಚ್, ಶೋಭಾ ನಾಗಣ್ಣ ಪಡಶೆಟ್ಟಿ, ವಿಜಯಕುಮಾರ ರಾಠೋಡ, ಬಬ್ರುವಾಹನ ದಂಡಲ್ಲೂಕರ್, ಹಣಮಂತ ದಂಡಲ್ಲೂಕರ್,ಸೇರಿದಂತೆ ಕಾರ್ಯಕರ್ತರು ಭಾಗವಹಿಸಿದರು.


ಉದಯವಾಹಿನಿ ಚಿತ್ರ

## ಬಿಜೆಪಿಯವರು ಮೈಮೇಲೆ ಬಂದಂತೆ ಆಡುತ್ತಿದ್ದಾರೆ: ಭೋಸರಾಜು

• ಉದಯವಾಹಿನಿ, ರಾಯಚೂರು

ಬಿಜೆಪಿಯವರು ಮೈಮೇಲೆ ಬಂದಂತೆ ಆಡುತ್ತಿದ್ದಾರೆ. ರಾಜ್ಯ ಸರ್ಕಾರದಿಂದ ಕೆಲಸ ಆಗುತ್ತಿಲ್ಲ ಎಂದು ಜನರಿಗೆ ಬಿಂಬಿಸುವ ಕೆಲಸ ಮಾಡುತ್ತಿದ್ದಾರೆ ಎಂದು ಸಣ್ಣ ನೀರಾವರಿ ಸಚಿವ ಎನ್.ಎಸ್.ಭೋಸರಾಜು ಹೇಳಿದರು.

ಬಿಜೆಪಿಯವರಿಗೆ ಸಾಮಾನ್ಯ ಜ್ಞಾನ ಇಲ್ಲದಂತಾಗಿದೆ. ಪ್ರಹ್ಲಾದ ಜೋಶಿ, ಎಚ್.ಡಿ. ಕುಮಾರಸ್ವಾಮಿ ಕೇಂದ್ರ ಸಚಿವರಾದರೂ ರಾಜ್ಯದಲ್ಲಿ ನಡೆಯುವ ಸಣ್ಣ ಘಟನೆಗಳಿಗೂ ಪ್ರತಿಕ್ರಿಯೆ ನೀಡುವ ಮೂಲಕ ತಮ್ಮ ಅಸ್ತಿತ್ವ ಸಾಬೀತು ಮಾಡಿಕೊಳ್ಳುತ್ತಿದ್ದಾರೆ. ಆರ್.ಅಶೋಕ ಬಾಯಿಗೆ ಬದ್ಧತೆ ಇಲ್ಲ. ಸಂಬಂಧ ಇಲ್ಲದ ಹೇಳಿಕೆಗಳನ್ನು ಕೊಡುತ್ತಿದ್ದಾರೆ. ಅವರಿಗೆ ಏನಾದರೂ ಕೆಲಸ ಇದೆಯಾ ಎಂದು ವಾಗ್ದಾಳಿ ನಡೆಸಿದರು. ತಾಲ್ಲೂಕು ಮಟ್ಟದಲ್ಲಿ ಆಗಿರುವ ವಿಷಯವನ್ನು ರಾಷ್ಟ್ರಮಟ್ಟದಲ್ಲಿ ಮಾತನಾಡ್ತಾರೆ ಎಂದರೆ ಬಿಜೆಪಿಯವರಿಗೆ ಏನಾದರೂ ನೈತಿಕತೆ ಇದೆಯಾ ನಾಗಮಂಗಲ ಗಲಾಟೆಯನ್ನು ರಾಷ್ಟ್ರ ಮಟ್ಟದ ವಿಷಯ ಮಾಡಿದ್ದಾರೆ. ದೇಶದ ಪ್ರಧಾನಿಯೊಬ್ಬರು ಗಣೇಶ ಪೂಜೆಗೆ ಮುಖ್ಯ ನ್ಯಾಯಾಧೀಶರ ಮನೆಗೆ ಹೋಗುತ್ತಾರೆಂದರೆ ಏನು ಹೇಳಬೇಕು.

ಪ್ರಧಾನಿಯವರಿಗೆ ತಮ್ಮದೇ ಆದ ಶಿಷ್ಟಾಚಾರ ಇರುತ್ತದೆ. ಅದೆಲ್ಲ ಮೀರಿ ನಡೆದು ಕೊಳ್ಳುವ ಮೂಲಕ ಯಾವ ಸಂದೇಶ ಕೊಡುತ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

**ವಾಲ್ಮೀಕಿ ಹಗರಣ ವಿಚಾರದಲ್ಲಿ ಕೇಂದ್ರ ಸರ್ಕಾರ ಸಿಬಿಐ, ಇಡಿಯನ್ನು ದುರ್ಬಳಕೆ ಮಾಡಿಕೊಳ್ಳುತ್ತಿದೆ ಎಂಬುದು ಇಡೀ ರಾಜ್ಯಕ್ಕೆ ಗೊತ್ತಾಗಿದೆ. ಇಲ್ಲಿ ದಾಖಲಾದ ಆರೋಪಗಳೆಲ್ಲ ನಿರಾಧಾರ. ಈ ವಿಚಾರದಲ್ಲಿ ನ್ಯಾಯಾಲಯದ ತೀರ್ಪು ಅಂತಿಮವಾಗುತ್ತದೆ. ಆದರೆ, ಇಡಿ, ಸಿಬಿಐ ಬಳಸಿಕೊಂಡು ರಾಜಕೀಯಕ್ಕೆ ತಳಕು ಹಾಕುವುದು ಮೋದಿ , ಶಾ ನೀತಿಯಾಗಿದೆ. ಕಳೆದ 10 ವರ್ಷದಲ್ಲಿ ಕೇಂದ್ರ ಸರ್ಕಾರ ತನಿಖಾ ಸಂಸ್ಥೆಗಳನ್ನು ಕುಲಗೆಡಿಸಿದೆ -ಭೋಸರಾಜು**



## ಎಪಿಎಂಸಿ ರೈಲ್ವೇ ಸಂಪರ್ಕ ರಸ್ತೆಗೆ ಭೂ ಸ್ವಾಧೀನವೇ ಸವಾಲು

• ಉದಯವಾಹಿನಿ, ಪುತ್ತೂರು

ಎಪಿಎಂಸಿ ರಸ್ತೆಯ ರೈಲ್ವೇ ಅಂಡರ್‌ಪಾಸ್ ಸಂಪರ್ಕದ ಒಂದು ಪಾರ್ಶ್ವದ ದ್ವಿಪಥ ರಸ್ತೆ ನಿರ್ಮಾಣ ಕಾಮಗಾರಿ ಪ್ರಾರಂಭಗೊಂಡು ವರ್ಷಗಳೇ ಕಳೆದಿದ್ದು ಭೂ ಸ್ವಾಧೀನ ಪ್ರಕ್ರಿಯೆ ಪೂರ್ಣಗೊಳ್ಳದ ಕಾರಣ ರಸ್ತೆ ನಿರ್ಮಾಣ ಅಪೂರ್ಣ ಹಂತದಲ್ಲಿದೆ. ಭೂ ಸ್ವಾಧೀನ ಇತ್ಯರ್ಥಕ್ಕೆ ಹಣ ಹೊಂದಿಸುವವರು ಯಾರೆನ್ನುವ ಬಗೆಗಿನ ಚರ್ಚೆ ಮುಂದುವರಿದಿದೆ.

ಈ ಮಧ್ಯೆ, ನಗರಸಭೆಯ ಎರಡನೆ ಅವಧಿಯ ಮೊದಲ ಸಾಮಾನ್ಯ ಸಭೆಯಲ್ಲಿ ಸರಕಾರದಿಂದ ಅನುಮತಿ ಪಡೆದು ನಗರ ಸಭೆಯೇ ಅನುದಾನ ಭರಿಸಿ ಭೂ ಸ್ವಾಧೀನ ಮಾಡಿ ರಸ್ತೆ ಕಾಮಗಾರಿ ಪೂರ್ಣಗೊಳಿಸಬೇಕು ಎಂದು ಸದಸ್ಯರಿಂದ ಆಗ್ರಹ ವ್ಯಕ್ತವಾಗಿದೆ.

13 ಕೋ.ರೂ. ವೆಚ್ಚದ ರೈಲ್ವೇ ಅಂಡರ್ ಪಾಸ್‌ಗೆ ಪೂರಕವಾಗಿ ವಾಹನ ಸಂಚಾರಕ್ಕೆ ಹೊಸದಾಗಿಯು ಆಕಾರದಲ್ಲಿ ಚತುಷ್ಪಥ ರಸ್ತೆ ಕಾಮಗಾರಿ ಕೈಗೆತ್ತಿಕೊಳ್ಳಲಾಗಿತ್ತು. ಒಂದು ಪಾರ್ಶ್ವದಲ್ಲಿ ದ್ವಿಪಥ ರಸ್ತೆ ಪೂರ್ಣಗೊಂಡಿದೆ.

ಇನ್ನೊಂದು ಭಾಗದ ದ್ವಿಪಥ ರಸ್ತೆಯು ಅಪೂರ್ಣ ಸ್ಥಿತಿಯಲ್ಲಿದೆ. ಎರಡು ಭಾಗದಿಂದ ಕೆಲಸ ಆರಂಭವಾಗಿದ್ದರೂ ರಸ್ತೆಯ ಮಧ್ಯೆ 10.5 ಸೆಂಟ್ಸ್ ಜಾಗ ಖಾಸಗಿಯವರಿಗೆ ಸೇರಿದ್ದು ಆ ಜಮೀನು ಸ್ವಾಧೀನ ಆದ ಬಳಿಕವಷ್ಟೇ ಕಾಮಗಾರಿ ನಡೆಸಬೇಕಾದ ಕಾರಣ ಕಾಮಗಾರಿ ಅರ್ಧದಲ್ಲೇ ನಿಂತಿತ್ತು.


ಉದಯವಾಹಿನಿ ಚಿತ್ರ

**ಭೂ ಮಾಲಿಕರ ಜೊತೆ ಚರ್ಚೆ**

**ಸರಕಾರಿ ದರದಲ್ಲಿ ಭೂ ಸ್ವಾಧೀನ ಮಾಡುವ ಬಗ್ಗೆ ಭೂ ಮಾಲಕರ ಜತೆ ಹಿಂದೆ ಚರ್ಚೆ ನಡೆಸಲಾಗಿತ್ತು. ಅವರೊಂದಿಗೆ ಇನ್ನೊಮ್ಮೆ ಮಾತುಕತೆ ನಡೆಸಬೇಕು. ಬೇರೆ ಇಲಾಖೆಗಳು ಅನುದಾನ ನೀಡಲು ಸಾಧ್ಯವಿಲ್ಲದ ಕಾರಣ ನಗರಸಭೆಯು ಜಿಲ್ಲಾಧಿಕಾರಿಗಳ ಮೂಲಕ ಸರಕಾರದ ಒಪ್ಪಿಗೆ ಪಡೆದು ಭೂ ಸ್ವಾಧೀನಕ್ಕೆ ನಗರಸಭೆಯಿಂದಲೇ ಅನುದಾನ ಭರಿಸಬೇಕು. ಈಗಾಗಲೇ ರಸ್ತೆ ಅಪೂರ್ಣದ ಕಾರಣದಿಂದ ಅಲ್ಲಿ ಅಪಘಾತಗಳು ಸಂಭವಿಸುತ್ತಿದ್ದು ಭೂ ಸ್ವಾಧೀನ ಪ್ರಕ್ರಿಯೆ ಶೀಘ್ರ ಆಗಬೇಕು**
**-ಜೀವಂಧರ್ ಜೈನ್, ಮಾಜಿ ಅಧ್ಯಕ್ಷರು, ನಗರಸಭೆ ಪುತ್ತೂರು**

## ಮೂವರು ಯುವಕರ ಮೇಲೆ ಚಾಕು ಇರಿತ

• ಉದಯವಾಹಿನಿ, ಬೆಳಗಾವಿ

ಗಣೇಶ ಮೂರ್ತಿ ವಿಸರ್ಜನೆ ವೇಳೆ ಮಂಗಳವಾರ ತಡರಾತ್ರಿ (ಸೆ 17) ರಾಣಿ ಚನ್ನಮ್ಮ ವೃತ್ತದಲ್ಲಿ ಯುವಕರ ಮಧ್ಯೆ ದಾಂಧಲೆ ಆಗಿದ್ದು, ಮೂವರು ಯುವಕರ ಮೇಲೆ ಚಾಕು ಇರಿತ ನಡೆಸಲಾಗಿದೆ.

ದರ್ಶನ್ ಪಾಟೀಲ, ಪ್ರವೀಣ ಗುಂಡ್ಯಾಗೋಳ, ಸತೀಶ ಪೂಜಾರಿ ಎಂಬ ಯುವಕರು ಗಂಭೀರವಾಗಿ ಗಾಯಗೊಂಡಿದ್ದು, ಹೊಟ್ಟೆ ಭಾಗಕ್ಕೆ ಚಾಕುವಿನಿಂದ ಇರಿದಿದ್ದರಿಂದ ತೀವ್ರ ಅಸ್ವಸ್ಥರಾದ ಯುವಕರನ್ನು ಜಿಲ್ಲಾಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.

ಭಾರೀ ಜನಸಂದಣಿಯಲ್ಲಿ ಡಾನ್ಸ್ ಮಾಡುತ್ತಿದ್ದ ವೇಳೆ ಕಾಲು ತಗುಲಿತು ಎಂಬ ಕ್ಷುಲ್ಲಕ ಕಾರಣಕ್ಕೆ ದಾಳಿ ನಡೆಸಲಾಗಿದೆ ಎಂದು ಹೇಳಲಾಗಿದೆ.

ಚಾಕುವಿನಿಂದ ದಾಳಿ ಮಾಡಿ ಆರೋಪಿಗಳು ಪರಾರಿಯಾಗಿದ್ದಾರೆ. ತತ್ಕ್ಷಣ ಕಾರ್ಯಪ್ರವೃತ್ತರಾದ ಪೊಲೀಸರು ಮೂವರು ಆರೋಪಿಗಳನ್ನು ಬಂಧಿಸಿದ್ದಾರೆ.

ದುಷ್ಕೃತ್ಯ ಎಸಗಿದವರು ಗಾಂಜಾ ಮತ್ತಿನಲ್ಲಿ ಇದ್ದರು ಎಂದು ಹೇಳಲಾಗುತ್ತಿದೆ. ಜಿಲ್ಲಾಸ್ಪತ್ರೆಗೆ ಎಪಿಎಂಸಿ ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲಿದ್ದಾರೆ.


ಉದಯವಾಹಿನಿ ಚಿತ್ರ

## ಖಾಸಗಿ ಬಸ್ ಪಲ್ಟಿ: ಪ್ರಯಾಣಿಕರಿಗೆ ಗಾಯ

• ಉದಯವಾಹಿನಿ, ಹಾವೇರಿ

ಖಾಸಗಿ ಬಸ್ ಪಲ್ಟಿಯಾಗಿ 15ಕ್ಕೂ ಹೆಚ್ಚು ಪ್ರಯಾಣಿಕರು ಗಾಯಗೊಂಡ ಘಟನೆ ಬುಧವಾರ(ಸೆ18 ) ರಾಷ್ಟ್ರೀಯ ಹೆದ್ದಾರಿ 48ರಲ್ಲಿ ಬೆಳಗಿನ ಜಾವ ನಡೆದಿದೆ.

ಬೆಂಗಳೂರಿನಿಂದ ಹುಬ್ಬಳ್ಳಿ ಮಾರ್ಗವಾಗಿ ಗೋವಾಗೆ ತೆರಳುತ್ತಿದ್ದ ಖಾಸಗಿ ಬಸ್ ಚಾಲಕನ ನಿಯಂತ್ರಣ ತಪ್ಪಿ ಬಸ್ ಪಲ್ಟಿಯಾಗಿದೆ. ಚಾಲಕ ನಿದ್ದೆ ಮಂಪರಿನಲ್ಲಿದ್ದರಿಂದ ಈ ಅವಘಡ ಸಂಭವಿಸಿದೆ ಎನ್ನಲಾಗಿದೆ. ಅದೃಷ್ಟವಷಾತ್ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ. ಗಾಯಾಳುಗಳೆಲ್ಲರೂ ಪಾರಾಗಿದ್ದು, ಹಾವೇರಿ ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.

## ಘೋರ ಘಟನೆ: ಗಣೇಶ ವಿಸರ್ಜನೆ ವೇಳೆ ಟ್ರ್ಯಾಕ್ಟರ್ ಹರಿದು ಯುವಕ ಸಾವು

• ಉದಯವಾಹಿನಿ, ಬೆಳಗಾವಿ

ಬೆಳಗಾವಿಯಲ್ಲಿ ಘೋರ ಘಟನೆ ನಡೆದಿದ್ದು, ಗಣೇಶ ವಿಸರ್ಜನೆ ವೇಳೆ ಟ್ರ್ಯಾಕ್ಟರ್ ಹರಿದು ಯುವಕ ಸಾವನ್ನಪ್ಪಿದ್ದಾನೆ. ಗಣೇಶ ಉತ್ಸವದ ವೇಳೆ ದುರಂತ ಸಂಭವಿಸಿದ್ದು, ಗಣೇಶ ವಿಸರ್ಜನೆ ಮಾಡುವಾಗ ಟ್ರ್ಯಾಕ್ಟರ್ ಅಡಿ ಸಿಲುಕಿ ಸದಾನಂದ ಚೌಹಾಣ್ ಪಾಟೀಲ್ ಮೃತಪಟ್ಟಿದ್ದಾರೆ. ಬೆಳಗಾವಿ ಪಾಟೀಲ್ ಗಲ್ಲಿಯಲ್ಲಿ ನಿನ್ನೆ ರಾತ್ರಿ ಈ ದುರ್ಘಟನೆ ನಡೆದಿದೆ. ಘಟನೆಯಲ್ಲಿ ಓರ್ವ ಗಾಯಗೊಂಡಿದ್ದು, ಖಡೇಬಜಾರ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಪ್ರಚೋದನಕಾರಿ ಹೇಳಿಕೆ ಕೊಟ್ಟರೆ ಸಹಿಸಲ್ಲ

• ಉದಯವಾಹಿನಿ, ಕೊಪ್ಪಳ

ಎಸ್‌ಡಿಪಿಐ, ಆರ್‌ಎಸ್‌ಎಸ್ ಸೇರಿ ಯಾರೇ ಆಗಲಿ ಪ್ರಚೋದನಕಾರಿ ಹೇಳಿಕೆ ಕೊಟ್ಟರೆ ಯಾವುದನ್ನೂ ಸಹಿಸುವುದಿಲ್ಲ. ಮುಲಾಜಿಲ್ಲದೇ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವ ಶಿವರಾಜ ತಂಗಡಗಿ ಹೇಳಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈಗಾಗಲೇ ಪ್ರಚೋದನಕಾರಿ ಹೇಳಿಕೆ ನೀಡಿದವರ ಮೇಲೆ ಎಫ್‌ಐಆರ್ ದಾಖಲಾಗಿದೆ. ಶೀಘ್ರದಲ್ಲಿಯೇ ಬಂಧಿಸಿ ಜೈಲಿಗೆ ಕಳಿಸಲಾಗುವುದು. ಪ್ರಚೋದನಕಾರಿ ಭಾಷಣ ಮಾಡುವ, ಹೇಳಿಕೆ ಕೊಡುವ ಯಾರೇ ಇರಲಿ, ಯಾವುದೇ ಪಕ್ಷದವರಿರಲಿ ಕ್ರಮ ಕೈಗೊಳ್ಳಲಾಗುವುದು. ಸಿಎಂ ರೇಸ್‌ನಲ್ಲಿ ನಾನೂ ಇದ್ದೇನೆ ಎಂದಿರುವ ಸಿಎಂ ಆರ್ಥಿಕ ಸಲಹೆಗಾರ ಬಸವರಾಜ ರಾಯರಡ್ಡಿ ಅವರ ಹೇಳಿಕೆ ನಾನು ಗಮನಿಸಿಲ್ಲ. ರಾಯರಡ್ಡಿ ಅವರು ಸೇರಿದಂತೆ ಯಾರೇ ಆಗಲಿ ಸಿಎಂ ರೇಸ್ ಬಗ್ಗೆ ಮಾತನಾಡುವುದು ಬೇಡ. ಅವರಿಗೆ ಸಿಎಂ ಖುರ್ಚಿ ಖಾಲಿಯಿಲ್ಲ ಎಂದಷ್ಟೇ ಹೇಳುವೆ ಎಂದರು.



## ಕ್ಯಾಬಿನೆಟ್ ಸಭೆ ತೃಪ್ತಿ ತಂದಿಲ್ಲ: ಬಿ.ಆರ್.ಪಾಟೀಲ

• ಉದಯವಾಹಿನಿ, ಕಲಬುರಗಿ



ರಾಜ್ಯ ಸರಕಾರ ಕಲಬುರಗಿಯಲ್ಲಿ ನಡೆಸಿದ ಕ್ಯಾಬಿನೆಟ್ ಸಭೆ ಸಮಾಧಾನ ತಂದಿದೆಯೇ ಹೊರತು, ನನಗೆ ತೃಪ್ತಿ ತಂದಿಲ್ಲ ಎಂದು ಸಿಎಂ ಸಲಹೆಗಾರ ಹಾಗೂ ಆಳಂದ ಶಾಸಕ ಬಿ.ಆರ್.ಪಾಟೀಲ ಮತ್ತೊಮ್ಮೆ ಸರಕಾರದ ವಿರುದ್ಧ ನಿರ್ಭಿಡೆಯಾಗಿ ಅಸಮಧಾನ ಹೊರ ಹಾಕಿದ್ದಾರೆ. ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಡಿದ ಅವರು,ಕಲ್ಯಾಣ ಕರ್ನಾಟಕಕ್ಕೆ ಐದು ಸಾವಿರ ಕೋಟಿ ಬರುತ್ತಿರುವುದಕ್ಕೆ ಹಳೆ ಮೈಸೂರು ಭಾಗದವರಿಗೆ ಹೊಟ್ಟೆ ಕಿಚ್ಚು ಶುರುವಾಗಿದೆ. ನಮ್ಮ ಅಭಿವೃದ್ಧಿಯನ್ನ ಸಹಿಸಲು ಆಗದೆ ಹೊಟ್ಟೆ ಕಿಚ್ಚು ಪಡುತ್ತಿದ್ದಾರೆ. ಈ ಕುರಿತು ಮುಂದಿನ ದಿನಗಳಲ್ಲಿ ಬೆಂಗಳೂರಿನಲ್ಲಿ ಎಲ್ಲಾ ಶಾಸಕರು ಸಭೆ ನಡೆಸಿ ಹಸಿರು ಸೇನೆಯ ವಿರುದ್ಧ ಪ್ರತಿಭಟಿಸ್ತೇವೆ ಎಂದರು. ಹಿಂದೆ ಯಡಿಯೂರಪ್ಪ, ಜಗದೀಶ ಶೆಟ್ಟರ್ ಸಭೆ ಮಾಡಿದಾಗ ನೀವೆಷ್ಟು ಅಭಿವೃದ್ಧಿ ಮಾಡಿದ್ದೀರಿ ಎಂದು ಅಶೋಕ ಆರೋಪಕ್ಕೆ ತಿರುಗೇಟು ನೀಡಿದರು. ಸಭೆಯಲ್ಲಿ ತರಾ ತರಿಯಲ್ಲಿ ಸಾಕಷ್ಟು ವಿಚಾರಗಳು ಚರ್ಚೆ ಆಗಿವೆ. ಕುಡಿಯುವ ನೀರಿನ ಸಮಸ್ಯೆ ಬಗೆ ಹರಿಸಲು ಮುಂದಾಗಿದ್ದಾರೆ.ಆದ್ರೆ ಅಂಡರ್ ಗ್ರೌಂಡ್ ವಾಟರ್ ಹೆಚ್ಚಳ ಮಾಡೋದ್ರ ಬಗ್ಗೆ ಗಮನ ಕೊಡ್ತಿಲ್ಲ. ಅದಕ್ಕಾಗಿ ಚಿಂತನೆ ಇಲ್ಲ ಎಂದರು.

# ಆಯುಷ್ ಇಲಾಖೆಯಿಂದ ಸ್ವಚ್ಛತಾ ಹೀ ಸೇವಾ ಕಾರ್ಯಕ್ರಮ

## • ಆರೋಗ್ಯವಂತ ಜೀವನ ನಡೆಸಬೇಕಾದರೆ ಮನೆಯ ಸುತ್ತ ಸ್ವಚ್ಛತೆಯನ್ನು ಕಾಪಾಡಿಕೊಳ್ಳಬೇಕು: ಡಾ|| ವಿಜಯಲಕ್ಷ್ಮಿ ಪಿ.

• ಉದಯವಾಹಿನಿ, ಚಿತ್ರದುರ್ಗ

ಇಂದಿನ ಆಧುನಿಕತೆಯ ವೇಗದ ಬದುಕಿನಲ್ಲಿ ಮನುಷ್ಯನ ಆರೋಗ್ಯ ಕೆಡುತ್ತಿರುವ ಜತೆಯಲ್ಲಿ ಪರಿಸರವೂ ಕೆಡುತ್ತಿದೆ. ನಾವಿಂದು ವಿಷಕಾರಿ ಗಾಳಿ, ನೀರು, ಆಹಾರ ಸೇವಿಸುತ್ತಿರುವುದರಿಂದ ನಮ್ಮ ಆರೋಗ್ಯ ಹದಗೆಡುತ್ತಿದೆ. ಇದಕ್ಕೆ ಪರಿಸರ ನಾಶವೇ ಮುಖ್ಯ ಕಾರಣವಾಗಿದೆ ಎಂದು ಜೆ ಎನ್ ಕೋಟೆ ಸರ್ಕಾರಿ ಆಯುಷ್ ಆರೋಗ್ಯ ಮಂದಿರದ ಆಡಳಿತ ವೈದ್ಯಾಧಿಕಾರಿ ಡಾ|| ವಿಜಯಲಕ್ಷ್ಮಿ ಪಿ. ಅಭಿಪ್ರಾಯ ಪಟ್ಟಿದ್ದಾರೆ.

ಅವರು ಬುಧವಾರ ಸ್ವಚ್ಚತಾ ಹೀ ಸೇವಾ 2024 ಪಾಕ್ಷಿಕ ಕಾರ್ಯಕ್ರಮದ ಅಂಗವಾಗಿ ಚಿತ್ರದುರ್ಗ ತಾಲ್ಲೂಕು ಜೆ ಎನ್ ಕೋಟೆ ಗ್ರಾಮ ಪಂಚಾಯತಿ , ಜಿಲ್ಲಾ ಆಯುಷ್ ಇಲಾಖೆ ಚಿತ್ರದುರ್ಗ ಇವರುಗಳ ಸಹಯೋಗದೊಂದಿಗೆ ಸರ್ಕಾರಿ ಆಯುಷ್ ಆಯುರ್ವೇದ ಆರೋಗ್ಯ ಮತ್ತು ಕ್ಷೇಮ ಮಂದಿರ ಜೆ ಎನ್ ಕೋಟೆ ವತಿಯಿಂದ ಸರ್ಕಾರಿ ಆಯುರ್ವೇದ ಕೇಂದ್ರದ ಆವರಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಸ್ವಚ್ಚತಾ ಕಾರ್ಯ ಹಾಗೂ ವೃಕ್ಷಾರೋಹಣ ಕಾರ್ಯಕ್ರಮಕ್ಕೆ ಸಸಿ ನೀಡುವುದರೊಂದಿಗೆ ಚಾಲನೆ ನೀಡಿ ಮಾತನಾಡುತ್ತಾ ಪರಿಶುದ್ಧ ಗಾಳಿ, ನೀರು, ಆಹಾರವನ್ನು ನಾವು ಸದ್ಬಳಕೆ ಮಾಡಿಕೊಂಡು, ಆರೋಗ್ಯವಂತ ಜೀವನ ನಡೆಸಬೇಕಾದರೆ ತಮ್ಮ ಮನೆಯ ಸುತ್ತ ಸ್ವಚ್ಛತೆಯನ್ನು ಕಾಪಾಡಿಕೊಳ್ಳಬೇಕು.

ನೈರ್ಮಲ್ಯ ಕದಡದಂತೆ ನೋಡಿಕೊಂಡು ಗಿಡಮರವನ್ನು ಬೆಳೆಸಿ ಪರಿಸರ ಶುದ್ಧತೆಯನ್ನು ಹೆಚ್ಚಿಸಬೇಕು. ಪ್ರತಿಯೊಬ್ಬರು ಪರಿಸರದ ಬಗ್ಗೆ ಪ್ರಜ್ಞಾವಂತಿಕೆ ಬೆಳೆಸಿಕೊಂಡರೆ ಮಾತ್ರ ನಶಿಸಿ ಹೋಗುತ್ತಿರುವ ಹಸಿರು ಪ್ರಕೃತಿಯನ್ನು ಮತ್ತೆ ಉಳಿಸಿಕೊಳ್ಳಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಇದೇ ಸಂಧರ್ಭದಲ್ಲಿ ಸ್ವಚ್ಚತಾ ಹೀ ಸೇವಾ ಕಾರ್ಯಕ್ರಮದ ಮಹತ್ವವನ್ನು ಕುರಿತು ಮಾತನಾಡಿದ ಜೆ ಎನ್ ಕೋಟೆ ಗ್ರಾ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ (ಪಿಡಿಒ) ಮಂಜುಳಾ ಕೆ.ಎಸ್. ಸ್ವಚ್ಛತಾ ಹಿ ಸೇವಾ ಅಭಿಯಾನ 2024 ಇಂದು ಸ್ವಭಾವ ಸ್ವಚ್ಛತಾ – ಸಂಸ್ಕಾರ ಸ್ವಚ್ಛತಾ ಎಂಬ ವಿಷಯದ ಅಡಿಯಲ್ಲಿ ಸ್ವಚ್ಛತೆ ಮತ್ತು ಪರಿಸರ ಸುಸ್ಥಿರತೆಗೆ ಹೆಚ್ಚಿನ ಒತ್ತು ನೀಡುವುದಕ್ಕಾಗಿ ಪ್ರಾರಂಭಿಸಿರುವ ಈ ಕಾರ್ಯಕ್ರಮದಲ್ಲಿ ಕೇವಲ ಸರ್ಕಾರಿ ಅಧಿಕಾರಿಗಳು ಮಾತ್ರ ಭಾಗವಹಿಸದೆ ಪ್ರತಿ ಗ್ರಾಮದ ಪ್ರತಿಯೊಬ್ಬ ನಾಗರೀಕರೂ ಭಾಹವಹಿಸಿ ಯಶಸ್ಸುಗೊಳಿಸಬೇಕು ಆಗ ಮಾತ್ರ ನಮ್ಮ ದೇಶವನ್ನು ಸ್ವಚ್ಛ ಭಾರತವನ್ನಾಗಿ ಮಾಡಲು ಸಾಧ್ಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜೆ ಎನ್ ಕೋಟೆ ಆಯುಷ್ ಕೇಂದ್ರದ ಯೋಗ ತರಬೇತುದಾರ ರವಿ ಕೆ.ಅಂಬೇಕರ್, ಪೂಜಾನಾಯಕ, ಗ್ರಾ.ಪಂ. ಸದಸ್ಯರಾದ ಪಾಲಯ್ಯ ಎಂ ಪಿ, ಶಿವಮೂರ್ತಿ, ಈರಮ್ಮ, ಗ್ರಾ.ಪಂಚಾಯತಿ ಹಾಗೂ ಆಯುಷ್ ಕೇಂದ್ರದ ಸಿಬ್ಬಂದಿ ವರ್ಗ ಭಾಗವಹಿಸಿದ್ದರು.

**ಸ್ವಚ್ಛತೆಗೆ ಹೆಚ್ಚಿನ ಒತ್ತು**


ಉದಯವಾಹಿನಿ ಚಿತ್ರ

**ಗ್ರಾಮೀಣ ಪ್ರದೇಶಗಳಲ್ಲಿ ಶುಚಿತ್ವ ಕಾಪಾಡಬೇಕಾದರೆ ಪ್ರತಿಯೊಂದು ಮನೆಯು ಕಡ್ಡಾಯವಾಗಿ ಶೌಚಾಲಯ ನಿರ್ಮಿಸಿಕೊಳ್ಳಬೇಕು. ಸ್ವಚ್ಛಭಾರತ್ ಯೋಜನೆ ಹಾಗೂ ನರೇಗಾ ಯೋಜನೆಯಡಿ ಪ್ರತಿ ಮನೆಗೆ ಶೌಚಾಲಯ ನಿರ್ಮಾಣಕ್ಕೆ ಗ್ರಾಮ ಪಂಚಾಯತಿ ಕ್ರಮ ಕೈಗೊಳ್ಳುತ್ತಿದೆ. ಇದರ ಸದುಪಯೋಗ ಪಡೆದುಕೊಂಡು ಗ್ರಾಮವನ್ನು ಸ್ವಚ್ಛತೆ ಮಾಡಿದಾಗ ಮಹಾತ್ಮ ಗಾಂಧೀಜೀ ಅವರು ಕಂಡ ಗ್ರಾಮ ಸ್ವರಾಜ್ ಕನಸು ಈಡೇರುತ್ತದೆ -ಡಿ.ಮಲ್ಲೇಶ್, ಜೆ ಎನ್ ಕೋಟೆ ಗ್ರಾಮ ಪಂಚಾಯತಿ ಅಧ್ಯಕ್ಷ**

# ರಷ್ಯಾ ನೆಲದಲ್ಲಿ ಕಾರ್ಯಾಚರಣೆ ನಡೆಸಿರುವ ಉಕ್ರೇನ್ ಸೇನೆಯ ಡ್ರೋನ್

## ರಷ್ಯಾ ಮೇಲೆ ಉಕ್ರೇನ್ ಡ್ರೋನ್ ದಾಳಿ: ಉಗ್ರಾಣದಲ್ಲಿದ್ದ ಸಾವಿರಾರು ಕ್ಷಿಪಣಿ, ಬಾಂಬ್‌ಗಳ ನಾಶ

**ಕೀವ್:** ರಷ್ಯಾ ನೆಲದಲ್ಲಿ ಕಾರ್ಯಾಚರಣೆ ನಡೆಸಿರುವ ಉಕ್ರೇನ್ ಸೇನೆಯ ಡ್ರೋನ್‌ಗಳು, ಭಾರೀ ದೊಡ್ಡ ಸ್ಫೋಟಕ್ಕೆ ಕಾರಣವಾಗಿವೆ. ರಷ್ಯಾದ ಟ್ವೆರ್ ಪ್ರಾಂತ್ಯದ ಟೊರೊಪೆಟ್ಸ್ ನಗರದಲ್ಲಿ ಈ ಸ್ಫೋಟ ನಡೆದಿದ್ದು, ಸ್ಫೋಟದ ತೀವ್ರತೆಗೆ ಈ ಭಾಗದ ನಿವಾಸಿಗಳನ್ನು ಸೇನೆ ತ್ವರಿತವಾಗಿ ತೆರವು ಮಾಡಿದೆ. ರಷ್ಯಾ ರಾಜಧಾನಿ ಮಾಸ್ಕೋ ನಗರದಿಂದ 250 ಮೈಲು (400 ಕಿ.ಮೀ.) ದೂರದಲ್ಲಿ ಈ ಸ್ಫೋಟ ಸಂಭವಿಸಿದೆ.

ಉಕ್ರೇನ್ ಸೇನೆಯ ಡ್ರೋನ್‌ಗಳು ಸ್ಥಳೀಯ ಕಾಲಮಾನ ಬುಧವಾರ ಬೆಳಗಿನ ಜಾವ ರಷ್ಯಾ ಸೇನೆಯ ಶಸ್ತ್ರಾಸ್ತ್ರ ಸಂಗ್ರಹಾಗಾರದ ಮೇಲೆ ಬಾಂಬ್ ದಾಳಿ ನಡೆಸಿದವು. ಈ ವೇಳೆ ರಷ್ಯಾ ಸೇನೆಯ ಉಗ್ರಾಣದಲ್ಲಿದ್ದ ಕ್ಷಿಪಣಿಗಳು ಹಾಗೂ ಫಿರಂಗಿಗಳು ನಾಶವಾದವು. ಈ ಉಗ್ರಾಣದಲ್ಲಿ ಅಪಾರ ಪ್ರಮಾಣದಲ್ಲಿ ಸ್ಫೋಟಕಗಳನ್ನು ಸಂಗ್ರಹಿಸಿ ಇಟ್ಟಿದ್ದ ಕಾರಣ ದೊಡ್ಡ ಸ್ಫೋಟ ಸಂಭವಿಸಿ ಆಸುಪಾಸಿನ ಪ್ರದೇಶಗಳಲ್ಲಿ



ಬೆಂಕಿ ಹೊತ್ತಿಕೊಂಡಿತ್ತು.

ಸುದ್ದಿ ಸಂಸ್ಥೆಗಳಿಗೆ ಮಾಹಿತಿ ಸಿಕ್ಕಿರುವ ಪ್ರಕಾರ ಈ ಉಗ್ರಾಣದಲ್ಲಿ ಅತ್ಯಾಧುನಿಕ 'ಇಸ್ಕಾಂಡರ್ ಟ್ಯಾಕ್ಟಿಕಲ್ ಕ್ಷಿಪಣಿ ವ್ಯವಸ್ಥೆಯನ್ನು ಸಂಗ್ರಹ ಮಾಡಲಾಗಿತ್ತು. ಅಷ್ಟೇ ಅಲ್ಲ, ಟೋಚ್ಕಾ-ಯು ಟ್ಯಾಕ್ಟಿಕಲ್ ಕ್ಷಿಪಣಿಗಳೂ ಇಲ್ಲಿದ್ದವು. ಜೊತೆಯಲ್ಲೇ ವಾಯು ಮಾರ್ಗದಲ್ಲಿ ದಾಳಿ ನಡೆಸಲು ಬಳಕೆಯಾಗುವ ಬಾಂಬ್‌ಗಳು ಹಾಗೂ ಫಿರಂಗಿಗಳ ಮದ್ದು ಗುಂಡುಗಳೂ ಇಲ್ಲಿದ್ದವು. ಉಕ್ರೇನ್ ಸೇನೆಯ ಡ್ರೋನ್‌ಗಳು ಈ ಗೋದಾಮಿನ ಮೇಲೆ ದಾಳಿ ನಡೆಸಿದ ಕೂಡಲೇ ಅಲ್ಲಿದ್ದ ಸ್ಫೋಟಕಗಳು ಸಿಡಿದವು. ಕೂಡಲೇ ಈ ಭಾಗದ ಅಗ್ನಿಶಾಮಕ ದಳ ಸ್ಥಳಕ್ಕೆ ಧಾವಿಸಿತಾದರೂ ಸ್ಫೋಟದ ತೀವ್ರತೆಗೆ ಹೋಲಿಕೆ ಮಾಡಿದರೆ ಅಗ್ನಿಶಾಮಕ ದಳ ಸೋತು ಹೋಯ್ತು. ಎಲ್ಲಿ? ಏನು ಹೊತ್ತಿ ಉರಿಯುತ್ತಿದೆ ಅನ್ನೋದೇ ಗ್ರಹಿಸಲು ಸಾಧ್ಯವಾಗಿಲ್ಲ. ಇನ್ನು ಈ ಉಗ್ರಾಣದಲ್ಲಿ ಎಷ್ಟು ಮಂದಿ ಸಿಬ್ಬಂದಿ ಇದ್ದರು? ಎಷ್ಟು ಜೀವ ಹಾನಿ ಆಗಿದೆ ಅನ್ನೋದ್ರ ಮಾಹಿತಿಯೂ ಲಭ್ಯವಾಗಿಲ್ಲ.

ಈ ಸ್ಫೋಟದಿಂದಾಗಿ ರಷ್ಯಾ ಸಂಗ್ರಹಿಸಿ ಇಟ್ಟಿದ್ದ ಎಸ್ - 300 ಹಾಗೂ ಎಸ್ - 400 ಕ್ಷಿಪಣಿ ವ್ಯವಸ್ಥೆ ನಾಶವಾಗಿದೆ ಎಂದು ವಿವರಿಸಲಾಗಿದೆ. ಜೊತೆಯಲ್ಲೇ ಉತ್ತರ ಕೊರಿಯಾರಿಂದ ತರಿಸಿಕೊಳ್ಳಲಾಗಿದ್ದ ಖಂಡಾಂತರ ಕ್ಷಿಪಣಿಗಳೂ ನಾಶವಾಗಿವೆ ಎಂದು ಹೇಳಲಾಗಿದೆ. ಜೊತೆಯಲ್ಲೇ ಈ ಭಾಗದಲ್ಲಿ 2.8 ರಷ್ಟು ತೀವ್ರತೆಯ ಭೂಕಂಪ ಸಂಭವಿಸಿದೆ ಎಂಬ ಮಾಹಿತಿ ನೀಡಲಾಗಿದೆ. ಆದರೆ, ಈ ಮಾಹಿತಿಗಳನ್ನು ರಷ್ಯಾ ಸರ್ಕಾರ ಖಚಿತಪಡಿಸಿಲ್ಲ.


ರಷ್ಯಾ ಮೇಲೆ ಉಕ್ರೇನ್ ನಡೆಸಿದ ಈ ಭೀಕರ ದಾಳಿಗೆ ಮುಂದಿನ ದಿನಗಳಲ್ಲಿ ರಷ್ಯಾ ಯಾವ ರೀತಿ ಪ್ರತೀಕಾರ ತೀರಿಸಿಕೊಳ್ಳಬಹುದು ಎಂಬ ಕುತೂಹಲ ಇದೀಗ ಆರಂಭವಾಗಿದ್ದು, ರಷ್ಯಾ ಸೇನೆ ಹಾಗೂ ಸರ್ಕಾರ ಈ ಕುರಿತು ಯಾವುದೇ ಪ್ರತಿಕ್ರಿಯೆ ನೀಡದೆ ಮೌನ ವಹಿಸಿದೆ.

**ಬೆಂಕಿ ಉಂಡೆ ಏಳುವ ದೃಶ್ಯ**

**ಇನ್ನು ಈ ಸ್ಫೋಟದ್ದು ಎನ್ನಲಾದ ವಿಡಿಯೋ ಒಂದು ಸಾಮಾಜಿಕ ಜಾಲತಾಣಗಳಲ್ಲಿ ಸದ್ದು ಮಾಡುತ್ತಿದೆ. ರಾತ್ರಿಯ ಆಗಸದಲ್ಲಿ ಬೆಂಕಿ ಉಂಡೆ ಏಳುವ ದೃಶ್ಯ ಇದಾಗಿದೆ. ಜೊತೆಯಲ್ಲೇ ಭಾರೀ ಸ್ಫೋಟದ ಸದ್ದು ಕೂಡಾ ಕೇಳಿ ಬರುತ್ತದೆ. ಬೆಲಾರೂಸ್‌ನ ಗಡಿಯಲ್ಲಿ ನಡೆದ ಸ್ಫೋಟ ಎಂದು ವಿವರಿಸಲಾಗಿದೆ.**

**ವಿಶಾಲ ರಷ್ಯಾ ದೇಶದ ವಿರುದ್ಧ ಸಿಡಿದು ನಿಂತಿರುವ ಉಕ್ರೇನ್ ಸೇನೆ, ತನ್ನ ಡ್ರೋನ್‌ಗಳ ಮೂಲಕ ರಷ್ಯಾದ ಕ್ಷಿಪಣಿ ಹಾಗೂ ಬಾಂಬ್ ಸಂಗ್ರಹಾಗಾರದ ಮೇಲೆ ದಾಳಿ ನಡೆಸಿದೆ. ಈ ಸ್ಫೋಟದ ತೀವ್ರತೆಗೆ ಈ ಭಾಗದಲ್ಲಿ ಭಾರೀ ಅಗ್ನಿ ಅನಾಹುತ ಸಂಭವಿಸಿದ್ದು, ರಷ್ಯಾ ಸಂಗ್ರಹಿಸಿ ಇಟ್ಟಿದ್ದ ಅಪಾರ ಪ್ರಮಾಣದ ಶಸ್ತ್ರಾಸ್ತ್ರಗಳು ನಾಶವಾಗಿವೆ. ಇದೀಗ ಉಕ್ರೇನ್ ದಾಳಿಗೆ ರಷ್ಯಾ ಯಾವ ರೀತಿ ಪ್ರತೀಕಾರ ತೀರಿಸಿಕೊಳ್ಳುತ್ತೆ ಅನ್ನೋ ಪ್ರಶ್ನೆ ಎದುರಾಗಿದೆ.**

# ಹೊಸ ಕೋವಿಡ್ ರೂಪಾಂತರ ಎಕ್ಸ್‌ಇಸಿ ಸೃಷ್ಟಿಸಿದ ಆತಂಕ



**ನ್ಯೂಯಾರ್ಕ್:** ಕೊರೊನಾ ವೈರಸ್ ವಿನಾಶಕ್ಕೆ ಅಂತ್ಯವಿಲ್ಲ ಎಂಬಂತಾಗಿದೆ.ಒಂದರ ಹಿಂದೆ ಒಂದರಂತೆ ಬರುತ್ತಿರುವ ರೂಪಾಂತರಗಳು ಆತಂಕವನ್ನು ಹೆಚ್ಚಿಸಿವೆ. ಈಗ ಮತ್ತೊಂದು ಹೊಸ ರೂಪಾಂತರ ಎಕ್ಸ್‌ಇಸಿ –ಹೊಸ ಕೋವಿಡ್ ಎಕ್ಸ್ ಇಸಿ ರೂಪಾಂತರ ಯುರೋಪ್‌ನಲ್ಲಿ ವೇಗವಾಗಿ ಹರಡುತ್ತಿದೆ. ಒಮಿಕ್ರಾನ್ ಉಪತಳಿಯಾಗಿರುವ ಎಕ್ಸ್‌ಇಸಿ ರೂಪಾಂತರವನ್ನು ಕಳೆದ ಜೂನ್‌ನಲ್ಲಿ ಜರ್ಮನಿಯಲ್ಲಿ ಗುರುತಿಸಲಾಗಿದೆ.

ಇದು ಮೊದಲು ಜೂನ್ 2024 ರಲ್ಲಿ ಜರ್ಮನಿಯಲ್ಲಿ ಕಂಡುಬಂದಿದೆ.ಇದು ಅತ್ಯಂತ ವೇಗವಾಗಿ ಹರಡುವ ಸಾಧ್ಯತೆಗಳಿವೆ ಎಂದು ವಿಜ್ಞಾನಿಗಳು ಎಚ್ಚರಿಸಿದ್ದಾರೆ. ಸುಮಾರು 27 ದೇಶಗಳಲ್ಲಿ ಈ ವೈರಸ್ ಭಾರಿ ಆತಂಕ ಹುಟ್ಟಿಸಿದೆ. ಪ್ರಪಂಚದಾದ್ಯಂತ ಮತ್ತೇನು ಗಂಡಾಂತರ ಕಾದಿ ದಿಯೋ ಎಂಬ ಪರಿಸ್ಥಿತಿ ನಿರ್ಮಾಣವಾಗಿದೆ.ಯು ಕೆ, ಯುಎಸ್, ಡೆನ್ಮಾರ್ಕ್, ಪೋಲೆಂಡ್, ನಾರ್ವೆ, ಲಕ್ಸೆಂಬರ್ಗ್, ಉಕ್ರೇನ್ ಪೋರ್ಚುಗಲ್ ಸೇರಿ ದಂತೆ ಸುಮಾರು 27 ದೇಶಗಳಲ್ಲಿ 500 ವೈರಸ್ ಮಾದರಿಗಳು ಕಾಣಿಸಿಕೊಂಡಿವೆ.

ಜರ್ಮನಿ, ಡೆನ್ಮಾರ್ಕ್‌ನಂತಹ ದೇಶಗಳಲ್ಲಿ ಮಾರಣಾಂತಿಕ ಪ್ರಮಾಣದಲ್ಲಿ ವೈರಸ್ ಹರಡುತ್ತಿವೆ. ಎಚ್ಚೆತ್ತು ಆದಷ್ಟು ಬೇಕ ಲಸಿಕೆ ಪಡೆದುಕೊಂಡರೇ ಕನಿಷ್ಠ ಮರಣದಿಂದ ತಪ್ಪಿಸಿಕೊಳ್ಳಬಹುದು ಎಂದು ಲಂಡನ್‌ನಲ್ಲಿರುವ ಜೆನೆಟಿಕ್ಸ್ ಇನ್‌ಸ್ಟಿಟ್ಯೂಟ್‌ನ ನಿರ್ದೇಶಕ ಪ್ರೊಫೆಸರ್ ಫ್ರಾಂಕೋಯಿಸ್ ಬಲೂಕ್ಸ್ ತಿಳಿಸಿದ್ದಾರೆ. ವಿಜ್ಞಾನಿಗಳು ತೀವ್ರ ಕಳವಳ ವ್ಯಕ್ತಪಡಿಸುತ್ತಿದ್ದಾರೆ. ಇದು ಮತ್ತಷ್ಟು ಸಾಂಕ್ರಾಮಿಕವಾಗುವ ಸಾಧ್ಯತೆಯಿದೆ.

ಇದು ಸಂಭವಿಸಿದಲ್ಲಿ, ಆದರೆ ಇದು ವೇಗವಾಗಿ ವ್ಯಾಪಿಸಿ ಅನೇಕ ಗಂಭೀರ ಕಾಯಿಲೆಗಳಿಗೆ ಕಾರಣವಾಗಬಹು ದು ಎಂದು ಹೇಳಲಾಗುತ್ತಿದೆ. ಎಕ್ಸ್‌ಇಸಿ ರೂಪಾಂತರವು ಅಸ್ತಿತ್ವದಲ್ಲಿರುವ ಕೋವಿಡ್ -19 ಲಸಿಕೆಗಳ ವಿರುದ್ಧ ರೋಗನಿರೋಧಕ ಶಕ್ತಿಯನ್ನು ಅಭಿವೃದ್ಧಿಪಡಿಸುವ ಸಾಧ್ಯತೆಯಿದೆ ಎಂದು ಹೇಳಲಾಗುತ್ತಿದೆ.

# ಪೇಜರ್ ಸ್ಫೋಟಕ್ಕೆ ಹೊಸ ತಿರುವು

**ಬೈರುತ್:** ಲೆಬನಾನ್‌ನಲ್ಲಿ ಪೇಜರ್ ಸ್ಫೋಟಿಸಿ ಸಾವಿರಾರು ಸಂಖ್ಯೆಯಲ್ಲಿ ಜನರು ಗಾಯಗೊಂಡ ಪ್ರಕರಣಕ್ಕೆ ಹೊಸ ತಿರುವು ಸಿಕ್ಕಿದೆ. ಇಸ್ರೇಲ್‌ನ ಮೊಸಾದ್ ಗೂಢಚಾರಿಕೆ ಸಂಸ್ಥೆ, 5000 ತೈವಾನ್ ನಿರ್ಮಿತ ಪೇಜರ್‌ಗಳ ಒಳಗೆ ಲೆಬನಾನಿನ ಉಗ್ರಗಾಮಿ ಗುಂಪು ಹೆಜ್ಬೊಲ್ಲಾ ಆದೇಶಿಸಿದ ಸಣ್ಣ ಪ್ರಮಾಣದ ಸ್ಫೋಟಕಗಳನ್ನು ಇರಿಸಿದೆ ಎಂದು ಹಿರಿಯ ಲೆಬನಾನಿನ ಭದ್ರತಾ ಮೂಲಗಳು ತಿಳಿಸಿವೆ. ಹಿರಿಯ ಲೆಬನಾನಿನ ಭದ್ರತಾ ಮೂಲಗಳ ಪ್ರಕಾರ, ಪೇಜರ್‌ನಲ್ಲಿ ಕೋಡ್ ಮಾಡಲಾದ ಸಂದೇಶವನ್ನು ಕಳುಹಿಸಿದಾಗ ಪೇಜರ್‌ಗಳು ಸ್ಫೋಟಗೊಂಡವು, ಏಕಕಾಲದಲ್ಲಿ ಸ್ಫೋಟಕಗಳನ್ನು ಸಕ್ರಿಯಗೊಳಿಸುತ್ತವೆ ಎಂದು ಆರೋಪಿಸಿದ್ದಾರೆ.

ಇರಾನ್ ಬೆಂಬಲಿತ ಉಗ್ರಗಾಮಿ ಗುಂಪು ತೈವಾನ್ ಮೂಲದ ತಯಾರಕ ಗೋಲ್ಡ್ ಅಪೊಲೊದಿಂ ದ 5,000 ಪೇಜರ್‌ಗಳನ್ನು ಏಪ್ರಿಲ್, ಮೇ ನಡುವೆ ದೇಶಕ್ಕೆ ಕಳ್ಳಸಾಗಣೆ ಮಾಡಿತ್ತು ಎಂದು ಭದ್ರತಾ ಮೂಲಗಳು ತಿಳಿಸಿವೆ. ಒಂದು ಸ್ಫೋಟಗೊಂಡ ಪೇಜರ್‌ನ ಮಾದರಿಯನ್ನು ಎಪಿ 924 ರೂಪಾಂತರವೆಂದು ಗುರುತಿಸಿದೆ. ಹಾನಿಗೊಳಗಾದ ಪೇಜರ್‌ಗಳ ಚಿತ್ರಗಳು ಗೋಲ್ಡ್ ಅಪೊಲೊ ನಿರ್ಮಿಸಿದ ವಿನ್ಯಾಸಕ್ಕೆ ಅನುಗುಣವಾಗಿ ಹಿಂಭಾಗದಲ್ಲಿ ವಿನ್ಯಾಸ ಮತ್ತು ಸ್ಟಿಕ್ಕರ್‌ಗಳನ್ನು ಸಹ ಬಹಿರಂಗಪಡಿಸಿದವು. ಇಸ್ರೇಲಿ ಬೇಹುಗಾರಿಕಾ ಸಂಸ್ಥೆಯು ಸಾಧನಗಳ ಬ್ಯಾಟರಿಗಳ ಮೇಲೆ ಹೆಚ್ಚು ಸ್ಫೋಟಕ ವಸ್ತುವಾದ ಇಟಿಒ ಅನ್ನು ಇರಿಸಿದೆ ಮತ್ತು ದೂರದಿಂದ ಬ್ಯಾಟರಿಗಳ ತಾಪಮಾನ ಹೆಚ್ಚಿಸುವ ಮೂಲಕ ಅವುಗಳನ್ನು ಸ್ಫೋಟಿಸಲಾಗಿದೆ ಎಂದು ಆರೋಪಿಸಿದೆ. ಭದ್ರತಾ ಮೂಲಗಳೊಂದಿಗೆ ಮಾತನಾಡಿದ ಕತಾರ್ ಅಲ್ ಜಜೀರಾ ಚಾನೆಲ್, ಪ್ರತಿ ಸಾಧನದಲ್ಲಿ ಇರಿಸಲಾದ ಸ್ಫೋಟಕದ ತೂಕ 20 ಗ್ರಾಂಗಿಂತ ಕ ಡಿಮೆಯಿದೆ ಮತ್ತು ಸ್ಫೋಟಿಸಿದ ಪೇಜರ್ ಗಳನ್ನು ಐದು ತಿಂಗಳ ಹಿಂದೆ ಆಮದು ಮಾಡಿಕೊಳ್ಳಲಾಗಿದೆ ಎಂದು ವರದಿ ಮಾಡಿದೆ.

**''ಮೊಸಾದ್ ಸಾಧನದೊಳಗೆ ಒಂದು ಬೋರ್ಡ್ ಅನ್ನು ಚುಚ್ಚಿದೆ, ಅದು ಕೋಡ್ ಸ್ವೀಕರಿಸುವ ಸ್ಫೋಟಕ ವಸ್ತುವನ್ನು ಹೊಂದಿದೆ. ಯಾವುದೇ ವಿಧಾನದ ಮೂಲಕ ಅದನ್ನು ಪತ್ತೆ ಮಾಡುವುದು ತುಂಬಾ ಕಷ್ಟ. ಯಾವುದೇ ಸಾಧನ ಅಥವಾ ಸ್ಕ್ಯಾ ನರ್ನೊಂದಿಗೆ ಸಹ'' ಎಂದು ಮೂಲಗಳು ತಿಳಿಸಿವೆ.**

**ಅಧಿಕ ಮಂದಿಗೆ ಗಾಯ**

**ಇರಾನ್ ಬೆಂಬಲಿತ ಉಗ್ರಗಾಮಿ ಗುಂಪು ಹೆಜ್ಬೊಲ್ಲಾಹ್‌ನ ಸಾವಿರಾರು ಸದಸ್ಯರು ಬಳಸುವ ಪೇಜರ್‌ಗಳು, ವೈರ್‌ಲೆಸ್ ಸಂವಹನ ಸಾಧನಗಳು ವಲೆಬನಾನ್, ಸಿರಿಯಾದ ಕೆಲವು ಭಾಗಗಳಲ್ಲಿ ಏಕಕಾಲದಲ್ಲಿ ಸ್ಫೋಟಗೊಂಡಿದ್ದವು. ಇದರಿಂದ ಕನಿಷ್ಠ ಒಂಬತ್ತು ಜನರು ಸಾವನ್ನಪ್ಪಿ 3 ಸಾವಿರಕ್ಕೂ ಅಧಿಕ ಮಂದಿ ಗಾಯಗೊಂಡಿದ್ದಾರೆ.**

# ಜಮ್ಮು-ಕಾಶ್ಮೀರದಲ್ಲಿ ಶಾಂತಿಯುತ ಮತದಾನ

**ಶ್ರೀನಗರ:** ಜಮು-ಕಾಶ್ಮೀರದಲ್ಲಿ ವಿಧಾನಸಭೆ ಚುನಾವಣೆಯ ಮೊದಲ ಹಂತದ ಮತದಾನ ಬುಧವಾರ ಬೆಳಿಗ್ಗೆ ಪ್ರಾರಂಭವಾಯಿತು, 370ನೇ ವಿಧಿಯನ್ನು ರದ್ದುಗೊಳಿಸಿದ ನಂತರ ಮೊದಲ ಬಾರಿಗೆ, ಕೇಂದ್ರಾಡಳಿತ ಪ್ರದೇಶದ ಏಳು ಜಿಲ್ಲೆಗಳಲ್ಲಿ ಹರಡಿರುವ 24 ಕ್ಷೇತ್ರಗಳು ಬಿಗಿಯಾದ ಭದ್ರತಾ ವ್ಯವಸ್ಥೆಗಳ ನಡುವೆ ಮತದಾನ ಉತ್ತಮ ರೀತಿಯಲ್ಲಿ ನಡೆಯುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಚುನಾವಣಾ ಆಯೋಗದ ಪ್ರಕಾರ, 11,76,462 ಪುರುಷರು, 11,51,058 ಮಹಿಳೆಯರು ಮತ್ತು 60 ತೃತೀಯಲಿಂಗಿ ಮತದಾರರನ್ನು ಒಳಗೊಂಡಂತೆ ಒಟ್ಟು 23,27,580 ಮತದಾರರು ಹಂತ 1 ರಲ್ಲಿ ಮತ ಚಲಾಯಿಸಲು ಅರ್ಹರಾಗಿದ್ದರು.ಸರಿ ಸುಮಾರು ಶೇ.60 ರಷ್ಟು ಮತದಾನ ನಿರೀಕ್ಷಿಸಲಾಗಿದೆ. 18 ರಿಂದ 19 ವರ್ಷ ವಯಸ್ಸಿನ 1.23 ಲಕ್ಷ ಯುವಕರು, 28,309 ವಿಕಲಾಂಗ ವ್ಯಕ್ತಿಗಳು (ಮತ್ತು 85 ವರ್ಷಕ್ಕಿಂತ ಮೇಲ್ಪಟ್ಟ 15,774 ಹಿರಿಯ ಮತದಾರರು ಸಹ ಮೊದಲ ಹಂತದಲ್ಲಿ ತಮ್ಮ ಹಕ್ಕು ಚಲಾಯಿಸಲು ಮುಂದಾಗಿದ್ದಾರೆ. ಒಟ್ಟಾರೆ 3,276 ಮತಗಟ್ಟೆಗಳಲ್ಲಿ ಒಟ್ಟು 14,000 ಮತಗಟ್ಟೆ ಸಿಬ್ಬಂದಿ




ಪ್ರಕ್ರಿಯೆಯ ಮೇಲ್ವಿಚಾರಣೆ ನಡೆಸಲಿದ್ದಾರೆ 302 ನಗರ ಮತಗಟ್ಟೆಗಳು, 2,974 ಗ್ರಾಮೀಣ ಮತಗಟ್ಟೆಗಳಿವೆ. ಪ್ರತಿ ಮತಗಟ್ಟೆಯಲ್ಲಿ ಒಬ್ಬ ಉಸ್ತುವಾರಿ ಸೇರಿದಂತೆ ನಾಲ್ವರು ಚುನಾವಣಾ ಸಿಬ್ಬಂದಿಯನ್ನು ನಿಯೋಜಿಸಲಾಗುವುದು.

ಸುಮಾರು 14,000 ಕ್ಕೂ ಹೆಚ್ಚು ಚುನಾವಣಾ ಸಿಬ್ಬಂದಿಯನ್ನು ಚುನಾವಣೆಗೆ ಕರ್ತವ್ಯಕ್ಕೆ ನಿಯೋಜಿಸಲಾಗಿದೆ ಎಂದರು. ಭದ್ರತಾ ವ್ಯವಸ್ಥೆಗಳಲ್ಲಿ ಬಿಎಸ್‌ಎಫ್, ಕೇಂದ್ರೀಯ ಸಶಸ್ತ್ರ ಅರೆಸೇನಾ ಪಡೆ,ಜಮು, ಕಾಶೀರ ಸಶಸ್ತ್ರಪೊಲೀಸ್‌ಪಡೆ ಮತ್ತು ಜೆ-ಕೆ ಪೊಲೀಸರ ಬಹು ಹಂತದ ಪಡೆಗಳು ಸೇರಿವೆ. ಕಾಶ್ಮೀರದ ಪ್ರಮುಖ ಅಭ್ಯರ್ಥಿಗಳ ಪೈಕಿ ಬುಧವಾರದಂದು ಸಿಪಿಐನ ಮೊಹಮ್ಮದ್ ಯೂಸುಫ್ ತರಿಗಾಮಿ, ಎಐಸಿಸಿ ಪ್ರಧಾನ ಕಾರ್ಯದರ್ಶಿ ಗುಲಾಮ್ ಅಹದ್, ನ್ಯಾಷನಲ್ ಕಾನ್ಫರೆನ್ಸ್‌ನ ಸಕೀನಾ ಇಟೂ, ಪಿಡಿಪಿಯ ಸರ್ತಾ ಜ್ ಮದ್ನಿ, ಅಬ್ದುಲ್ ರೆಹಮಾನ್ ವೀರಿಗೆ ಬಿಜೆಪಿ ಸವಾಲೊಡ್ಡಿದೆ.

**ಇದು ಜಮ್ಮು ಮತ್ತು ಕಾಶ್ಮೀರದ ಕೇಂದ್ರಾಡಳಿತ ಪ್ರದೇಶದಲ್ಲಿ ನಡೆಯುತ್ತಿ ರುವ ಮೊದಲ ವಿಧಾನಸಭಾ ಚುನಾವಣೆಯಾಗಿದೆ.24 ವಿಧಾನಸಭಾ ಕ್ಷೇತ್ರಗಳಲ್ಲಿ ಬೆಳಗ್ಗೆ 7 ಗಂಟೆಗೆ ಮತದಾನ ಆರಂಭವಾಗಿದೆ. ಮೂರು ಹಂತದ ಚುನಾವಣೆಯ ಮೊದಲ ಹಂತದಲ್ಲಿ ಇಂದು ಪಿರ್ ಪಂಜಾಲ್ ಪರ್ವತ ಶ್ರೇಣಿಯ ಎರಡೂ ಬದಿಯ ಲ್ಲಿರುವ ಜಮ್ಮು ಮತ್ತು ಕಾಶ್ಮೀರದ ಏಳು ಜಿಲ್ಲೆಗಳು ತಮ ಪ್ರತಿನಿಧಿಗಳನ್ನು ಆಯ್ಕೆ ಮಾಡಲಿದ್ದಾರೆ. 90 ಪಕ್ಷೇತರರು ಸೇರಿದಂತೆ 219 ಅಭ್ಯರ್ಥಿಗಳ ಭವಿಷ್ಯವನ್ನು 23 ಲಕ್ಷಕ್ಕೂ ಹೆಚ್ಚು ಮತದಾರರು ನಿರ್ಧರಿಸಲಿದ್ದಾರೆ.**

# ಶೀಘ್ರ ಟ್ರಂಪ್- ಪ್ರಧಾನಿ ಮೋದಿ ಭೇಟಿ



**ವಾಷಿಂಗ್ಟನ್:** ಅಮೆರಿಕದ ಮಾಜಿ ಅಧ್ಯಕ್ಷ, ರಿಪಬ್ಲಿಕನ್ ಪಕ್ಷ ದ ಅಭ್ಯರ್ಥಿ ಡೊನಾಲ್ಡ್ ಟ್ರಂಪ್ ಅವರನ್ನು ಮುಂದಿನ ವಾರ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಲಿದ್ದಾರೆ ಎಂದು ಮೂಲಗಳು ತಿಳಿಸಿವೆ. ನವೆಂಬರ್ 5 ರಂದು ಅಮೆರಿಕಾ ಅಧ್ಯಕ್ಷೀಯ ಚುನಾವಣೆ ನಡೆಯುತ್ತಿರುವ ಹಿನ್ನೆಲೆಯಲ್ಲಿ ಉಭಯ ನಾಯಕರ ಭೇಟಿ ಕುತೂಹಲ ಕೆರಳಿಸಿದೆ.

ಪ್ರಧಾನಿ ನರೇಂದ್ರ ಮೋದಿ ಮತ್ತು ಡೊನಾಲ್ಡ್ ಟ್ರಂಪ್ ಅವರು ಎಲ್ಲಿ ಭೇಟಿಯಾಗಲಿದ್ದಾರೆ ಎಂಬ ಬಗ್ಗೆ ಇನ್ನೂ ಸ್ಥಳ ಸಮಯದ ನಿಗಧಿಯಾಗಿಲ್ಲ ಎನ್ನಲಾಗಿದ್ದು ಅಮೆರಿಕಾ ಭೇಟಿ ವೇಳೆ ಈ ಇಬ್ಬರ ನಾಯಕರ ಭೇಟಿ ನಡೆಯಲಿದೆ ಎನ್ನಲಾಗಿದೆ. ಅಮೆರಿಕಾ ಭೇಟಿ ವೇಳೆ ಪ್ರಧಾನಿ ನರೇಂದ್ರ ಮೋದಿ ತಮ್ಮನ್ನು ಭೇಟಿ ಮಾಡುತ್ತಿದ್ದಾರೆ ಎಂದು ಡೋನಾಲ್ಡ್ ಟ್ರಂಪ್ ಅವರು ಈ ವಿಷಯ ಖಚಿತ ಪಡಿಸಿದ್ದಾರೆ.

ಮಿಚಿಗನ್‌ನ ಫ್ಲಿಂಟ್‌ನಲ್ಲಿ ನಡೆದ ಪ್ರಚಾರ ಕಾರ್ಯಕ್ರಮದಲ್ಲಿ ಮಾತನಾಡಿದ ಡೊನಾಲ್ಡ್ ಟ್ರಂಪ್ ಅವರು ಅಮೇರಿಖಾ-ಭಾರತ ವ್ಯಾಪಾರ ಸಂಬಂಧಗಳ ಕುರಿತು ಚರ್ಚೆ ನಡೆಸುವ ಸಾಧ್ಯತೆ ಇದೆ ಎನ್ನಲಾಗಿದೆ. ಅಮೇರಿಕಾ ಅಧ್ಯಕ್ಷ ಜೋ ಬೈಡೆನ್ ಅವರು ಆಯೋಜಿಸಿರುವ ಡೆಲವೇರ್ನ ವಿಲ್ಮಿಂಗ್ಟನ್‌ನಲ್ಲಿ ಕ್ವಾಡ್ ಲೀಡರ್ಸ್ ಶೃಂಗಸಭೆಗಾಗಿ ಪ್ರಧಾನಿ ಮೋದಿ ಅವರು ಸೆಪ್ಟೆಂಬರ್ 21ರಿಂದ 23 ರವರೆಗೆ ಅಮೇರಿಕಾಕ್ಕೆ ಭೇಟಿ ನೀಡಲಿದ್ದಾರೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ.

2017 ರಿಂದ 2021 ರವರೆಗೆ ಡೊನಾಲ್ಡ್ ಟ್ರಂಪ್ ಅಧ್ಯಕ್ಷರಾಗಿದ್ದ ಅವಧಿಯಲ್ಲಿ ಡೊನಾಲ್ಡ್ ಟ್ರಂಪ್, ಪ್ರಧಾನಿ ನರೇಂದ್ರ ಮೋದಿ ನಿಕಟ ವೈಯಕ್ತಿಕ ಸಂಬಂಧವನ್ನು ಹೊಂದಿದ್ದರು. 2020 ರಲ್ಲಿ ಡೊನಾಲ್ಡ್ ಟ್ರಂಪ್ ಭಾರತಕ್ಕೆ ಭೇಟಿ ನೀಡಿದಾಗ, ಪ್ರಧಾನಿ ನರೇಂದ್ರ ಮೋದಿ ಅವರು ಬೃಹತ್ ರ್‍ಯಾಲಿಯನ್ನು ಆಯೋಜಿಸಿದ್ದರು,

# ಟೈಟಾನ್ ದುರಂತ ಮೊದಲ ಫೋಟೊ ಬಿಡುಗಡೆ

**ವಾಷಿಂಗ್ಟನ್:** ಕಳೆದ ವರ್ಷ ದುರಂತ ಸ್ಫೋಟ ಕಂಡ ಟೈಟಾನ್ ಸಬ್‌ಮರ್ಸಿಬಲ್‌ನ ಮೊದಲ ಫೋಟೋವನ್ನು ಸಾರ್ವಜನಿಕವಾಗಿ ಬಿಡುಗಡೆ ಮಾಡಲಾಗಿದೆ. ಜೊತೆಗೆ ಐವರು ಸಾವನ್ನಪ್ಪಿದ್ದರು ಎನ್ನುವ ಸಂಗತಿಯನ್ನು ಬಯಲು ಮಾಡಿದೆ. ಕಳೆದ ವರ್ಷ ಜೂನ್‌ನಲ್ಲಿ ಟೈಟಾನಿಕ್ ಅವಶೇಷಗಳ ಸ್ಥಳಕ್ಕೆ ಇಳಿಯುವಾಗ ಸ್ಫೋಟಗೊಂಡ ಟೈಟಾನ್ ಸಬ್‌ಮರ್ಸಿಬಲ್‌ನ ಮೊದಲ ಚಿತ್ರವನ್ನು ಅಮೆರಿಕಾದ ಕರಾವಳಿ ಕಾವಲು ಪಡೆ ಸಾರ್ವಜನಿಕವಾಗಿ ಬಿಡುಗಡೆ ಮಾಡಿದ್ದು ಹಡಗಿನಲ್ಲಿದ್ದ ಐದು ಜನರ ಸಾವಿನ ವಿವರವನ್ನು ಬಹಿರಂಗಪಡಿಸಿದೆ.

ಟೈಟಾನ್ ಸಬ್‌ಮರ್ಸಿಬಲ್‌ನ ಸಿಬ್ಬಂದಿಯಿಂದ ತಣ್ಣಗಾಗುವ ಮೂರು ಪದಗಳ ಪಠ್ಯ ಉಪವು ಮತ್ತಷ್ಟು ಕೆಳಗಿಳಿಯುವಾಗಲೂ ''ಎಲ್ಲಾ ಚೆನ್ನಾಗಿತ್ತು'' ಎಂದು ಹೇಳಲಾಗಿದೆ. ವಿಚಾರಣೆಯ ಸಮಯದಲ್ಲಿ ಟೈಟಾನ್ ಸಿಬ್ಬಂದಿ ಮತ್ತು ಪೊಲಾರ್ ಪ್ರಿನ್ಸ್, ಹತ್ತಿರದ ಬೆಂಬಲ ಹಡಗು ನಡುವಿನ ಪಠ್ಯ ಸಂಭಾಷಣೆ ಸಹ ಬಹಿರಂಗಪಡಿಸಲಾಗಿದೆ ಪೊಲಾರ್ ಪ್ರಿನ್ಸ್‌ನ ಮಾಹಿತಿ ಪ್ರದರ್ಶನದಲ್ಲಿ ಇದು ಗೋಚರಿಸುತ್ತದೆಯೇ ಎಂದು ಕೇಳಿದಾಗ, ಟೈಟಾನ್ ಸಿಬ್ಬಂದಿಯಿಂದ ತಣ್ಣಗಾಗುವ ಮೂರು ಪದಗಳ ಪಠ್ಯವನ್ನು ಬಿಡುಗಡೆ ಮಾಡಲಾಗಿದೆ.

ಕಳೆದ ವರ್ಷ ಹಡಗಿನ ಉದ್ರಿಕ್ತ ಹುಡುಕಾಟದ ಸಮಯದಲ್ಲಿ ಸೆರೆಹಿಡಿಯಲಾದ ದುರದೃಷ್ಟಕರ ಟೈ ಟಾನ್‌ನ ಚಿತ್ರ ಅಟ್ಲಾಂಟಿಕ್ ಮಹಾಸಾಗರದ ನೆಲದ ಮೇಲೆ 12,500 ಅಡಿ ಆಳದಲ್ಲಿ ಸಂಚರಿಸುವ ವೇಳೆ ಮುಳುಗಡೆಯಾಗಿತ್ತು. ಮೆರೈನ್ ಬೋರ್ಡ್ ಆಫ್ ಇನ್ವೆಸ್ಟಿಗೇಶನ್ ಪ್ರಕಾರ, ಟೈಟಾನ್‌ನ ಬೇರ್ಪಟ್ಟ ಬಾಲ ಕೋನ್ ಮತ್ತು ಇತರ ಶಿಲಾಖಂಡರಾಶಿಗಳು ಉಪವು ''ದುರಂತದ ಸ್ಫೋಟ'' ಸಂಭವಿಸಿದೆ ಎಂದು ಹೇಳಲಾಗಿದೆ. ಅಂತಿಮ ಸಂದೇಶದಲ್ಲಿ, ಟೈಟಾನ್‌ನ ಸಿಬ್ಬಂದಿ ಪೊಲಾರ್ ಪ್ರಿನ್ಸ್‌ಗೆ ಎರಡು ಡಬ್ಲ್ಯುಟಿಎಸ್ ಬೀಳಿಸಿ ತು, ಅಂದರೆ ಸಮುದ್ರದ ಮೇಲ್ಮೈಗೆ ಹಿಂತಿ ರುಗುವ ಪ್ರ ಯತ್ನದಲ್ಲಿ ಉಪವು ಎರಡು ಅಳತೆಯ ತೂಕವ ನ್ನು ಕಳೆದುಕೊಂಡಿದೆ. ಇದನ್ನು ಅನುಸರಿಸಿ, ಹಡಗು ಅಂತಿಮವಾಗಿ ಬೆಂಬಲ ಹಡಗಿನ ಸಂಪರ್ಕವನ್ನು ಕಳೆದುಕೊಂಡಿತು ಮತ್ತು ಸ್ಫೋಟಿಸಿದೆ ಎನ್ನಲಾಗಿದೆ.

# ಕಾರ್ಯಕ್ರಮಕ್ಕೆ ಕಾಂಗ್ರೆಸ್ ನಾಯಿಗಳು ಬಂದ್ರೆ ಸಮಾಧಿ ಮಾಡ್ತೀವಿ: ಶಾಸಕ



**ಮುಂಬೈ:** ತಮ್ಮ ಕಾರ್ಯಕ್ರಮಕ್ಕೆ ಬರುವ ಯಾ ವುದೇ ಕಾಂಗ್ರೆಸ್ ನಾಯಿಯನ್ನು ಸಮಾಧಿ ಮಾಡು ವುದಾಗಿ ಶಿವಸೇನೆ ಶಾಸಕ ಸಂಜಯ್ ಗಾಯಕ್ವಾಡ್ ಮತ್ತೊಂದು ಪ್ರಚೋದನಕಾರಿ ಹೇ ಳಿಕೆ ನೀಡಿದ್ದಾರೆ.

ಕೆಲ ದಿನಗಳ ಹಿಂದೆ ಕಾಂ ಗ್ರೆಸ್ ನಾಯಕ ರಾಹುಲ್ ಗಾಂಧಿ ಅವರ ನಾಲಿಗೆಯನ್ನು ಕತ್ತರಿಸುವವರಿಗೆ ಬಹುಮಾನ ನೀಡುವುದಾಗಿ ಘೋಷಿಸಿದ್ದು ರಾಜಕೀಯ ಸಂಚಲನ ಮೂಡಿಸಿದ್ದ ಗಾಯಕ್ವಾಡ್ ಇದೀಗ ಮತ್ತೊಂದು ಹೇಳಿಕೆ ನೀಡಿ ಸಂಚಲನ ಮೂಡಿಸಿದ್ದಾರೆ. ಶಿವಸೇನೆಯ ಮುಖ್ಯಸ್ಥರಾಗಿರುವ ಮುಖ್ಯಮಂತ್ರಿ ಏಕನಾಥ್ ಶಿಂಧೆ ಅವರು ತಮ ಜಿಲ್ಲೆಯ ಮಹಿಳೆಯರಿಗಾಗಿ ಸರ್ಕಾರದ ಪ್ರಮುಖ ಮುಖ್ಯಮಂತ್ರಿ ಮಾಝಿ ಲಡ್ಕಿ ಬಹಿನ್ ಯೋಜನೆ ಕುರಿತು ಕಾರ್ಯಕ್ರಮವೊಂದರಲ್ಲಿ ಭಾಗವಹಿಸಲಿದ್ದಾರೆ ಎಂದು ವೀಡಿಯೊದಲ್ಲಿ ಹೇಳಲಾಗಿದೆ. ನನ್ನ ಕಾರ್ಯಕ್ರಮಕ್ಕೆ ಕಾಂಗ್ರೆಸ್‌ನ ಯಾವುದೇ ನಾಯಿ ಬರಲು ಯತ್ನಿಸಿದರೆ, ಅಲ್ಲಿಯೇ ಸಮಾಧಿ ಮಾಡುತ್ತೇನೆ ಎಂದು ಗಾಯಕ್‌ವಾಡ್ ಹೇಳುತ್ತಿದ್ದಾರೆ. ಮೀಸಲು ವ್ಯವಸ್ಥೆಯನ್ನು ರದ್ದುಪಡಿಸುವ ಕುರಿತು ರಾಹುಲ್ ಗಾಂಧಿ ಅವರ ಹೇಳಿಕೆಗಾಗಿ ನಾಲಿಗೆಯನ್ನು ಕತ್ತರಿಸುವ ಯಾರಿಗಾದರೂ 11 ಲಕ್ಷ ರೂಪಾಯಿ ಬಹುಮಾನ ನೀಡುವುದಾಗಿ ಶಾಸಕರು ಈ ಹಿಂದೆ ಘೋಷಿಸಿದ್ದರು.

ನಾನು ಹೇಳಿಕೆ ನೀಡಿದ್ದೇನೆ, ನಾನು ಕ್ಷಮೆಯಾಚಿಸದಿದ್ದರೆ, ಸಿಎಂ ಏಕೆ ಹೀಗೆ ಮಾಡಬೇಕು. ದೇಶದ 140 ಕೋಟಿ ಜನರಲ್ಲಿ, ಜನ ಸಂಖ್ಯೆಯ ಶೇ.50 ರಷ್ಟು ಜನರು ಮೀಸಲಾತಿ ಪಡೆ ಯುತ್ತಾರೆ ಮತ್ತು ನಾನು ನೀಡಿದ ಹೇಳಿಕೆಗೆ ನಾನು ದಢವಾಗಿದ್ದೇನೆ. ಮೀಸಲಾತಿಯನ್ನು ತೆಗೆದುಹಾಕುವ ಬಗ್ಗೆ ಮಾತನಾಡಿದ ವ್ಯಕ್ತಿಯ ಬಗ್ಗೆಗಿನ ವಿವಾದದ ಬಗ್ಗೆ ಕೇಳಿದಾಗ ಗಾಯಕ್ವಾಡ್ ಹೇಳಿದರು. ನಂತರ ಅರಣ್ಯ ಇಲಾಖೆಯು ದಂತವನ್ನು ಫೋರೆನ್ಸಿಕ್ ಗುರುತಿಗಾಗಿ ಕಳುಹಿಸಿತು, ಗಾಯಕ್ವಾಡ್ ವಿರುದ್ಧ ವನ್ಯಜೀವಿ ಸಂರಕ್ಷಣಾ ಕಾಯ್ದೆಯಡಿ ಆರೋಪ ಹೊರಿಸಲಾಗಿತ್ತು.

**ಲೋಕಸಭೆಯಲ್ಲಿ ವಿರೋಧ ಪಕ್ಷದ ನಾಯಕನ ಬಗ್ಗೆ ಮಾಡಿದ ಹೇಳಿಕೆಗೆ ಸಂಬಂಧಿಸಿದಂತೆ ಪೊಲೀಸರು ಅವರ ವಿರುದ್ಧ ಪ್ರಕರಣ ದಾಖಲಿಸಿದ್ದಾರೆ. ಗಾಯಕ್‌ವಾಡ್‌ಗೆ ವಿವಾದಗಳು ಹೊಸದೇನಲ್ಲ. ಕಳೆದ ತಿಂಗಳು, ಪೊಲೀಸರು ತಮ ಕಾರನ್ನು ತೊಳೆಯುವ ವಿಡಿಯೋ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗಿತ್ತು. ಒಳಗೆ ವಾಂತಿ ಮಾಡಿಕೊಂಡ ನಂತರ ಪೊಲೀಸರು ಅದನ್ನು ಸ್ವಂತವಾಗಿ ಸ್ವಚ್ಛಗೊಳಿಸಿದರು**

**-ಸಂಜಯ್ ಗಾಯಕ್ವಾಡ್, ಶಾಸಕ**

# ಸಹೋದ್ಯೋಗಿಗಳ ಮೇಲೆ ಗುಂಡಿನ ದಾಳಿ: ಇಬ್ಬರು ಯೋಧರು ಸಾವು, ಹಲವರಿಗೆ ಗಾಯ

**ರಾಯ್‌ಪುರ:** ಛತ್ತೀಸಗಢದ ಬಲರಾಂಪುರ ಜಿಲ್ಲೆಯ ಶಿಬಿರವೊಂದರಲ್ಲಿ ಸಶಸ್ತ್ರ ಪಡೆಯ (ಸಿಎಎಫ್) ಸಹೋದ್ಯೋಗಿಯೊಬ್ಬರು ಗುಂಡಿನ ದಾಳಿ ನಡೆಸಿದ ಪರಿಣಾಮ ಇಬ್ಬರು ಸಿಎಎಫ್ ಯೋಧರು ಮೃತಪಟ್ಟಿದ್ದು, ಹಲವರಿಗೆ ಗಾಯಗಳಾಗಿವೆ ಎಂದು ಹಿರಿಯ ಅಧಿಕಾರಿಯೊಬ್ಬರು ಬುಧವಾರ ತಿಳಿಸಿದ್ದಾರೆ. ಸಿಎಎಫ್‌ನ 11ನೇ ಬೆಟಾಲಿಯನ್‌ನ ಶಿಬಿರದಲ್ಲಿ ಬುಧವಾರ ಬೆಳಿಗ್ಗೆ 11 ಗಂಟೆ ಸುಮಾರಿಗೆ ಈ ಘಟನೆ ನಡೆದಿದೆ. ಪ್ರಾಥಮಿಕ ಮಾಹಿತಿಯ ಪ್ರಕಾರ, ಕಾನ್‌ಸ್ಟೆಬಲ್ ಅಜಯ್



ಸಿದರ್ ರೈಫಲ್‌ನಿಂದ ತನ್ನ ಸಹೋದ್ಯೋಗಿಗಳ ಮೇಲೆ ಗುಂಡು ಹಾರಿಸಿದ್ದಾನೆ ಎಂದು ಅಧಿಕಾರಿಯೊಬ್ಬರು ಹೇಳಿದ್ದಾರೆ. ಕಾನ್‌ಸ್ಟೆಬಲ್ ರೂಪೇಶ್ ಪಟೇಲ್ ಸ್ಥಳದಲ್ಲೇ ಮೃತಪಟ್ಟರೆ, ಮತ್ತೊರ್ವ ಕಾನ್‌ಸ್ಟೆಬಲ್ ಸಂದೀಪ್ ಪಾಂಡೆ ಅವರನ್ನು ಆಸ್ಪತ್ರೆಗೆ ಸಾಗಿಸುವ ಮಾರ್ಗ ಮಧ್ಯೆ ಮೃತಪಟ್ಟಿದ್ದಾರೆ ಎಂದು ಪೊಲೀಸ್ ಮಹಾನಿರೀಕ್ಷಕ (ಸುರ್ಗುಜಾ ಶ್ರೇಣಿ) ಅಂಕಿತ್ ಗಾರ್ಗ್ ಮಾಹಿತಿ ನೀಡಿದ್ದಾರೆ.

ಗಾಯಗೊಂಡವರನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದೆ. ಗುಂಡಿನ ಶಬ್ದ ಕೇಳಿದ ತಕ್ಷಣ ಸ್ಥಳಕ್ಕೆ ಬಂದ ಇತರೆ ಸಿಎಎಫ್ ಯೋಧರು ಆರೋಪಿ ಕಾನ್‌ಸ್ಟೆಬಲ್ ಅಜಯ್ ಸಿದರ್ ಅವರನ್ನು ಸೆರೆ ಹಿಡಿದರು. ಘಟನೆಗೆ ನಿಖರ ಮಾಹಿತಿ ಲಭ್ಯವಾಗಿಲ್ಲ. ಆದರೆ ತನಿಖೆ ನಡೆಸಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ನಕ್ಸಲ್ ವಿರೋಧಿ ಕಾರ್ಯಾಚರಣೆಗಾಗಿ ಜಾರ್ಖಂಡ್ ರಾಜ್ಯದ ಗಡಿ ಭಾಗದ ಸಮೀಪ ಸಿಎಎಫ್ ಪಡೆ ಬೀಡುಬಿಟ್ಟಿದೆ. ಗಾಯಗೊಂಡವರನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದೆ. ಗುಂಡಿನ ಶಬ್ದ ಕೇಳಿದ ತಕ್ಷಣ ಸ್ಥಳಕ್ಕೆ ಬಂದ ಇತರೆ ಸಿಎಎಫ್ ಯೋಧರು ಆರೋಪಿ ಕಾನ್‌ಸ್ಟೆಬಲ್ ಅಜಯ್ ಸಿದರ್ ಅವರನ್ನು ಸೆರೆ ಹಿಡಿದರು. ಘಟನೆಗೆ ನಿಖರ ಮಾಹಿತಿ ಲಭ್ಯವಾಗಿಲ್ಲ. ಆದರೆ ತನಿಖೆ ನಡೆಸಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ನಕ್ಸಲ್ ವಿರೋಧಿ ಕಾರ್ಯಾಚರಣೆಗಾಗಿ ಜಾರ್ಖಂಡ್ ರಾಜ್ಯದ ಗಡಿ ಭಾಗದ ಸಮೀಪ ಸಿಎಎಫ್ ಪಡೆ ಬೀಡುಬಿಟ್ಟಿದೆ.

# ದಿಲ್ಲಿಯನ್ನು ಇನ್ನು ದೇವರೇ ಕಾಪಾಡಬೇಕು

## ದಿಲ್ಲಿಯ ನೂತನ ಮುಖ್ಯಮಂತ್ರಿಯಾಗಿ ಆತಿಶಿ ಮರ್ಲೇನಾ ಆಯ್ಕೆಗೆ ಸ್ವಾತಿ ಮಳಿವಾಲ್ ಕಿಡಿ



**ಹೊಸದಿಲ್ಲಿ:** ನಿರ್ಗಮಿತ ಸಿಎಂ ಅರವಿಂದ್ ಕೇಜ್ರಿವಾಲ್ ಅವರ ಸ್ಥಾನಕ್ಕೆ ಆಯ್ಕೆಯಾಗಿರುವ ಆತಿಶಿ ಮ ರ್ಲೇನಾ ವಿರುದ್ಧ ಹರಿಹಾಯ್ದಿರುವ ಆಮ್ ಆದ್ಮಿ ಪಕ್ಷದ ರಾಜ್ಯಸಭಾ ಸಂಸದೆ ಸ್ವಾತಿ ಮಳಿವಾಲ್, ಇನ್ನು ದಿಲ್ಲಿಯನ್ನು ದೇವರೇ ಕಾಪಾಡಬೇಕು ಎಂದು ವ್ಯಂಗ್ಯವಾಗಿ ಹೇಳಿದ್ದಾರೆ. ದಿಲ್ಲಿ ಮಹಿಳಾ ಆಯೋಗದ ಅಧ್ಯಕ್ಷೆಯೂ ಆಗಿ ದ್ದ ಸ್ವಾತಿ ಮಳಿವಾಲ್, ಸಿಎಂ ಅರವಿಂದ್ ಕೇಜ್ರಿವಾಲ್ ಅವರ ನಿವಾಸದಲ್ಲಿ ಅವರ ಆಪ್ತ ಸಹಾಯಕ ತಮ್ಮ ಮೇಲೆ ಹಲ್ಲೆ ನಡೆಸಿದ್ದಾನೆ ಎಂದು ಆರೋಪಿಸುವ ಮೂಲಕ ಸಂಚಲನ ಮೂಡಿಸಿದ್ದರು. ಈ ಘಟನೆ ಬಳಿಕ ಅವರು ಆಪ್ ನಾಯಕರ ವಿರುದ್ಧ ವ್ಯಾಪಕ ವಾಗ್ದಾಳಿ ನಡೆಸುತ್ತಿದ್ದಾರೆ.

ಮುಂದಿನ ದಿಲ್ಲಿ ಸಿಎಂ ಅಗಿ ಆತಿಶಿ ಅವರನ್ನು ಆಯ್ಕೆ ಮಾಡಿರುವ ಪಕ್ಷದ ನಿರ್ಧಾರವನ್ನು ಟೀಕಿಸಿರುವ ಸ್ವಾತಿ, 2011ರಲ್ಲಿ ನಡೆದ ಸಂಸತ್ ದಾಳಿಯ ಆರೋಪಿ ಸಯ್ಯದ್ ಅಬ್ದುಲ್ ರಹಮಾನ್ ಗೀಲಾನಿ ಜತೆ ಆತಿಶಿ ಅವರ ಪೋಷಕರು ತೀರಾ ನಿಕಟ ನಂಟು ಹೊಂದಿದ್ದರು ಎಂದು ಆರೋಪಿಸಿದ್ದಾರೆ. ದಿಲ್ಲಿಯ ಪ್ರೆಸ್ ಕ್ಲಬ್‌ನಲ್ಲಿ ಅಫ್ಜಲ್ ಗುರುವಿನ ಸ್ಮರ ಣಾರ್ಥ ಗೀಲಾನಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಆತಿಶಿಯ ಪೋಷಕರು ಭಾಗವಹಿಸಿದ್ದರು ಎಂದೂ ಹೇಳಿ ದ್ದಾರೆ. ಕಾರ್ಯಕ್ರಮದಲ್ಲಿ- 'ಒಬ್ಬ ಅಫ್ಜಲ್ ಸತ್ತರೆ, ಲಕ್ಷಾಂತರ ಮಂದಿ ಹುಟ್ಟುತ್ತಾರೆ', 'ಕಾಶ್ಮೀರವು ಸ್ವಾತಂತ್ರ್ಯಕ್ಕೆ ಆಗ್ರಹಿಸುತ್ತದೆ' ಎಬಂತಹ ಘೋಷಣೆಗಳನ್ನು ಕೂಗಲಾಗಿತ್ತು. ಆತಿಶಿ ಮರ್ಲೇನಾರ ಪೋಷಕರು ಸಯ್ಯದ್ ಗೀಲಾನಿಯ ಬಂಧನ ಮತ್ತು ಚಿತ್ರಹಿಂಸೆ ಎಂಬ ಶೀರ್ಷಿಕೆಯ ಲೇಖನ ಕೂಡ ಬರೆದಿದ್ದರು. ದಿಲ್ಲಿಯನ್ನು ದೇವರೇ ಕಾಪಾಡಬೇಕು ಎಂದು ಸ್ವಾತಿ ಹೇಳಿದ್ದಾರೆ.

ಸಿಎಂ ಸ್ಥಾನಕ್ಕೆ ಆತಿಶಿ ಅವರ ಹೆಸರನ್ನು ಮಂಗಳ ವಾರ ಘೋ ಷಣೆ ಮಾಡು ತ್ತಿದ್ದಂತೆಯೇ ಸ್ವಪಕ್ಷದ ವಿರುದ್ಧವೇ ಸ್ವಾತಿ ಮಳಿವಾಲ್ ವಾಗ್ದಾಳಿ ನ ಡೆಸಿದ್ದರು. ಇದು ದಿಲ್ಲಿಗೆ ದುಃಖಕರ ದಿನ ಎಂ ದಿದ್ದ ಅವರು, ಆತಿಶಿ ಅವರನ್ನು ಡಮ್ಮಿ ಸಿಎಂ ಎಂದು ಲೇವಡಿ ಮಾಡಿದ್ದರು.

**ಅಪ್ ನಾಯಕನ ಕಿಡಿ:** ಸ್ವಾತಿ ಮಳಿವಾಲ್ ಹೇಳಿಕೆಗೆ ಆಕ್ರೋಶ ವ್ಯಕ್ತಪಡಿಸಿರುವ ಆಪ್ ನಾಯ ಕ ದಿಲೀಪ್ ಪಾಂಡೆ, ಅವರ ಲ್ಲಿ ಸ್ವಲ್ಪವಾದರೂ ನಾಚಿಕೆ ಉ ಳಿದಿದ್ದರೆ ರಾಜ್ಯಸಭಾ ಸಂಸದೆ ಸ್ಥಾನಕ್ಕೆ ರಾಜೀನಾಮೆ ನೀಡಿ, ಬಿಜೆಪಿ ಟಿಕೆಟ್ ಪಡೆಯಲಿ ಎಂದು ಕಿಡಿಕಾರಿದ್ದಾರೆ.

**ಸ್ವಪಕ್ಷದ ವಿರುದ್ಧ ಮತ್ತೆ ಕಿಡಿ**

**ಆಮ್ ಆದ್ಮಿ ಪಕ್ಷದ ರಾಜ್ಯಸಭಾ ಸಂಸದೆ ಸ್ವಾತಿ ಮಳಿವಾಲ್ ಅವರು ಸ್ವಪಕ್ಷದ ವಿರುದ್ಧ ಮತ್ತೆ ಕಿಡಿಕಾರಿದ್ದಾರೆ. ದಿಲ್ಲಿಯ ನೂತನ ಸಿಎಂ ಸ್ಥಾನಕ್ಕೆ ಆತಿಶಿ ಮರ್ಲೇನಾ ಅವರ ಆಯ್ಕೆಯನ್ನು ಟೀಕಿಸಿರುವ ಅವರು, ಆತಿಶಿಯ ತಂದೆ ತಾಯಿಗೆ ಸಂಸತ್ ದಾಳಿ ಆರೋಪಿ ಸಯ್ಯದ್ ಗೀಲಾನಿ ಜತೆ ಬಹಳ ಹತ್ತಿರದ ನಂಟು ಇತ್ತು ಎಂದು ಆರೋಪಿಸಿದ್ದಾರೆ.**

**ಗೀಲಾನಿ ಬಗ್ಗೆ ಲೇಖನ**

**ಆತಿಶಿ ಮರ್ಲೇನಾ ಅವರ ಪೋಷಕರು ಎಸ್ಎಆರ್ ಗೀಲಾನಿ ಜತೆ ಆಪ್ತ ಸಂಬಂಧ ಹೊಂದಿದ್ದರು. ಸಂಸತ್ ಮೇಲಿನ ದಾಳಿಯಲ್ಲಿ ಗೀಲಾನಿ ಕೈವಾಡದ ಬಗ್ಗೆ ಆರೋಪ ಇತ್ತು. 2016ರಲ್ಲಿ ಆತ ದಿಲ್ಲಿಯ ಪ್ರೆಸ್‌ಕ್ಲಬ್‌ನಲ್ಲಿ ಅಫಜ್ಲ್ ಗುರುವಿನ ಸ್ಮರಣಾರ್ಥ ಆತ ಕಾರ್ಯಕ್ರಮ ಆಯೋಜಿಸಿದ್ದ. ಅದರಲ್ಲಿ ಆತಿಶಿ ಮರ್ಲೇನಾ ಅವರ ಪೋಷಕರು ಗೀಲಾನಿ ಜತೆ ವೇದಿಕೆ ಹಂಚಿಕೊಂಡಿದ್ದರು ಎಂದು ಸ್ವಾತಿ ಕಿಡಿಕಾರಿದ್ದಾರೆ.**

## ಮಿನಿ ನ್ಯೂಸ್

### ಭಾರತದ ಮೊದಲ ಮಹಿಳಾ ಫೈಟರ್ ಪೈಲಟ್ ಆದ ಮೋಹನಾ ಸಿಂಗ್

**ಜೋಧಪುರ್:** ಸ್ಕ್ವಾಡ್ರನ್ ಲೀಡರ್ ಮೋಹನಾ ಸಿಂಗ್ ಅವರು ಎಲೈಟ್ 18 ಫ್ಲೈಯಿಂಗ್ ಬುಲೆಟ್ಸ್ ಸ್ಕ್ವಾಡ್ರನ್‌ಗೆ ಸೇರಿದ ಮೊದಲ ಮಹಿಳಾ ಫೈಟರ್ ಪೈಲಟ್ ಆಗಿದ್ದಾರೆ. ಅವರು ಭಾರತದ ಸ್ಥಳೀಯವಾಗಿ ಮೇಡ್ ಇನ್ ಇಂಡಿಯಾ ಯೋಜನೆಯಡಿ ನಿ ರ್ಮಿಸಿ ರುವ ಎಲ್‌ಸಿಎ ತೇಜಸ್ ಫೈಟರ್ ಜೆಟ್‌ನ ಸ್ಕ್ವಾಡ್ರನ್ ಅಗಿ ಕಾರ್ಯ ನಿರ್ವಹಿಸುತ್ತಿದ್ದಾರೆ.

ದೇಶದ ಮೊದಲ ಮಹಿಳಾ ಫೈಟರ್ ಪೈಲಟ್‌ಗಳಲ್ಲಿ ಒಬ್ಬರಾದ ಮೋಹನ ಸಿಂಗ್ ಅವರ ಈ ಗಮನಾರ್ಹ ಸಾಧನೆಯು ಭಾರತೀಯ ವಾಯುಪಡೆಯ ಲಿಂಗ ಸಮಾನತೆ ಮತ್ತು ಸಬಲೀಕರಣದ ಬದ್ಧತೆಯನ್ನು ಒತ್ತಿಹೇಳುತ್ತದೆ. ಈ ಅಧಿಕಾರಿಯು ಜೋಧ್‌ಪುರದಲ್ಲಿ ಇತ್ತೀಚೆಗೆ ನಡೆದ ತರಂಗ್ ಶಕ್ತಿ ವ್ಯಾಯಾಮದ ಭಾಗವಾಗಿದ್ದರು, ಅಲ್ಲಿ ಅವರು ಮೂರು ಪಡೆಗಳ ಮೂವರು ಉಪ ಮುಖ್ಯಸ್ಥರ ಐತಿಹಾಸಿಕ ಹಾರಾಟದ ಭಾಗವಾಗಿದ್ದರು. ಮೋಹನ ಸಿಂಗ್ ಅವರು ಭಾರತೀಯ ವಾಯುಪಡೆಯಲ್ಲಿ ಫೈಟರ್ ಪೈಲಟ್‌ಗಳಾದ ಮೂವರು ಮಹಿಳೆಯರ ಮೊದಲ ಗುಂಪಿನ ಭಾಗವಾಗಿದ್ದರು. ಮೋಹನ ಸಿಂಗ್ ಅವರ ಇತರ ಇಬ್ಬರು ಮಹಿಳಾ ದೇಶಬಾಂಧವರು, ಭಾವನಾ ಕಾಂತ್ ಮತ್ತು ಅವ್ನಿ ಚತುರ್ವೇದಿ ಈಗ ಪಶ್ಚಿಮ ಮರುಭೂಮಿಯಲ್ಲಿ ಎಸ್‌ಯು-30 ಎಂಕೆಐ ಫೈಟರ್ ಜೆಟ್‌ಗಳನ್ನು ಹಾರಿಸುತ್ತಿದ್ದಾರೆ.

### ಸಿಕ್ಕಿಂನಲ್ಲಿ ಚೀನಾ ಗಡಿವರೆಗೆ ರಸ್ತೆ ಸಂಪರ್ಕ ಮರುಸ್ಥಾಪನೆ

**ಗ್ಯಾಂಗ್ಟಾಕ್:** ಲಾಚೆನ್ ಕಣಿವೆಯ ಉದ್ದಕ್ಕೂ ಚೀನಾ ಗಡಿಗೆ ರಸ್ತೆ ಸಂಪರ್ಕ ವನ್ನು ಮರುಸ್ಥಾಪಿಸಲು ಸಿಕ್ಕಿಂನ ಮಂಗನ್ ಜಿಲ್ಲೆಯ ಝೀಮಾದಲ್ಲಿ ಗಡಿ ರಸ್ತೆಗಳ ಸಂಸ್ಥೆ (ಬಿಆರ್‌ಒ) ಹೊಸ ಬೈಲಿ ಸೇತುವೆಯನ್ನು ನಿರ್ಮಿ ಸಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ. ಈ ವರ್ಷ ಮೇ 29 ರಂದು ಉತ್ತರ ಸಿಕ್ಕಿಂನ ಝೀಮಾದಲ್ಲಿನ ನಿರ್ಣಾಯಕ ಬೈಲಿ ಸೇತುವೆಯು ಲಾಚೆನ್ ಚು ನದಿಯಲ್ಲಿ ಹಠಾತ್ ಪ್ರವಾಹದಲ್ಲಿ ಹಾನಿಗೊಳಗಾಗಿತ್ತು. ಸ್ವಸ್ತಿಕ್ ಯೋಜನೆಯಡಿಯಲ್ಲಿ ಬಿಆರ್‌ಒ ಕಾರ್ಯಕರ್ತರು ಆ. 24 ರಂದು ಹೊಸ ಬೈಲಿ ಸೇತುವೆಯ ನಿರ್ಮಾಣವನ್ನು ಪ್ರಾರಂಭಿಸಿದರು ಮತ್ತು ಸೆಪ್ಟೆಂಬರ್ 16 ರಂದು ಒಂದು ತಿಂಗಳೊಳಗೆ ಪೂರ್ಣಗೊಂಡಿ ತು ಎಂದು ಪ್ರಕಟಣೆ ತಿಳಿಸಿದೆ. ಪ್ರಮುಖವಾದ ಬೈಲಿ ಸೇತುವೆಯ ನಿರ್ಮಾಣವು ಸ್ಥಳೀಯರಿಗೆ ಮಾತ್ರವಲ್ಲದೆ ಚೀನಾ ಗಡಿಯ ಕಡೆಗೆ ಈ ಪ್ರದೇಶದಲ್ಲಿ ನಿಯೋಜಿಸಲಾದ ಸಶಸ್ತ್ರ ಪಡೆಗಳ ಲಾಜಿಸ್ಟಿಕ್ ಪೋಷಣೆಯನ್ನು ಸಕ್ರಿಯಗೊಳಿಸುತ್ತದೆ.

ಇದು ಕಳೆದ ವರ್ಷ ಅಕ್ಟೋಬರ್‌ನಿಂದ ಕಡಿತಗೊಂಡಿರುವ ಪ್ರಮುಖ ಪ್ರವಾಸಿ ತಾಣವಾದ ಗುರುದೋಂಗ್‌ಮಾರ್ಗ್ ಸರೋವರಕ್ಕೆ ವಾಹನ ಸಂಪರ್ಕವನ್ನು ಒದಗಿಸುವ ಮೂಲಕ ಉತ್ತರ ಸಿಕ್ಕಿಂನಲ್ಲಿ ಪ್ರವಾಸೋದ್ಯಮವನ್ನು ಉತ್ತೇಜಿಸುತ್ತದೆ ಎಂದು ಪ್ರಕಟಣೆ ತಿಳಿಸಿದೆ.

### ಪೇಜರ್‌ಗಳ ಸ್ಫೋಟ: 9 ಸಾವು, 2 ಸಾವಿರಕ್ಕೂ ಹೆಚ್ಚು ಜನರಿಗೆ ಗಾಯ

**ಬೈರೂತ್:** ಲೆಬನಾನ್‌ನಾದ್ಯಂತ ಮತ್ತು ಸಿರಿಯಾದ ಕೆಲವೆಡೆ ಮಂಗಳವಾರ ಸಾವಿರಾರು ಪೇಜರ್‌ಗಳು ಸ್ಫೋಟಗೊಂಡ ಪರಿಣಾಮ ಒಂಬತ್ತು ಮಂ ದಿ ಮೃತಪಟ್ಟು, 2,800ಕ್ಕೂ ಹೆಚ್ಚು ಜನ ಗಾಯಗೊಂಡಿದ್ದಾರೆ.

ಹಿಜ್ಬುಲ್ಲಾ ಬಂಡುಕೋರ ಸಂಘಟನೆಯ ಮುಖಂಡರಾದ ಅಲಿ ಅಮ್ಮಾರ್ ಮತ್ತು ಹಸನ್ ಫಲ್‌ಲಲ್ಲಾ ಅವರ ಪುತ್ರರೂ ಮೃತಪಟ್ಟವರಲ್ಲಿ ಸೇರಿದ್ದಾರೆ ಎಂದು ಮೂಲಗಳು ತಿಳಿಸಿವೆ. ಲೆಬನಾನ್‌ನಲ್ಲಿರುವ ಇರಾನ್‌ನ ರಾಯಭಾರಿ ಮೊಪ್ತಬಾ ಅಮಾನಿ ಅವರಿಗೆ ಸಣ್ಣ ಪ್ರಮಾಣದ ಗಾಯ ಆಗಿದೆ. 'ಮೃತರಲ್ಲಿ ಒಬ್ಬ ಬಾಲಕಿ ಸೇರಿದ್ದಾಳೆ. ಗಾಯಗೊಂಡವರ ಪೈಕಿ 200 ಜನರ ಸ್ಥಿತಿ ಗಂಭೀರವಾಗಿದೆ' ಎಂದು ಲೆಬನಾನ್ ಆರೋಗ್ಯ ಸಚಿವ ಫಿರಾಸ್ ಅಬಿಯದ್ ಹೇಳಿದ್ದಾರೆ. ಸಿನಿಮಾ ಲೆಬನಾನ್ ಬೆಕಾ ಕಣಿವೆ ಪ್ರದೇಶದಲ್ಲಿ ಹಿಬ್ಬುಲ್ಲಾ ಸಂಘಟನೆಯ ಸದಸ್ಯನ ಪೇಜರ್ ಸ್ಫೋಟಗೊಂಡಾಗ ಆತನ 10 ವರ್ಷದ ಮಗಳು ಮೃತಪಟ್ಟಿದ್ದಾಳೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

### ಪಶ್ಚಿಮ ಬಂಗಾಳದಲ್ಲಿ ಪ್ರವಾಹ ಪರಿಸ್ಥಿತಿ ಮಾನವ ನಿರ್ಮಿತ

**ಕೋಲ್ಕತ್ತ:** ಪಶ್ಚಿಮ ಬಂಗಾಳದ ಕೆಲವೆಡೆ ಎದುರಾಗಿರುವ ಪ್ರವಾಹ ಪರಿಸ್ಥಿತಿಯು ಮಾನವ ನಿರ್ಮಿತ ಎಂದು ಮುಖ್ಯಮಂತ್ರಿ, ಮಮತಾ ಬ್ಯಾನರ್ಜಿ ಬುಧವಾರ ಹೇಳಿದ್ದಾರೆ. ಹೂಗ್ಲಿ ಜಿಲ್ಲೆಯ ಪೀಡಿತ ಪ್ರದೇಶಗಳಿ ಗೆ ಭೇಟಿ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಡಿವಿಸಿ ಯೋಜನೆಯ ವಿವಿಧ ಅಣೆಕಟ್ಟುಗಳಿಂದ 3.5 ಲಕ್ಷ ಕ್ಯೂಸೆಕ್ ನೀರನ್ನು ಬಿಡುಗಡೆ ಮಾಡಿರುವುದೇ ಪ್ರವಾಹ ಪರಿಸ್ಥಿತಿ ಕಾರಣವಾಗಿದೆ ಎಂದು ಮಮತಾ ತಿಳಿಸಿದ್ದಾರೆ. ಈ ಹಿಂದೆ ಇಷ್ಟು ಪ್ರಮಾಣದಲ್ಲಿ ನೀರು ಬಿ ಡುಗಡೆ ಮಾಡಿಲ್ಲ. ಈ ಸಂಬಂಧ ದಾಮೋದರ್ ವ್ಯಾಲಿ ಕಾರ್ಪೊ ರೇಷನ್ ಅಧಿಕಾರಿಗಳು, ಜಾರ್ಖಂಡ್ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿದ್ದೇನೆ. ಆದರೆ ಯಾವುದೇ ಪ್ರಯೋಜನವಾಗಿಲ್ಲ ಎಂದು ಹೇಳಿದ್ದಾರೆ. ಡಿವಿಸಿ ಅಣೆಕಟ್ಟುಗಳನ್ನು ಕೇಂದ್ರವು ಹೂಳೆತ್ತುತ್ತಿಲ್ಲ. ಈ ಅಣೆಕಟ್ಟುಗಳಲ್ಲಿ ಹೂಳೆತ್ತಿದ್ದರೆ ಇನ್ನೂ ಎರಡು ಲಕ್ಷ ಕ್ಯೂಸೆಕ್‌ಗಳಷ್ಟು ನೀರನ್ನು ಹೆಚ್ಚುವರಿಯಾಗಿ ಸಂಗ್ರಹಿಸಬಹುದಿತ್ತು ಎಂದು ಕೇಂದ್ರ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಡಿವಿಸಿಯಿಂದ ನೀರನ್ನು ಬಿಡುಗಡೆಗೊಳಿಸುವ ಈ ಕ್ರಮವು ಪೂರ್ವಯೋಜನೆಯಾಗಿದ್ದು, ಪಶ್ಚಿಮ ಬಂಗಾಳವನ್ನು ತೊಂದರೆಗೆ ಸಿಲುಕಿಸಲು ದುರುದ್ದೇಶವಾಗಿದೆ ಎಂದು ಮಮತಾ ಆರೋಪಿಸಿದ್ದಾರೆ.

### ಕೇಜ್ರಿವಾಲ್ ರಾಜೀನಾಮೆ ರಾಷ್ಟ್ರಪತಿಗೆ ವರ್ಗಾವಣೆ; ಸೆ.21ರಂದು ಆತಿಶಿ ಪ್ರಮಾಣ

**ನವದೆಹಲಿ:** ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿದಿರುವ ಅರವಿಂದ ಕೇಜ್ರಿವಾಲ್ ಅವರ ರಾಜೀನಾಮೆ ಪತ್ರವನ್ನು ದೆಹಲಿ ಲೆಫ್ಟಿನೆಂಟ್ ಗವರ್ನರ್ ವಿ.ಕೆ.ಸಕ್ಸೇನಾ ಅವರು ರಾಷ್ಟ್ರಪತ್ರಿ ದ್ರೌಪದಿ ಮುರ್ಮು ಅವರಿಗೆ ಬುಧವಾರ ವರ್ಗಾಯಿಸಿದ್ದಾರೆ. ಹಾಗೆಯೇ, ಸಚಿವೆ ಆತಿಶಿ ಅವರು ಸೆಪ್ಟೆಂಬರ್ 21ರಂದು ಪ್ರಮಾಣ ಸ್ವೀಕರಿಸುವಂತೆ ಪ್ರಸ್ತಾಪಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ. ದೆಹಲಿ ಸರ್ಕಾರ ಸದ್ಯ ಹಿಂಪಡೆದಿರುವ 'ಅಬಕಾರಿ ನೀತಿ' ಜಾರಿ ವೇಳೆ ನಡೆದಿದೆ ಎನ್ನಲಾದ ಹಣದ ಅಕ್ರಮ ವರ್ಗಾವಣೆ ಪ್ರಕರಣ ಸಂಬಂಧ ಕೇಂದ್ರೀಯ ತನಿಖಾ ದಳವು ಕೇಜ್ರಿವಾಲ್ ಅವರನ್ನು ಬಂಧಿಸಿತ್ತು.

ಕಳೆದ ವಾರ ಜಾಮೀನು ಪಡೆದಿರುವ ಅವರು, ಜನರು ತಮಗೆ ಮತ್ತೊಮ್ಮೆ ಅಧಿಕಾರ ನೀಡುವವರೆಗೆ ಸಿಎಂ ಸ್ಥಾನದಿಂದ ಕೆಳಗಿಳಿಯುವುದಾಗಿ ಘೋಷಿಸಿದ್ದರು. ಬಳಿಕ ಶಾಸಕಾಂಗ ಪಕ್ಷದ ಸಭೆ ನಡೆಸಿದ್ದ ಕೇಜ್ರಿವಾಲ್, ತಮ್ಮ ಉತ್ತರಾಧಿಕಾರಿಯಾಗಿ ಸಚಿವೆ ಆತಿಶಿ ಅವರ ಹೆಸರನ್ನು ಘೋಷಿಸಿದ್ದರು. ನಿರ್ಗಮಿತ ಮುಖ್ಯಮಂತ್ರಿಯ ನಿರ್ಧಾರವನ್ನು ಪಕ್ಷವು ಸರ್ವಾನುಮತದಿಂದ ಅಂಗೀಕರಿಸಿದೆ.




# ಸೆ.20ರಂದು ಟಿಕೆಟ್ ಬೆಲೆ 99ಕ್ಕೆ ಇಳಿಕೆ

ಸಿನಿಮಾ ಪ್ರೇಮಿಗಳಿಗೆ ಇದೀಗ ಗುಡ್ ನ್ಯೂಸ್ ಸಿಕ್ಕಿದೆ. ಇದೇ ಸೆ.20ರಂದು ರಾಷ್ಟ್ರೀಯ ಸಿನಿಮಾ ದಿನವಾಗಿದೆ. ಈ ದಿನದಂದು ಸಿನಿಮಾ ನೋಡುವ ಪ್ರೇಕ್ಷಕರಿಗೆ ಕೈಗೆಟುಕುವ ಬೆಲೆಯಲ್ಲಿ ವಿಶೇಷ ರಿಯಾಯಿತಿ ನೀಡಲಾಗ್ತಿದೆ. ರಾಷ್ಟ್ರವ್ಯಾಪ್ತಿ ಚಿತ್ರಮಂದಿರಗಳಲ್ಲಿ 99 ರೂ.ಗೆ ಟಿಕೆಟ್ ಬೆಲೆ ಇಳಿಕೆ ಮಾಡಲು 'ಮಲ್ಟಿಪ್ಲೆಕ್ಸ್ ಅಸೋಸಿಯೇಷನ್ ಆಫ್ ಇಂಡಿಯಾ ನಿರ್ಧರಿಸಿದೆ. ಸೆ.20ರಂದು ಪಿವಿಆರ್, ಸಿನಿಪೊಲೀಸ್, ಮಿರಜ್, ಐನಾಕ್ಸ್, ಸಿಟಿಪ್ರೈಡ್ ಸೇರಿದಂತೆ 4000ಕ್ಕೂ ಹೆಚ್ಚು ಚಿತ್ರಮಂದಿರಗಳು ರಾಷ್ಟ್ರೀಯ ಸಿನಿಮಾ ದಿನವನ್ನು ಆಚರಿಸಲಿದ್ದಾರೆ. ಈ ದಿನದಂದು ದೇಶಾದ್ಯಂತ ಚಲನಚಿತ್ರ ಪ್ರೇಕ್ಷಕರು ಕೇವಲ 99 ರೂ.ಗೆ ಸಿನಿಮಾ ವೀಕ್ಷಿಸುವ ಅವಕಾಶ ನೀಡಲಾಗುತ್ತಿದೆ. ಅದಷ್ಟೇ ಅಲ್ಲ, ಚಿತ್ರಮಂದಿರದಲ್ಲಿನ ಫುಡ್ ಐಟಂ ಗಳ ಮೇಲೆ ಒಂದೊಳ್ಳೆಯ ಆಫರ್ ಗಳನ್ನು ನಿಗದಿ ಮಾಡಿದ್ದಾರೆ. ಇದರ ಕುರಿತು ಚಿತ್ರಮಂದಿರಗಳ ವೈಬ್‌ಸೈಟ್‌ನಲ್ಲಿ ಸಂಪೂರ್ಣ ವಿವರ ಸಿಗಲಿದೆ. ಆನ್‌ಲೈನ್‌ನಲ್ಲಿ ಸಿನಿಮಾ ಟಿಕೆಟ್ ಬುಕ್ಕಿಂಗ್ ಅವಕಾಶ ಕೂಡ ಇದೆ. ಸದ್ಯ ಯುಧ್ರ, ಸ್ತ್ರೀ 2, ಕೃಷ್ಣಂ ಪ್ರಣಯ ಸಖಿ, ಇಬ್ಬನಿ ತಬ್ಬಿದ ಇಳೆಯಲಿ ಸೇರಿದಂತೆ ಹಲವು ಸಿನಿಮಾಗಳು ಥಿಯೇಟರ್‌ನಲ್ಲಿ ಪ್ರಸ್ತುತ ಸದ್ದು ಮಾಡುತ್ತಿವೆ.



# ಬ್ಯಾಕ್ ಟು ಬ್ಯಾಕ್ 3 ಸಿನಿಮಾಗಳಲ್ಲಿ ರಶ್ಮಿಕಾ

ಪ್ಯಾನ್ ಇಂಡಿಯಾ ನಾಯಕಿ


ಕೊಡಗಿನ ಬೆಡಗಿ ರಶ್ಮಿಕಾ ಮಂದಣ್ಣ ಸೌತ್ ಮತ್ತು ಬಾಲಿವುಡ್ ಚಿತ್ರರಂಗದಲ್ಲಿ ಬೇಡಿಕೆಯ ನಟಿಯರಲ್ಲಿ ಒಬ್ಬರಾಗಿದ್ದಾರೆ. ಪ್ರಸ್ತುತ ಬ್ಯಾಕ್ ಟು ಬ್ಯಾಕ್ 3 ಚಿತ್ರಗಳಲ್ಲಿ ನಟಿ ಬ್ಯುಸಿಯಾಗಿದ್ದಾರೆ.

ಬಹುಭಾಷಾ ನಟಿಯಾಗಿ ಜನಪ್ರಿಯತೆಗಳಿಸಿರುವ ನಟಿ ರಶ್ಮಿಕಾ, ಏಕಕಾಲದಲ್ಲಿ ಸಲ್ಮಾನ್ ಖಾನ್ ಜೊತೆ ಸಿಖಂದರ್, 'ಪುಷ್ಪ 2' ಸಿನಿಮಾದ ಕೊನೆಯ ಹಂತದ ಶೂಟಿಂಗ್ ನಡೆಯುತ್ತಿದೆ. ಇದರ ಜೊತೆಗೆ ಮುಂಬೈನಲ್ಲಿ ಧನುಷ್ ಜೊತೆಗಿನ ಕುಬೇರ' ಸಿನಿಮಾದ ಶೂಟಿಂಗ್ ಕೂಡ ಮಾಡಲಾಗ್ತಿದೆ. ನಟಿಯ ಹಾರ್ಡ್ ವರ್ಕ್‌ಗೆ ಫ್ಯಾನ್ಸ್ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಇನ್ನೂ 'ಪುಷ್ಪ 2' ಮತ್ತು 'ಛಾವಾ' ಸಿನಿಮಾ ಡಿಸೆಂಬರ್‌ನಲ್ಲಿ ರಿಲೀಸ್‌ಗೆ ಸಿದ್ಧವಾಗಿದೆ. ಕುಬೇರ, ಸಿಖಂದರ್, ರೈನ್‌ಬೋ, ದಿ ಗರ್ಲ್‌ಫ್ರೆಂಡ್ ಚಿತ್ರಗಳು ರಶ್ಮಿಕಾ ಕೈಯಲ್ಲಿವೆ. ಇನ್ನೂ ಜ್ಯೂ.ಎನ್‌ಟಿಆರ್ ಮತ್ತು ಪ್ರಶಾಂತ್ ನೀಲ್ ಸಿನಿಮಾಗೆ ರಶ್ಮಿಕಾರನ್ನೇ ಹೀರೋಯಿನ್ ಆಗಿ ಆಯ್ಕೆ ಮಾಡಿದ್ದಾರೆ ಎಂಬ ಸುದ್ದಿ ವೈರಲ್ ಆಗ್ತಿದೆ. ಇದು ನಿಜನಾ ಚಿತ್ರತಂಡ ಘೋಷಣೆ ಮಾಡಬೇಕಿದೆ.

ಸದ್ಯ ಬೇಡಿಕೆ ನಟಿಯಾಗಿರು ರಶ್ಮಿಕಾ ಕಥೆಗೆ ಮತ್ತು ಪಾತ್ರಕ್ಕೆ ಭಾರೀ ಪ್ರಾಮುಖ್ಯತೆ ನೀಡುತ್ತಾರೆ. ಅದರಿಂದಲೇ ಸಕ್ಸಸ್‌ಫುಲ್ ಪ್ಯಾನ್ ಇಂಡಿಯಾ ನಾಯಕಿಯಾಗಿ ಸದ್ದು ಮಾಡುತ್ತಿದ್ದಾರೆ.

# ಐಷಾರಾಮಿ ಅಪಾರ್ಟ್‌ಮೆಂಟ್ ಖರೀದಿಸಿದ ಪೃಥ್ವಿರಾಜ್



ಮಾಲಿವುಡ್ ಸ್ಟಾರ್ ನಟ ಪೃಥ್ವಿರಾಜ್ ಸುಕುಮಾರನ್ ಅವರು 30.6 ಕೋಟಿ ರೂ. ಮೌಲ್ಯದ ಐಷಾರಾಮಿ ಮನೆಯೊಂದನ್ನು ಖರೀದಿಸಿದ್ದಾರೆ. ರಣ್‌ವೀರ್ ಸಿಂಗ್, ಅಕ್ಷಯ್ ಕುಮಾರ್ ಮನೆ ಪಕ್ಕದಲ್ಲೇ ಐಷಾರಾಮಿ ಅಪಾರ್ಟ್‌ಮೆಂಟ್ ಅನ್ನು 'ಸಲಾರ್' ನಟ ಪೃಥ್ವಿರಾಜ್ ಖರೀದಿಸಿದ್ದಾರೆ.

ಪೃಥ್ವಿರಾಜ್ ಸುಕುಮಾರನ್ ಈಗ ಸಲ್ಮಾನ್ ಖಾನ್ ಅಮೀರ್ ಖಾನ್ ಮನೆ ಪಕ್ಕ ಮನೆಯನ್ನು ಖರೀದಿಸಿದ್ದಾರೆ. ಮುಂಬೈನ ಬಾಂದ್ರಾದ ಪಾಲಿ ಹಿಲ್‌ನಲ್ಲಿ ಐಷಾರಾಮಿ ಡುಪ್ಲೆಕ್ಸ್ ಅಪಾರ್ಟ್‌ಮೆಂಟ್ ಖರೀದಿ ಮಾಡಿರುವ ಪೃಥ್ವಿರಾಜ್ ಸುಕುಮಾರನ್ ಈ ಮನೆಗೆ ಬರೋಬ್ಬರಿ 30.6 ಕೋಟಿ ರೂ. ಹಣವನ್ನು ನೀಡಿದ್ದಾರೆ. ಅಂದಾಜು 2,970 ಚದರ ಅಡಿ ವಿಸ್ತೀರ್ಣದಲ್ಲಿ ಈ ಅಪಾರ್ಟ್‌ಮೆಂಟ್ ಹೊಂದಿದೆ.

40 ಚದರ ಮೀಟರ ವಿಸ್ತೀರ್ಣದಲ್ಲಿ ನಾಲ್ಕು ಕಾರು ಪಾರ್ಕಿಂಗ್ ಸ್ಥಳಗಳನ್ನು ನಿರ್ಮಾಣ ಮಾಡಲಾಗಿದೆ. ಸ್ಟ್ಯಾಂಪ್ ಡ್ಯೂಟಿಗೆ 1.84 ಕೋಟಿ ಖರ್ಚಾಗಿದೆ. ಸೆ.12ರಂದು ಈ ಮನೆಯನ್ನು ಅವರು ನೊಂದಣಿ ಮಾಡಿಸಿದ್ದಾರೆ. ಅವರು ಮನೆ ಖರೀದಿಸಿರುವ ಏರಿಯಾದಲ್ಲಿ ಅಕ್ಷಯ್ ಕುಮಾರ್, ರಣ್‌ವೀರ್ ಸಿಂಗ್ ದಂಪತಿ, ತೃಪ್ತಿ ದಿಮ್ರಿ, ಅಥಿಯಾ ಶೆಟ್ಟಿ ಸೇರಿದಂತೆ ಅನೇಕರು ವಾಸ ಮಾಡುತ್ತಿದ್ದಾರೆ.



# ವಿಕ್ಕಿ ಯಾವಾಗಲೂ ಕೂಲ್ ಆಗಿ ಇರುತ್ತಾರೆ

ದಾಂಪತ್ಯದ ಸೀಕ್ರೆಟ್ ಬಿಚ್ಚಿಟ್ಟ ಕತ್ರಿನಾ

ನಟಿ ಕತ್ರಿನಾ ಕೈಫ್ ಮತ್ತು ವಿಕ್ಕಿ ಕೌಶಲ್ ಬಾಲಿವುಡ್‌ನ ಬೆಸ್ಟ್ ಜೋಡಿಗಳಲ್ಲಿ ಒಬ್ಬರು ಎಂಬುದನ್ನು ಪ್ರೂವ್ ಮಾಡಿದ್ದಾರೆ. ವಿಕ್ಕಿ ಯಾವಾಗಲೂ ಕೂಲ್ ಆಗಿ ಇರುತ್ತಾರೆ ಎಂದು ಪತಿಯ ನಡೆಗೆ ಕತ್ರಿನಾ ಕೈಫ್ ಮೆಚ್ಚುಗೆ ಸೂಚಿಸಿದ್ದಾರೆ.

ಇತ್ತೀಚೆಗೆ ನೀಡಿದ ಸಂದರ್ಶನವೊಂದರಲ್ಲಿ ನಟಿ, ತೂಕ ಹೆಚ್ಚಾಗುವ ಕುರಿತು, ಬ್ಯೂಟಿ, ಔಟ್‌ಫಿಟ್‌ಗಳ ಬಗ್ಗೆ ಮಾತನಾಡುವಾಗ ವಿಕ್ಕಿ ಕೌಶಲ್ ಹ್ಯಾಂಡಲ್ ಮಾಡುವ ರೀತಿಯನ್ನು ಕತ್ರಿನಾ ವಿವರಿಸಿದ್ದಾರೆ. ನಾನು ವಿಕ್ಕಿ ಜೊತೆ ಹೊರಗಡೆ ಹೋಗುವಾಗ ತೂಕ ಹೆಚ್ಚಾಗಿರುವ ಬಗ್ಗೆ ಲುಕ್ಸ್ ಬಗ್ಗೆ ಹಲವು ಪ್ರಶ್ನೆಗಳನ್ನು ಕೇಳುತ್ತೇನೆ. ಆಗ ವಿಕ್ಕಿ, ನೀವು ಹೇಗಿದ್ದರೂ ಪರವಾಗಿಲ್ಲ. ನೀವು ನೀವಾಗಿರಿ, ನೀವು ಹೇಗಿದ್ದೀರೋ ಹಾಗೆ ಇರಿ ಎಂದು ಕೂಲ್ ಆಗಿ ಹೇಳುತ್ತಾರೆ.

ಅವರು ಸದಾ ನನ್ನ ಬೆಂಬಲವಾಗಿ ನಿಂತಿದ್ದಾರೆ ಎಂದು ದಾಂಪತ್ಯದ ಬಗ್ಗೆ ಕತ್ರಿನಾ ಮಾತನಾಡಿದ್ದಾರೆ. ಅಂದಹಾಗೆ, 2021ರಲ್ಲಿ ಕತ್ರಿನಾ ಮತ್ತು ವಿಕ್ಕಿ ಕೌಶಲ್ ರಾಜಸ್ಥಾನದಲ್ಲಿ ಮದುವೆಯಾದರು. ಹಲವು ವರ್ಷಗಳ ಪ್ರೀತಿಗೆ ಮದುವೆಯ ಮುದ್ರೆ ಒತ್ತಿದ್ದರು.

# ನಿಮ್ಮ ಮೇಲಿನ ಪ್ರೀತಿ ಪದಗಳಲ್ಲಿ ವಿವರಿಸಲು ಸಾಧ್ಯವಿಲ್ಲ

ಕಾಲಿವುಡ್ ನಟಿ ನಯನತಾರಾ ಸಿನಿಮಾ ಕೆಲಸಗಳ ನಡುವೆ ಸಂಸಾರ, ಮಕ್ಕಳು ಅಂತ ಬ್ಯುಸಿಯಾಗಿದ್ದಾರೆ. ಇದರ ನಡುವೆ ಪತಿ ವಿಘ್ನೇಶ್ ಶಿವನ್ ಬರ್ತ್‌ಡೇ ನಟಿ ರೊಮ್ಯಾಂಟಿಕ್ ಆಗಿ ವಿಶ್ ಮಾಡಿದ್ದಾರೆ. ಪತಿಯ ಹಣೆಯ ಮೇಲೆ ಮುತ್ತಿಟ್ಟು ನಟಿ ಶುಭಕೋರಿದ್ದಾರೆ. ಜನ್ಮದ ದಿನದ ಶುಭಾಶಯಗಳು. ಪದಗಳಲ್ಲಿ ವಿವರಿಸಲು ಸಾಧ್ಯವಾಗದಷ್ಟು ನಾನು ನಿಮ್ಮನ್ನು ಪ್ರೀತಿಸುತ್ತಿದ್ದೇನೆ ಎಂದು ಪತಿಗೆ ನಯನತಾರಾ ರೊಮ್ಯಾಂಟಿಕ್ ಆಗಿ ವಿಶ್ ಮಾಡಿದ್ದಾರೆ. ಇಬ್ಬರ ಕಲರ್‌ಫುಲ್ ಫೋಟೋಗಳನ್ನು ನಟಿ ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ.ಇನ್ನೂ ಹಲವು ವರ್ಷಗಳ ಪ್ರೀತಿಗೆ 2022ರಲ್ಲಿ ಮದುವೆಯ ಮುದ್ರೆ ಒತ್ತಿದ್ದರು.

ಬಾಡಿಗೆ ತಾಯ್ತನ ಮೂಲಕ ಇಬ್ಬರೂ ಮಕ್ಕಳನ್ನು ನಟಿ ಬರಮಾಡಿಕೊಂಡರು. ಅಂದಹಾಗೆ, ಶಾರುಖ್ ಖಾನ್ ಜೊತೆ 'ಜವಾನ್' ಸಿನಿಮಾದಲ್ಲಿ ನಯನತಾರಾ ನಟಿಸಿದ ಮೇಲೆ ಅವರ ಬೇಡಿಕೆ ಹೆಚ್ಚಾಗಿದೆ. ಬಹುಭಾಷೆಗಳಲ್ಲಿ ನಟಿಸುತ್ತಾ ನಟಿ ಆಕ್ಟಿವ್ ಆಗಿದ್ದಾರೆ. ಸದ್ಯ ಅವರು 'ಮೂಕುತಿ ಅಮ್ಮನ್ 2' ಸಿನಿಮಾದಲ್ಲಿ ನಟಿಸಲು ಗ್ರೀನ್ ಸಿಗ್ನಲ್ ಕೊಟ್ಟಿದ್ದಾರೆ. ಈ ಕುರಿತು ಚಿತ್ರತಂಡ ಅಧಿಕೃತವಾಗಿ ತಿಳಿಸಿದೆ. ಇನ್ನೂ ನಯನತಾರಾಗೆ ಸುಂದರ್ ಸಿ. ನಿರ್ದೇಶನ ಮಾಡಲಿದ್ದಾರೆ. ಮತ್ತೊಂದು ದೇವಿ ಕುರಿತು ವಿಭಿನ್ನ ಕಥೆ ತರಲು ಅವರು ಸಿದ್ಧತೆ ಮಾಡಿಕೊಂಡಿದ್ದಾರೆ. ಇದರ ಮೊದಲ ಭಾಗ 'ಮೂಕುತಿ ಅಮ್ಮನ್' ಸಿನಿಮಾದಲ್ಲಿ ನಯನತಾರಾ ಪ್ರಮುಖ ಪಾತ್ರದಲ್ಲಿ ನಟಿಸಿದ್ದರು. ಈಗ ಪಾರ್ಟ್ 2ನಲ್ಲಿಯೂ ಕೂಡ ಅವರು ಸಾಥ್ ನೀಡಲಿದ್ದಾರೆ.


ಮೂಕುತಿ ಅಮ್ಮನ್' ಸಿನಿಮಾದಲ್ಲಿ ನಯನತಾರಾ ಪ್ರಮುಖ ಪಾತ್ರ

# ಮೊದಲ ಟೆಸ್ಟ್‌ಗೆ ಟೀಮ್ ಇಂಡಿಯಾ ಪ್ಲೇಯಿಂಗ್ ಇಲೆವೆನ್

## ಆಲ್‌ರೌಂಡರ್‌ಗಳಾಗಿ ರವೀಂದ್ರ ಜಡೇಜಾ ಹಾಗೂ ರವಿಚಂದ್ರನ್ ಅಶ್ವಿನ್ ಕಾಣಿಸಿಕೊಳ್ಳುವುದು ಖಚಿತ

ಭಾರತ ಮತ್ತು ಬಾಂಗ್ಲಾದೇಶ್ ತಂಡಗಳು ಟೆಸ್ಟ್ ಕ್ರಿಕೆಟ್‌ನಲ್ಲಿ ಒಟ್ಟು 13 ಬಾರಿ ಮುಖಾಮುಖಿಯಾಗಿವೆ. ಈ ವೇಳೆ ಭಾರತ ತಂಡ 11 ಪಂದ್ಯಗಳಲ್ಲಿ ಜಯ ಸಾಧಿಸಿದೆ. ಅತ್ತ ಒಂದೇ ಒಂದು ಗೆಲುವು ದಾಖಲಿಸಲು ಸಾಧ್ಯವಾಗದ ಬಾಂಗ್ಲಾದೇಶ್ ತಂಡವು 2 ಪಂದ್ಯಗಳನ್ನು ಡ್ರಾ ಮಾಡಿಕೊಳ್ಳುವಲ್ಲಿ ಯಶಸ್ವಿಯಾಗಿತ್ತು. ಇದೀಗ 14ನೇ ಬಾರಿಗೆ ಮುಖಾಮುಖಿಯಾಗಲು ಉಭಯ ತಂಡಗಳು ಸಜ್ಜಾಗಿ ನಿಂತಿದೆ. ಭಾರತ ಮತ್ತು ಬಾಂಗ್ಲಾದೇಶ್ ನಡುವಣ ಮೊದಲ ಟೆಸ್ಟ್ ಪಂದ್ಯವು (ಸೆ.19) ಶುರುವಾಗಲಿದೆ. ಚೆನ್ನೈನ ಎಂಎ ಚಿದಂಬರಂ (ಚೆಪಾಕ್) ಸ್ಟೇಡಿಯಂನಲ್ಲಿ ನಡೆಯಲಿರುವ ಈ ಪಂದ್ಯಕ್ಕಾಗಿ ಟೀಮ್ ಇಂಡಿಯಾ ಬಲಿಷ್ಠ ಪ್ಲೇಯಿಂಗ್ ಇಲೆವೆನ್ ಅನ್ನು ಕಣಕ್ಕಿಳಿಸಲಿದೆ. ಅದರಂತೆ ಟೀಮ್ ಇಂಡಿಯಾ ಪರ ಆರಂಭಿಕರಾಗಿ ಯಶಸ್ವಿ ಜೈಸ್ವಾಲ್ ನಾಯಕ ರೋಹಿತ್ ಶರ್ಮಾ ಕಾಣಿಸಿಕೊಳ್ಳುವುದು ಖಚಿತ. 3ನೇ ಕ್ರಮಾಂಕದಲ್ಲಿ ಶುಭ್‌ಮನ್ ಗಿಲ್ ಕಣಕ್ಕಿಳಿಯಲಿದ್ದಾರೆ. ನಾಲ್ಕನೇ ಕ್ರಮಾಂಕದಲ್ಲಿ ವಿರಾಟ್ ಕೊಹ್ಲಿ ಬ್ಯಾಟ್ ಬೀಸಲಿದ್ದಾರೆ. ಹಾಗೆಯೇ ಐದನೇ ಕ್ರಮಾಂಕದಲ್ಲಿ ಕೆಎಲ್ ರಾಹುಲ್ ಹಾಗೂ ಆರನೇ ಕ್ರಮಾಂಕದಲ್ಲಿ ವಿಕೆಟ್ ಕೀಪರ್ ಬ್ಯಾಟರ್ ಆಗಿ ರಿಷಭ್ ಪಂತ್ ಕಾಣಿಸಿಕೊಳ್ಳಲಿದ್ದಾರೆ.

ಇನ್ನು ಆಲ್‌ರೌಂಡರ್‌ಗಳಾಗಿ ರವೀಂದ್ರ ಜಡೇಜಾ ಹಾಗೂ ರವಿಚಂದ್ರನ್ ಅಶ್ವಿನ್ ಕಾಣಿಸಿಕೊಳ್ಳುವುದು ಖಚಿತ. ಇಲ್ಲಿ ಜಡೇಜಾ ಹಾಗೂ ಅಶ್ವಿನ್ ಆಲ್‌ರೌಂಡರ್‌ಗಳಾಗಿರುವ ಕಾರಣ 8ನೇ ಕ್ರಮಾಂಕದವರೆಗೆ ಬ್ಯಾಟಿಂಗ್ ಲೈನಪ್ ಮುಂದುವರೆಸಬಹುದು.



ಇನ್ನುಳಿದಂತೆ ವೇಗಿಗಳಾಗಿ ಜಸ್‌ಪ್ರೀತ್ ಬುಮ್ರಾ ಹಾಗೂ ಮೊಹಮ್ಮದ್ ಸಿರಾಜ್ ಕಾಣಿಸಿಕೊಂಡರೆ, ಸ್ಪಿನ್ನರ್ ಆಗಿ ಕುಲ್ದೀಪ್ ಯಾದವ್ ಕಣಕ್ಕಿಳಿಯಲಿದ್ದಾರೆ. ಈ ಮೂಲಕ ಮೊದಲ ಟೆಸ್ಟ್ ಪಂದ್ಯಕ್ಕೆ ಟೀಮ್ ಇಂಡಿಯಾ ಬಲಿಷ್ಠ ಪ್ಲೇಯಿಂಗ್ ಇಲೆವೆನ್ ರೂಪಿಸಲಿದೆ. ಅದರಂತೆ ಮೊದಲ ಪಂದ್ಯಕ್ಕೆ ಟೀಮ್ ಇಂಡಿಯಾ ಸಂಭಾವ್ಯ ಪ್ಲೇಯಿಂಗ್ ಇಲೆವೆನ್ ಹೀಗಿರಲಿದೆ

**ಭಾರತ ಟೆಸ್ಟ್ ತಂಡ:** ರೋಹಿತ್ ಶರ್ಮಾ (ನಾಯಕ), ಯಶಸ್ವಿ ಜೈಸ್ವಾಲ್, ಶುಭ್‌ಮನ್ ಗಿಲ್, ವಿರಾಟ್ ಕೊಹ್ಲಿ, ಸರ್ಫರಾಝ್ ಖಾನ್, ಕೆಎಲ್ ರಾಹುಲ್, ರಿಷಭ್ ಪಂತ್ (ವಿಕೆಟ್ ಕೀಪರ್), ಧ್ರುವ್ ಜುರೆಲ್ (ವಿಕೆಟ್ ಕೀಪರ್), ರವಿಚಂದ್ರನ್ ಅಶ್ವಿನ್, ರವೀಂದ್ರ ಜಡೇಜಾ, ಕುಲ್ದೀಪ್ ಯಾದವ್, ಅಕ್ಷರ್ ಪಟೇಲ್, ಮೊಹಮ್ಮದ್ ಸಿರಾಜ್, ಜಸ್‌ಪ್ರೀತ್ ಬುಮ್ರಾ , ಆಕಾಶ್ ದೀಪ್ ಮತ್ತು ಯಶ್ ದಯಾಳ್.

# ಬಲಿಷ್ಠ ಭಾರತ ತಂಡವನ್ನು ಕಟ್ಟಿದ್ದು ಕೊಹ್ಲಿ

ಭಾರತ ಕ್ರಿಕೆಟ್ ತಂಡದ ಯಶಸ್ವಿ ಟೆಸ್ಟ್ ನಾಯಕ ಯಾರೆಂಬ ಪ್ರಶ್ನೆ ಮುಂದಿಟ್ಟರೆ ಹಲವು ಉತ್ತರಗಳು ಮುಂದೆ ಬರಬಹುದು. ಆದರೆ ಈ ಉತ್ತರಗಳಲ್ಲಿ ವಿರಾಟ್ ಕೊಹ್ಲಿ ಹೆಸರು ಇರಲೇಬೇಕು. ಏಕೆಂದರೆ ಭಾರತ ಟೆಸ್ಟ್ ತಂಡವನ್ನು ಅತ್ಯಂತ ಯಶಸ್ವಿಯಾಗಿ ಮುನ್ನಡೆಸಿದ ನಾಯಕನೆಂದರೆ ಅದು ವಿರಾಟ್ ಕೊಹ್ಲಿ. ಇದಕ್ಕೆ ಸಾಕ್ಷಿ ಅವರ ನಾಯಕತ್ವದ ಅಂಕಿ ಅಂಶಗಳು. ಭಾರತ ಕ್ರಿಕೆಟ್ ತಂಡವು ವಿಶ್ವದ ಬಲಿಷ್ಠ ತಂಡಗಳಲ್ಲಿ ಒಂದು. ಅದರಲ್ಲೂ ಟೆಸ್ಟ್ ಕ್ರಿಕೆಟ್‌ನಲ್ಲಿ ಟೀಮ್ ಇಂಡಿಯಾ ಪಾರುಪತ್ಯ ಮೆರೆಯುತ್ತಾ ಸಾಗುತ್ತಿದೆ. ಇದಕ್ಕೆ ಸಾಕ್ಷಿ ತವರಿನಲ್ಲಿ ಭಾರತ ತಂಡವು ಸತತ 17 ಟೆಸ್ಟ್ ಸರಣಿಗಳನ್ನು ಗೆದ್ದಿರುವುದು. ಇಂತಹ ಅಮೋಘ ಗೆಲುವಿನ ನಾಗಾಲೋಟಕ್ಕೆ ನಾಂದಿಯಾಡಿದ್ದು ಟೀಮ್ ಇಂಡಿಯಾದ ಮಾಜಿ ನಾಯಕ ವಿರಾಟ್ ಕೊಹ್ಲಿ. ಇದನ್ನು ಭಾರತ ತಂಡದ ಕೋಚ್ ಗೌತಮ್ ಗಂಭೀರ್ ಕೂಡ ಒಪ್ಪಿಕೊಂಡಿದ್ದಾರೆ. ಬಾಂಗ್ಲಾದೇಶ್ ವಿರುದ್ಧದ ಟೆಸ್ಟ್ ಸರಣಿಗೂ ಮುನ್ನ ವಿರಾಟ್ ಕೊಹ್ಲಿ, ಗೌತಮ್ ಗಂಭೀರ್ ಚಿಟ್ ಚಾಟ್ ವೊಂದರಲ್ಲಿ ಜೊತೆಯಾಗಿ ಕಾಣಿಸಿಕೊಂಡಿದ್ದಾರೆ. ಬಿಸಿಸಿಐ ಪ್ರಸ್ತುತಪಡಿಸಿರುವ ಈ ಮಾತುಕತೆಯ ವೇಳೆ ಗಂಭೀರ್, ಬಲಿಷ್ಠ ಭಾರತ ತಂಡ ರೂಪುಗೊಳ್ಳಲು ಕೊಹ್ಲಿಯ ಕೊಡುಗೆಯನ್ನು ಹಾಡಿ ಹೊಗಳಿದ್ದಾರೆ. ಈ ಬಗ್ಗೆ ವಿರಾಟ್ ಕೊಹ್ಲಿ ಜೊತೆ ಮಾತನಾಡಿದ ಗಂಭೀರ್, ಭಾರತ ತಂಡವು ಬಲಿಷ್ಠ ಬೌಲಿಂಗ್ ಲೈನಪ್ ಹೊಂದಲು ನೀವೇ ಮುಖ್ಯ ಕಾರಣ. ನೀವು ಗಟ್ಟಿಯಾದ ವೇಗದ ಬೌಲಿಂಗ್ ಲೈನಪ್ ಸೃಷ್ಟಿಸಿದ್ದೀರಿ. ಅಂದು ನೀವು ಭಾರತ ಟೆಸ್ಟ್ ತಂಡದ ನಾಯಕತ್ವವನ್ನು ವಹಿಸಿಕೊಂಡಾಗ ನಿಮ್ಮ ವಯಸ್ಸು 24-25 ವರ್ಷ ಅಷ್ಟೇ. ಆ ಸಮಯದಲ್ಲಿ ನೀವು ಬಲಿಷ್ಠ ತಂಡವನ್ನು ರೂಪಿಸಿದ್ದೀರಿ. ಅದರ ಶ್ರೇಯಸ್ಸು ಖಂಡಿತವಾಗಿಯೂ ನಿಮಗೆ ಸಲ್ಲಬೇಕು ಎಂದು ಗೌತಮ್ ಗಂಭೀರ್ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಅಷ್ಟೇ ಅಲ್ಲದೆ ನಿಮ್ಮ (ವಿರಾಟ್ ಕೊಹ್ಲಿ) ನಾಯಕತ್ವದಲ್ಲಿ ವಿದೇಶಗಳಲ್ಲಿ ಟೀಮ್ ಇಂಡಿಯಾ ಹಲವು ಟೆಸ್ಟ್ ಪಂದ್ಯಗಳನ್ನು ಗೆದ್ದುಕೊಂಡಿದೆ. ಇಂತಹ ಗೆಲುವಿಗೆ ನಿಮ್ಮ ಮನೋಭಾವವೇ ಕಾರಣ. ಈ ಮೂಲಕ ಬಲಿಷ್ಠ ಭಾರತ ತಂಡ ರೂಪುಗೊಳ್ಳುವಲ್ಲಿ ನಿಮ್ಮ ಪಾತ್ರವು ಬಹಳ ಮುಖ್ಯ ಎಂದು ಗಂಭೀರ್ ಕೊಹ್ಲಿಯ ನಾಯಕತ್ವವನ್ನು ಕೂಡ ಹೊಗಳಿದ್ದಾರೆ.

ಇದೀಗ ಗೌತಮ್ ಗಂಭೀರ್ ಹಾಗೂ ವಿರಾಟ್ ಕೊಹ್ಲಿ ನಡುವಣ ಚಿಟ್ ಚಾಟ್ ವಿಡಿಯೋ ವೈರಲ್ ಆಗಿದ್ದು, ಟೀಮ್ ಇಂಡಿಯಾ ಕೋಚ್‌ನ ನೇರ ನುಡಿಗಳಿಗೆ ಕಿಂಗ್ ಕೊಹ್ಲಿ ಅಭಿಮಾನಿಗಳು ಮೆಚ್ಚುಗೆ ವ್ಯಕ್ತಪಡಿಸುತ್ತಿದ್ದಾರೆ.

ಅಂದಹಾಗೆ ಗೌತಮ್ ಗಂಭೀರ್ ಹೇಳಿದಂತೆ ಭಾರತ ತಂಡವು ಬಲಿಷ್ಠವಾಗಿ ರೂಪುಗೊಳ್ಳುವಲ್ಲಿ ವಿರಾಟ್ ಕೊಹ್ಲಿಯ ನಾಯಕತ್ವ ಪ್ರಮುಖ ಪಾತ್ರವಹಿಸಿತ್ತು. ಏಕೆಂದರೆ ಕಿಂಗ್ ಕೊಹ್ಲಿ ಮುಂದಾಳತ್ವದಲ್ಲಿ ಭಾರತ ತಂಡವು ಹಲವು ಪ್ರಮುಖ ಸರಣಿಗಳನ್ನು ಗೆದ್ದುಕೊಂಡಿತ್ತು. ಅಷ್ಟೇ ಅಲ್ಲದೆ ಭಾರತ ಕಂಡಂತಹ ಯಶಸ್ವಿ ಟೆಸ್ಟ್ ನಾಯಕರುಗಳ ಪಟ್ಟಿಯಲ್ಲಿ ವಿರಾಟ್ ಕೊಹ್ಲಿ ಅಗ್ರಸ್ಥಾನದಲ್ಲಿದ್ದಾರೆ. ವಿರಾಟ್ ಕೊಹ್ಲಿಯ ನಾಯಕತ್ವದಲ್ಲಿ ಟೀಮ್ ಇಂಡಿಯಾ 2014 ರಿಂದ 2022 ರವರೆಗೆ 68 ಟೆಸ್ಟ್ ಪಂದ್ಯಗಳನ್ನಾಡಿದೆ. ಈ ವೇಳೆ ಭಾರತ ತಂಡವು 40 ಪಂದ್ಯಗಳಲ್ಲಿ ಜಯ ಸಾಧಿಸಿದೆ. ಇನ್ನು 11 ಮ್ಯಾಚ್‌ಗಳನ್ನು ಡ್ರಾ ಮಾಡಿಕೊಂಡಿದೆ. ಅಂದರೆ ಕೊಹ್ಲಿ ನಾಯಕತ್ವದಲ್ಲಿ ಭಾರತ ಟೆಸ್ಟ್ ತಂಡವು ಶೇ. 70.17 ರಷ್ಟು ಗೆಲುವಿನ ಸರಾಸರಿ ಹೊಂದಿತ್ತು.





# ನಿವೃತ್ತಿ ಅನ್ನೋದು ಜೋಕ್ ಆಗಿದೆ

'ಇತ್ತೀಚಿನ ದಿನಗಳಲ್ಲಿ ವಿಶ್ವ ಕ್ರಿಕೆಟ್‌ನಲ್ಲಿ ನಿವೃತ್ತಿ ಎನ್ನುವುದು ಒಂದು ತಮಾಷೆಯಾಗಿದೆ. ಆಟಗಾರರು ನಿವೃತ್ತಿ ಘೋಷಿಸಿ ನಂತರ ಮತ್ತೆ ಕ್ರಿಕೆಟ್ ಆಡಲು ಬರುತ್ತಾರೆ. ಭಾರತದಲ್ಲಿ ನಾವು ಈ ರೀತಿಯ ಘಟನೆಯನ್ನು ನೋಡಿಲ್ಲ ಎಂದು ರೋಹಿತ್ ಹೇಳಿದ್ದಾರೆ.

ಜಿಯೋ ಸಿನಿಮಾದಲ್ಲಿ ಮಾತನಾಡಿದ ಟೀಂ ಇಂಡಿಯಾ ನಾಯಕ ರೋಹಿತ್ ಶರ್ಮಾ ನಿವೃತ್ತಿ ಬಗ್ಗೆ ದೊಡ್ಡ ಹೇಳಿಕೆ ನೀಡಿದ್ದಾರೆ. ವಾಸ್ತವವಾಗಿ 2024 ರ ಟಿ20 ವಿಶ್ವಕಪ್‌ನಲ್ಲಿ ಐತಿಹಾಸಿಕ ಗೆಲುವು ಸಾಧಿಸಿದ ಬಳಿಕ ವಿರಾಟ್ ಕೊಹ್ಲಿ, ರವೀಂದ್ರ ಜಡೇಜಾ ಹಾಗೂ ರೋಹಿತ್ ಶರ್ಮಾ ಅಂತಾರಾಷ್ಟ್ರೀಯ ಟಿ20 ಮಾದರಿಗೆ ವಿದಾಯ ಹೇಳಿದ್ದರು. ಹೀಗಿರುವಾಗ ಮುಂದಿನ ದಿನಗಳಲ್ಲಿ ರೋಹಿತ್ ಶರ್ಮಾ ತಮ್ಮ ನಿರ್ಧಾರದಿಂದ ಯು-ಟರ್ನ್ ತೆಗೆದುಕೊಳ್ಳಬಹುದೇ ಅಥವಾ ಇಲ್ಲವೇ ಎಂಬುದರ ಬಗ್ಗೆ ದೊಡ್ಡ ಹೇಳಿಕೆಯನ್ನು ನೀಡಿದ್ದಾರೆ. ನಿವೃತ್ತಿಯಿಂದ ಯು-ಟರ್ನ್ ತೆಗೆದುಕೊಳ್ಳುವುದರ ಬಗ್ಗೆ ಜಿಯೋ ಸಿನಿಮಾದಲ್ಲಿ ಮಾತನಾಡಿದ ರೋಹಿತ್, 'ಇತ್ತೀಚಿನ ದಿನಗಳಲ್ಲಿ ವಿಶ್ವ ಕ್ರಿಕೆಟ್‌ನಲ್ಲಿ ನಿವೃತ್ತಿ ಎನ್ನುವುದು ಒಂದು ತಮಾಷೆಯಾಗಿದೆ. ಆಟಗಾರರು ನಿವೃತ್ತಿ ಘೋಷಿಸಿ ನಂತರ ಮತ್ತೆ ಕ್ರಿಕೆಟ್ ಆಡಲು ಬರುತ್ತಾರೆ. ಭಾರತದಲ್ಲಿ ನಾವು ಈ ರೀತಿಯ ಘಟನೆಯನ್ನು ನೋಡಿಲ್ಲ. ಆದರೂ ನಾನು ಇತರ ದೇಶಗಳ ಆಟಗಾರರನ್ನು ನೋಡುತ್ತಿದ್ದೇನೆ. ಅವರು ಮೊದಲು ನಿವೃತ್ತಿ ಘೋಷಿಸುತ್ತಾರೆ. ಆದರೆ ಆ ನಂತರ ಯು-ಟರ್ನ್ ತೆಗೆದುಕೊಳ್ಳುತ್ತಾರೆ. ಆದ್ದರಿಂದ ಆಟಗಾರನು ನಿವೃತ್ತಿ ಹೊಂದಿದ್ದಾನೋ, ಇಲ್ಲವೋ ಎಂಬುದು ನಿಮಗೆ ಅರ್ಥವಾಗುವುದಿಲ್ಲ. ಆದರೆ ನನ್ನ ನಿರ್ಧಾರವೇ ಅಂತಿಮ ಮತ್ತು ನಾನು ತುಂಬಾ ಸ್ಪಷ್ಟವಾಗಿದ್ದೇನೆ. ನಾನು ತುಂಬಾ ಇಷ್ಟಪಟ್ಟು ಆಡುತ್ತಿದ್ದ ಸ್ವರೂಪಕ್ಕೆ ವಿದಾಯ ಹೇಳಲು ಇದು ಸರಿಯಾದ ಸಮಯ ಎಂದು ರೋಹಿತ್ ಹೇಳಿಕೊಂಡಿದ್ದಾರೆ.

# ಪಂಜಾಬ್ ಕಿಂಗ್ಸ್ ತಂಡದ ಮುಖ್ಯ ಕೋಚ್ ಆಗಿ ರಿಕಿ ಪಾಂಟಿಂಗ್



ಸಿಬ್ಬಂದಿಯಲ್ಲಿ ಪ್ರಮುಖ ಬದಲಾವಣೆ

2025 ರ ಐಪಿಎಲ್ ಆರಂಭಕ್ಕೂ ಮುನ್ನ ಪಂಜಾಬ್ ಕಿಂಗ್ಸ್ ಫ್ರಾಂಚೈಸಿ ತನ್ನ ಕೋಚಿಂಗ್ ಸಿಬ್ಬಂದಿಯಲ್ಲಿ ಪ್ರಮುಖ ಬದಲಾವಣೆಯನ್ನು ಮಾಡಿದೆ. ಅದರಂತೆ ತಂಡಕ್ಕೆ ಹೊಸ ಮುಖ್ಯ ಕೋಚ್ ಅನ್ನು ನೇಮಕ ಮಾಡಿರುವ ಪಂಜಾಬ್, ಆಸ್ಟ್ರೇಲಿಯಾದ ಮಾಜಿ ನಾಯಕ ರಿಕಿ ಪಾಂಟಿಂಗ್ ಅವರನ್ನು ಮುಖ್ಯ ಕೋಚ್ ಆಗಿ ನೇಮಕ ಮಾಡಿದೆ. 2025 ರ ಐಪಿಎಲ್ ಆರಂಭಕ್ಕೂ ಮುನ್ನ ಪಂಜಾಬ್ ಕಿಂಗ್ಸ್ ಫ್ರಾಂಚೈಸಿ ತನ್ನ ಕೋಚಿಂಗ್ ಸಿಬ್ಬಂದಿಯಲ್ಲಿ ಪ್ರಮುಖ ಬದಲಾವಣೆಯನ್ನು ಮಾಡಿದೆ. ಅದರಂತೆ ತಂಡಕ್ಕೆ ಹೊಸ ಮುಖ್ಯ ಕೋಚ್ ಅನ್ನು ನೇಮಕ ಮಾಡಿರುವ ಪಂಜಾಬ್, ಆಸ್ಟ್ರೇಲಿಯಾದ ಮಾಜಿ ನಾಯಕ ರಿಕಿ ಪಾಂಟಿಂಗ್ ಅವರನ್ನು ಮುಖ್ಯ ಕೋಚ್ ಆಗಿ ನೇಮಕ ಮಾಡಿದೆ. ವಾಸ್ತವವಾಗಿ ರಿಕಿ ಪಾಂಟಿಂಗ್ ಎರಡು ತಿಂಗಳ ಹಿಂದೆಯಷ್ಟೇ ಡೆಲ್ಲಿ ಕ್ಯಾಪಿಟಲ್ಸ್ ತಂಡದ ಕೋಚ್ ಹುದ್ದೆಗೆ ರಾಜೀನಾಮೆ ಸಲ್ಲಿಸಿದ್ದರು. ಆದಾಗ್ಯೂ, ಪಂಜಾಬ್‌ಗೆ ಸೇರಿದ ನಂತರ, ಇತರ ಕೋಚಿಂಗ್ ಸಿಬ್ಬಂದಿಯ ಬದಲಾವಣೆಯ ಬಗ್ಗೆ ಪಾಂಟಿಂಗ್ ತಮ್ಮದೇ ಆದ ನಿರ್ಧಾರಗಳನ್ನು ತೆಗೆದುಕೊಳ್ಳಲಿದ್ದಾರೆ ಪ್ರತಿ ಆವೃತ್ತಿಗೂ ಮುನ್ನ ಪಂಜಾಬ್ ಕಿಂಗ್ಸ್ ತಂಡದಲ್ಲಿ ಬದಲಾವಣೆಗಳಾಗುವುದು ಹೊಸದೇನಲ್ಲ. ಕಳೆದ 7 ವರ್ಷಗಳಲ್ಲಿ ಈ ಫ್ರಾಂಚೈಸಿ, ಒಟ್ಟು 6 ಕೋಚ್‌ಗಳನ್ನು ಬದಲಾಯಿಸಿದೆ.

ಇದೀಗ ರಿಕಿ ಪಾಂಟಿಂಗ್ ಪಂಜಾಬ್ ತಂಡದ ಆರನೇ ಕೋಚ್ ಆಗಿ ಕೆಲಸ ಆರಂಭಿಸಲಿದ್ದಾರೆ. ಐಪಿಎಲ್‌ನಲ್ಲಿ ಇದುವರೆಗೆ ಒಮ್ಮೆಯೂ ಟ್ರೋಫಿ ಗೆಲ್ಲದ ತಂಡಗಳ ಪೈಕಿ ಪಂಜಾಬ್ ಕಿಂಗ್ಸ್ ಕೂಡ ಒಂದು. ಪ್ರತಿ ಆವೃತ್ತಿಗೂ ಮುನ್ನ ಸ್ಟಾರ್ ಆಟಗಾರರನ್ನು ತಂಡಕ್ಕೆ ಸೇರಿಸಿಕೊಂಡು ಅಖಾಡಕ್ಕಿಳಿಯುವ ಪಂಜಾಬ್ ತಂಡಕ್ಕೆ ಕೊನೆಗೆ ಎದುರಾಗುವುದು ಸೋಲು ಮಾತ್ರ. ಇನ್ನು ಕಳೆದ ಆವೃತ್ತಿಯಲ್ಲಿ ಶಿಖರ್ ಧವನ್ ನಾಯಕತ್ವದಲ್ಲಿ ಪಂಜಾಬ್ ಕಿಂಗ್ಸ್ ಕಳಪೆ ಪ್ರದರ್ಶನ ನೀಡಿತ್ತು. ಪ್ಲೇಆಫ್‌ಗೆ ಅರ್ಹತೆ ಪಡೆಯಲು ಸಹ ತಂಡಕ್ಕೆ ಸಾಧ್ಯವಾಗಲಿಲ್ಲ. ಇನ್ನು ಇದೀಗ ಪಂಜಾಬ್ ಕಿಂಗ್ಸ್ ತಂಡವನ್ನು ಸೇರಿಕೊಂಡಿರುವ ರಿಕಿ ಪಾಂಟಿಂಗ್ 2008 ರಿಂದಲೂ ಐಪಿಎಲ್‌ನಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ. 2008 ರಲ್ಲಿ ಕೆಕೆಆರ್ ತಂಡದಲ್ಲಿ ಆಟಗಾರನಾಗಿ ಕಾಣಿಸಿಕೊಂಡಿದ್ದ ಪಾಂಟಿಂಗ್, ಆ ನಂತರ 2013 ರವರೆಗೆ ಮುಂಬೈ ಇಂಡಿಯನ್ಸ್ ತಂಡವನ್ನು ಸೇರಿಕೊಂಡಿದ್ದರು.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966